ಸಂಪುಟ: 05 ಸಂಚಿಕೆ: 238 ಪುಟಗಳು: 08 ಬುಧವಾರ 12 ನವೆಂಬರ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**
ಯಾರಾದರೂ ಏನಾದರೂ ಅಂದಾರು ಎಂಬ ಅಂಜಿಕೆಯನ್ನು ತೊರೆದು ಯೋಗ್ಯವಾಗಿ ನಾವೇ ರೀತಿ ನೀತಿಗಳನ್ನು ರೂಢಿಸಿಕೊಂಡು ಸಾಗಿದರೆ, ಅನ್ಯುವವರೇ ಅನುಸರಿಸುತ್ತಾರೆ.

# ಉದಯ ವಾಹಿನಿ
UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಕರ್ನಾಟಕದಲ್ಲಿ 6 ತಿಂಗಳಿಂದ ಕಾಂಗ್ರೆಸ್ ಸರ್ಕಾರ ಐಸಿಯುನಲ್ಲಿದೆ:ಅಶೋಕ್

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯ ದೆಹಲಿ ಸ್ಫೋಟದ ಬಗ್ಗೆ ಮಾತನಾಡುವಾಗ ಕೇಂದ್ರ ಸರ್ಕಾರವನ್ನು ದೂಷಿಸಿದ್ದಾರೆ. ಅವರು ಏನೇ ಹೇಳಿದರೂ ದೇಶದ ಜನರಿಗೆ ಭದ್ರತೆ ಅಂದರೆ ಅದು ನರೇಂದ್ರ ಮೋದಿ, ಭದ್ರತೆ ಅಂದರೆ ಅದು ಬಿಜೆಪಿ. ಕಾಂಗ್ರೆಸ್ ಮೇಲೆ ದೇಶದ ಜನಕ್ಕೆ ನಂಬಿಕೆಯೇ ಇಲ್ಲ. ಕಾಂಗ್ರೆಸ್‌ನವರು ಪಾಕಿಸ್ತಾನಕ್ಕೆ ಬೆಂಬಲ ನೀಡುತ್ತಾರೆ. ಪಾಕಿಸ್ತಾನದ ಜನ ರಾಹುಲ್ ಗಾಂಧಿನ ಪ್ರೀತಿ ಮಾಡ್ತಾರೆ ಅಂತ ಇಡೀ ಪ್ರಪಂಚಕ್ಕೆ ಗೊತ್ತಿದೆ. ಪಾಕಿಸ್ತಾನದಲ್ಲಿ ರಾಹುಲ್ ಗಾಂಧಿ ಫೋಟೋ ಫೇಮಸ್. ನಮ್ಮ ದೇಶದ ಜನ ಅಂಥವರನ್ನು ನಂಬುತ್ತಾರಾ ಕಾಂಗ್ರೆಸ್ ಸರ್ಕಾರ ಕರ್ನಾಟಕದಲ್ಲಿ ಕಳೆದ 6 ತಿಂಗಳಿಂದಲೂ ಒಂದು ರೀತಿ ಐಸಿಯುನಲ್ಲಿದೆ. ಇಲ್ಲಿ ಯಾರು ಮುಖ್ಯಮಂತ್ರಿ ಯಾರು ಮುಖ್ಯಮಂತ್ರಿ ಆಗ್ತಾರೆ? ಎಷ್ಟು ಜನ ಮಂತ್ರಿಗಳು ಖಾಲಿ ಆಗ್ತಾರೆ? ಎಷ್ಟು ಜನ ಒಳಗಡೆ ಬರ್ತಾರೆ? ಎಂಬುದೇ ಗೊತ್ತಾಗುತ್ತಿಲ್ಲ ಎಂದು ಬಿಜೆಪಿ ನಾಯಕ ಆರ್. ಅಶೋಕ್ ಲೇವಡಿ ಮಾಡಿದ್ದಾರೆ.

## ಭಯೋತ್ಪಾದಕ ಕೃತ್ಯ ಮಾಡ್ತಿರೋರನ್ನು ಆ ಧರ್ಮದವರು ಖಂಡಿಸಬೇಕು

• ಉದಯವಾಹಿನಿ, ಬೆಂಗಳೂರು

ಭಯೋತ್ಪಾದಕ ಕೃತ್ಯ ಮಾಡ್ತಿರೋರನ್ನು ಆ ಧರ್ಮದವರು ಮೊದಲು ಖಂಡಿಸಬೇಕು ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆಗ್ರಹಿಸಿದ್ದಾರೆ.

ದೆಹಲಿಯಲ್ಲಿ ಬಾಂಬ್ ಸ್ಫೋಟ ಪ್ರಕರಣದ ಕುರಿತು ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಭಾರತದ ಮೇಲೆ ವಿಧ್ವಂಸಕ ಕೃತ್ಯಗಳು ನಡೆಯುತ್ತಿರುವುದು ಹೊಸದೇನು ಅಲ್ಲ. ಹೊರಗಿನ ಶಕ್ತಿಗಳು ನಮ್ಮ ತಾಳ್ಮೆ ಪರೀಕ್ಷೆ ಮಾಡುತ್ತವೆ. ಭಯೋತ್ಪಾದಕ ಕೃತ್ಯ ಮಾಡ್ತಿರೋರನ್ನು ಆ ಧರ್ಮದವರು ಖಂಡಿಸಬೇಕು, ಪುಲ್ವಾಮಾ ದಾಳಿಯಾದ ಮೇಲೆ ಭಾರತ ಎಚ್ಚೆತ್ತುಕೊಂಡಿದೆ. ಅವರಿಗೆ ತಕ್ಕ ಪಾಠ ಕಲಿಸುವ ಕೆಲಸ ಮೋದಿ ಮಾಡಿದ್ದಾರೆ. ಇನ್ನು ಅನೇಕ ನುಸುಳುಕೋರರು ಭಾರತದಲ್ಲಿದ್ದಾರೆ. ಅವರನ್ನು ಹುಡುಕಿ ಕ್ರಮ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

## ಬಾಂಬ್ ಸ್ಫೋಟ ಕೇಂದ್ರ, ದೆಹಲಿ ರಾಜ್ಯ ಸರ್ಕಾರದ ಇಂಟಲಿಜೆನ್ಸ್ ವೈಫಲ್ಯ

• ಉದಯವಾಹಿನಿ, ಬೆಂಗಳೂರು

ದೆಹಲಿ ಬಾಂಬ್ ಸ್ಫೋಟದಲ್ಲಿ ದೆಹಲಿಯಲ್ಲಿ ಕೇಂದ್ರ ಸರ್ಕಾರ ಮತ್ತು ಅಲ್ಲಿನ ರಾಜ್ಯ ಸರ್ಕಾರದ ಇಂಟಲಿಜೆನ್ಸ್ ವೈಫಲ್ಯ ಆಗಿದೆ ಎಂದು ಕಾಂಗ್ರೆಸ್ ನಾಯಕ ಬಿ.ಕೆ. ಹರಿಪ್ರಸಾದ್ ಕೇಂದ್ರ ಮತ್ತು ದೆಹಲಿ ರಾಜ್ಯ ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ. ದೆಹಲಿಯಲ್ಲಿ ಬಾಂಬ್ ಸ್ಫೋಟ ಪ್ರಕರಣದ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ಬಾಂಬ್ ದಾಳಿಯಲ್ಲಿ ಪ್ರಾಣ ಕಳೆದುಕೊಂಡವರಿಗೆ ಶ್ರದ್ಧಾಂಜಲಿ. ಅವರ ಕುಟುಂಬಗಳಿಗೆ ಅವರನ್ನ ಕಳೆದುಕೊಂಡ ಶಕ್ತಿ ದೇವರು ಕೊಡಲಿ. ದೆಹಲಿಯಲ್ಲಿ ಘಟನೆ ನೋಡಿದಾಗ, ರಾಜಧಾನಿಯ ಕೇಂದ್ರ ಬಿಂದು ಕೆಂಪು ಕೋಟೆ. ಬಹಳ ಜನರು ಇರೋ ಪ್ರದೇಶ ಇದು. ಇಂತಹ ಘಟನೆ ಇಲ್ಲಿ ಆಗಿರೋದು ನೋಡಿದ್ರೆ ಯಾರು ವಿಫಲರಾಗಿದ್ದಾರೆ ಅದನ್ನ ನೋಡಬೇಕು. ದೆಹಲಿಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರ ಎರಡೂ ಬಿಜೆಪಿ ಇದೆ. ಕೇಂದ್ರ, ರಾಜ್ಯ ಸರ್ಕಾರ ಇಂಟಲಿಜೆನ್ಸ್‌ನಲ್ಲಿ ಫೇಲ್ ಆಗಿದೆ ಎಂದು ಆರೋಪಿಸಿದರು.

## ಭದ್ರತಾ ವೈಫಲ್ಯದಿಂದ ಬ್ಲಾಸ್ಟ್ ಆಗಿದೆ: ಮಧು ಬಂಗಾರಪ್ಪ

• ಉದಯವಾಹಿನಿ, ಬೆಂಗಳೂರು

ದೆಹಲಿ ಬ್ಲಾಸ್ಟ್ ಪ್ರಕರಣದಲ್ಲಿ ಭದ್ರತಾ ವೈಫಲ್ಯದ ಹೊಣೆಯನ್ನು ಪ್ರಧಾನಿ ಮೋದಿ ಅವರೇ ಹೊತ್ತುಕೊಳ್ಳಬೇಕು ಎಂದು ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಇಂತಹ ಸಂದರ್ಭದಲ್ಲಿ ನಾವು ಒಟ್ಟಾಗಿರಬೇಕು ಮಡಿದವರಿಗೆ ಸಂತಾಪಗಳನ್ನು, ಗಾಯಾಳುಗಳು ಬೇಗ ಗುಣಮುಖರಾಗಲಿ ಎಂದು ಪ್ರಾರ್ಥಿಸಬೇಕು. ಪುಲ್ವಾಮಾ, ಪಹಲ್ಗಾಮ್ ಸಂದರ್ಭದಲ್ಲಿಯೂ ಭದ್ರತಾ ವೈಫಲ್ಯವಾಯಿತು. ನ್ಯೂನ್ಯತೆ ಯಾರದ್ದೇ ಇದ್ದರೂ ಒಪ್ಪಿಕೊಳ್ಳಲೇಬೇಕು. ಎಲ್ಲಾ ಹೊಣೆಗಾರಿಕೆ ಪ್ರಧಾನಿ ಮೋದಿ ತೆಗೆದುಕೊಳ್ಳಬೇಕು. ಈ ಬ್ಲಾಸ್ಟ್ ಬಿಹಾರ ಚುನಾವಣೆಗೆ ಏನು ಸಂದೇಶ ಆಪರೇಷನ್ ಸಿಂಧೂರ ಯಾಕೆ ಆಯ್ತು ಅದಕ್ಕೂ ಮುಂಚೆ ಏನಾಯ್ತು ಅಂತ ನೋಡಬೇಕಲ್ಲ. ಯಾಕೆ ಯಾರು ಜವಾಬ್ದಾರಿ ತೆಗೆದುಕೊಳ್ಳಲಿಲ್ಲ. ಪ್ರಧಾನಿ ಯಾಕೆ ಜವಾಬ್ದಾರಿ ತೆಗೆದುಕೊಳ್ಳಲ್ಲ ಎಂದು ಕಿಡಿಕಾರಿದರು.

ಇನ್ನೂ ನೇರವಾಗಿ ಪ್ರಧಾನಿ ಈ ಘಟನೆಯ ಜವಾಬ್ದಾರಿ ಹೊರಬೇಕು, ಬರೀ ರಾಹುಲ್ ಗಾಂಧಿ ಬಗ್ಗೆ ಕಾಮೆಂಟ್ ಮಾಡ್ತಾರೆ. ಪಾಕಿಸ್ತಾನಕ್ಕೆ ಹೋಗಿ ಬಿರಿಯಾನಿ ತಿಂದು ಬಂದವರು ಯಾರು? ಕೇಂದ್ರದ ಭದ್ರತಾ ವೈಫಲ್ಯಕ್ಕೆ ಖಂಡಿಸುತ್ತೇನೆ ಎಂದರು.



# ಸಂಚುಕೋರರಿಗೆ ಶಿಕ್ಷೆ ಖಚಿತ ನಮೋ ಶಪಥ

**ತೀವ್ರ ಸಂತಾಪ ಸೂಚನೆ**

## ಉಗ್ರರ ದಾಳಿಯ ಪ್ರತೀಕಾರಕ್ಕೆ ಸಜ್ಜಾದ ಸೇನೆ..?:

ಪುಲ್ವಾಮದಲ್ಲಿ ಸಂಭವಿಸಿದ ಉಗ್ರರ ದಾಳಿಗೆ ಪ್ರತಿಕಾರವಾಗಿ ಪಾಕಿಸ್ತಾನ ಹಾಗೂ ಪಿಒಕೆಯಲ್ಲಿ ಭಾರತದ ಸೇನಾಪಡೆ ನಡೆಸಿದ ಆಪರೇಷನ್ ಸಿಂಧೂರ್ ಮಾದರಿಯಲ್ಲೇ ಮತ್ತೊಂದು ಕಾರ್ಯಾಚರಣೆಗೆ ಸೇನಾಪಡೆಗಳು ಸಜ್ಜಾಗಿವೆ. ದೆಹಲಿಯ ಪ್ರತಿಷ್ಠಿತ ಕೆಂಪುಕೋಟೆ ಬಳಿ ಕಾರ್ ಬಾಂಬ್ ಸ್ಫೋಟ ಸಂಭವಿಸಿರುವುದನ್ನು ಗಂಭೀರವಾಗಿ ಪರಿಗಣಿಸಿರುವ ಕೇಂದ್ರ ಸರ್ಕಾರ ಉಗ್ರರ ಹೆಡೆಮುರಿ ಕಟ್ಟಲು ಪಣತೊಟ್ಟಿದೆ. ಬುಧವಾರ ಸಂಜೆ ಮೋದಿ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಭೆ ನಡೆಯಲಿದೆ. ಸಭೆಗೆ ಮೂರು ಸೇನಾಪಡೆಗಳ ಮುಖ್ಯಸ್ಥರು, ರಾಷ್ಟ್ರೀಯ ಭದ್ರತಾ ಸಲಹೆಗಾರ, ಗುಪ್ತಚರ ವಿಭಾಗ ಸೇರಿದಂತೆ ಎಲ್ಲಾ ಹಿರಿಯ ಅಧಿಕಾರಿಗಳ ಸಭೆ ಕರೆಯಲಾಗಿದೆ. ಪ್ರಕರಣ ಕುರಿತಂತೆ ಕೂಲಂಕುಷವಾಗಿ ಮಾಹಿತಿ ಪಡೆಯಲಿರುವ ಪ್ರಧಾನಿ ಮೋದಿ ಅವರು ಮುಂದೆ ಕೈಗೊಳ್ಳಬೇಕಾದ ಕಾರ್ಯಾಚರಣೆ ಕುರಿತು ಮಾಹಿತಿ ಪಡೆಯಲಿದ್ದಾರೆ.


## ಎಸ್‌ಐಟಿ ತನಿಖೆಯಾಗಲಿ

ರಾಷ್ಟ್ರ ರಾಜಧಾನಿಯ ಹೃದಯಭಾಗದಲ್ಲಿ ಇಂತಹ ಘಟನೆ ನಡೆದಿರುವುದು ಅತ್ಯಂತ ದುಃಖಕರ ಸಂಗತಿ. ಕೇಂದ್ರ ಗೃಹ ಸಚಿವಾಲಯದ ನೇರ ಅಧೀನದಲ್ಲಿರುವ ದೆಹಲಿ ಪೊಲೀಸರು ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಜವಾಬ್ದಾರಿಯನ್ನು ಹೊಂದಿದ್ದಾರೆ. ಹಾಗಾದರೆ ಭದ್ರತೆಯಲ್ಲಿ ಇಂತಹ ಗಂಭೀರ ಲೋಪಗಳು ಸಂಭವಿಸಲು ಹೇಗೆ ಅವಕಾಶ ನೀಡಲಾಗುತ್ತಿದೆ ಎಂದು ಪ್ರಶ್ನಿಸಿದರು. ಹರಿಯಾಣದ ಫರಿದಾಬಾದ್‌ನಿಂದ ಸುಮಾರು 350 ಕೆಜಿ ಸ್ಫೋಟಕಗಳು ಮತ್ತು ಒಂದು ಅಸಾಲ್ಟ್ ರೈಫಲ್ ಪತ್ತೆಯಾಗಿದೆ. ಈ ಘಟನೆಗಳು ಆಂತರಿಕ ಭದ್ರತೆ ಮತ್ತು ಜಾಗರೂಕತೆಯ ಬಗ್ಗೆ ನಿರ್ಲಕ್ಷ್ಯ ವಹಿಸಿರುವ ಬಗ್ಗೆ ಅನುಮಾನ ಮೂಡಿಸುತ್ತದೆ ಎಂದು ಹೇಳಿದ್ದಾರೆ. ಸತ್ಯ ಬಹಿರಂಗವಾಗಲು ಮತ್ತು ಭದ್ರತಾ ಲೋಪದ ಬಗ್ಗೆ ಅಗತ್ಯವಿದ್ದರೆ ನ್ಯಾಯಾಲಯದ ಮೇಲ್ವಿಚಾರಣೆಯಲ್ಲಿ ವಿಶೇಷ ತನಿಖಾ ತಂಡ ರಚಿಸಿ ನಿಷ್ಪಕ್ಷಪಾತ, ನಿಗದಿತ ಸಮಯದಲ್ಲಿ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು.

**ನವದೆಹಲಿ:** ಪ್ರಧಾನಿ ಮೋದಿ ಅವರು ದೆಹಲಿಯಲ್ಲಿ ನಡೆದ ಮಾರಕ ಕಾರು ಸ್ಫೋಟದ ಹಿಂದಿರುವ ಪಿತೂರಿಗಾರರನ್ನು ನ್ಯಾಯದ ಕಟಕಟೆಗೆ ತರಲಾಗುವುದು ಎಂದು ಪ್ರತಿಜ್ಞೆ ಮಾಡಿದ್ದಾರೆ, ಸರ್ಕಾರವು ದಾಳಿಯನ್ನು ತುಂಬಾ ಗಂಭೀರವಾಗಿ ಪರಿಗಣಿಸುತ್ತದೆ ಎಂದು ಭರವಸೆ ನೀಡಿದ್ದಾರೆ.ಎರಡು ದಿನಗಳ ಭೇಟಿಗಾಗಿ ತೆರಳಿರುವ ಭೂತಾನದಿಂದ ಮಾತನಾಡಿದ ಮೋದಿ, ಇಂದು, ನಾನು ತುಂಬಾ ಭಾರವಾದ ಹೃದಯದಿಂದ ಇಲ್ಲಿಗೆ ಬಂದಿದ್ದೇನೆ. ನಿನ್ನೆ ಸಂಜೆ ದೆಹಲಿಯಲ್ಲಿ ನಡೆದ ಭಯಾನಕ ಘಟನೆ ಎಲ್ಲರನ್ನೂ ತೀವ್ರವಾಗಿ ದುಃಖಿಸಿದೆ. ಸಂತ್ರಸ್ತ ಕುಟುಂಬಗಳ ದುಃಖವನ್ನು ನಾನು ಅರ್ಥಮಾಡಿಕೊಂಡಿದ್ದೇನೆ. ಇಂದು ಇಡೀ ರಾಷ್ಟ್ರವು ಅವರೊಂದಿಗೆ ನಿಂತಿದೆ. ಈ ಘಟನೆಯ ತನಿಖೆ ನಡೆಸುತ್ತಿರುವ ಎಲ್ಲಾ ಸಂಸ್ಥೆಗಳೊಂದಿಗೆ ನಾನು ಸಂಪರ್ಕದಲ್ಲಿದ್ದೆ. ನಮ್ಮ ಸಂಸ್ಥೆಗಳು ಈ ಪಿತೂರಿಯ ಆಳವನ್ನು ಕಂಡುಕೊಳ್ಳುತ್ತವೆ. ಇದರ ಹಿಂದಿನ ಪಿತೂರಿಗಾರರನ್ನು ಬಿಡಲಾಗುವುದಿಲ್ಲ. ಎಲ್ಲಾ ಹೊಣೆಗಾರರನ್ನು ನ್ಯಾಯದ ಕಟಕಟೆಗೆ ತರಲಾಗುವುದು ಎಂದಿದ್ದಾರೆ. ಇತ್ತೀಚೆಗೆ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ದೇಶದ ಪ್ರಮುಖ ತನಿಖಾ ಸಂಸ್ಥೆಗಳು ಇತ್ತೀಚಿನ ದೆಹಲಿ ತೀವ್ರ-ತೀವ್ರತೆಯ ಸ್ಫೋಟ ಪ್ರಕರಣದ ಬಗ್ಗೆ ತ್ವರಿತ ಮತ್ತು ಸಂಪೂರ್ಣ ತನಿಖೆಯನ್ನು ನಡೆಸುತ್ತಿವೆ ಎಂದು ಹೇಳಿದ್ದರು , ತಪ್ಪಿತಸ್ಥರನ್ನು ಬಿಡುವುದಿಲ್ಲ ಮತ್ತು ತನಿಖೆಯ ಮಾಹಿತಿಗಳನ್ನು ಶೀಘ್ರದಲ್ಲೇ ಬಹಿರಂಗಪಡಿಸುತ್ತೇವೆ ಎಂದು ಭರವಸೆ ನೀಡಿದ್ದಾರೆ.

ತನಿಖೆ ನಡೆಸುತ್ತಿರುವ ಎಲ್ಲಾ ಏಜೆನ್ಸಿಗಳೊಂದಿಗೆ ಸಂಪರ್ಕದಲ್ಲಿದ್ದೆ. ನಮ್ಮ ತನಿಖಾ ಸಂಸ್ಥೆಗಳು ಈ ಸಂಚಿನ ಮೂಲವನ್ನು ಆಳವಾಗಿ ತನಿಖೆ ನಡೆಸಿ ಪತ್ತೆಹಚ್ಚಲಿವೆ. ಪ್ರಕರಣದ ಹಿಂದಿರುವ ಸಂಚುಕೋರರನ್ನು ಸುಮ್ಮನೆ ಬಿಡುವ ಪ್ರಶ್ನೆಯೇ ಇಲ್ಲ. ಪ್ರತಿಯೊಬ್ಬರನ್ನು ಕಾನೂನಿನ ಮುಂದೆ ತಂದು ನಿಲ್ಲಿಸಲಾಗುತ್ತದೆ. ಎಂದು ಭೂತಾನ್‌ನ ರಾಜಧಾನಿ ಥಿಂಪುನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಎಚ್ಚರಿಕೆ ನೀಡಿದ್ದಾರೆ.

**ಕಾರು ಮಾಲೀಕನಿಗಿತ್ತು ಉಗ್ರರ ನಂಟು..?:** ಕೆಂಪುಕೋಟೆ ಬಳಿ ಬ್ಲಾಸ್ಟ್ ಆದ 20 ಕಾರು ಜಮ್ಮು ಮತ್ತು ಕಾಶ್ಮೀರದ ಪುಲ್ವಾಮಾದ ನಿವಾಸಿ ಉಮರ್ ಮೊಹಮ್ಮದ್ ಎಂಬುವರಿಗೆ ಸೇರಿದ್ದು. ಆ ಕಾರಿನಲ್ಲಿ ಬಾಂಬ್ ಸ್ಫೋಟ ಸಂಭವಿಸಿದಾಗ ಅವರೇ ಚಲಾಯಿಸುತ್ತಿದ್ದರು ಎಂದು ಖಾಸಗಿ ಮಾಧ್ಯಮಗಳು ವರದಿ ಮಾಡಿವೆ. ಉಮರ್ ಒಬ್ಬ ವೈದ್ಯರಾಗಿದ್ದಾರೆ. ಅವರು ಟೆಲಿಗ್ರಾಂನಲ್ಲಿ ಸಕ್ರಿಯವಾಗಿದ್ದ ಒಂದು ಉಗ್ರಗಾಮಿ ವೈದ್ಯರ ಗುಂಪಿನ ಸದಸ್ಯರಾಗಿದ್ದರು ಎನ್ನಲಾಗುತ್ತಿದೆ. ಈ ಗುಂಪಿಗೆ ಪಾಕಿಸ್ತಾನ ಮೂಲದ ಜೈಶ್-ಇ-ಮೊಹಮ್ಮದ್ ಎಂಬ ಭಯೋತ್ಪಾದಕ ಸಂಘಟನೆಯೊಂದಿಗೆ ಸಂಪರ್ಕವಿದೆ ಎಂದು ಪೊಲೀಸರ ಪ್ರಾಥಮಿಕ ತನಿಖಾ ಮೂಲಗಳಿಂದ ಮಾಹಿತಿ ಹೊರಬಿದ್ದಿದೆ.



## ರಾಜನಾಥ ಸಿಂಗ್ ಗುಡಗು

ಸ್ಫೋಟ ಪ್ರಕರಣದ ಬಗ್ಗೆ ಪ್ರಮುಖ ತನಿಖಾ ಸಂಸ್ಥೆಗಳು ಎಲ್ಲಾ ಆಯಾಮದಲ್ಲೂ ತನಿಖೆ ನಡೆಸುತ್ತಿವೆ. ತಪ್ಪಿತಸ್ಥರನ್ನು ಯಾವುದೇ ಕಾರಣಕ್ಕೂ ಸುಮ್ಮನೆ ಬಿಡುವುದಿಲ್ಲ. ತನಿಖೆಯ ವರದಿಗಳು ಶೀಘ್ರದಲ್ಲೇ ಸಾರ್ವಜನಿಕವಾಗಿ ಪ್ರಕಟವಾಗಲಿವೆ. ಈ ದುರಂತಕ್ಕೆ ಕಾರಣರಾದವರನ್ನು ಕಾನೂನಿನ ಮುಂದೆ ತಂದು ಶಿಕ್ಷಿಸಲಾಗುವುದು ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಸಂಚುಕೋರರಿಗೆ ಎಚ್ಚರಿಕೆ ಕೊಟ್ಟಿದ್ದಾರೆ. ಸ್ಫೋಟದಲ್ಲಿ ತಮ್ಮ ಕುಟುಂಬದವರನ್ನು ಕಳೆದುಕೊಂಡವರಿಗೆ ಅವರ ಅಗಲಿಕೆಯನ್ನು ಭರಿಸುವ ಶಕ್ತಿ ಮತ್ತು ಧೈರ್ಯ ದೇವರು ನೀಡಲಿ ಎಂದು ನಾನು ಪ್ರಾರ್ಥಿಸುತ್ತೇನೆ ಎಂದರು.

## ಶಾ ವಿಧಿವಿಜ್ಞಾನ ಪ್ರಯೋಗಾಲಯಕ್ಕೆ ಸೂಚನೆ

ದೆಹಲಿಯ ಕೆಂಪು ಕೋಟೆ ಬಳಿ ಸ್ಫೋಟಗೊಂಡ ಕಾರಿನಲ್ಲಿದ್ದ ಮೃತದೇಹಗಳಿಂದ ಸಂಗ್ರಹಿಸಿದ ಮಾದರಿಗಳನ್ನು ಹೋಲಿಕೆ ಮಾಡುವಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಮಂಗಳವಾರ ವಿಧಿವಿಜ್ಞಾನ ಪ್ರಯೋಗಾಲಯಕ್ಕೆ ಸೂಚನೆ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ದೆಹಲಿ ಸ್ಫೋಟದ ಸ್ಥಳದಿಂದ ಸಂಗ್ರಹಿಸಲಾದ ದೇಹದ ಮಾದರಿಗಳನ್ನು ಹೋಲಿಕೆ ಮಾಡಿ ತನಿಖೆ ನಡೆಸುವಂತೆ ಮತ್ತು ಘಟನೆಯ ವಿವರಗಳನ್ನು ಆದಷ್ಟು ಬೇಗ ನೀಡುವಂತೆ ಕೇಂದ್ರ ಗೃಹ ಸಚಿವರು ಎಫ್‌ಎಸ್‌ಎಲ್‌ಗೆ ನಿರ್ದೇಶನ ನೀಡಿದ್ದಾರೆ. ಅಮಿತ್ ಶಾ ಅಧ್ಯಕ್ಷತೆಯಲ್ಲಿ ನಡೆದ ಎರಡನೇ ಭದ್ರತಾ ಪರಿಶೀಲನಾ ಸಭೆಯ ನಂತರ ಈ ನಿರ್ದೇಶನಗಳನ್ನು ನೀಡಲಾಗಿದೆ. ಸಭೆಯಲ್ಲಿ ವಿಧಿವಿಜ್ಞಾನ ಸೇವೆಗಳ ನಿರ್ದೇಶಕರು ಮತ್ತು ದೆಹಲಿಯ ವಿಧಿವಿಜ್ಞಾನ ಪ್ರಯೋಗಾಲಯದ ಮುಖ್ಯ ನಿರ್ದೇಶಕರು ಸೇರಿದಂತೆ ಇತರರು ಭಾಗವಹಿಸಿದ್ದರು ಎಂದು ಮೂಲಗಳು ತಿಳಿಸಿವೆ.

## ಯಾರನ್ನು ಬಿಡಬೇಡಿ ಭೇಟೆಯಾಡಿ, ಶಿಕ್ಷಿಸಿ

ದೆಹಲಿ ಕಾರು ಸ್ಫೋಟದ ಕುರಿತು ಹಿರಿಯ ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆಗಳನ್ನು ನಡೆಸಿದ್ದೇನೆ. ಕೃತ್ಯದ ಹಿಂದಿರುವ ಪ್ರತಿಯೊಬ್ಬ ಅಪರಾಧಿಯನ್ನು ಬೇಟೆಯಾಡುವಂತೆ ಅವರಿಗೆ ಸೂಚಿಸಿದ್ದೇನೆ. ಹಿಂಸಾತ್ಮಕ ಪ್ರಕರಣದಲ್ಲಿ ಭಾಗಿಯಾಗಿರುವ ಪ್ರತಿಯೊಬ್ಬ ಸಂಚುಕೋರರು ನಮ್ಮ ತನಿಖಾ ತಂಡದ ಕೋಪವನ್ನು ಎದುರಿಸಬೇಕಾಗುತ್ತದೆ. ಈ ಘಟನೆಯ ಬಗ್ಗೆ ಜನರಲ್ಲಿ ಯಾವುದೇ ಆತಂಕ ಮೂಡದಂತೆ ನೋಡಿಕೊಳ್ಳುವುದು ನಮ್ಮ ಕರ್ತವ್ಯ. ತಪ್ಪಿತಸ್ಥರಿಗೆ ಶಿಕ್ಷೆ ಆಗಲೇಬೇಕು. ನಮ್ಮ ಸರ್ಕಾರ ಮತ್ತು ಪೊಲೀಸ್ ಇಲಾಖೆಗಳು ಈ ವಿಚಾರದಲ್ಲಿ ಬದ್ಧತೆಯಿಂದ ಕೆಲಸ ಮಾಡುತ್ತಿವೆ. ಎಂದು ಎಚ್ಚರಿಸಿದ್ದಾರೆ.

ದೆಹಲಿಯ ಕೆಂಪು ಕೋಟೆ ಬಳಿಯ ಸುಭಾಷ್ ಮಾರ್ಗದ ಟ್ರಾಫಿಕ್ ಸಿಗ್ನಲ್‌ನಲ್ಲಿ ಹುಂಡೈ ಐ20 ಕಾರಿನಲ್ಲಿ ಸ್ಫೋಟ ಸಂಭವಿಸಿದೆ ಎಂದು ಅಮಿತ್ ಶಾ ಅವರು ಖಚಿತಪಡಿಸಿದ್ದಾರೆ. ಸ್ಫೋಟದ ಮಾಹಿತಿ ಬಂದ ಹತ್ತೇ ನಿಮಿಷಗಳಲ್ಲಿ ದೆಹಲಿ ಕ್ರೈಂ ಬ್ರ್ಯಾಂಚ್ ಮತ್ತು ದೆಹಲಿ ಸ್ಪೆಷಲ್ ಸೆಲ್‌ನ ತಂಡಗಳು ಸ್ಥಳಕ್ಕೆ ಭೇಟಿ ನೀಡಿವೆ. ವಿಧಿವಿಜ್ಞಾನ ಪ್ರಯೋಗಾಲಯ ತಂಡದೊಂದಿಗೆ ಎನ್‌ಎಸ್‌ಜಿ ಮತ್ತು ಎನ್‌ಐಎ ತಂಡಗಳೂ ಸ್ಥಳಕ್ಕೆ ಆಗಮಿಸಿದ್ದು, ಎಲ್ಲಾ ಆಯಾಮಗಳಲ್ಲೂ ತನಿಖೆ ಪ್ರಾರಂಭಿಸಿವೆ ಎಂದು ಮಾಹಿತಿ ನೀಡಿದ್ದಾರೆ.

## ವಿವಿಧ ರಾಷ್ಟ್ರಗಳ ಕಳವಳ

## ಮತ್ತೆ ದೇಶದಲ್ಲಿ ಆತಂಕದ ವಾತಾವರಣ

## ಮಾಲೂರು ಕ್ಷೇತ್ರದ ಮರುಮತ ಎಣಿಕೆ ಕಾರ್ಯ ಅಂತ್ಯ ಆದರೂ ತೃಪ್ತಿಯಾಗಿಲ್ಲ ಎಂದ ಬಿಜೆಪಿ ಪರಾಜಿತ ಅಭ್ಯರ್ಥಿ

• ಉದಯವಾಹಿನಿ, ಕೋಲಾರ

ಕಾಂಗ್ರೆಸ್‌ನ ಕೆ.ವೈ. ನಂಜೇಗೌಡ ಮತ್ತು ಬಿಜೆಪಿಯ ಕೆ.ಎಸ್. ಮಂಜುನಾಥ್ ಗೌಡ ನಡುವಿನ ತೀವ್ರ ಜಿದ್ದಾಜಿದ್ದಿಗೆ ಕಾರಣವಾಗಿರುವ ಮಾಲೂರು ವಿಧಾನಸಭಾ ಕ್ಷೇತ್ರದ ಮತ ಮರಎಣಿಕೆ ಕಾರ್ಯ ಮುಕ್ತಾಯಗೊಂಡಿದೆ. ಸುಪ್ರೀಂಕೋರ್ಟ್ ಆದೇಶದಂತೆ ಕೋಲಾರದ ತೋಟಗಾರಿಕೆ ವಿಶ್ವವಿದ್ಯಾಲಯದಲ್ಲಿ ಒಟ್ಟು 18 ಸುತ್ತು ಮರುಮತ ಎಣಿಕೆ ಕಾರ್ಯ ನಡೆದಿದ್ದು, ಮರು ಎಣಿಕೆಯ ಫಲಿತಾಂಶವನ್ನು ಚುನಾವಣಾ ಆಯೋಗ ಮುಚ್ಚಿದ ಲಕೋಟೆಯಲ್ಲಿ ನ್ಯಾಯಾಲಯಕ್ಕೆ ಸಲ್ಲಿಸಲಿದೆ. ತದನಂತರ ನ್ಯಾಯಾಲಯ ಈ ಕುರಿತು ತನ್ನ ತೀರ್ಪು ಪ್ರಕಟಿಸಲಿದೆ. ಮೂಲಗಳ ಪ್ರಕಾರ ಮರು ಮತ ಎಣಿಕೆಯಲ್ಲೂ ಸಹ ಫಲಿತಾಂಶ ಯಥಾಸ್ಥಿತಿ ಸಾಧ್ಯತೆ ಇದೆ ಎನ್ನಲಾಗಿದೆ. ಆದರೂ ಮರುಮತ ಎಣಿಕೆ ಫಲಿತಾಂಶ ತೀವ್ರ ಕುತೂಹಲ ಮೂಡಿಸಿದೆ.

2023 ರ ಚುನಾವಣೆಯಲ್ಲಿ ಕಾಂಗ್ರೆಸ್‌ನ ಕೆ.ವೈ.ನಂಜೇಗೌಡ 248 ಮತಗಳಿಂದ ಗೆದ್ದಿದ್ದರು. ಆದ್ರೆ, ಮತ ಎಣಿಕೆಯಲ್ಲಿ ಲೋಪವಾಗಿದ್ದು, ಈ ಸಂಬಂಧ ನಂಜೇಗೌಡ ಅವರನ್ನು ಶಾಸಕ ಸ್ಥಾನದಿಂದ ಅನರ್ಹಗೊಳಿಸಬೇಕೆಂದು ಬಿಜೆಪಿ ಅಭ್ಯರ್ಥಿ ಮಂಜುನಾಥ್ ಗೌಡ



ಅವರು ಹೈಕೋರ್ಟ್ ಮೆಟ್ಟಿಲೇರಿದ್ದರು. ಇದೀಗ ಹೈಕೋರ್ಟ್ ಹಾಗೂ ಸುಪ್ರೀಂಕೋರ್ಟ್ ಆದೇಶದಂತೆ ಮರುಮತ ಎಣಿಕೆ ಮಾಡಲಾಗಿದ್ದು, ಫಲಿತಾಂಶ ಬಹುತೇಕ ಕಾಂಗ್ರೆಸ್ ಅಭ್ಯರ್ಥಿ ಕೆ.ವೈ.ನಂಜೇಗೌಡ ಪರವಾಗಿ ಬರುವ ಸಾಧ್ಯತೆಗಳಿವೆ ಎನ್ನಲಾಗಿದೆ.

**ಅಭ್ಯರ್ಥಿಗಳ ಅನುಮಾನ, ಗೊಂದಲ ನಿವಾರಣೆ:** ಪ್ರಮುಖ ಮೂರು ಅಭ್ಯರ್ಥಿಗಳ ಎದುರಲ್ಲೇ ಮತ ಎಣಿಕೆ ಕಾರ್ಯ ನಡೆದಿದ್ದು, ಪೋಸ್ಟಲ್ ಬ್ಯಾಲೆಟ್ ನಲ್ಲಿ ಹಾಗೂ ಇನ್ ವ್ಯಾಲಿಡ್ ಮತಗಳಲ್ಲಿ ಸಣ್ಣ ಪುಟ್ಟ ಬದಲಾವಣೆಯಾಗಿದೆ. ಪ್ರತಿ ಸುತ್ತಿನಲ್ಲೂ ಅಧಿಕಾರಿಗಳು ಅಭ್ಯರ್ಥಿಗಳ ಅನುಮಾನ, ಗೊಂದಲ ನಿವಾರಣೆ ಮಾಡಿ ಎಣಿಕೆ ಕಾರ್ಯ ಮಾಡಿದ್ದಾರೆ. ಇನ್ನು ಚುನಾವಣಾಧಿಕಾರಿಗಳು ಸಹ ಪ್ರತಿ ಸುತ್ತಿನ ಮತ ಎಣಿಕೆ ನಂತರ ಚುನಾವಣಾ ಆಯೋಗಕ್ಕೆ ಮಾಹಿತಿ ನೀಡಿದ್ದಾರೆ.

**ಫಲಿತಾಂಶ ಬದಲಾವಣೆ ಕಡಿಮೆ ಎಂದ ಪಕ್ಷೇತರ ಅಭ್ಯರ್ಥಿ:** ಇನ್ನು ಮರು ಮತ ಎಣಿಕೆ ಬಗ್ಗೆ ಮೂರನೇ ಸಮೀಪ ಸ್ಪರ್ಧಿ ಪಕ್ಷೇತರ ಅಭ್ಯರ್ಥಿ ಹೂಡಿ ವಿಜಯಕುಮಾರ್ ಪ್ರತಿಕ್ರಿಯಿಸಿದ್ದು, ತುಂಬಾ ಚೆನ್ನಾಗಿ ಮರು ಮತ ಎಣಿಕೆ ಕಾರ್ಯ ನಡೆದಿದೆ. ಅಧಿಕಾರಿಗಳು ತುಂಬಾ ಚೆನ್ನಾಗಿ ಮರು ಮತ ಎಣಿಕೆ ಕಾರ್ಯ ನಡೆಸಿಕೊಟ್ಟಿದ್ದಾರೆ. ಏನೆಲ್ಲಾ ದೂರು ಬಂದಿತ್ತು ಆ ಪ್ರಕಾರ ಮತ ಎಣಿಕೆ ನಡೆದಿದೆ. ಮರು ಮತ ಎಣಿಕೆ ಕಾರ್ಯ ಸಂಪೂರ್ಣವಾಗಿ ಮುಗಿದಿದ್ದು, ಮರು ಮತ ಎಣಿಕೆ ನನಗೆ ತೃಪ್ತಿ ತಂದಿದೆ. ಸುಪ್ರೀಂ ಕೋರ್ಟ್ ಆದೇಶದ ಹಿನ್ನಲೆಯಲ್ಲಿ ಯಾವುದೇ ಫಲಿತಾಂಶ ಹೇಳುವಂತಿಲ್ಲ, ಸಣ್ಣಪುಟ್ಟ ಗೊಂದಲವಿತ್ತು, ಅದನ್ನು ನಿವಾರಣೆ ಮಾಡಿದ್ದಾರೆ. ನಾನು ಕೋರ್ಟ್ ಹೋಗಿಲ್ಲ, ಆದ್ರೆ, ಚುನಾವಣಾಧಿಕಾರಿಗಳು ನೋಟೀಸ್ ನೀಡಿದ್ದ ಹಿನ್ನಲೆಯಲ್ಲಿ ನಾನು ಬಂದಿದ್ದೀನಿ. ಫಲಿತಾಂಶ ಬಹುತೇಕ ಬದಲಾವಣೆ ಸಾಧ್ಯತೆ ಕಡಿಮೆ ಎಂದು ಪರೋಕ್ಷವಾಗಿ ನಂಜೇಗೌಡ ಅವರೇ ಗೆಲ್ಲಲಿದ್ದಾರೆ ಎಂದು ಹೇಳಿದರು.

# ಸಂಪುಟ ಪುನಾರಚನೆಗೆ ಸಿದ್ದರಾಮಯ್ಯ ಪಟ್ಟು, ಡಿಕೆಶಿ ವಿರೋಧ

## • ಹೈಕಮಾಂಡ್ ಒಪ್ಪಿಗೆ ನೀಡಿದ್ದಲ್ಲಿ ಸಿದ್ದರಾಮಯ್ಯ ಕುರ್ಚಿ ಭದ್ರ ಎಂಬುವುದು ಇದರ ಹಿಂದಿರುವ ಲೆಕ್ಕಾಚಾರ

• ಉದಯವಾಹಿನಿ, ಬೆಂಗಳೂರ

ಬೆಳಗಾವಿ ಅಧಿವೇಶನಕ್ಕೂ ಮೊದಲೇ ಸಚಿವ ಸಂಪುಟ ಪುನಾರಚನೆ ಆಗಬೇಕು ಎಂದು ಸಿಎಂ ಸಿದ್ದರಾಮಯ್ಯ ಪಟ್ಟು ಹಿಡಿದಿದ್ದಾರೆ. ಮತ್ತೊಂದು ಕಡೆಯಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಅವರು ಸಂಪುಟ ಪುನಾರಚನೆಗೆ ವಿರೋಧ ವ್ಯಕ್ತಪಡಿಸಿದ್ದಾರೆ. ರಾಜ್ಯ ಕಾಂಗ್ರೆಸ್‌ನಲ್ಲಿ ನಡೆಯುತ್ತಿರುವ ಈ ಬೆಳವಣಿಗೆಗೆ ಹೈಕಮಾಂಡ್ ಯಾವ ರೀತಿಯಲ್ಲಿ ಸ್ಪಂದಿಸಲಿದೆ ಎಂಬುವುದು ಕುತೂಹಲ ಕೆರಳಿಸಿದೆ.

ರಾಜ್ಯ ಸರ್ಕಾರಕ್ಕೆ ನವೆಂಬರ್ 20ಕ್ಕೆ ಎರಡುವರೆ ವರ್ಷ ತುಂಬಲಿದೆ. ಸರ್ಕಾರಕ್ಕೆ ಎರಡುವರೆ ವರ್ಷ ತುಂಬುತ್ತಿರುವ ಹಿನ್ನೆಲೆಯಲ್ಲಿ ಸಂಪುಟ ಪುನಾರಚನೆ ಬೇಡಿಕೆಗೆ ಚಾಲನೆ ಸಿಕ್ಕಿದೆ. ಆಕಾಂಕ್ಷಿಗಳು ಈಗಾಗಲೇ ತಮ್ಮ ಮನದಾಳವನ್ನು ವ್ಯಕ್ತಪಡಿಸುತ್ತಿದ್ದಾರೆ. ಇದಕ್ಕಾಗಿ ಹೈಕಮಾಂಡ್ ಮಾತ್ರವಲ್ಲದೆ, ರಾಜ್ಯ ನಾಯಕರನ್ನು ಭೇಟಿ ಮಾಡಿ ಮಂತ್ರಿಗಿರಿಗಾಗಿ ಲಾಬಿ ನಡೆಸುತ್ತಿದ್ದಾರೆ.

**ಸಿಎಂ ಲೆಕ್ಕಾಚಾರ ಏನು?:** ಡಿಸೆಂಬರ್ ಎರಡನೇ ವಾರಕ್ಕೂ ಮೊದಲೇ ಸಂಪುಟ ಪುನಾರಚನೆಗೆ ಸಿಎಂ ಸಿದ್ದರಾಮಯ್ಯ ಒತ್ತಡ ಹಾಕುತ್ತಿದ್ದಾರೆ. ಇದರ ಹಿಂದೆ ರಾಜಕೀಯ ಲೆಕ್ಕಾಚಾರವೂ ಅಡಗಿದೆ. ಒಂದು ವೇಳೆ ಸಂಪುಟ ಪುನಾರಚನೆಗೆ ಹೈಕಮಾಂಡ್ ಒಪ್ಪಿಗೆ ನೀಡಿದ್ದಲ್ಲಿ ಸಿದ್ದರಾಮಯ್ಯ ಕುರ್ಚಿ ಭದ್ರ ಎಂಬುವುದು ಇದರ ಹಿಂದಿರುವ ಲೆಕ್ಕಾಚಾರವಾಗಿದೆ ಎಂಬ ಮಾತೂ ಕೇಳಿಬರುತ್ತಿದೆ.

ಈ ಕಾರಣಕ್ಕಾಗಿಯೇ ಸಂಪುಟ ಪುನಾರಚನೆಗೆ ಹೈಕಮಾಂಡ್ ಮೇಲೆ ಸಿಎಂ ಸಿದ್ದರಾಮಯ್ಯ ಒತ್ತಡ ಹಾಕುತ್ತಿದ್ದಾರೆ. ಸರ್ಕಾರ ಎರಡೂವರೆ ವರ್ಷ ಅವಧಿ ಮುಗಿದ ಹಿನ್ನೆಲೆಯಲ್ಲಿ ಹೊರ ರೂಪ ನೀಡಬೇಕು ಮತ್ತು ಹೊರಬರಿಗೆ ಅವಕಾಶ ನೀಡಬೇಕು ಎಂಬ ನಿಟ್ಟಿನಲ್ಲಿ ಹೈಕಮಾಂಡ್ ನಾಯಕರ ಗಮನ ಸೆಳೆಯುವ ಪ್ರಯತ್ನ ನಡೆಸುತ್ತಿದ್ದಾರೆ.

ಇದರ ಮುಂದುವರಿದ ಭಾಗವಾಗಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಎಐಸಿಸಿ ಪ್ರಧಾನ ಕಾರ್ಯದರ್ಶಿ ( ಸಂಘಟನೆ) ಕೆ.ಸಿ ವೇಣುಗೋಪಾಲ್ ಗಮನಕ್ಕೂ ಸಿಎಂ ತಂದಿದ್ದಾರೆ.

ಮಾಹಿತಿಗಳ ಪ್ರಕಾರ ಐದಾರು ತಿಂಗಳ ಹಿಂದೆಯೇ ಸಂಪುಟ ಪುನಾರಚನೆ ಮಾಡುವಂತೆ ಸಿಎಂಗೆ ಹೈಕಮಾಂಡ್ ನಾಯಕರು ಸೂಚಿಸಿದ್ದರು. ಆದರೆ ಎರಡೂವರೆ ವರ್ಷಗಳ ಅವಧಿ ಮುಗಿದ ನಂತರ ಪುನಾರಚನೆ ಮಾಡುವುದಾಗಿ ಸಿಎಂ ಹೇಳಿದ್ದರು. ಇದೀಗ ಎರಡೂವರೆ ವರ್ಷ ಮುಗಿಸಿರುವ ಹಿನ್ನೆಲೆಯಲ್ಲಿ ಪುನಾರಚನೆ ಬೇಡಿಕೆ ಇಟ್ಟಿದ್ದಾರೆ.

### ಹೈಕಮಾಂಡ್ ನಿರ್ಧಾರ ಏನು?

ಸಿಎಂ ಸಿದ್ದರಾಮಯ್ಯ ಅವರಿಂ ಸಂಪುಟ ಪುನಾರಚನೆ ಬೇಡಿಕೆ ಹಾಗೂ ಡಿಸಿಎಂ ಡಿ.ಕೆ ಶಿವಕುಮಾರ್ ವಿರೋಧದ ನಡುವೆ ಈ ವಿಚಾರವಾಗಿ ಹೈಕಮಾಂಡ್ ಸ್ಪಷ್ಟವಾಗಿ ಏನೂ ಹೇಳುತ್ತಿಲ್ಲ. ಹಾಗಾಗಿ ನವೆಂಬರ್ 15ರಂದು ದೆಹಲಿ ಪ್ರವಾಸದ ವೇಳೆ ಕೆಸಿ ವೇಣುಗೋಪಾಲ್ ಅವರನ್ನು ಭೇಟಿ ಮಾಡಿ ಸಿಎಂ ಸಿದ್ದರಾಮಯ್ಯ ಅವರು ಚರ್ಚೆ ನಡೆಸಲಿದ್ದಾರೆ. ಈ ಬಳಿಕವಷ್ಟೇ ಸಂಪುಟ ಪುನಾರಚನೆ ಕುರಿತಾಗಿ ಸ್ಪಷ್ಟತೆ ಸಿಗಲಿದೆ.



- ಸಂಪುಟ ಪುನಾರಚನೆಗೆ ಸಿಎಂ ಸಿದ್ದರಾಮಯ್ಯ ಒತ್ತಡ
- ಸದ್ಯ ಸಂಪುಟ ಪುನಾರಚನೆ ಬೇಡ ಎಂಬುದು ಡಿಕೆಶಿ ನಿಲುವು
- ಹೈಕಮಾಂಡ್ ಕೈಗೊಳ್ಳುವ ನಿರ್ಧಾರ ಏನೆಂಬುವುದೇ ಕುತೂಹಲ

### ನಿರ್ಧಾರಕ್ಕೆ ಹೈಕಮಾಂಡ್ ಬರಲಿ

ಸಿಎಂ ಸಂಪುಟ ಪುನಾರಚನೆಗೆ ಒತ್ತಡ ಹಾಕುತ್ತಿದ್ದರೆ ಡಿಸಿಎಂ ಡಿಕೆ ಶಿವಕುಮಾರ್ ಅವರು ಇದಕ್ಕೆ ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಒಂದು ವೇಳೆ ಸಂಪುಟ ಪುನಾರಚನೆ ಆದಲ್ಲಿ ನಾಯಕತ್ವ ಬದಲಾವಣೆ ವಿಚಾರ ನೆನೆಗುದಿಗೆ ಬೀಳಲಿದೆ ಎಂಬುವುದು ಇದರ ಹಿಂದಿನ ಲೆಕ್ಕಾಚಾರವಾಗಿದೆ. ಹಾಗಾಗಿ ಸದ್ಯ ಸಂಪುಟ ಪುನಾರಚನೆ ಬೇಡ, ಬದಲಾಗಿ ನಾಯಕತ್ವ ಬದಲಾವಣೆ ವಿಚಾರವಾಗಿ ಒಂದು ನಿರ್ಧಾರಕ್ಕೆ ಹೈಕಮಾಂಡ್ ಬರಲಿ ಎಂಬುವುದು ಇವರ ಆಗ್ರಹವಾಗಿದೆ.



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ಹಿಂದುಧರ್ಮ ಧರ್ಮವಲ್ಲ

ವಿಶ್ವದಲ್ಲಿ ಅತಿ ಪ್ರಾಚೀನ ಹಿಂದುಧರ್ಮ. ಮಾನವನ ಮೊದಲ ಸಾಹಿತ್ಯ ವೇದ. ಹೀಗಿದ್ದೂ ಹಿಂದುಧರ್ಮ ಧರ್ಮವಲ್ಲ, ಅದು ಜೀವನ ವಿಧಾನ, ಇದು ಸುಪ್ರೀಂ ಕೋರ್ಟಿನ ತೀರ್ಪು ಎಂದು ವಾದಿಸುವರು. 1966, 1995, 2020 ಹಲವು ಸಂದರ್ಭಗಳಲ್ಲಿ ಸುಪ್ರೀಂ ಕೋರ್ಟಿನ ನ್ಯಾಯಮೂರ್ತಿಗಳು ಹಿಂದು ಧರ್ಮದ ಬಗ್ಗೆ ಸಾಂದರ್ಭಿಕ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಹೊರತು ಹಿಂದುಧರ್ಮ ಎಂಬುದು ಧರ್ಮವೇ ಅಲ್ಲವೆಂದು ತೀರ್ಪು ನೀಡಿಲ್ಲ. 1966 ರಲ್ಲಿ ಸುಪ್ರೀಂ ಕೋರ್ಟ್ ಹಿಂದು ಪದ ಸಂಪೂರ್ಣ ನಾಗರಿಕತೆಯ ಸೂಚಕ. ಆದ್ದರಿಂದ ಹಿಂದುಧರ್ಮವನ್ನು ಸನಾತನ ಧರ್ಮ ಅಥವಾ ವೈದಿಕ ಧರ್ಮ ಎನ್ನುವುದು ಸೂಕ್ತ ಎಂದಿದೆ. 1995ರಲ್ಲಿ ನ್ಯಾಯಮೂರ್ತಿ ಜೆ. ಎಸ್. ವರ್ಮಾ ಹಿಂದು - ಹಿಂದುತ್ವಪದಗಳು ಕೇವಲ ಧರ್ಮವನ್ನು ಮಾತ್ರವಲ್ಲದೇ ಭಾರತೀಯ ಸಂಸ್ಕೃತಿ ಮತ್ತು ಪರಂಪರೆಯನ್ನು ಒಳಗೊಂಡಿದೆ ಎಂದಿದ್ದಾರೆ. 2020 ರಲ್ಲಿ ನ್ಯಾಯಮೂರ್ತಿ ಕೆ. ಎಂ. ಜೋಷೆಫ್ ಹಿಂದುತ್ವವೆಂಬುದು ಧರ್ಮವಲ್ಲ, ಅದು ಜೀವನ ವಿಧಾನ ಎಂದಿದ್ದಾರೆ. ಹೀಗೆಂದಮಾತ್ರಕ್ಕೆ ಹಿಂದುಧರ್ಮ ಎಂಬುದು ಧರ್ಮವಲ್ಲ ಎಂದು ಅರ್ಥೈಸಲಾಗದು. ಬಂಗಾರ ಬೆಳ್ಳಿಯಲ್ಲ ಎಂದ ಮಾತ್ರಕ್ಕೆ ಬಂಗಾರಕ್ಕೆ ಬೆಳ್ಳಿಯ ಬೆಲೆಯಿಲ್ಲವೆಂದಲ್ಲ. ಅದು ಬೆಳ್ಳಿಗಿಂತ ನೂರು ಪಟ್ಟು ಹೆಚ್ಚು ಮೌಲಿಕ. ಬದುಕು ಹೇಗಿರಬೇಕೆಂಬ ಜೀವನ ವಿಧಾನ ಕಲಿಸುವುದು ಧರ್ಮ. ಜೀವನ ವಿಧಾನ ಧರ್ಮವಲ್ಲದೇ ಮತ್ತಿನ್ನೇನು!

## ಬಾಲಕಿಯರ ಕ್ರೀಡಾ ವಸತಿ ನಿಲಯದಲ್ಲಿನ ಅವ್ಯವಸ್ಥೆ ಕಂಡು ಉಪಲೋಕಾಯುಕ್ತ ಗರಂ

• **ಉದಯವಾಹಿನಿ, ಬೆಂಗಳೂರು**

ಮೈಸೂರಿನ ಚಾಮುಂಡಿ ವಿಹಾರ ಕ್ರೀಡಾಂಗಣದ ಆವರಣದಲ್ಲಿರುವ ಬಾಲಕಿಯರ ಕ್ರೀಡಾ ವಸತಿ ನಿಲಯದಲ್ಲಿನ ಅವ್ಯವಸ್ಥೆ ಕಂಡು ತೀವ್ರ ಅಸಮಾಧಾನ ವ್ಯಕ್ತಪಡಿಸಿರುವ ಉಪ ಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು, ಈ ಸಂಬಂಧ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿಗಳ ವಿರುದ್ಧ ಸ್ವಯಂಪ್ರೇರಿತ ದೂರು ದಾಖಲಿಸಿದ್ದಾರೆ. ನ್ಯಾಯಮೂರ್ತಿ ಫಣೀಂದ್ರ ಅವರು ತಮ್ಮ ಆದೇಶದಲ್ಲಿ, ಹಾಸ್ಟೆಲ್‌ನಲ್ಲಿರುವ ಬಾಲಕಿಯರು ಎದುರಿಸುತ್ತಿರುವ ಶೋಚನೀಯ ಸ್ಥಿತಿಯನ್ನು ವಿವರಿಸಿದ್ದಾರೆ. ನಾನೆಂದಿಗೂ ಇಷ್ಟೊಂದು ಅವ್ಯವಸ್ಥೆಯ ವಸತಿ ನಿಲಯಕ್ಕೆ ಭೇಟಿ ನೀಡಿಲ್ಲ. ಅಧಿಕಾರಿಗಳು ಮತ್ತು ವಾರ್ಡನ್ ಇಬ್ಬರೂ ಹೆಸರಿಗೆ ಮಾತ್ರ ಕೆಲಸ ಮಾಡುತ್ತಿದ್ದಾರೆ. ಆದರೆ, ಅವರು ರಾಜ್ಯ ಸರ್ಕಾರದ ಯೋಜನೆಗಳ ಗುರಿ ಮತ್ತು ಉದ್ದೇಶಗಳಿಗೆ ಅನುಗುಣವಾಗಿ ಕೆಲಸ ಮಾಡುತ್ತಿಲ್ಲ. ಈ ಅಧಿಕಾರಿಗಳು ಹಾಸ್ಟೆಲ್‌ಗೆ ಅಪಾಯಕಾರಿಯಾಗಿದ್ದಾರೆ. ಅವ್ಯವಸ್ಥೆ ಕುರಿತು ಪ್ರಶ್ನಿಸಿದಾಗ ವ್ಯವಸ್ಥೆಗಳನ್ನು ಸರಿಪಡಿಸಲು ಕ್ರಮ ಕೈಗೊಳ್ಳುವ ಉತ್ತರ ನೀಡಿದ್ದಾರೆ.

ಸೌಂದರ್ಯ, ಸಂಸ್ಕೃತಿ, ಸ್ವಚ್ಛತೆ ಮತ್ತು ಆರೋಗ್ಯಕ್ಕೆ ಹೆಸರುವಾಸಿಯಾದ ಮೈಸೂರು, ಅಧಿಕಾರಿಗಳ ಈ ರೀತಿ ಸಂಪೂರ್ಣ ನಿರ್ಲಕ್ಷ್ಯ ಮತ್ತು ದುಷ್ಕೃತ್ಯದಿಂದ ಕೆಟ್ಟ ಹೆಸರು ಪಡೆಯುತ್ತಿದೆ

## ಸಚಿವ ಶಿವರಾಜ್ ತಂಗಡಗಿ ವಿರುದ್ಧ ಕ್ರಮಕ್ಕೆ ದಿನೇಶ್ ಕಲ್ಲಹಳ್ಳಿ ಆಗ್ರಹ

• **ಉದಯವಾಹಿನಿ, ಬೆಂಗಳೂರು**

ಸಚಿವ ಶಿವರಾಜ್ ತಂಗಡಗಿ ಅವರು ಚುನಾವಣಾ ಅಫಿಡವಿಟ್‌ನಲ್ಲಿ ಸುಳ್ಳು ಮಾಹಿತಿ ನೀಡಿದ್ದಾರೆಂದು ಸಾಮಾಜಿಕ ಕಾರ್ಯಕರ್ತ ದಿನೇಶ್ ಕಲ್ಲಹಳ್ಳಿ ಅವರು ಆರೋಪಿಸಿದ್ದು, ಈ ಸಂಬಂಧ ಸಚಿವರ ವಿರುದ್ಧ ಕ್ರಮ ಕೈಗೊಳ್ಳುವಂತೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ಆಗ್ರಹಿಸಿದ್ದಾರೆ. ಈ ಸಂಬಂಧ ರಾಜ್ಯಪಾಲರಿಗೆ ಪತ್ರ ಬರೆದಿರುವ ಅವರು, ಚುನಾವಣಾ ಆಯೋಗಕ್ಕೆ ಸಚಿವ ಶಿವರಾಜ್ ತಂಗಡಗಿ ಅವರು ಸಲ್ಲಿಸಿರುವ ಅಫಿಡವಿಟ್‌ನಲ್ಲಿ ಕೆಲವು ಆಸ್ತಿಗಳನ್ನು ಉದ್ದೇಶಪೂರ್ವಕವಾಗಿ ಬಹಿರಂಗಪಡಿಸಿಲ್ಲ. ಸುಳ್ಳು ಮಾಹಿತಿಯನ್ನು ಒದಗಿಸಿದ್ದಾರೆ. ಈ ಮೂಲಕ ದಾರಿ ತಪ್ಪಿಸಿದ್ದಾರೆ. ಇದು ಚುನಾವಣಾ ಸಮಗ್ರತೆಯ ಉಲ್ಲಂಘನೆ ಗಂಭೀರ ಅಪರಾಧವಾಗಿದೆ ಆರೋಪಿಸಿದ್ದಾರೆ. ಅಲ್ಲದೆ, ತಮ್ಮ ಅಧಿಕಾರವನ್ನು ಬಳಸಿಕೊಂಡು ಸಚಿವರ ವಿರುದ್ಧ ಖಾಸಗಿ ದೂರು ದಾಖಲಿಸಲು ಅಥವಾ ಕಾನೂನು ಕ್ರಮ ಜರುಗಿಸಲು ಅನುಮತಿ ನೀಡಬೇಕೆಂದು ಒತ್ತಾಯಿಸಿದ್ದಾರೆ.

## ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ಕಲಾಲೋಕ ಮಳಿಗೆ ಅನಾವರಣ

• **ಉದಯವಾಹಿನಿ, ಬೆಂಗಳೂರು**

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ತೆರೆಯಲಾಗಿರುವ ಕರ್ನಾಟಕದ ಸಾಂಪ್ರದಾಯಿಕ ಉತ್ಪನ್ನಗಳ ಮಾರಾಟ ಕೇಂದ್ರವಾದ ಕಲಾಲೋಕ ಮಳಿಗೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶ-ವಿದೇಶಗಳ ಗ್ರಾಹಕರಿಗೆ ಕರ್ನಾಟಕದ ಹೆಮ್ಮೆಯ ಪಾರಂಪರಿಕ ಮತ್ತು ಜಿಐ ಮಾನ್ಯತೆ ಹೊಂದಿರುವ ವಿಶಿಷ್ಟ ಉತ್ಪನ್ನಗಳನ್ನು ತಲುಪಿಸುವ ಉದ್ದೇಶದಿಂದ ಮಳಿಗೆ ಸ್ಥಾಪನೆ ಮಾಡಲಾಗಿದೆ. ಕರ್ನಾಟಕದ ಕೈಗಾರಿಕಾ ಭೂಪಟದಲ್ಲಿ ಇದೊಂದು ಸಂತಸದ ಕ್ಷಣವಾಗಿದೆ. ಎಂದು ಹೇಳಿದರು. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು ಜನನಿಬಿಡತೆಯಲ್ಲಿ ದೇಶದಲ್ಲೇ ಮೂರನೇ ಸ್ಥಾನದಲ್ಲಿದೆ. ಪ್ರತಿದಿನವೂ ಇಲ್ಲಿ ಹತ್ತಾರು ಸಾವಿರ ಪ್ರಯಾಣಿಕರು ಬರುತ್ತಿರುತ್ತಾರೆ. ಇಂಥವರಿಗೆ ಇಲ್ಲಿಗೆ ಬಂದ ತಕ್ಷಣವೇ ಕರ್ನಾಟಕದ ಅಭಿಮಾನದ ಪಯಣ ಅರ್ಥವಾಗಬೇಕು ಎನ್ನುವ ಉದ್ದೇಶದಿಂದ ಕಲಾಲೋಕ ಮಳಿಗೆ ನಿರ್ಮಿಸಲಾಗಿದೆ ಎಂದರು. ಇದರ ಮೂಲಕ ಕರ್ನಾಟಕದ ಹೆಮ್ಮೆಯ ಉತ್ಪನ್ನಗಳಿಗೆ ಜಾಗತಿಕ ಮಟ್ಟದಲ್ಲಿ ವ್ಯಾಪಕ ಪ್ರಚಾರ, ಬ್ರ್ಯಾಂಡಿಂಗ್ ಮತ್ತು ಮಾರಾಟದ ಗುರಿಯನ್ನು ಹೊಂದಲಾಗಿದೆ. ಎಂದು ತಿಳಿಸಿದರು. ಉದ್ಘಾಟನೆ ವೇಳೆ ಬೃಹತ್ ಕೈಗಾರಿಕೆ ಸಚಿವ ಎಂ.ಬಿ ಪಾಟೀಲ ಅವರು ಇದ್ದರು.

## ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದ ವ್ಯಾಪ್ತಿಗೆ ಬಿಡಿಎ: ಆದೇಶ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (ರೇರಾ) ವ್ಯಾಪ್ತಿಯಿಂದ ಹೊರಗಿಡಬೇಕೆಂದು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ಸಲ್ಲಿಸಿದ್ದ ಮನವಿಯನ್ನು ತಿರಸ್ಕರಿಸಿದ ರೇರಾ, ನಾಡಪ್ರಭು ಕೆಂಪೇಗೌಡ ಬಡಾವಣೆ (ಎನ್‌ಪಿಕೆಎಲ್) ಅನ್ನು ನೋಂದಾಯಿಸಲು ಬಿಡಿಎಗೆ ನಿರ್ದೇಶನ ನೀಡಿ ಆದೇಶ ಹೊರಡಿಸಿದೆ. ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸುವಲ್ಲಿ ವಿಳಂಬವಾಗುತ್ತಿರುವ ಬಗ್ಗೆ ತನ್ನ ವಿರುದ್ಧ ರೇರಾದಲ್ಲಿ ಸಲ್ಲಿಸಿದ್ದ ಅರ್ಜಿಗೆ ಪ್ರತಿಕ್ರಿಯೆ ನೀಡಿದ ಸಂದರ್ಭದಲ್ಲಿ 'ಬಿಡಿಎ ಶಾಸನಬದ್ಧ ಸಂಸ್ಥೆಯಾಗಿದ್ದು, ರಿಯಲ್ ಎಸ್ಟೇಟ್ ಯೋಜನೆಗಳ ಪ್ರವರ್ತಕನಲ್ಲ. ಹಾಗಾಗಿ ರೇರಾ ವ್ಯಾಪ್ತಿಯಿಂದ ಹೊರಗಿಡಬೇಕು' ಎಂಬ ವಾದವನ್ನು ಮಂಡಿಸಿತ್ತು. ಅರ್ಜಿಗೆ ಸಂಬಂಧಿಸಿದ ಆದೇಶದಲ್ಲಿ, ರೇರಾ ಕಾಯ್ದೆಯ ಕಲಂ 2ಝಡ್ ಅನ್ವಯ, ಸಾರ್ವಜನಿಕರಿಗೆ ಮಾರಾಟಕ್ಕಾಗಿ ನಿವೇಶನ ಅಥವಾ ಕಟ್ಟಡಗಳನ್ನು ನಿರ್ಮಿಸುವ ಅಥವಾ ಅಭಿವೃದ್ಧಿಪಡಿಸುವ ಯಾವುದೇ ಅಭಿವೃದ್ಧಿ ಪ್ರಾಧಿಕಾರ ಅಥವಾ ಸಾರ್ವಜನಿಕ ಸಂಸ್ಥೆಯನ್ನು 'ಪ್ರವರ್ತಕ ಎಂದು ಪರಿಗಣಿಸಬೇಕು ಎಂದು ರೇರಾ ತಿಳಿಸಿದೆ. ಆದ್ದರಿಂದ, ಬಿಡಿಎಗೆ ವಿನಾಯಿತಿ ನೀಡಲಾಗುವುದಿಲ್ಲ ಎಂದು ಸ್ಪಷ್ಟಪಡಿಸಿದೆ. 1976ರ ಬಿಡಿಎ ಕಾಯ್ದೆ ಯೋಜನೆ ಮತ್ತು ಭೂ ಅಭಿವೃದ್ಧಿಯನ್ನು ನಿಯಂತ್ರಿಸಿದರೂ, ರೇರಾ, ರಿಯಲ್ ಎಸ್ಟೇಟ್ ಯೋಜನೆಗಳನ್ನು ನಿಯಂತ್ರಿಸಲು ಮತ್ತು ಮನೆ ಖರೀದಿದಾರರ ಹಿತವನ್ನು ರಕ್ಷಿಸಲು ಜಾರಿಗೆ ತಂದ (2016) ವಿಶೇಷ ಕಾಯ್ದೆಯಾಗಿದೆ. ಈ ಕಾಯ್ದೆ ಪ್ರಾಧಿಕಾರದ ಯೋಜನಾ ಅಥವಾ ನಿಯಂತ್ರಣ ಕಾರ್ಯಗಳನ್ನು ನಿಯಂತ್ರಿಸುವುದಿಲ್ಲ.

# ಜನವರಿಗೆ ಟೆಂಡರ್, 2410 ಎಕರೆ ಭೂಮಿ ಸ್ವಾಧೀನಕ್ಕೆ ಸಿದ್ಧತೆ

## 73 ಕಿ.ಮೀ. ಉದ್ದದ ರಸ್ತೆ ನಿರ್ಮಾಣದಿಂದ ಸಂಚಾರ ದಟ್ಟಣೆ ತಗ್ಗುವ ನಿರೀಕ್ಷೆ

• **ಉದಯವಾಹಿನಿ, ಬೆಂಗಳೂರು**

ರಾಜ್ಯ ಸರಕಾರದ ಮಹತ್ವಾಕಾಂಕ್ಷಿ ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ (ಬಿಬಿಸಿ) ಯೋಜನೆಯು ವೇಗ ಪಡೆದುಕೊಳ್ಳುತ್ತಿದ್ದು, 2026ರ ಜನವರಿ ಅಂತ್ಯದೊಳಗೆ ಸಿವಿಲ್ ಕಾಮಗಾರಿಗಳಿಗೆ ಟೆಂಡರ್ ಆಹ್ವಾನಿಸಲು ತಯಾರಿ ಮಾಡಿಕೊಳ್ಳಲಾಗಿದೆ.

ಮಹಾನಗರದಲ್ಲಿ ಉಂಟಾಗುತ್ತಿರುವ ವಾಹನ ದಟ್ಟಣೆ ತಗ್ಗಿಸಲು 1ನೇ ಹಂತದಲ್ಲಿ 73 ಕಿ.ಮೀ. ಉದ್ದದ ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ ಪಿಆರ್‌ಆರ್-1 ನಿರ್ಮಾಣಕ್ಕೆ ಅಗತ್ಯ ಪೂರ್ವ ತಯಾರಿ ಮಾಡಿಕೊಳ್ಳಲಾಗುತ್ತಿದೆ. ಕಾರಿಡಾರ್ ನಿರ್ಮಾಣಕ್ಕಾಗಿಯೇ ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ ಲಿಮಿಟೆಡ್ ಬಿಬಿಸಿಎಲ್ ಸ್ಥಾಪಿಸಲಾಗಿದೆ. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ)ವು ಆರಂಭದಲ್ಲಿ 100 ಮೀಟರ್ ಅಗಲದ ಕಾರಿಡಾರ್ ನಿರ್ಮಾಣಕ್ಕೆ ವಿಸ್ತೃತ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸಿತ್ತು. ಆದರೆ, ರಸ್ತೆ ವಿನ್ಯಾಸದಲ್ಲಿ ಮಾರ್ಪಾಡು ಮಾಡಲಾಗಿದ್ದು, 100 ಮೀಟರ್‌ನಿಂದ 65 ಮೀಟರ್‌ಗೆ ತಗ್ಗಿಸಲಾಗಿದೆ. 35 ಮೀಟರ್‌ನಲ್ಲಿ ವಾಣಿಜ್ಯ ಕಾರಿಡಾರ್ ನಿರ್ಮಾಣವಾಗಲಿದೆ. ಮುಖ್ಯರಸ್ತೆ ಜತೆಗೆ ಎರಡೂ ಬದಿಯಲ್ಲಿ ಸರ್ವೀಸ್ ರಸ್ತೆ, ದ್ವಿಚಕ್ರ ವಾಹನ ಪಥ, ಮೆಟ್ರೊ ಮಾರ್ಗ ನಿರ್ಮಾಣಕ್ಕೂ ಜಾಗ ಕಾಯ್ದಿರಿಸಲಾಗಿದೆ.

**ಡಿಸೆಂಬರ್‌ಗೆ ಪರಿಷ್ಕೃತ ಡಿಪಿಆರ್:** ರಸ್ತೆ ವಿನ್ಯಾಸದಲ್ಲಿ ಸಾಕಷ್ಟು ಮಾರ್ಪಾಡು ಮಾಡಲು ನಿರ್ಧರಿಸಿರುವ ಹಿನ್ನೆಲೆಯಲ್ಲಿ ಪರಿಷ್ಕೃತ ಯೋಜನಾ ವರದಿಯನ್ನು ತಜ್ಞರು ಸಿದ್ಧಪಡಿಸುತ್ತಿದ್ದಾರೆ. ಪರಿಷ್ಕೃತ ಡಿಪಿಆರ್ ಡಿಸೆಂಬರ್ ಅಂತ್ಯದೊಳಗೆ ಬಿಬಿಸಿಎಲ್ ಕೈಸೇರುವ ಸಾಧ್ಯತೆಗಳಿವೆ. ಆನಂತರ ಟೆಂಡರ್ ಆಹ್ವಾನಕ್ಕೆ ದಾಖಲೆಗಳನ್ನು ಸಿದ್ಧಪಡಿಸಲಾಗುತ್ತದೆ.



ಉದಯವಾಹಿನಿ ಚಿತ್ರ

**ಸಿವಿಲ್ ಕಾಮಗಾರಿಗೆ 7500 ಕೋಟಿ ರೂ.:** ಬಿಬಿಸಿ ನಿರ್ಮಾಣಕ್ಕೆ ಹುಡ್ಕೋದಿಂದ ಈಗಾಗಲೇ 27 ಸಾವಿರ ಕೋಟಿ ರೂ. ಸಾಲ ಪಡೆಯಲಾಗಿದೆ. ಇದರಲ್ಲಿ ಸಿವಿಲ್ ಕಾಮಗಾರಿಗಳಿಗೆ ಸುಮಾರು 7500 ಕೋಟಿ ರೂ. ವೆಚ್ಚವಾಗಬಹುದೆಂದು ಅಂದಾಜಿಸಲಾಗಿದೆ. ಭೂಸ್ವಾಧೀನಕ್ಕೆ ಎಷ್ಟು ನಗದು ಪರಿಹಾರ ನೀಡಬೇಕಾಗುತ್ತದೆ ಎಂಬುದು ಗೊತ್ತಾಗಿಲ್ಲ. ಅದು ರೈತರ ಪರಿಹಾರದ ಆಯ್ಕೆಯನ್ನು ಆಧರಿಸಿದೆ.

**800 ಎಕರೆ ಸ್ವಾಧೀನಕ್ಕೆ ಸಿದ್ಧ**

**ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ ನಿರ್ಮಾಣಕ್ಕೆ ಅಗತ್ಯವಿರುವ 2,410 ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗುತ್ತಿದೆ. ಯೋಜನೆಗೆ ಭೂಮಿ ಬಿಟ್ಟುಕೊಡುವ ಮಾಲೀಕರಿಗೆ ಪರಿಹಾರದ ಐದು ಆಯ್ಕೆಗಳನ್ನು ನೀಡಲಾಗಿದೆ. ಸದ್ಯ 800 ಎಕರೆಯು ಸ್ವಾಧೀನಕ್ಕೆ ಸಿದ್ಧವಿದ್ದು, ಈ ತಿಂಗಳಲ್ಲೇ ಅಂತಿಮ ಅವಾರ್ಡ್ ನೋಟಿಸ್ ನೀಡಲಾಗುತ್ತಿದೆ. ಈ ಕಾರಿಡಾರ್ ತುಮಕೂರು ರಸ್ತೆ, ಬಳ್ಳಾರಿ ರಸ್ತೆ, ಹಳೆ ಮದ್ರಾಸ್ ರಸ್ತೆ ಹಾಗೂ ಹೊಸೂರು ರಸ್ತೆ ಸೇರಿದಂತೆ ಪ್ರಮುಖ ಹೆದ್ದಾರಿಗಳನ್ನು ಸಂಪರ್ಕಿಸಲಿದೆ. ಯೋಜನೆ ಅನುಷ್ಠಾನ ಮಾದರಿ ಬಗ್ಗೆ ಇನ್ನೂ ಅಂತಿಮ ನಿರ್ಧಾರ ಕೈಗೊಂಡಿಲ್ಲ. ಟೋಲ್ ಶುಲ್ಕ ನಿಗದಿ ಬಗ್ಗೆಯೂ ತೀರ್ಮಾನಿಸಿಲ್ಲ.**

73 ಕಿ.ಮೀ. ಉದ್ದದ ರಸ್ತೆ ನಿರ್ಮಾಣಕ್ಕೆ ಒಟ್ಟು 3 ಪ್ಯಾಕೇಜ್‌ಗಳಲ್ಲಿ ಟೆಂಡರ್ ಕರೆಯಲು ನಿರ್ಧರಿಸಲಾಗಿದೆ. ತುಮಕೂರು ರಸ್ತೆಯಿಂದ ಬಳ್ಳಾರಿ ರಸ್ತೆ 19.37 ಕಿ.ಮೀ.ಬಳ್ಳಾರಿ ರಸ್ತೆಯಿಂದ ಹಳೆ ಮದ್ರಾಸ್ ರಸ್ತೆ 18 ಕಿ.ಮೀ ಹಳೆ ಮದ್ರಾಸ್ ರಸ್ತೆಯಿಂದ ಹೊಸೂರು ರಸ್ತೆ (27.75 ಕಿ.ಮೀ.) ಪ್ಯಾಕೇಜ್‌ಗಳನ್ನು ವಿಂಗಡಿಸಲಾಗುತ್ತಿದೆ. ಪರಿಷ್ಕೃತ ಡಿಪಿಆರ್ ಸಿದ್ಧವಾದ ಬಳಿಕ 2026ರ ಜನವರಿ ಅಂತ್ಯದೊಳಗೆ ಟೆಂಡರ್ ಕರೆಯಲು ಉದ್ದೇಶಿಸಲಾಗಿದೆ. ಇದು ಭೂಸ್ವಾಧೀನ ಪ್ರಕ್ರಿಯೆಯನ್ನು ಆಧರಿಸಿದೆ. ಶೇ.80ರಷ್ಟು ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸಿ, ಟೆಂಡರ್ ಆಹ್ವಾನಿಸಲು ನಿರ್ಧರಿಸಲಾಗಿದೆ. ಟೆಂಡರ್ ಕರೆದ ಬಳಿಕ 3 ತಿಂಗಳೊಳಗೆ ಗುತ್ತಿಗೆ ಸಂಸ್ಥೆಯನ್ನು ಅಂತಿಮಗೊಳಿಸಲಾಗುತ್ತದೆ. ಆನಂತರ 30 ತಿಂಗಳಲ್ಲಿ ಕಾಮಗಾರಿ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ.

**2000 ಕೋಟಿ ರೂ. ಆದಾಯ ನಿರೀಕ್ಷೆ:** ಬಿಬಿಸಿಯ 100 ಮೀಟರ್ ಅಂಚಿನಿಂದ ಎರಡೂ ಬದಿಯಲ್ಲಿ 500 ಮೀಟರ್ ದೂರದವರೆಗಿನ ವ್ಯಾಪ್ತಿಯ ಪ್ರದೇಶಗಳನ್ನು ಪರಿಣಾಮ ವಲಯವೆಂದು ಇಂಪ್ಯಾಕ್ಟ್ ಜೋನ್ ಎಂದು ಪರಿಗಣಿಸಿ ಸುಧಾರಣಾ ಶುಲ್ಕ ವಿಧಿಸಲು ನಿರ್ಧರಿಸಲಾಗಿದೆ. ಇದರಿಂದ 2000 ಕೋಟಿ ರೂ. ಆದಾಯ ನಿರೀಕ್ಷಿಸಲಾಗಿದೆ.

## ಡ್ರೈವಿಂಗ್ ಲೈಸೆನ್ಸ್‌ಗಳು ಪತ್ತೆ, ಎಫ್‌ಐಆರ್, ದಾಖಲು!

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರು ಪೂರ್ವದ ಕಸ್ತೂರಿ ನಗರದಲ್ಲಿರುವ ಪ್ರಾದೇಶಿಕ ಸಾರಿಗೆ ಕಚೇರಿ (ಆರ್‌ಟಿಒ) ಆವರಣದಲ್ಲಿ ಖಾಸಗಿ ವ್ಯಕ್ತಿಗಳ ಬಳಿ ಹಲವಾರು ವಾಹನ ನೋಂದಣಿ ಪ್ರಮಾಣಪತ್ರಗಳು (ಆರ್‌ಸಿ) ಮತ್ತು ಚಾಲನಾ ಪರವಾನಗಿಗಳು (ಡಿಎಲ್‌ಗಳು) ಪತ್ತೆಯಾಗಿದ್ದು, ಲೋಕಾಯುಕ್ತ ಪೊಲೀಸರು ಸಲ್ಲಿಸಿದ ದೂರಿನ ಆಧಾರದ ಮೇಲೆ ರಾಮಮೂರ್ತಿ ನಗರ ಪೊಲೀಸರು ಮೂವರ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ.

ಮಾರುತಿ ಮೋಟಾರ್ಸ್ ಆಟೋ ಕನ್ಸಲ್ಟೆಂಟ್ಸ್‌ನ ರಜನಿಕಾಂತ್ ಮತ್ತು ಮನೋಜ್ ಕುಮಾರ್ ಮತ್ತು ಶ್ರೇಯಸ್ ಡ್ರೈವಿಂಗ್ ಸ್ಕೂಲ್‌ನ ಪ್ರಶಾಂತ್ ಆರೋಪಿಗಳಾಗಿದ್ದು, ಇವರ ವಿರುದ್ಧ ಬಿಎನ್‌ಎಸ್ ನಿಬಂಧನೆಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಆದರೆ, ಲೋಕಾಯುಕ್ತ ಪೊಲೀಸರು ಸಲ್ಲಿಸಿದ ದೂರಿನಲ್ಲಿ ಯಾರ ಹೆಸರುಗಳನ್ನೂ ಉಲ್ಲೇಖಿಸದ ಕಾರಣ, ಎಫ್‌ಐಆರ್‌ನಲ್ಲಿ ಯಾವುದೇ ಆರ್‌ಟಿಒ ಅಧಿಕಾರಿಗಳನ್ನು ಆರೋಪಿಗಳನ್ನಾಗಿ ಮಾಡಲಾಗಿಲ್ಲ.

ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ. ವೀರಪ್ಪ ಅವರು ಲೋಕಾಯುಕ್ತ ಉಪ ಪೊಲೀಸ್ ವರಿಷ್ಠಾಧಿಕಾರಿಗೆ ಆರ್‌ಟಿಒ, ಎಆರ್‌ಟಿಒ ಮತ್ತು ಸೂಪರಿಂಟೆಂಡೆಂಟ್ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸುವಂತೆ ನಿರ್ದೇಶಿಸಿದ್ದಾರೆ. ದೂರಿನಲ್ಲಿ ಉಲ್ಲೇಖಿಸಲಾದ ಮೂವರು ಆರೋಪಿಗಳೊಂದಿಗೆ ಕೈಜೋಡಿಸಿರುವ ಆರ್‌ಟಿಒಗಳ ವಿರುದ್ಧ ಕ್ರಮ ಕೈಗೊಳ್ಳುವಂತೆಯೂ ಕೋರಿದ್ದಾರೆ.



ಉದಯವಾಹಿನಿ ಚಿತ್ರ

ನ್ಯಾಯಮೂರ್ತಿ ವೀರಪ್ಪ ನೇತೃತ್ವದ ತಂಡವು ಕಸ್ತೂರಿ ನಗರದ ಆರ್‌ಟಿಒಗೆ ಅನಿರೀಕ್ಷಿತ ಭೇಟಿ ನೀಡಿದಾಗ, ಆರ್‌ಟಿಒ ಮುಂಭಾಗದ ಅಂಗಡಿಯಲ್ಲಿ 49 ಆರ್‌ಸಿಗಳು, 83 ಡಿಎಲ್‌ಗಳು ಪತ್ತೆಯಾಗಿವೆ. ಹೆಚ್ಚಿನ ಕಾರ್ಡ್‌ಗಳಲ್ಲಿ 1,500 ರೂ.2,000 ರೂ.3,500 ರೂ. 5,000 ರೂ. ಎಂದು ಬರೆಯಲ್ಪಟ್ಟಿರುವುದು ಕಂಡುಬಂದಿದೆ. ಕೆಲವೆಡೆ ಚೆಕ್ ಗುರುತುಗಳು ಕಂಡುಬಂದಿವೆ. ಆರ್‌ಸಿ ಮತ್ತು ಡಿಎಲ್‌ಗಳು ಪತ್ತೆಯಾದ ಅಂಗಡಿಯು ರಜನಿಕಾಂತ್ ಎಂಬುವವರಿಗೆ ಸೇರಿದ ಮಾರುತಿ ಮೋಟಾರ್ಸ್ ಪ್ರೈವೇಟ್ ಲಿಮಿಟೆಡ್ ಆಗಿದ್ದು, ಆರೋಪಿಗಳು ಆರ್‌ಟಿಒದ ಎರಡನೇ ಮಹಡಿಯಲ್ಲಿರುವ ಅಧಿಕಾರಿಯಿಂದ ಆರ್‌ಸಿ ಮತ್ತು ಡಿಎಲ್‌ಗಳನ್ನು ಪಡೆದಿರುವುದಾಗಿ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

> **ನ್ಯಾಯಮೂರ್ತಿ ವೀರಪ್ಪ ಅವರು ಕೆಆರ್ ಪುರಂನ ಆರ್‌ಟಿಒ ಕಚೇರಿಗೆ ಭೇಟಿ ನೀಡಿದರೆ, ಲೋಕಾಯುಕ್ತ ನ್ಯಾಯಮೂರ್ತಿ ಬಿಎಸ್ ಪಾಟೀಲ್ ಅವರು ಯಶವಂತಪುರ ಮತ್ತು ರಾಜಾಜಿನಗರದ ಆರ್‌ಟಿಒ ಕಚೇರಿಗಳಿಗೆ ಭೇಟಿ ನೀಡಿದರು. ಅಲ್ಲಿ 2,095 ಡಿಎಲ್‌ಗಳು ಮುದ್ರಣಕ್ಕೆ ಬಾಕಿ ಉಳಿದಿವೆ ಮತ್ತು 789 ವಿತರಣೆಗೆ ಬಾಕಿ ಉಳಿದಿವೆ. ರಾಜಾಜಿನಗರ ಆರ್‌ಟಿಒದಲ್ಲಿ, ಲೋಕಾಯುಕ್ತರು 3,800 ಡಿಎಲ್‌ಗಳು 6,300 ಆರ್‌ಸಿ ಸ್ಮಾರ್ಟ್ ಕಾರ್ಡ್‌ಗಳನ್ನು ಮುದ್ರಣಕ್ಕೆ ಬಾಕಿ ಉಳಿಸಿಕೊಂಡಿರುವುದನ್ನು ಪತ್ತೆಮಾಡಿದ್ದಾರೆ.**

## ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ರಾಜಾತಿಥ್ಯ ಎಫ್‌ಐಆರ್, 3 ಎನ್‌ಸಿಆರ್ ದಾಖಲು

• **ಉದಯವಾಹಿನಿ, ಬೆಂಗಳೂರು**

ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದೊಳಗೆ ಕೈದಿಗಳಿಗೆ ಸಿಗುತ್ತಿರುವ ರಾಜಾತಿಥ್ಯದ ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆದ ಬೆನ್ನಲ್ಲೇ ಪೊಲೀಸರು ಮೂರು ಎನ್‌ಸಿಆರ್ ಮತ್ತು ಒಂದು ಎಫ್‌ಐಆರ್ ದಾಖಲಿಸಿಕೊಂಡಿದ್ದಾರೆ. ಸಹಾಯಕ ಅಧೀಕ್ಷಕ ಇಮಾಮಾಸಾಬ್ ಮ್ಯಗೇರಿ ಅವರು ಜೈಲರ್ ಗೋಪಿನಾಥ್ ಡಿ ಮೂಲಕ ದೂರು ಸಲ್ಲಿಸಿದ್ದು, ದೂರಿನಲ್ಲಿ ವೈರಲ್ ಆಗಿರುವ ವೀಡಿಯೊಗಳಲ್ಲಿ ನಾಲ್ವರು ವಿಚಾರಣಾಧೀನ ಕೈದಿಗಳು - ಕಾರ್ತಿಕ್, ಧನಂಜಯ, ಮಂಜುನಾಥ್ ವಿ, ಮತ್ತು ಚರಣ್ ರಾವ್ ಬಿ - ಜೈಲಿನ ಬ್ಯಾರಕ್ ಸಂಖ್ಯೆ 8, ಕೊಠಡಿ ಸಂಖ್ಯೆ 7 ರೊಳಗೆ ನೃತ್ಯ ಮಾಡುತ್ತಿರುವುದು ಕಂಡುಬಂದಿದೆ.

ದೂರಿನ ಆಧಾರದ ಮೇಲೆ, ಪರಪ್ಪನ ಅಗ್ರಹಾರ ಪೊಲೀಸರು ಕರ್ನಾಟಕ ಕಾರಾಗೃಹ ಕಾಯ್ದೆಯ ಸೆಕ್ಷನ್ 42 ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ.


ಹೆಚ್ಚುವರಿಯಾಗಿ, ಶಂಕಿತ ಭಯೋತ್ಪಾದಕ, ಸೀರಿಯಲ್ ರೇಪಿಸ್ಟ್ ಉಮೇಶ್ ರೆಡ್ಡಿ ಮತ್ತು ನಟ ತರುಣ್ ಜೈಲಿನೊಳಗೆ ಮೊಬೈಲ್ ಫೋನ್ ಬಳಸುತ್ತಿರುವ ವಿಡಿಯೋ ಕುರಿತು ಮೂರು ಎನ್‌ಸಿಆರ್‌ಗಳನ್ನು ದಾಖಲಿಸಿಕೊಂಡಿದ್ದಾರೆ.




ಉದಯವಾಹಿನಿ ಚಿತ್ರ

> **ವೀಡಿಯೊಗಳಲ್ಲಿ, ಕೈದಿಗಳು ಜೈಲಿನ ಆವರಣದೊಳಗೆ ನಿಷೇಧಿತ ವಸ್ತುಗಳನ್ನು ಬಳಸುತ್ತಿರುವುದು ಕಂಡುಬಂದಿದೆ. ಈ ವಿಡಿಯೋವನ್ನು ರೆಕಾರ್ಡ್ ಮಾಡಿದ್ದವರು ಯಾರು? ಮಾಧ್ಯಮಗಳಿಗೆ ಸೋರಿಕೆ ಮಾಡಿದವರು ಯಾರು ಎಂಬುದನ್ನು ತನಿಖೆ ನಡೆಸಬೇಕೆಂದು ದೂರಿನಲ್ಲಿ ತಿಳಿಸಿದ್ದಾರೆ.**

## ನವೆಂಬರ್ 14ರಿಂದ ಬಸವೋತ್ಸವ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

ಅಥಣಿಯ ಮುರುಘೇಂದ್ರ ಶಿವಯೋಗಿಗಳ ಜಯಂತ್ಯುತ್ಸವವನ್ನು ನ.14ರಿಂದ 16ರವರೆಗೆ ವಿಜಯನಗರದ ಹಂಪಿನಗರ ಕ್ರೀಡಾಂಗಣದ ಚಂದ್ರಶೇಖರ ಅಜಾದ್ ವೇದಿಕೆಯಲ್ಲಿ ಆಯೋಜಿಸಲಾಗಿದೆ ಎಂದು ಗಚ್ಚಿನಮಠ ಶಿವಬಸವ ಸ್ವಾಮೀಜಿ ತಿಳಿಸಿದರು. ಅಥಣಿ ಸ್ವಾಮೀಜಿ ಬೇರೆಯಲ್ಲ, ಬಸವಣ್ಣ ಬೇರೆಯಲ್ಲ, ಬಸವಣ್ಣನ ವಚನಗಳನ್ನು ಪ್ರಚಾರ ಮಾಡಿದ ಅಥಣಿ ಶ್ರೀ ಅವರ ಚಿಂತನೆಗಳನ್ನು ನಗರದ ಜನರಿಗೆ ಪರಿಚಯಿಸಬೇಕೆಂಬ ಉದ್ದೇಶದಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಇದು ಯಾವುದೇ ಜಾತಿ ಧರ್ಮಕ್ಕೆ ಸೀಮಿತವಲ್ಲ' ಎಂದು ಸುದ್ದಿಗೋಷ್ಠಿಯಲ್ಲಿ ಹೇಳಿದರು.

ಬಸವೋತ್ಸವ ಕಾರ್ಯಕ್ರಮದಲ್ಲಿ ಎಲ್ಲಾ ಸಮುದಾಯಗಳ ಸ್ವಾಮೀಜಿಗಳು, ರಾಜಕೀಯ ನಾಯಕರು ಭಾಗವಹಿಸುವರು. ಬಸವಣ್ಣ ಮತ್ತು ಅಥಣಿ ಸ್ವಾಮೀಜಿ ಅವರ ಕುರಿತು ಚರ್ಚೆ, ಗೋಷ್ಠಿ ನಡೆಯಲಿದೆ. ಇತರೆ ಯಾವುದೇ ವಿಷಯ ಚರ್ಚೆ ಆಗುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಪ್ರತಿನಿತ್ಯ ಸಂಪನ್ಮೂಲ ವ್ಯಕ್ತಿಗಳು ಯುವಕರಿಗೆ ಸ್ಫೂರ್ತಿದಾಯಕ ಹಿತನುಡಿ ಹೇಳುವರು. ಜೊತೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದರು.

## 7 ಲಕ್ಷ ರೂಪಾಯಿ ಮೌಲ್ಯದ ವಸ್ತುಗಳನ್ನು ಕಳೆದುಕೊಂಡ ವ್ಯಕ್ತಿ!

• **ಉದಯವಾಹಿನಿ, ಬೆಂಗಳೂರು**

2 ತಿಂಗಳ ಹಿಂದೆ ಡೇಟಿಂಗ್‌ಆ್ಯಪ್‌ನಲ್ಲಿ ಪರಿಚಯವಾದ ಮಹಿಳೆಯೊಬ್ಬರಿಂದ 26 ವರ್ಷದ ಖಾಸಗಿ ಕಂಪನಿ ಉದ್ಯೋಗಿಯೊಬ್ಬರು ಸುಮಾರು 7 ಲಕ್ಷ ರೂಪಾಯಿ ಮೌಲ್ಯದ ಚಿನ್ನಾಭರಣಗಳನ್ನು ಕಳೆದುಕೊಂಡಿದ್ದಾರೆ.

ಆರೋಪಿಯನ್ನು ಕವಿಪ್ರಿಯಾ ಎಂದು ಗುರುತಿಸಲಾಗಿದೆ. ಈ ಘಟನೆ ನವೆಂಬರ್ 1 ರಂದು ಬೆಳಗಿನ ಜಾವ 12.30 ರಿಂದ ಬೆಳಿಗ್ಗೆ 7 ಗಂಟೆಯ ನಡುವೆ ನಡೆದಿದೆ. ನಾಗಸಂದ್ರದ ಎಚ್‌ಎಂಟಿ ಲೇಔಟ್‌ನಲ್ಲಿರುವ ಪೇಯಿಂಗ್ ಗೆಸ್ಟ್ ವಸತಿಗೃಹದಲ್ಲಿ ವಾಸಿಸುತ್ತಿರುವ ಸಂತ್ರಸ್ತ ದೀಪಕ್ (ಹೆಸರು ಬದಲಾಯಿಸಲಾಗಿದೆ) ಪೊಲೀಸರಿಗೆ ದೂರು ನೀಡಿದ್ದಾರೆ.

ಡೇಟಿಂಗ್ ಆ್ಯಪ್‌ನಲ್ಲಿ ಕವಿಪ್ರಿಯಾ ಅವರನ್ನು ಭೇಟಿಯಾದ ನಂತರ, ಅವರು ಫೋನ್ ಸಂಪರ್ಕದಲ್ಲಿದ್ದರು. ಜೊತೆಗೆ ಸಂದೇಶಗಳನ್ನು ವಿನಿಮಯ ಮಾಡಿಕೊಳ್ಳುತ್ತಿದ್ದರು ಎಂದು ದೀಪಕ್ ತಮ್ಮ ದೂರಿನಲ್ಲಿ ತಿಳಿಸಿದ್ದಾರೆ.



ಉದಯವಾಹಿನಿ ಚಿತ್ರ

ಅಕ್ಟೋಬರ್ 31 ರಂದು ಇಂದಿರಾನಗರದಲ್ಲಿ ಅವರು ಭೇಟಿಯಾದರು ಮತ್ತು ಸಂಜೆ 12 ನೇ ಮುಖ್ಯ ರಸ್ತೆಯಲ್ಲಿರುವ ಕಾಕ್‌ಟೈಲ್ ಬಾರ್‌ಗೆ ಇಬ್ಬರೂ ಹೋಗಿದ್ದರು. ರಾತ್ರಿ ತಡವಾಗಿದ್ದರಿಂದ ತನ್ನ ಪೇಯಿಂಗ್ ಗೆಸ್ಟ್ ವಸತಿಗೃಹಕ್ಕೆ ಹಿಂತಿರುಗಲು ಸಾಧ್ಯವಿಲ್ಲ ಎಂದು ಹೇಳಿದ ಕವಿಪ್ರಿಯಾ ದೀಪಕ್‌ನನ್ನು ಹತ್ತಿರದ ಹೋಟೆಲ್‌ಗೆ ಕರೆದೊಯ್ದು ರೂಮ್ ಬುಕ್ ಮಾಡಿದರು. ಇಬ್ಬರು ರಾತ್ರಿ 12.30 ರ ಸುಮಾರಿಗೆ ಊಟ ಮಾಡಿದರು. ನಂತರ ಆಕೆ ಅವನಿಗೆ ಕುಡಿಯಲು ಕೆಲವು ಮತ್ತು ಬರುವ ಔಷಧಿ ನೀಡಿ ನೀರು ಕೊಟ್ಟಿದ್ದಾಳೆ. ಶೀಘ್ರದಲ್ಲೇ ಆತ ಪ್ರಜ್ಞೆ ತಪ್ಪಿ ಬಿದ್ದಿದ್ದಾನೆ. ಬೆಳಿಗ್ಗೆ ಎದ್ದಾಗ ಅವನ ಚಿನ್ನದ ಸರ, ಚಿನ್ನದ ಕಡ (ಬಳೆ), ಹೆಡ್‌ಸೆಟ್ ಮತ್ತು 10,000 ರೂ. ನಗದು ಕಾಣೆಯಾಗಿರುವುದು ತಿಳಿದಿದೆ.

**ಡೇಟಿಂಗ್ ಆ್ಯಪ್‌ನಲ್ಲಿ ಪರಿಚಯ**

> **ದೀಪಕ್ ಕವಿಪ್ರಿಯಾಗೆ ಹಲವಾರು ಬಾರಿ ಕರೆ ಮಾಡಿದರೂ ಅವಳು ಪ್ರತಿಕ್ರಿಯಿಸಲಿಲ್ಲ. ಆ ಮಹಿಳೆ ಅಪರಾಧಿಯಾಗಿದ್ದು, ಅನೇಕ ಪುರುಷರನ್ನು ಬೇರೆ ಬೇರೆ ಹೆಸರುಗಳಲ್ಲಿ ವಂಚಿಸಿರಬೇಕು ಎಂದು ನಾವು ಅನುಮಾನಿಸುತ್ತೇವೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಆರೋಪಿಯ ವಿರುದ್ಧ ಕಳ್ಳತನ ಮತ್ತು ವಂಚನೆ ಪ್ರಕರಣ ದಾಖಲಾಗಿದೆ. ಹೆಚ್ಚಿನ ತನಿಖೆ ನಡೆಯುತ್ತಿದೆ.**

## ಮಾನವ-ಪ್ರಾಣಿ ಸಂಘರ್ಷ ಅಂತ್ಯಕ್ಕೆ ವೈಜ್ಞಾನಿಕ ಪರಿಹಾರ ಕಂಡು ಹಿಡಿಯುವ ತುರ್ತು ಅಗತ್ಯವಿದೆ

• **ಉದಯವಾಹಿನಿ, ಬೆಂಗಳೂರು**

ಹುಲಿ-ಆನೆಗಳು ಅರಣ್ಯದಿಂದ ಹೊರಗೆ ಬರಲು ಕಾರಣವೇನು ಎಂಬುದನ್ನು ಪತ್ತೆಹಚ್ಚಿ, ವೈಜ್ಞಾನಿಕ ಮಾರ್ಗದಲ್ಲಿ ಪರಿಣಾಮಕಾರಿ ಪರಿಹಾರ ಕಂಡು ಹಿಡಿಯುವ ತುರ್ತು ಅಗತ್ಯವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು. ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮ (ಕೆಡಿಪಿ) ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಸಿಎಂ, ಹುಲಿಗಳು ಮತ್ತು ಆನೆಗಳು ಕಾಡುಗಳಿಂದ ಹೊರಬರುತ್ತಿರುವುದಕ್ಕೆ ಕಾರಣಗಳೇನು ಎಂದು ಅರಣ್ಯ ಅಧಿಕಾರಿಗಳನ್ನು ಪ್ರಶ್ನಿಸಿದರು.

ಈ ವೇಳೆ ಅಧಿಕಾರಿಗಳು ಮನವರಿಕೆಯಾಗುವ ಉತ್ತರವನ್ನು ನೀಡಲು ವಿಫಲವಾದಾಗ, ಮುಖ್ಯಮಂತ್ರಿ ಅಸಮಾಧಾನ ವ್ಯಕ್ತಪಡಿಸಿದರು. ಅಲ್ಲದೆ, ಮಾನವ-ಪ್ರಾಣಿ ಸಂಘರ್ಷ ಅಂತ್ಯಕ್ಕೆ ವೈಜ್ಞಾನಿಕ ವಿಧಾನಗಳ ಮೂಲಕ ಪರಿಣಾಮಕಾರಿ ಪರಿಹಾರವನ್ನು ಕಂಡುಹಿಡಿಯುವ ತುರ್ತು ಅವಶ್ಯಕತೆಯಿದೆ ಎಂದು ಹೇಳಿದರು.



ಉದಯವಾಹಿನಿ ಚಿತ್ರ

ಹುಲಿ-ಆನೆಗಳು ಅರಣ್ಯದಿಂದ ಹೊರಗೆ ಬರಲು ಕಾರಣವೇನು ಎಂಬುದನ್ನು ಪತ್ತೆಹಚ್ಚಿ, ವೈಜ್ಞಾನಿಕ ಮಾರ್ಗದಲ್ಲಿ ಪರಿಣಾಮಕಾರಿ ಪರಿಹಾರ ಕಂಡು ಹಿಡಿಯುವ ತುರ್ತು ಅಗತ್ಯವಿದೆ. ಇದಕ್ಕಾಗಿ ಕಾಡಿನಲ್ಲಿರುವ ನೀರಿನ ಗುಂಡಿಗಳನ್ನು ತುಂಬಿಸಬೇಕು, ಲಾಂಟೆನಾ ತೆಗೆಸಬೇಕು, ಅರಣ್ಯದಲ್ಲಿ ಪ್ರಾಣಿಗಳಿಗೆ ಮೇವು ಬೆಳೆಸಬೇಕು, ಆನೆ, ಹುಲಿಗಳು ಹೊರಗೆ ಬರುವ ಬಗ್ಗೆ ನಿರಂತರ ನಿಗಾವಹಿಸಬೇಕು ಎಂದು ಹೇಳಿದರು. ಅರಣ್ಯ ಪ್ರಾಣಿ ಮತ್ತು ಮಾನವ ಸಂಘರ್ಷ ತಪ್ಪಿಸಲು ಪ್ರತ್ಯೇಕವಾದ ಸಭೆ ಕರೆಯುತ್ತಿದ್ದೇವೆ.

ಸಮಗ್ರ ಮಾಹಿತಿ ಮತ್ತು ಪರಿಹಾರದ ಬಗ್ಗೆ ಅಧ್ಯಯನ ನಡೆಸಿ ಪೂರ್ತಿ ಸಿದ್ಧತೆಯೊಂದಿಗೆ ಸಭೆಗೆ ಬರಬೇಕು. ಈಗಾಗಲೇ ಹೆಲ್ಪ್ ಲೈನ್ ತೆರೆಯಲಾಗಿದೆ. ಕಮಾಂಡ್ ಸೆಂಟರ್ ತೆರೆಯುವ ಕಾರ್ಯ ಪ್ರಗತಿಯಲ್ಲಿದೆ ಎನ್ನುವ ಮಾಹಿತಿ ಇದೆ ಎಂದು ತಿಳಿಸಿದರು.

# ಬಿಡಿಎ ಕೆಂಪೇಗೌಡ ಬಡಾವಣೆಯಲ್ಲಿ 784 ಬದಲಿ ನಿವೇಶನ ಹಂಚಿಕೆ!

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಅನಧಿಕೃತ ನಿರ್ಮಾಣಗಳನ್ನು ತೆರವುಗೊಳಿಸುವ ಕಾರ್ಯಾಚರಣೆ

• **ಉದಯವಾಹಿನಿ, ಬೆಂಗಳೂರು**

ಹಂಚಿಕೆಯಾಗಿ ಬದಲಿ ನಿವೇಶನ ಕೋರಿರುವ ಹಂಚಿಕೆದಾರರಿಗೆ ಒಂದೇ ದಿನದಲ್ಲಿ ವಿವಿಧ ಅಳತೆಯ ಒಟ್ಟು 784 ನಿವೇಶನಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಬದಲಿಯಾಗಿ ಹಂಚಿಕೆ ಮಾಡಿದೆ. ಪ್ರಾಧಿಕಾರದ ಅಧ್ಯಕ್ಷ ಎನ್.ಎ. ಹ್ಯಾರಿಸ್ ಅರ್ಕಾವತಿ ಬಡಾವಣೆಯ ನಿವೇಶನ ಹಂಚಿಕೆದಾರರಿಗೆ ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ ಬದಲಿ ನಿವೇಶನಗಳನ್ನು ರ್‍ಯಾಂಡಮೈಜೇಷನ್ ತಂತ್ರಾಂಶದ ಮೂಲಕ ಹಂಚಿಕೆ ಮಾಡಿದರು.

**ಯಾರಿಗೆ ಯಾವ ನಿವೇಶನ:** 20X30 ಅಳತೆ 113 ನಿವೇಶಗಳನ್ನು ಆರ್ಥಿಕ ದುರ್ಬಲ ವರ್ಗದವರಿಗೆ, 11 ನಿವೇಶನಗಳನ್ನು ಸಾಮಾನ್ಯ ವರ್ಗದವರಿಗೆ ಹಂಚಿಕೆ ಮಾಡಿದರು.

ಉಳಿದಂತೆ 513 ಮಂದಿಗೆ 30X40 ಅಳತೆಯ, 74 ಮಂದಿಗೆ 40X60 ಅಳತೆಯ, 44 ಮಂದಿಗೆ 50X80 ಅಳತೆಯ ಹಾಗೂ ಸುರಭಿ ಸೇವಾ ಸಂಘ (ರೆವಿನ್ಯೂ ಸೈಟ್ ಹೋಲ್ಡರ್ಸ್)ಕ್ಕೆ 29 ಸೇರಿದಂತೆ ಒಟ್ಟು 784 ನಿವೇಶನಗಳನ್ನು ಬದಲಿಯಾಗಿ ಹಂಚಿಕೆ ಮಾಡಿದರು.

- 20 X 30 (ಆರ್ಥಿಕ ದುರ್ಬಲ ವರ್ಗ) - 113
- 20 X 30
- (ಸಾಮಾನ್ಯ ವರ್ಗ) -11
- 30 X 40 -513
- 40 X 60 -74
- 50 X 80 - 44
- ಸುರಭಿ ಸೇವಾ ಸಂಘ -29
- ಒಟ್ಟು - 784




ಉದಯವಾಹಿನಿ ಚಿತ್ರ

ಸಭೆಯಲ್ಲಿ ಬಿಡಿಎ ಆಯುಕ್ತ ಮೇಜರ್ ಮಣಿವಣ್ಣನ್ ಹಾಗೂ ಕಾರ್ಯದರ್ಶಿ ಸಿ.ಎಲ್ ಶಿವಕುಮಾರ್, ಹೆಚ್ಚುವರಿ ಕಾರ್ಯದರ್ಶಿ ಎನ್.ಮಂಜುನಾಥ್ ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

**ಬಿಡಿಎ ಕಾರ್ಯಾಚರಣೆ: ಬಿಟಿಎಂ ಬಡಾವಣೆಯಲ್ಲಿ ಆಸ್ತಿ ವಶ**

**ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಅನಧಿಕೃತ ನಿರ್ಮಾಣಗಳನ್ನು ತೆರವುಗೊಳಿಸುವ ಕಾರ್ಯಾಚರಣೆಯನ್ನು ಮುಂದುವರೆಸಿದ್ದು, ನಡೆದ ಕಾರ್ಯಾಚರಣೆಯಲ್ಲಿ ಬಿ.ಟಿ.ಎಂ. 1ನೇ ಹಂತದಲ್ಲಿ ರೂ. 12.25 ಕೋಟಿ ಆಸ್ತಿಯನ್ನು ವಶಪಡಿಸಿಕೊಂಡಿದೆ.**

ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ತಾವರೆಕೆರೆ ಗ್ರಾಮದ ಸರ್ವೆ ನಂ. 50 ರಲ್ಲಿ 6629 ಚದರ ಅಡಿಯ ಪ್ರದೇಶದಲ್ಲಿ ಅನಧಿಕೃತವಾಗಿ ನಿರ್ಮಿಸಲಾಗಿದ್ದ ಶೆಡ್ ಹಾಗೂ ಕಾಂಪೌಂಡ್ ಅನ್ನು ತೆರವುಗೊಳಿಸಿ, ಸುಮಾರು 12.25 ಕೋಟಿ ಬೆಲೆ ಬಾಳುವ ಪ್ರದೇಶವನ್ನು ಪ್ರಾಧಿಕಾರವು ವಶಪಡಿಸಿಕೊಂಡಿತು. ಈ ಕಾರ್ಯಾಚರಣೆಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಕಾರ್ಯನಿರತ ಪಡೆಯ ಆರಕ್ಷಕ ಅಧೀಕ್ಷಕರು, ಕಾರ್ಯಪಾಲಕ ಅಭಿಯಂತರರು, ದಕ್ಷಿಣ ವಿಭಾಗ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಇವರುಗಳನ್ನು ಒಳಗೊಂಡಂತೆ ಸ್ಥಳೀಯ ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ನೆರವೇರಿಸಲಾಯಿತು.

> **ಅರ್ಕಾವತಿ ಬಡಾವಣೆಯಲ್ಲಿ ನಿವೇಶನ ಹಂಚಿಕೆಯಾಗಿ ಸ್ವಾಧೀನ ಪಡೆಯದ ಹಂಚಿಕೆದಾರರಿಗೆ ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ ಬದಲಿ ನಿವೇಶನವನ್ನು ಹಂಚಿಕೆ ಮಾಡಲಾಯಿತು. ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬಹುದು ಎಂದು ಬಿಡಿಎ ಅಧಿಕಾರಿಗಳು ತಿಳಿಸಿದ್ದಾರೆ.**

# ದೆಹಲಿ ಸ್ಫೋಟದ ಬಗ್ಗೆ ತನಿಖೆಯಾಗಲಿ: ಮುಖ್ಯಮಂತ್ರಿ ಸಿದ್ದರಾಮಯ್ಯ

• ಉದಯವಾಹಿನಿ, ಮೈಸೂರು

ದೆಹಲಿಯ ಕೆಂಪುಕೋಟೆ ಬಳಿ ನಡೆದ ಸ್ಫೋಟದ ಬಗ್ಗೆ ಕೇಂದ್ರ ಸರ್ಕಾರವೇ ಸಮಗ್ರ ತನಿಖೆ ನಡೆಸಿ ಉತ್ತರಿಸಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಇಲ್ಲಿನ ತಮ್ಮ ನಿವಾಸದಲ್ಲಿ ಸುದ್ದಿಗೋಷ್ಠಿ ನಡೆಸಿದ ಸಿದ್ದರಾಮಯ್ಯ, ದೇಶದಲ್ಲಿ ಚುನಾವಣೆ ವೇಳೆಯಲ್ಲೇ ಏಕೆ ಸ್ಫೋಟಗಳು ಆಗುತ್ತಿವೆ ದೆಹಲಿ ಸ್ಫೋಟ ಮಂಗಳವಾರದ ಬಿಹಾರ ಚುನಾವಣೆ ವೇಳೆ ಪ್ರಭಾವ ಬೀರುತ್ತದೆಯೇ' ಎಂಬ ಪತ್ರಕರ್ತರ ಪ್ರಶ್ನೆಗೆ ಪ್ರತಿಕ್ರಿಯಿಸಿ 'ಸ್ಫೋಟಗಳು ಆಗಬಾರದು. ಅದರಿಂದ ಅಮಾಯಕರು ಪ್ರಾಣ ಕಳೆದುಕೊಳ್ಳುತ್ತಾರೆ. ಚುನಾವಣೆ ವೇಳೆಯಲ್ಲೇ ಏಕೆ ಸ್ಫೋಟಗಳು ಹೆಚ್ಚು ಎಂಬ ಬಗ್ಗೆ ಕೇಂದ್ರವೇ ಉತ್ತರಿಸಬೇಕು. ಈ ಸ್ಫೋಟವು ಬಿಹಾರ ಚುನಾವಣೆಯಲ್ಲಿ ಬಿಜೆಪಿ ಮೇಲೆ ಋಣಾತ್ಮಕ ಪ್ರಭಾವ ಬೀರುವ ಸಾಧ್ಯತೆಯೇ ಹೆಚ್ಚು' ಎಂದರು.



**15ರಂದು ದೆಹಲಿಗೆ:** ಪಕ್ಷದ ಹಿರಿಯ ನಾಯಕ ಕಪಿಲ್ ಸಿಬಲ್ ಅವರ ಕಾರ್ಯಕ್ರಮದಲ್ಲಿ ಭಾಗವಹಿಸಲು ನ. 15 ರಂದು ದೆಹಲಿಗೆ ಹೋಗುತ್ತಿದ್ದೇನೆ. ಅವತ್ತೇ ವಾಪಾಸ್ ಬರುವ ಅಂದಾಜಿದೆ. ರಾಹುಲ್ ಗಾಂಧಿ ಭೇಟಿಗೆ ಸಮಯ ಕೋರಿದ್ದು, ಅವಕಾಶ ಸಿಕ್ಕರೆ ಹೈಕಮಾಂಡ್ ಭೇಟಿಯಾಗುತ್ತೇನೆ' ಎಂದರು.

ಭಾರತ ಹಿಂದೂ ರಾಷ್ಟ್ರ ಎಂಬ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಹೇಳಿಕೆಗೆ ಪ್ರತಿಕ್ರಿಯಿಸಿ ಭಾರತ ಬಹುತ್ವದ ಸಂಸ್ಕೃತಿಯುಳ್ಳ ದೇಶ. ಎಲ್ಲಾ ಧರ್ಮೀಯರು ನಮ್ಮಲ್ಲಿ ಇದ್ದಾರೆ ಎಂದರು. ಆರ್‌ಎಸ್‌ಎಸ್‌ನವರು ಮೊದಲು ದೇಶದಲ್ಲಿನ ಅಸಮಾನತೆ, ಅಸ್ಪೃಶ್ಯತೆ ಬಗ್ಗೆ ಮಾತನಾಡಲಿ ಎಂದು ಸಲಹೆ ನೀಡಿದರು.

ಜೆಡಿಎಸ್ ಶಾಸಕ ಜಿ.ಟಿ. ದೇವೇಗೌಡ ಕಾಂಗ್ರೆಸ್‌ನತ್ತ ವಾಲಿರುವ ಕುರಿತು ಪ್ರತಿಕ್ರಿಯಿಸಿದ ಅವರು ಜಿ.ಟಿ. ದೇವೇಗೌಡ ಸೇರಿದಂತೆ ಯಾರನ್ನೂ ಪಕ್ಷಕ್ಕೆ ಆಹ್ವಾನಿಸುವುದಿಲ್ಲ. ಆದರೆ ಪಕ್ಷದ ಸಿದ್ಧಾಂತ ಒಪ್ಪಿ ಬರುವವರಿಗೆ ಬೇಡ ಎನ್ನುವುದಿಲ್ಲ ಎಂದರು. ಎತ್ತಿನಹೊಳೆ ಯೋಜನೆಗೆ ಕೇಂದ್ರ ಸರ್ಕಾರ ಯಾವುದೇ ತಡೆ ನೀಡಿಲ್ಲ. ನೀಡುವುದೂ ಇಲ್ಲ' ಎಂದರು.

# ಜಿಬಿಐಟಿ: ಎಚ್‌ಡಿಕೆ ಬೆಂಬಲಕ್ಕೆ ಹೋರಾಟಗಾರರ ಮನವಿ


## ಈಗಾಗಲೇ ಜಮೀನಿನ ಸರ್ವೆ ಆರಂಭವಾಗಿದ್ದು, ಪರಿಹಾರ ದರ ನಿಗದಿ ಕುರಿತು ಜಿಲ್ಲಾಧಿಕಾರಿ ಸಭೆ

• ಉದಯವಾಹಿನಿ, ರಾಮನಗರ

ತಾಲ್ಲೂಕಿನ ಬಿಡದಿ ಹೋಬಳಿಯಲ್ಲಿ ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ (ಜಿಬಿಐಟಿ) ವಿರುದ್ಧ ಹೋರಾಟ ನಡೆಸುತ್ತಿರುವ ರೈತರು, ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರನ್ನು ಕೇತಗಾನಹಳ್ಳಿಯಲ್ಲಿರುವ ತೋಟದ ಮನೆಯಲ್ಲಿ ಭೇಟಿ ಮಾಡಿ. ಹೋರಾಟಕ್ಕೆ ಬೆಂಬಲ ನೀಡುವಂತೆ ಮನವಿ ಸಲ್ಲಿಸಿದರು. ಮಹಿಳೆಯುರು ಸೇರಿದಂತೆ ಹಲವರು ಬೆಳಿಗ್ಗೆ ತೋಟದ ಮನೆಗೆ ಹೋಗಿ ಕುಮಾರಸ್ವಾಮಿ ಅವರನ್ನು ಭೇಟಿ ಮಾಡಿದರು. ಉಪನಗರ ಯೋಜನೆಗೆ ಈಗಾಗಲೇ ಭೂ ಸ್ವಾಧೀನ ಪ್ರಕ್ರಿಯೆ ಶುರುವಾಗಿದೆ.

ಯೋಜನೆ ವಿರುದ್ಧ ನಾವು ನಡೆಸುತ್ತಿರುವ ಅಹೋರಾತ್ರಿ ಧರಣಿ 50 ದಿನಗಳನ್ನು ಪೂರೈಸಿದ್ದರೂ ಸರ್ಕಾರ ಯಾವುದೇ ರೀತಿಯಲ್ಲೂ ಸ್ಪಂದಿಸಿಲ್ಲ ಎಂದು ಅಳಲು ತೋಡಿಕೊಂಡರು ಇದುವರೆಗೆ ನಮ್ಮ ಅಳಲನ್ನು ಯಾವುದೇ ಜನಪ್ರತಿ ಆಲಿಸಿಲ್ಲ. ಈಗಾಗಲೇ ಜಮೀನಿನ ಸರ್ವೆ ಆರಂಭವಾಗಿದ್ದು, ಪರಿಹಾರ ದರ ನಿಗದಿ ಕುರಿತು ಜಿಲ್ಲಾಧಿಕಾರಿ ಸಭೆ ನಡೆಸಿದ್ದಾರೆ.

ನಮ್ಮ ಹೋರಾಟಕ್ಕೆ ಜೆಡಿಎಸ್, ಬಿಜೆಪಿ ಪಕ್ಷಗಳು ಸೇರಿದಂತೆ ರೈತ ಮತ್ತು ಕನ್ನಡಪರ ಸಂಘಟನೆಗಳು ಬೆಂಬಲಿಸಿವೆ. ಆದರೂ, ಸರ್ಕಾರ ಕಣ್ಣೆರೆದಿಲ್ಲ ಎಂದರು. ನೀವು ಮುಖ್ಯಮಂತ್ರಿಯಾಗಿದ್ದಾಗ ರೂಪುಗೊಂಡಿದ್ದ ಯೋಜನೆಯನ್ನು ಸರ್ಕಾರ ಕೈ ಬಿಡಬೇಕಾದರೆ,


ಉದಯವಾಹಿನಿ ಚಿತ್ರ

ನಮ್ಮ ಹೋರಾಟಕ್ಕೆ ನೀವು ಬೆಂಬಲ ನೀಡಬೇಕು. ಭೂ ಸ್ವಾಧೀನ ನಿಲ್ಲಿಸಲು ಸರ್ಕಾರದ ಮೇಲೆ ಒತ್ತಡ ಹಾಕಬೇಕು. ಯೋಜನೆ ಅನುಷ್ಠಾನಗೊಂಡರೆ ಸಣ್ಣ ರೈತರು ಬೀದಿಗೆ ಬರಲಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು.

ಜೆಡಿಎಸ್ ಜಿಲ್ಲಾಧ್ಯಕ್ಷರೂ ಆಗಿರುವ ಶಾಸಕ ಎ. ಮಂಜುನಾಥ್, ಬಿಡದಿ ಪುರಸಭೆ ಅಧ್ಯಕ್ಷೆ ಭಾನುಪ್ರಿಯ ಸಂಪತ್, ಮುಖಂಡರಾದ ಸೋಮೇಗೌಡ ಹಾಗೂ ಚಿಕ್ಕಣ್ಣಯ್ಯ, ಹಾಗೂ ಮಂಜು ಬ್ಯಾಟಪ್ಪ, ಡಾ. ಭರತ್‌ಕೆಂಪಣ್ಣ, ರೈತರ ಭೂ ಹಿತರಕ್ಷಣಾ ಸಂಘದ ಅಧ್ಯಕ್ಷ ಕೆ. ರಾಮಯ್ಯ ಹಾಗೂ ಪದಾಧಿಕಾರಿಗಳಾದ ಶ್ರೀನಿವಾಸ ರೆಡ್ಡಿ, ಮಂಡಲಹಳ್ಳಿ ನಾಗರಾಜು, ಪ್ರಕಾಶ್, ರಾಧಾಕೃಷ್ಣ, ಶ್ರೀಧರ್, ಹೇಮಂತ್, ಕೃಷ್ಣ, ನಾಗೇಶ್ಕುಮಾರ್, ಮಂಜುಳಾ, ಚೈತ್ರ, ನೇತ್ರಾ ಹಾಗೂ ಇತರರು ಇದ್ದರು.

### ಚೇತರಿಕೆ ಬಳಿಕ ಹೋರಾಟಕ್ಕೆ ಬರುವೆ: ಎಚ್‌ಡಿಕೆ

**ರೈತರ ಮನವಿ ಆಲಿಸಿದ ಕುಮಾರಸ್ವಾಮಿ 'ಯೋಜನೆಗೆ ಭೂ ಸ್ವಾಧೀನ ಮಾಡುವ ವಿಷಯದಲ್ಲಿ ಸರ್ಕಾರ ರೈತರ ಮೇಲೆ ದೌರ್ಜನ್ಯ ನಡೆಸುತ್ತಿದೆ. ನಿಮ್ಮ ಹೋರಾಟಕ್ಕೆ ನಮ್ಮ ಬೆಂಬಲವಿದೆ. ಈಗಾಗಲೇ ನಿಖಿಲ್ ಕುಮಾರಸ್ವಾಮಿ ಮತ್ತು ಎ. ಮಂಜುನಾಥ್ ಅವರು ಸ್ಥಳಕ್ಕೆ ಭೇಟಿ ನೀಡಿ ನಿಮ್ಮ ಹೋರಾಟಕ್ಕೆ ಕೈ ಜೋಡಿಸಿದ್ದಾರೆ. ಅನಾರೋಗ್ಯದಿಂದಾಗಿ ನನಗೆ ಭಾಗವಹಿಸಲು ಸಾಧ್ಯವಾಗಿಲ್ಲ. ಇನ್ನೊಂದು ತಿಂಗಳಲ್ಲಿ ಸಂಪೂರ್ಣ ಗುಣಮುಖನಾಗಲಿದ್ದು ಬಳಿಕ ಹೋರಾಟಕ್ಕೆ ನಾನೂ ಬರುವೆ' ಎಂದು ಭರವಸೆ ನೀಡಿದರು.**

# ಮಧುಗಿರಿ ರಸ್ತೆ ಅಭಿವೃದ್ಧಿಗೆ ಚಾಲನೆ



• ಉದಯವಾಹಿನಿ, ಗೌರಿಬಿದನೂರು

ಗೌರಿಬಿದನೂರು ಮಧುಗಿರಿ ರಸ್ತೆ ಅಭಿವೃದ್ಧಿಗಾಗಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ರಸ್ತೆಗೆ ಅಡ್ಡಲಾಗಿದ್ದ ಹಲವು ಕಟ್ಟಡಗಳನ್ನು ತೆರವುಗೊಳಿಸಿದೆ. ಈ ಮೂಲಕ ಹಲವು ವರ್ಷಗಳಿಂದ ನನೆಗುದಿಗೆ ಬಿದ್ದಿದ್ದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿದಂತಾಗಿದೆ. ನಗರದ ಉತ್ತರ ಪಿನಾಕಿನಿ ನದಿ ದಡದ ಬಳಿಯಿಂದ ಮಧುಗಿರಿ ರಸ್ತೆಯ ರೈಲ್ವೆ ಮೇಲುಸೇತುವೆವರೆಗೆ 80 ಅಡಿಗಳ ರಸ್ತೆ ಅಭಿವೃದ್ಧಿಗೆ ಈಗಾಗಲೇ ರಸ್ತೆಯ ಮಧ್ಯಭಾಗದಿಂದ 40 ಅಡಿಗಳಿಗೆ ಗುರುತು ಮಾಡಲಾಗಿದೆ.

ರಸ್ತೆಗೆ ಅಡ್ಡಲಾಗಿರುವ ಕಟ್ಟಡಗಳನ್ನು ಸ್ವಯಂಪ್ರೇರಿತವಾಗಿ ತೆರವುಗೊಳಿಸಬೇಕು ಎಂದು ಮಾಲೀಕರಿಗೆ ನೋಟಿಸ್ ನೀಡಲಾಗಿತ್ತು. ಜೊತೆಗೆ ಕಟ್ಟಡ ತೆರವಿಗೆ ಕಾಲಾವಕಾಶವನ್ನು ನೀಡಲಾಗಿತ್ತು.

ಗುಡುವು ಮುಗಿದ ಬಳಿಕ ತಾವೇ ತೆರವುಗೊಳಿಸುವುದಾಗಿ ಎಚ್ಚರಿಕೆಯನ್ನೂ ನೀಡಲಾಗಿತ್ತು. ರಸ್ತೆಯ ಕಟ್ಟಡ ಮಾಲೀಕರು ತಮ್ಮ ಕಟ್ಟಡಗಳನ್ನು ತೆರುವುಗೊಳಿಸಬಾರದು ಎಂದು ಕೋರಿ ನ್ಯಾಯಾಲಯದ ಮೊರೆ ಹೋಗಿದ್ದಾರೆ. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವೂ ನ್ಯಾಯಾಲಯದ ಮೆಟ್ಟಿಲೇರಿದೆ ಎಂದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಎಇಇ ರಾಜಾರೆಡ್ಡಿ ತಿಳಿಸಿದ್ದಾರೆ.

# ಸಮನ್ವಯದಿಂದ ಪರಿಣಾಮಕಾರಿ ಆಡಳಿತ ಸಾಧ್ಯ: ಸಚಿವ ಡಾ.ಎಚ್.ಸಿ. ಮಹದೇವಪ್ಪ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮೈಸೂರು

ಪಕ್ಷ, ಸರ್ಕಾರದ ಸಮನ್ವಯದಿಂದ ಪರಿಣಾಮಕಾರಿ ಆಡಳಿತ ಸಾಧ್ಯವಾಗುತ್ತದೆ' ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ. ಮಹದೇವಪ್ಪ ಹೇಳಿದರು. ಇಲ್ಲಿ ನಡೆದ ಕಾಂಗ್ರೆಸ್ ನಗರ ಹಾಗೂ ಗ್ರಾಮಾಂತರ ಜಿಲ್ಲಾ ಸಮಿತಿ ವತಿಯಿಂದ ಜಿಲ್ಲೆಯ ಶಾಸಕರು ಹಾಗೂ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರ ಸಭೆಯಲ್ಲಿ ಅವರು ಮಾತನಾಡಿ, 'ನಾವು ಮಂತ್ರಿ, ಶಾಸಕರಾಗಲು ಪ್ರಾಮಾಣಿಕ ಕಾರ್ಯಕರ್ತರೇ ಮೂಲ ಕಾರಣ' ಎಂದರು.

ಮತ ಕಳವು ಸಹಿ ಸಂಗ್ರಹ ಆರಂಭವಾದ ನಂತರ ದೇಶದಾದ್ಯಂತ ರಾಹುಲ್ ಗಾಂಧಿ ಅವರನ್ನು 35 ಕೋಟಿ ಜನ ಸಾಮಾಜಿಕ ಜಾಲತಾಣಗಳಲ್ಲಿ ಬೆಂಬಲಿಸಿದ್ದಾರೆ. ಅವರವರ ಮತಗಟ್ಟೆಗಳಲ್ಲಿ ನಡೆದಿರುವ ಅಕ್ರಮಗಳನ್ನು ಬಿಚ್ಚಿಡುತ್ತಿದ್ದಾರೆ ಎಂದು ಹೇಳಿದರು.

ಮೈಸೂರು ಲೋಕಸಭಾ ಕ್ಷೇತ್ರದಲ್ಲಿ ಒಟ್ಟು 1.5 ಲಕ್ಷ ಮತ ಕಳವಾಗಿದೆ. ಆ ಸಂಪೂರ್ಣ ಮಾಹಿತಿಯನ್ನು ಅವರಿಗೆ ಕೊಟ್ಟಿದ್ದೇವೆ. ಅದನ್ನು ಬಹಳ ಗಂಭೀರವಾಗಿ ಪರಿಗಣಿಸಿದ್ದಾರೆ.

ಈ ಅಭಿಯಾನ ಪಕ್ಷದ ಪ್ರತಿಯೊಬ್ಬರಿಗೂ ಮಹತ್ವದ್ದು. ಎಲ್ಲರೂ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ದೇಶ ಉಳಿಸುವ ಮಹತ್ಕಾರ್ಯಕ್ಕೆ ಕೈಜೋಡಿಸಬೇಕು ಎಂದು ಕೋರಿದರು. ಕೆಪಿಸಿಸಿ ಕಾರ್ಯಾಧ್ಯಕ್ಷರೂ ಆಗಿರುವ ಶಾಸಕ ತನ್ವೀರ್ ಸೇಠ್, ಕಾಂಗ್ರೆಸ್ ನಮಗೆ ಅಧಿಕಾರ ಕೊಟ್ಟಿದೆ. ಪಕ್ಷ ಇಲ್ಲದಿದ್ದರೆ ನಾವ್ಯಾರೂ ಇಲ್ಲ. ಒಂದು ದೇಶ, ಒಂದು ಚುನಾವಣೆ, ಒಂದು ಧರ್ಮ ಎಂಬ ಸಂವಿಧಾನದ ವಿರೋಧಿ ಕುತಂತ್ರಗಳನ್ನು ಬಿಜೆಪಿ ಮಾಡುತ್ತಿದೆ. ಕಾಂಗ್ರೆಸ್ ಗೆಲ್ಲುವ ಕಡೆಯೆಲ್ಲ ಬಿಜೆಪಿ ಮತ ಕಳವು ಮಾಡಿ ಗೆಲ್ಲುತ್ತಿದೆ' ಎಂದರು.

ಪಕ್ಷದ ಗ್ರಾಮಾಂತರ ಜಿಲ್ಲಾ ಸಮಿತಿಯ ನಗರ ಜಿಲ್ಲಾ ಸಮಿತಿಯ ಅಧ್ಯಕ್ಷ ಆರ್. ಮೂರ್ತಿ, ಶಾಸಕರಾದ ಕೆ. ಹರೀಶ್ ಗೌಡ, ಡಿ. ರವಿಶಂಕರ್, ದರ್ಶನ್ ಧ್ರುವನಾರಾಯಣ್, ಮಾಜಿ ಶಾಸಕರಾದ ಎಂ.ಕೆ. ಸೋಮಶೇಖರ್, ಕಳಲೆ ಕೇಶವಮೂರ್ತಿ, ಕೆಪಿಸಿಸಿ ವಕ್ತಾರ ಎಂ. ಲಕ್ಷ್ಮಣ್, ಮೈಮುಲ್ ಅಧ್ಯಕ್ಷ ಈರೇಗೌಡ, ಕರ್ನಾಟಕ ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ಹಾಡ್ಯ ರಂಗಸ್ವಾಮಿ ಹಾಜರಿದ್ದರು.

> ತಿಂಗಳಲ್ಲಿ ಒಮ್ಮೆ ಪಕ್ಷದ ಕಚೇರಿಗೆ ಬರುತ್ತೇನೆ. ಕಾರ್ಯಕರ್ತರ ಅಹವಾಲುಗಳನ್ನು ಆಲಿಸುತ್ತೇನೆ. ನಿಗಮ-ಮಂಡಳಿಗಳ ನಿರ್ದೇಶಕರ ಪಟ್ಟಿ ಶೀಘ್ರದಲ್ಲೇ ಪ್ರಕಟಗೊಳ್ಳಲಿದೆ
> -ಡಾ.ಎಚ್.ಸಿ. ಮಹದೇವಪ್ಪ ಜಿಲ್ಲಾ ಉಸ್ತುವಾರಿ ಸಚಿವ

# ಉದಯವಾಹಿನಿ ವರದಿಗೆ ಎಚ್ಚೆತ್ತುಕೊಂಡು ನವೆಂಬರ್ 18ಕ್ಕೆ ಕೆಡಿಪಿ ಸಭೆ ನಿಗದಿ

• ಉದಯವಾಹಿನಿ, ಗುಂಡ್ಲುಪೇಟೆ

ತಾಲ್ಲೂಕಿನ ಜ್ವಲಂತ ಸಮಸ್ಯೆಗಳ ಪರಿಹಾರಕ್ಕೆ ಹಾಗೂ ಅಭಿವೃದ್ಧಿ ವರದಿ ಪಡೆಯಲು ನಡೆಯಬೇಕಿದ್ದ ಕೆಡಿಪಿ ಸಭೆ ವಿಳಂಭವಾಗಿದ್ದರ ಕುರಿತು ಉದಾಯವಾಹಿನಿ ಪತ್ರಿಕೆ ದನಿ ಎತ್ತಿದ ಹಿನ್ನೆಲೆ ಶಾಸಕ ಎಚ್.ಎಂ.ಗಣೇಶ್ ಪ್ರಸಾದ್ ಇದೆ ತಿಂಗಳ 18 ರಂದು ಸಭೆ ನಡೆಸಲು ಆದೇಶ ಹೊರಡಿಸಿದ್ದು ಇಲಾಖೆ ಅಧಿಕಾರಿಗಳು ಹಾಜರಿರುವಂತೆ ಸೂಚಿಸಿದ್ದಾರೆ.

ನಡೆಯದ ಕೆಡಿಪಿ ಸಭೆ ಪ್ರಗತಿ ಪರಿಶೀಲನಾ ಸಭೆ ಸಾರ್ವಜನಿಕರ ಅಸಮಾಧಾನ ಶೀರ್ಷಿಕೆಯಡಿ ಉದಯವಾಹಿನಿ ಪತ್ರಿಕೆಯಲ್ಲಿ ನವೆಂಬರ್ 5 ರಂದು ಸವಿವಿಸ್ತಾರವಾಗಿ ಸುದ್ದಿ ಬಿತ್ತರಿಸಿ ಅಧಿಕಾರಿಗಳು ಹಾಗೂ ಚುನಾಯಿತ ಜನಪ್ರತಿನಿಧಿಗಳ ಗಮನ ಸೆಳೆಯಲಾಗಿತ್ತು ಸುದ್ದಿ ಬಿತ್ತರವಾದ ಹಿನ್ನೆಲೆ ಉದಯವಾಹಿನಿಗೆ ಪ್ರತಿಕ್ರಿಯೆ ನೀಡಿದ್ದ ಶಾಸಕ ಎಚ್.ಎಂ.ಗಣೇಶ್ ಪ್ರಸಾದ್ ಒಂದು ವಾರದೊಳಗೆ ದಿನಾಂಕ ನಿಗದಿ ಮಾಡಲಾಗುವುದು ಎಂಬ ಭರವಸೆ ಕೊಟ್ಟಿದ್ದರು



ಉದಯವಾಹಿನಿ ಚಿತ್ರ


ನಡೆಯದ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ : ಸಾರ್ವಜನಿಕರ ಅಸಮಾಧಾನ

### ಮೊದಲು ದನಿ ಎತ್ತಿದ್ದೆ ಉದಯವಾಹಿನಿ ಪತ್ರಿಕೆ

**ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳ ಅನುಷ್ಠಾನ, ಅಭಿವೃದ್ಧಿ ಕೆಲಸಗಳ ಪ್ರಗತಿ, ಅಧಿಕಾರಿಗಳ ಕಾರ್ಯವೈಖರಿ ಮೌಲ್ಯಮಾಪನ ಕುರಿತಂತೆ ವೇದಿಕೆ ಸಿದ್ಧಪಡಿಸಲು ಇಲಾಖೆಯನ್ನ ಬಡಿದ್ದೆಬ್ಬಿಸಿದ ಉದಯವಾಹಿನಿ ಪತ್ರಿಕೆ ಈಗ ರೈತರ ಮೆಚ್ಚುಗೆಗೆ ಪಾತ್ರವಾಗಿದೆ. ಸಭೆಯ ಸಹಾಯಕಾರಿ ಅಂಶಗಳನ್ನ ಎಳೆಎಳೆಯಾಗಿ ಸಾರ್ವಜನಿಕರ ಮುಂದಿರಿಸಿದ್ದ ಉದಯವಾಹಿನಿ ಚರ್ಚೆಗೆ ಹಾಗೂ ಪ್ರಗತಿ ಪರಿಶೀಲನಾ ವರದಿ ಕುರಿತು ಜನಪರ ದನಿಯಾಗಿ ಉತ್ತಮ ಕೆಲಸ ಮಾಡಿದೆ ಎಂಬ ಪ್ರಸಂಶೆಗೆ ಪಾತ್ರವಾಗಿದೆ.**

ಅದರಂತೆ ನವೆಂಬರ್ 18 ಕ್ಕೆ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಗೆ ಕಾಲ ಕೂಡಿಬಂದಿದೆ.

# ಲಂಚ ಪಡೆಯುತ್ತಿದ್ದ ವೇಳೆ ಇಬ್ಬರು ಇಂಜಿನಿಯರ್ ಲೋಕಾಯುಕ್ತ ಬಲೆಗೆ

• ಉದಯವಾಹಿನಿ, ತುಮಕೂರು

ಕಾಮಗಾರಿ ಬಿಲ್ ಮಾಡಿಕೊಡಲು ಗುತ್ತಿಗೆದಾರನ ಬಳಿ ಲಂಚಕ್ಕೆ ಕೈ ಒಡ್ಡಿದ್ದ ಗ್ರಾಮೀಣ ಅಭಿವೃದ್ಧಿ ಹಾಗೂ ಪಂಚಾಯತ್ ರಾಜ್ ತಿಪಟೂರು ವಿಭಾಗದ ಇಬ್ಬರು ಇಂಜಿನಿಯರುಗಳು ಮಂಗಳವಾರ ಲೋಕಾಯಕ್ತ ಪೊಲೀಸರಿಗೆ ಸಿಕ್ಕಿ ಬಿದ್ದಿದ್ದಾರೆ. ನಗರದ ಪ್ರವಾಸಿ ಮಂದಿರದ ಬಳಿ ರೂ.34,500 ಲಂಚದ ಹಣ ತೆಗೆದುಕೊಳ್ಳುವ ಸಮಯದಲ್ಲಿ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಬಿ.ಸಿ.ಸ್ವಾಮಿ ಎಂಬುವರನ್ನು ಲೋಕಾಯುಕ್ತ ಪೊಲೀಸರು ವಶಕ್ಕೆ ಪಡೆದಿದ್ದಾರೆ.



**ಪ್ರತಿನಿತ್ಯ ಸ್ವಾಮಿ ತುಮಕೂರಿನಿಂದ ತಿಪಟೂರಿಗೆ ರೈಲಿನಲ್ಲಿ ಹೋಗಿ ಬರುತ್ತಿದ್ದರು. ಮಂಗಳವಾರ ರೈಲು ನಿಲ್ದಾಣಕ್ಕೆ ತೆರಳುವ ಮುನ್ನ ಪ್ರವಾಸಿ ಮಂದಿರದ ಬಳಿ ಹಣ ತೆಗೆದುಕೊಳ್ಳುತ್ತಿದ್ದಾಗ ದಾಳಿ ಮಾಡಲಾಗಿದೆ. ಲೋಕಾಯುಕ್ತ ವರಿಷ್ಠಾಧಿಕಾರಿ ಲಕ್ಷ್ಮಿನಾರಾಯಣ್ ನೇತೃತ್ವದಲ್ಲಿ ದಾಳಿ ನಡೆದಿದೆ.**

ಬಿಲ್ ಮಾಡಿಕೊಡಲು ಹಣಕ್ಕೆ ಒತ್ತಾಯಿಸಿದ್ದ ಮತ್ತೊಬ್ಬ ಇಂಜಿನಿಯರ್ ಸುಹಾಸ್ ಎಂಬುವರನ್ನು ತಿಪಟೂರು ಕಚೇರಿಯಲ್ಲಿ ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಮಧ್ಯವರ್ತಿಯಾಗಿ ಕೆಲಸ ಮಾಡಿದ ಕಂಪ್ಯೂಟರ್ ಆಪರೇಟರ್ ಹರೀಶ್ ಎಂಬುವರ ವಿಚಾರಣೆ ಮುಂದುವರಿದಿದೆ. ತಿಪಟೂರು ತಾಲ್ಲೂಕಿನಲ್ಲಿ ಶಾಲೆ ದುರಸ್ತಿ ಮಾಡಿದ ರೂ.6.50 ಲಕ್ಷ ಬಿಲ್ ಪಾವತಿಗೆ ಹೊಸದುರ್ಗ ಭಾಗದ ಗುತ್ತಿಗೆದಾರ ಸುನಿಲ್ ಮನವಿ ಮಾಡಿಕೊಂಡಿದ್ದರು.

ಬಿಲ್ ಹಣ ಪಾವತಿಗೆ ರೂ.47,500 ಲಂಚಕ್ಕೆ ಇಬ್ಬರು ಇಂಜಿನಿಯರುಗಳು ಬೇಡಿಕೆ ಇಟ್ಟಿದ್ದರು. ಮೊದಲ ಕಂತಿನಲ್ಲಿ ರೂ.13 ಸಾವಿರವನ್ನು ಕಂಪ್ಯೂಟರ್ ಆಪರೇಟರ್ ಹರೀಶ್ ಬ್ಯಾಂಕ್ ಖಾತೆಗೆ ಸುನಿಲ್ ವರ್ಗಾವಣೆ ಮಾಡಿದ್ದರು. ಉಳಿದ ರೂ.34,500 ಹಣವನ್ನು ತೆಗೆದುಕೊಳ್ಳುವ ಸಮಯದಲ್ಲಿ ಸ್ವಾಮಿ ಸಿಲುಕಿದ್ದಾರೆ.

# ಆರ್‌ಎಸ್‌ಎಸ್ ನಿಷೇಧಕ್ಕೆ ಡಿಎಸ್‌ಎಸ್ ಆಗ್ರಹ

• ಉದಯವಾಹಿನಿ, ತುಮಕೂರು

ದೇಶದಲ್ಲಿ ಕೋಮು ದ್ವೇಷ ಬಿತ್ತಿ, ಜಾತಿ ಜಾತಿಗಳ ನಡುವೆ ಕೋಮು ಗಲಭೆ ಸೃಷ್ಟಿಸುತ್ತಿರುವ ನೋಂದಣಿಯಾದ ಆರ್‌ಎಸ್‌ಎಸ್ ಸಂಘಟನೆಯನ್ನು ನಿಷೇಧಿಸುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿ ಆಗ್ರಹಿಸಿದೆ. ಹೆಚ್ಚುವರಿ ಜಿಲ್ಲಾಧಿಕಾರಿ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಮಿತಿ ಮುಖಂಡರು ಮನವಿ ಸಲ್ಲಿಸಿದರು.

ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಕರೆ ಮಾಡಿ ಅಶ್ಲೀಲ ಪದ ಬಳಸಿ, ಜೀವ ಬೆದರಿಕೆ ಹಾಕಿದ ಕಿಡಿಗೇಡಿಗಳನ್ನು ಕಾನೂನು ಪ್ರಕಾರ ಶಿಕ್ಷೆಗೆ ಗುರಿಪಡಿಸಬೇಕು. ಉದ್ದೇಶ ಪೂರಕವಾಗಿ ಚಿತ್ತಾಪುರವನ್ನು ಗುರಿಯಾಗಿಸಿಕೊಂಡು ಪಥಸಂಚಲನ ನಡೆಸಲು ಆರ್‌ಎಸ್‌ಎಸ್ ಮುಂದಾಗಿದ್ದು, ಅದಕ್ಕೆ ಸರ್ಕಾರ ಅನುಮತಿ ನೀಡಬಾರದು.

ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಅವರ ಮೇಲೆ ಶೂ ಎಸೆಯಲು ಪ್ರಯತ್ನಿಸಿದ ವಕೀಲರ ಮೇಲೆ ಕಾನೂನು ಕ್ರಮ ಜರುಗಿಸಬೇಕು ಎಂದು ಮನವಿ ಪತ್ರದಲ್ಲಿ ಒತ್ತಾಯಿಸಿದ್ದಾರೆ.


ಉದಯವಾಹಿನಿ ಚಿತ್ರ

ಯಾವುದೇ ಕಾರಣಕ್ಕೂ ಆರ್‌ಎಸ್‌ಎಸ್, ವಿಶ್ವ ಹಿಂದೂ ಮಹಾಸಭಾದಂತಹ ಸಂಘಟನೆ ಜತೆಗೆ ಹೊಂದಾಣಿಕೆ ಮಾಡಿಕೊಳ್ಳಬಾರದು ಎಂದು ಬಿ.ಆರ್.ಅಂಬೇಡ್ಕರ್ ಅವರು ಪರಿಶಿಷ್ಟ ಜಾತಿಗಳ ಒಕ್ಕೂಟದ ಪ್ರಣಾಳಿಕೆಯಲ್ಲಿ ಎಚ್ಚರಿಸಿದರು. ಆರ್‌ಎಸ್‌ಎಸ್ ಅಪಾಯಕಾರಿ ಸಂಘಟನೆ ಎಂದು ಘೋಷಿಸಿದ್ದರು.

1950 ಜ. 26ರಂದು ಸಂವಿಧಾನ ಜಾರಿಯಾದಾಗ ಆರ್‌ಎಸ್‌ಎಸ್ ಮುಖವಾಣಿ ಆರ್ಗನೈಜರ್‌ನಲ್ಲಿ ಭಾರತದ ಸಂವಿಧಾನದಲ್ಲಿ ಏನೂ ಇಲ್ಲ. ಮನುಸ್ಮೃತಿ ಪ್ರಾಚೀನವಾದದ್ದು. ಜಗತ್ತಿನ ಜನರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ ಎಂದು ಬರೆದಿತ್ತು.

ಮನುವಾದಿಗಳು ಮನುಸ್ಮೃತಿಯನ್ನು ಪೂಜಿಸಿ ಸಂವಿಧಾನವನ್ನು ತಿರಸ್ಕಾರ ಮನೋಭಾವದಿಂದ ನೋಡುತ್ತಾ ಬಂದಿದ್ದಾರೆ ಎಂದು ಮನವಿಯಲ್ಲಿ ಆರೋಪಿಸಲಾಗಿದೆ.

ಮಹಿಳೆಯರಿಗೆ ಪುರುಷರಷ್ಟೇ ಸಮಾನ ಹಕ್ಕು ಜಾರಿಯಾಗಲು ಬಿಡದೆ ಹಿಂದೂ ಕೋಡ್ ಬಿಲ್ ಪ್ರತಿಯನ್ನು ಸುಟ್ಟು ಹಾಕಲಾಯಿತು. ಈಗ ಮುಖ್ಯ ನ್ಯಾಯಮೂರ್ತಿ ಮೇಲೆ ಶೂ ಎಸೆಯುವ ಪ್ರಯತ್ನ ನಡೆಯಿತು. ಜಾಲ ತಾಣದಲ್ಲಿ ಇದನ್ನು ಬಿಜೆಪಿ, ಆರ್‌ಎಸ್‌ಎಸ್ ಬೆಂಬಲಿಗರು ಬೆಂಬಲಿಸುತ್ತಿದ್ದಾರೆ. ಮನುಸ್ಮೃತಿ ಜಾರಿ ಮಾಡುವ ಉದ್ದೇಶದಿಂದ ಈ ರೀತಿ ಮಾಡಲಾಗುತ್ತಿದೆ ಎಂದು ದೂರಲಾಗಿದೆ.

# ಜೀವಜಲಕ್ಕಾಗಿ ಗೃಹಮಂಡಳಿ ನಿವಾಸಿಗಳ ಪರದಾಟ: ಪ್ರತಿಭಟನೆ ನಡೆಸಲು ಸಿದ್ಧತೆ

## ಜಿಲ್ಲಾಡಳಿತದ ವಿರುದ್ಧ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರ

• ಉದಯವಾಹಿನಿ, ಗುಂಡ್ಲುಪೇಟೆ

ತಾಲ್ಲೂಕಿನ ನೇನೆಕಟ್ಟೆ ಗ್ರಾಮಪಂಚಾಯತಿ ವ್ಯಾಪ್ತಿಯ ಕರ್ನಾಟಕ ಗೃಹಮಂಡಳಿಯಲ್ಲಿ ಕಳೆದೆರಡು ವರ್ಷದಿಂದಲೂ ನೀರಿನ ಆಹಾಕಾರ ಸೃಷ್ಟಿಯಾಗಿರುವುದರಿಂದ ತೀವ್ರ ಸಂಕಷ್ಟ ಎದುರಾಗಿದೆ ಎಂದು ನಿವಾಸಿಗಳು ದೂರಿದ್ದಾರೆ.

ಕರ್ನಾಟಕ ಗೃಹಮಂಡಳಿಯಲ್ಲಿ ನಿವೇಶನ ಖರೀದಿಸಿ ಸ್ವಂತ ಮನೆ ಹೊಂದಿದವರ ಕನಸಿಗೆ ಆಳುವ ಸರ್ಕಾರಗಳು ಎಳ್ಳು ನೀರು ಬಿಟ್ಟಿವೇ ಎಂದು ಹೇಳಬಹುದಾಗಿದೆ, ಮೂಲಸೌಕರ್ಯವನ್ನ ಒದಗಿಸಬೇಕಿದ್ದ ಗೃಹಮಂಡಳಿ ಗ್ರಾಮಪಂಚಾಯತಿ ಸುಪರ್ಧಿಗೆ ವಹಿಸಿ ಬಳಿಕ ಕೈತೊಳೆದುಕೊಂಡಿದೆ, ಬಡಾವಣೆಯಲ್ಲಿನ ಮೂಲಭೂತ ಸೌಕರ್ಯದ ಕೊರತೆ ಸ್ಥಳೀಯರನ್ನ ಜರ್ಜರಿತನಾಗಿದ್ದ, ಕುಡಿಯುವ ನೀರಿಗೂ ಪರಿತಪಿಸುತ್ತಿರುವ ಸ್ಥಳೀಯರು ಅಶುಚಿತ್ವದ ವಾತಾವರಣದಿಂದಲೂ ಬೇಸತ್ತಿದ್ದು ಆಳುವ ಸರ್ಕಾರದ ವಿರುದ್ಧ ಸ್ಥಳೀಯರು ರೋಷಿ ಹೋಗಿದ್ದಾರೆ. ಕಳೆದೆರಡು ವರ್ಷಗಳಿಂದ ಪ್ರತಿನಿತ್ಯ ನೀರಿಗಾಗಿ ದುಪ್ಪಟ್ಟು ಹಣ ತೆರಬೇಕಾಗಿದೆ, ಟ್ಯಾಂಕರ್‌ಗಳಲ್ಲಿ ದಿನಬಳಕೆಗೆ ನೀರು ಖರೀದಿಸಬೇಕಾಗಿದೆ ಇಂತಹ ದುಃಸ್ಥಿಯಲ್ಲಿರುವ ನಮ್ಮ ಸಮಸ್ಯೆಯನ್ನ ಅಧಿಕಾರಿಗಳು, ಚುನಾಯಿತ ಜನಪ್ರತಿನಿಧಿಗಳು ಆಲಿಸುತ್ತಿಲ್ಲ ಎಂದು ಆಕ್ರೋಶ ಹೊರಹಾಕಿದ್ದಾರೆ.

ಮೂಲಭೂತ ಸೌಕರ್ಯವನ್ನೇ ಒದಗಿಸದ ಗ್ರಾಮಪಂಚಾಯತಿಯವರು ನಮ್ಮಿಂದ ಸಕಾಲಕ್ಕೆ ಕಂದಾಯ ಶುಲ್ಕವನ್ನ ವಸೂಲಿ ಮಾಡುತ್ತಾರೆ ಆದರೆ ನಮಗೆ ಬೇಕಿರುವ ಸೌಲಭ್ಯ ಒದಗಿಸುವಲ್ಲಿ ನಿರಾಸಕ್ತಿ ತೋರುತ್ತಿದ್ದಾರೆ ಎಂದು ಬಡಾವಣೆ ಮಹಿಳೆಯೊಬ್ಬರು ಕಿಡಿ ಕಾರಿದ್ದಾರೆ. ಹಲವು ವರ್ಷಗಳಿಂದ ಸಮಸ್ಯೆಗಳ ಸುಳಿಯಲ್ಲಿ ಸಿಲುಕಿರುವ ನಮಗೆ ಅಧಿಕಾರಿಗಳಾಗಲಿ , ಜನಪ್ರತಿನಿಧಿಗಳಾಗಲಿ ಸ್ಪಂದನೆ ನೀಡಿಲ್ಲ ಆದುದರಿಂದ ಜಿಲ್ಲಾಡಳಿತದ ವಿರುದ್ಧ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

ನೀರಿನ ಬವಣೆ ನೀಗಿಸಬೇಕಿದ್ದ ಇಲಾಖೆ ಅಧಿಕಾರಿಗಳ ನಿರ್ಲಕ್ಷ್ಯತನಕ್ಕೆ ಜನರು ಕಂಗಾಲಾಗಿದ್ದಾರೆ, ಅದೆಷ್ಟೋ ಬಾರಿ ತಹಶೀಲ್ದಾರ್ ಸೇರಿದಂತೆ ಪಿಡಿಓ , ಶಾಸಕರಿಗೂ ಮನವಿ ಸಲ್ಲಿಸಿದ್ದರು ಯಾವುದೇ ಪ್ರಯೋಜನವಾಗಿಲ್ಲ, ಕೂಡಲೇ ಗ್ರಾಮಪಂಚಾಯತಿ ಆಡಳಿತ ಮಂಡಳಿ ನೀರಿನ ಸಮಸ್ಯೆ ಬಗೆಹರಿಸದಿದ್ದಲ್ಲಿ ಹೋರಾಟದ ಹಾದಿಗೂ ಸಿದ್ದ ಎಂದು ಗುಡುಗಿದ್ದಾರೆ.


ಉದಯವಾಹಿನಿ ಚಿತ್ರ

> ಕಳೆದ ವರ್ಷ ಶಾಸಕರು ಬಡಾವಣೆಗೆ ಭೇಟಿ ನೀಡಿದ್ದ ವೇಳೆ ಮೂಲಭೂತ ಸೌಕರ್ಯ ಒದಗಿಸುವ ಭರವಸೆ ನೀಡಿದ್ದರೂ, ಸೌಕರ್ಯ ಕಲ್ಪಿಸಲು ಗ್ರಾಮಪಂಚಾಯತಿಗೆ ನಿರ್ದೇಶನ ಕೊಟ್ಟಿದ್ದರೂ ಸಹ ಇದುವರೆಗೆ ಸಮಸ್ಯೆ ಬಗೆಹರಿಯದಿರುವುದು ಬೇಸರದ ಸಂಗತಿ.
> -ಚೇತನ್ ಗೃಹಮಂಡಳಿ ನಿವಾಸಿ

> ಗೃಹಮಂಡಳಿ ಬಡಾವಣೆ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗೆ ಒಳಪಟ್ಟಿಲ್ಲವಾದ್ದರಿಂದ ನೀರಿನ ಸಮಸ್ಯೆ ಎದುರಾಗಿದೆ, ಮನೆಮನೆಗೆ ನೀರು ಒದಗಿಸುವ ಸದುದ್ದೇಶದಿಂದ ಗೃಹಮಂಡಳಿಗೆ ಪಂಚಾಯತಿಯಿಂದ 40 ಲಕ್ಷದ ಅಂದಾಜು ಮೊತ್ತಕ್ಕೆ ಬೇಡಿಕೆ ಸಲ್ಲಿಸಲಾಗಿದೆ. ಶೀಘ್ರದಲ್ಲೇ ಹಣ ಬಿಡುಗಡೆಯಾಗುವ ವಿಶ್ವಾಸವಿದ್ದು ನೀರಿನ ಸಮಸ್ಯೆ ಬಗೆಹರಿಸಲು ಕ್ರಮ ಕೈಗೊಳ್ಳುತ್ತೇವೆ.
> -ಶಿವಸ್ವಾಮಿ, ಪಿಡಿಓ ನೇನೆಕಟ್ಟೆ ಗ್ರಾಮಪಂಚಾಯತಿ

# ಮಿನಿ ನ್ಯೂಸ್

## ಮುಂದುವರಿದ ವ್ಯಾಘ್ರ ದಾಳಿ : ಮಂಚಹಳ್ಳಿಯಲ್ಲಿ ಹಸುಗಳ ಬಲಿ

• ಉದಯವಾಹಿನಿ, ಗುಂಡ್ಲುಪೇಟೆ

ಬಂಡೀಪುರ ಹುಲಿ ಸಂರಕ್ಷಿತಾ ಪ್ರದೇಶದಲ್ಲಿ ಹುಲಿ ದಾಳಿ ಮುಂದುವರಿದಿದ್ದು ಓಂಕಾರ್ ಅರಣ್ಯ ವಲಯದ ಮಂಚಹಳ್ಳಿ ಗ್ರಾಮದ ಜಮೀನಿನಲ್ಲಿ ಹಾಡಹಗಲೇ ಎರಡು ಹಸುಗಳನ್ನ ಬಲಿ ಪಡೆದಿದೆ. ಮಂಚಹಳ್ಳಿ ಗ್ರಾಮದ ಶಿವಣ್ಣ ಎಂಬ ರೈತನ ಜಮೀನಿನಲ್ಲಿ ಮೇಯಲು ಬಿಟ್ಟಿದ್ದ ಹಸುಗಳ ಮೇಲೆರಗಿದ ಹುಲಿ ಕೊಂದು ಮುಗಿಸಿದೆ, ಹಾಡಹಗಲೇ ವ್ಯಾಘ್ರನ ಕಂಡ ರೈತ ಶಿವಣ್ಣ ಆಘಾತಕ್ಕೊಳಗಾಗಿದ್ದಾರೆ, ಜೀವನ ನಿರ್ವಹಣೆಗೆ ಆಸರೆಯಾಗಿದ್ದ ಹಸುಗಳನ್ನ ಕಳೆದುಕೊಂಡ ರೈತನಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ. ಘಟನಾ ಸಂಬಂದ ರೈತನ ಜಮೀನಿಗೆ ಆಗಮಿಸಿದ ಅರಣ್ಯ ಇಲಾಖೆ ಸಿಬ್ಬಂದಿ ವ್ಯಾಘ್ರನ ಪತ್ತೆಗೆ ಕಾರ್ಯಾಚರಣೆಗಿಳಿದಿದ್ದು , ಪದೇಪದೇ ರೈತರ ಜಾನುವಾರುಗಳನ್ನ ಆಹುತಿ ಪಡೆಯುತ್ತಿರುವ ಹುಲಿಯನ್ನ ಸೆರೆಹಿಡಿದು ಸ್ಥಳಾಂತರಿಸುವಂತೆ ಸುತ್ತಲಿನಾ ಗ್ರಾಮಸ್ತರು ಒತ್ತಾಯಿಸಿದ್ದಾರೆ.



## ತಾ.ಪಂ. ಕಚೇರಿ ಎದುರು ಪ್ರತಿಭಟನೆ

• ಉದಯವಾಹಿನಿ, ಬಾಗೇಪಲ್ಲಿ

ತಾಲ್ಲೂಕು ಕೇಂದ್ರದಲ್ಲಿ ಅಂಬೇಡ್ಕರ್ ಭವನ ನಿರ್ಮಾಣ, ಪರಿಶಿಷ್ಟ ಜಾತಿ, ಪಂಗಡ, ಹಿಂದುಳಿದ ವರ್ಗಗಳ ಕುಟುಂಬಸ್ಥರಿಗೆ ನಿವೇಶನ, ವಸತಿ, ಸಾಗುವಳಿ ಚೀಟಿ ಮತ್ತು ಹಕ್ಕುಪತ್ರಗಳನ್ನು ವಿತರಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ದಲಿತ ಸಂಘರ್ಷ ಸಮಿತಿಯ ಸದಸ್ಯರು ತಾಲ್ಲೂಕು ಪಂಚಾಯಿತಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು. ಇಲ್ಲಿನ ನ್ಯಾಷನಲ್ ಕಾಲೇಜಿನಿಂದ ಪ್ರತಿಭಟನಾ ಮೆರವಣಿಗೆ ಹೊರಟ ಪ್ರತಿಭಟನಕಾರರು, ಜನರಿಗೆ ನಿವಶೇನ, ವಸತಿ, ಸಾಗುವಳಿ ಮತ್ತು ಹಕ್ಕುಪತ್ರಗಳನ್ನು ಈವರೆಗೆ ನೀಡಿಲ್ಲ ಎಂದು ಆರೋಪಿಸಿ ತಾಲ್ಲೂಕು ಆಡಳಿತ, ಪಂಚಾಯಿತಿಗಳು ಮತ್ತು ಜನಪ್ರತಿನಿಧಿಗಳ ವಿರುದ್ಧ ಧಿಕ್ಕಾರ ಕೂಗಿದರು. ದಲಿತ ಸಂಘರ್ಷ ಸಮಿತಿಯ ರಾಜ್ಯ ಸಮಿತಿ ಸಂಚಾಲಕ ಕೆ.ಸಿ.ರಾಜಾಕಾಂತ್ ಮಾತನಾಡಿ, 'ಬಾಗೇಪಲ್ಲಿ, ಗುಡಿಬಂಡೆ, ಚೇಳೂರು ತಾಲ್ಲೂಕುಗಳ ಜನರಿಗೆ ವಸತಿ, ಮನೆ, ಸ್ಮಶಾನಕ್ಕೆ ಜಾಗ, ರಸ್ತೆ, ಹಕ್ಕು ಪತ್ರಗಳ ವಿತರಣೆಗಾಗಿ ಒಂದು ವರ್ಷದ ಹಿಂದಿನಿಂದ ಒತ್ತಾಯಿಸಲಾಗುತ್ತಿದೆ. ಆದರೆ, ಈವರೆಗೆ ಯಾವುದೇ ಪ್ರಯೋಜನವಾಗಿಲ್ಲ. ಇದು ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳ ನಿರ್ಲಕ್ಷ್ಯತೆಗೆ ಕನ್ನಡಿಯಾಗಿದೆ. ಸಂವಿಧಾನ ಪೀಠಿಕೆ, ಅಂಬೇಡ್ಕರ್ ಅವರ ಬಗ್ಗೆ ಮಾತನಾಡುವ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು, ಅದೇ ಸಂವಿಧಾನದಲ್ಲಿ ಅಡಕವಾಗಿರುವ ಹಕ್ಕುಗಳು ಮತ್ತು ಸೌಲಭ್ಯಗಳನ್ನು ಜನರಿಗೆ ಕಲ್ಪಿಸುವ ನಿಟ್ಟಿನಲ್ಲಿ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ' ಎಂದು ಆಕ್ರೋಶ ವ್ಯಕ್ತಪಡಿಸಿದರು.

## ವಿಧಾನಸಭಾ ಕ್ಷೇತ್ರ: ಪಾರದರ್ಶಕ ಮರು ಮತ ಎಣಿಕೆಗೆ ಮನವಿ

• ಉದಯವಾಹಿನಿ, ಕೋಲಾರ


ಸುಪ್ರೀಂ ಕೋರ್ಟ್ ನಿರ್ದೇಶನ ಹಾಗೂ ಚುನಾವಣಾ ಆಯೋಗದ ಸೂಚನೆಗಳಂತೆ ಪಾರದರ್ಶಕ ಹಾಗೂ ನ್ಯಾಯಯುತವಾಗಿ ಮಾಲೂರು ಕ್ಷೇತ್ರದ ಮರು ಮತ ಎಣಿಕೆ ನಡೆಸಬೇಕು ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಹಾಗೂ ಸದಸ್ಯ ಕೇಶವ ಪ್ರಸಾದ್ ನೇತೃತ್ವದ ಬಿಜೆಪಿ ನಿಯೋಗ ಜಿಲ್ಲಾಧಿಕಾರಿ ಎಂ.ಆರ್.ರವಿ ಅವರಿಗೆ ಮನವಿ ಸಲ್ಲಿಸಿತು. ಫಾರಂ 17 (ಎ), ಫಾರಂ 17 (ಸಿ) ಭಾಗ-1, ಫಾರಂ 17 (ಸಿ) ಭಾಗ 2. ವಿವಿ ಪ್ಯಾಟ್ ಚೀಟಿಗಳು ಹಾಗೂ ಇವಿಎಂ ಮತಗಳು ಪರಸ್ಪರ ಹೊಂದಾಣಿಕ ಆಗುವಂತಿರಬೇಕು. ಈ ಐದು ಹಂತಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಪ್ರತಿ ಮತಗಟ್ಟೆಯಲ್ಲಿನ ಮತ ಎಣಿಕೆ ಕಾರ್ಯವನ್ನು ವಿಡಿಯೋ ಚಿತ್ರೀಕರಣ ಮಾಡಬೇಕು' ಎಂದು ಒತ್ತಾಯಿಸಿದರು. ಈ ಐದು ಹಂತಗಳಲ್ಲಿ ಯಾವುದೇ ಹೊಂದಾಣಿಕೆ ಕಂಡು ಬಾರದಿದ್ದರೆ ಅವುಗಳನ್ನು ಮತ ಎಣಿಕೆ ಉಸ್ತುವಾರಿ, ಮೇಲ್ವಿಚಾರಕರ ಸಮ್ಮುಖದಲ್ಲಿ ಸೂಕ್ತ ಕ್ರಮದಲ್ಲಿ ದಾಖಲೀಕರಿಸಬೇಕು ಎಂದರು. ಇವಿಎಂಗಳಲ್ಲಿನ ಮತಗಳ ಎಣಿಕೆ ನಡೆಸಿ ವಿವಿ ಪ್ಯಾಟ್‌ನಲ್ಲಿನ ಚೀಟಿಗಳಿಗೆ ತಾಳೆ ಮಾಡಿ ಹೊಂದಾಣಿಕೆಯಾಗಿದೆಯೇ ಎಂಬುದನ್ನು ಸ್ಪಷ್ಟಪಡಿಸಿಕೊಳ್ಳಬೇಕು ಎಂದು ಹೇಳಿದರು. ಛಲವಾದಿ ನಾರಾಯಣಸ್ವಾಮಿ ಮಾತನಾಡಿ, '2023ರಲ್ಲೇ ನಾವು ಮರು ಮತ ಎಣಿಕೆಗೆ ಆಗ್ರಹಿಸಿದ್ದೆವು. ಆದರೆ, ಪುರಸ್ಕರಿಸಿರಲಿಲ್ಲ. ಈಗ ನೋಡಿದರೆ ಆ ಪ್ರಕ್ರಿಯೆಗೆ ಸಂಬಂಧಿಸಿದ ವಿಡಿಯೋ ಇಲ್ಲ. ಈ ಸಲ ಯಾವುದೇ ಸಮಸ್ಯೆ ಆಗದಂತೆ ನೋಡಿಕೊಳ್ಳಬೇಕು. ನಮ್ಮ ಅನುಮಾನ ಬಗೆಹರಿಸುವ ರೀತಿ ಎಣಿಕೆ ನಡೆಸಬೇಕು. ಕ್ಯಾಮೆರಾ ಕಣ್ಗಾವಲಿನಲ್ಲಿ ನಡೆಯಬೇಕು. ಇಲ್ಲದಿದ್ದರೆ ಮತ್ತೆ ನ್ಯಾಯಾಲಯದ ಮೊರೆ ಹೋಗಬೇಕಾಗುತ್ತದೆ' ಎಂದರು.

## 6 ಹೊಸ ಪ್ರವಾಸಿ ತಾಣಗಳ ಸೇರ್ಪಡೆ

• ಉದಯವಾಹಿನಿ, ಚಾಮರಾಜನಗರ

ಕರ್ನಾಟಕ ಪ್ರವಾಸೋದ್ಯಮ ನೀತಿ 2024 2029ರಡಿ ಜಿಲ್ಲೆಯ 6 ನೂತನ ಪ್ರವಾಸಿ ತಾಣಗಳನ್ನು ಸೇರ್ಪಡೆಗೊಳಿಸಲಾಗಿದ್ದು, ಹಳೆಯ 32 ತಾಣಗಳೊಂದಿಗೆ ಇವು ಹೆಚ್ಚುವರಿಯಾಗಿ ಸೇರಿವೆ. ಈಚೆಗೆ ರಾಜ್ಯ ಸರ್ಕಾರ ಪ್ರವಾಸೋದ್ಯಮ ನೀತಿಯಡಿ ಹೊಸ ಸೇರ್ಪಡೆಗೆ ಅವಕಾಶ ನೀಡಿತ್ತು.

ಚಾಮರಾಜನಗರ ತಾಲ್ಲೂಕಿನ ಮಂಗಲದಲ್ಲಿರುವ ಶಂಕರದೇವರ ಬೆಟ್ಟ ಯಳಂದೂರು ತಾಲ್ಲೂಕಿನಲ್ಲಿರುವ ಹೊಂಗನೂರು ಸಮೀಪದ ಹಿರಿಕೆರೆ ಕುಂತಿಕಲ್ಲು ಮತ್ತು ಆನೆಕಲ್ಲು ಸ್ಥಳಗಳು, ಕೊಳ್ಳೇಗಾಲ ತಾಲ್ಲೂಕಿನ ಚಿಕ್ಕಲ್ಲೂರು ಸಿದ್ದಪ್ಪಾಜಿ ದೇವಸ್ಥಾನ, ಹನೂರು ತಾಲ್ಲೂಕಿನ ಬಿಆರ್‌ಟಿ ಸಫಾರಿ ಗುಂಡಾಲ್ ಜಲಾಶಯದ ಹತ್ತಿರ, ಅಜ್ಜಿಪುರ ಬಳಿಯ ಉಡುತೊರೆ ಜಲಾಶಯ, ಲೊಕ್ಕನಹಳ್ಳಿ ಪಿ.ಜಿ.ಪಾಳ್ಯ ಸಫಾರಿ ವಲಯವನ್ನು ಹೊಸ ಪ್ರವಾಸಿತಾಣಗಳನ್ನಾಗಿ ಗುರುತಿಸಿ ಸೇರಿಸಲಾಗಿದೆ.



ರಾಜ್ಯದ ಪ್ರವಾಸೋದ್ಯಮ ಕ್ಷೇತ್ರವನ್ನು ಅಭಿವೃದ್ಧಿಪಡಿಸುವ ಹಾಗೂ ಹೊಸ ರೂಪ ಕೊಡುವ ನಿಟ್ಟಿನಲ್ಲಿ 2024 2029ರ ಪ್ರವಾಸೋದ್ಯಮ ನೀತಿ ರೂಪಿಸಿ ಜಾರಿಗೆ ತರಲಾಗಿದೆ. ಸ್ಥಳೀಯವಾಗಿ ಉದ್ಯೋಗ ಸೃಷ್ಟಿ, ಜಾಗತಿಕ ಪ್ರವಾಸಿಗರ ಆಕರ್ಷಣೆ, ಬಂಡವಾಳ ಹೂಡಿಕೆ, ಹೆಚ್ಚು ಪರಿಚಿತವಲ್ಲದ ಪ್ರವಾಸಿತಾಣಗಳನ್ನು ಗುರುತಿಸಿ ಪ್ರವಾಸಿಗರನ್ನು ಸೆಳೆಯುವುದು, ಸ್ಥಳೀಯ ಸಂಸ್ಕೃತಿ, ಸಂಪ್ರದಾಯ, ಆಚಾರ-ವಿಚಾರ, ಆಹಾರ ಪದ್ಧತಿಗೆ ಉತ್ತೇಜನ ನೀಡುವುದು ನೂತನ ಪ್ರವಾಸೋದ್ಯಮ ನೀತಿಯ ಪ್ರಮುಖ ಉದ್ದೇಶ.

ಅಂತರಾಳದಿಂದ... EDITORIAL

# ಪೋಕ್ಸೊ ದುರ್ಬಳಕೆಯ ಸಾಧ್ಯತೆ: ಕೋರ್ಟ್ ಕಳವಳಕ್ಕೆ ಸ್ಪಂದಿಸಬೇಕಿದೆ

ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ (ಪೋಕ್ಸೊ) ಕಾಯ್ದೆಯ ದುರ್ಬಳಕೆ ಬಗ್ಗೆ ಕಳವಳ ವ್ಯಕ್ತಪಡಿಸುವ ಸಂದರ್ಭದಲ್ಲಿ ಸುಪ್ರೀಂ ಕೋರ್ಟ್ ಬಹಳ ಮಹತ್ವದ ವಿಚಾರವೊಂದನ್ನು ಪ್ರಸ್ತಾಪಿಸಿದೆ. ಶಾಲೆಗಳಲ್ಲಿ ಲೈಂಗಿಕ ಶಿಕ್ಷಣ ನೀಡುವುದನ್ನು ಕಡ್ಡಾಯ ಮಾಡಬೇಕು ಹಾಗೂ ಅತ್ಯಾಚಾರ ತಡೆಯುವ ಉದ್ದೇಶದ ಕಾನೂನುಗಳ ಬಗ್ಗೆ ಮಕ್ಕಳಲ್ಲಿ ಅರಿವು ಮೂಡಿಸಬೇಕು ಎಂಬ ಕೋರಿಕೆ ಇರುವ ಅರ್ಜಿಯ ವಿಚಾರಣೆಯನ್ನು ನಡೆಸುವಾಗ ಕೋರ್ಟ್ ಈ ಕಳವಳ ವ್ಯಕ್ತಪಡಿಸಿದೆ.

ಹದಿಹರೆಯದವರು ಸಮ್ಮತಿಯ ಆಧಾರದಲ್ಲಿ ಸಂಬಂಧ ಹೊಂದಿದ ಸಂದರ್ಭಗಳಲ್ಲಿಯೂ ಪೋಕ್ಸೊ ಕಾಯ್ದೆಯನ್ನು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ಕೋರ್ಟ್ ಹೇಳಿದೆ. ಈ ಬಗ್ಗೆ ಕೋರ್ಟ್ ಹಿಂದೆಯೂ ಕೆಲವು ಮಾತುಗಳನ್ನು ಹೇಳಿದ ನಿದರ್ಶನಗಳಿವೆ. ಪೋಕ್ಸೊ ಕಾಯ್ದೆಯ ಅಡಿಯಲ್ಲಿ ಹದಿಹರೆಯದವರ ವಿರುದ್ಧ ಪ್ರಕರಣಗಳನ್ನು ದಾಖಲಿಸಿದಾಗ, ಅದಕ್ಕೆ ಸಂಬಂಧಿಸಿದ ಅರ್ಜಿಗಳ ವಿಚಾರಣೆ ಸಂದರ್ಭದಲ್ಲಿ ಕೆಲವು ಮಾತುಗಳನ್ನು ಹೇಳಿದೆ. ಮಕ್ಕಳು ಲೈಂಗಿಕ ದೌರ್ಜನ್ಯಕ್ಕೆ ಗುರಿಯಾಗುವುದನ್ನು ತಡೆಯಲು ವಿಶೇಷ ಕಾಯ್ದೆಯೊಂದರ ಅಗತ್ಯ ಇದೆ ಎಂಬ ಉದ್ದೇಶದಿಂದ ಪೋಕ್ಸೊ ಕಾಯ್ದೆಯನ್ನು ರೂಪಿಸಲಾಗಿದೆ. ಈ ಕಾಯ್ದೆಯ ಉದ್ದೇಶವು ಒಂದು ಹಂತದವರೆಗೆ ಈಡೇರಿದೆ ಕೂಡ. ಕಾಯ್ದೆಯ ಕಾರಣದಿಂದಾಗಿ ಹಲವು ಅಪರಾಧಿಗಳು ಶಿಕ್ಷೆಗೆ ಗುರಿಯಾಗಿದ್ದಾರೆ. ಆದರೆ ರಕ್ಷಣೆಗೆ ಅಗತ್ಯವಾದ ಕ್ರಮ ಎಂದು ಕಾಣಲಾದ ಈ ಕಾಯ್ದೆಯು ಅನುಷ್ಠಾನದ ಹಂತದಲ್ಲಿ ಹಲವು ಸಮಸ್ಯೆಗಳನ್ನೂ ಸೃಷ್ಟಿಸಿದೆ. ಸಹಜವಾದ ಸಂಬಂಧಗಳಿಗೆ ಶಿಕ್ಷೆ ವಿಧಿಸಲು ಈ ಕಾಯ್ದೆಯನ್ನು ಒಂದು ಅಸ್ತ್ರವನ್ನಾಗಿ ಬಳಕೆ ಮಾಡಿಕೊಂಡ ನಿದರ್ಶನಗಳಿವೆ. ಈ ಕಾಯ್ದೆಯ ಪ್ರಕಾರ, 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಹೆಣ್ಣು ಯಾವುದೇ ಸಂದರ್ಭದಲ್ಲಿಯೂ ಲೈಂಗಿಕ ಸಂಪರ್ಕಕ್ಕೆ ಸಮ್ಮತಿ ನೀಡುವಂತಿಲ್ಲ. ಅಂದರೆ, 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಹೆಣ್ಣಿನ ಜೊತೆ ಲೈಂಗಿಕ ಸಂಬಂಧ ಬೆಳೆಸುವುದು ಅಪರಾಧವಾಗುತ್ತದೆ. ಆದರೆ, ಕಳೆದ ಕೆಲವು ವರ್ಷಗಳಲ್ಲಿ ಸಾಮಾಜಿಕ ಕಟ್ಟುಪಾಡುಗಳು, ಯುವಜನರ ನಡುವಿನ ಸಂಬಂಧಗಳ ಸ್ವರೂಪ ಬಹಳಷ್ಟು ಬದಲಾಗಿದೆ.




**16 ವರ್ಷಕ್ಕಿಂತ ಮೇಲ್ಪಟ್ಟವರು ಹಾಗೂ 18 ವರ್ಷಕ್ಕಿಂತ ಕಡಿಮೆ ವಯಸ್ಸಿನವರು ಸಮ್ಮತಿಯ ಆಧಾರದಲ್ಲಿ ಲೈಂಗಿಕ ಕ್ರಿಯೆ ನಡೆಸಿದರೆ, ಅದನ್ನು ಕೂಡ ಕ್ರಿಮಿನಲ್ ಅಪರಾಧವಾಗಿ ಈ ಕಾಯ್ದೆಯ ಅಡಿಯಲ್ಲಿ ಕಾಣುವುದನ್ನು ಪ್ರಶ್ನಿಸಿರುವ ಅರ್ಜಿಯೊಂದರ ವಿಚಾರಣೆಯನ್ನು ಕೋರ್ಟ್ ಇನ್ನೊಂದು ಪೀಠವು ನಡೆಸುತ್ತಿದೆ. ಈ ವಿಚಾರವಾಗಿ ದೇಶದ ಹಲವೆಡೆ ಚರ್ಚೆಗಳೂ ಆಗಿವೆ. ಇಂತಹ ಪ್ರಕರಣಗಳು ನ್ಯಾಯಮೂರ್ತಿಗಳಿಗೆ ಬಹಳ 'ಕಠಿಣವಾದ ಪ್ರಶ್ನೆಗಳನ್ನು ಒಡ್ಡುತ್ತವೆ' ಎಂದು ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಆಗಿದ್ದ ಡಿ.ವೈ. ಚಂದ್ರಚೂಡ್ ಹೇಳಿದ್ದರು. ಈ ವಿಚಾರವನ್ನು, ಹದಿಹರೆಯದವರ ಆರೋಗ್ಯದ ವಿಚಾರದಲ್ಲಿ ನಡೆದಿರುವ ಸಂಶೋಧನೆಗಳನ್ನು ಆಧರಿಸಿ ಶಾಸಕಾಂಗವು ಪರಿಶೀಲಿಸಬೇಕು ಎಂದೂ ಅವರು ಸಲಹೆ ನೀಡಿದ್ದರು.**

ಹದಿಹರೆಯದವರು ಪರಸ್ಪರರನ್ನು ಪ್ರೀತಿಸುತ್ತಾರೆ. ತಮ್ಮ ಸಂಬಂಧದ ಆಳ ಎಷ್ಟೆಂಬುದನ್ನು ಅನ್ವೇಷಿಸಲು ಮುಂದಾಗುತ್ತಾರೆ. ಆದರೆ, ಸಹಮತದ ಸಂಬಂಧವು ಕೆಲವು ಸಂದರ್ಭಗಳಲ್ಲಿ ಯುವಕನನ್ನು ಮಾತ್ರ ಕಾನೂನಿನ ಸುಳಿಗೆ ಸಿಲುಕಿಸಿ, ಜೈಲಿಗೆ ತಳ್ಳುತ್ತದೆ. ಹದಿಹರೆಯದವರ ಕೆಲವು ಕೃತ್ಯಗಳು ಕಾನೂನಿನ ದೃಷ್ಟಿಯಿಂದ ಅತ್ಯಾಚಾರ ಎಂದು ಪರಿಗಣಿತವಾಗುತ್ತವೆ; ಹುಡುಗನ ಜೀವಿತಾವಧಿಯ ಒಂದಿಷ್ಟು ವರ್ಷಗಳು ಹಾಳಾಗುತ್ತವೆ. ಉತ್ತಮ ವಕೀಲರ ನೆರವು ಪಡೆಯಲು ಆಗದೆ, ಕಾನೂನಿನ ಅಡಿಯಲ್ಲಿ ಸರಿಯಾದ ರಕ್ಷಣೆ ಪಡೆಯಲು ಆಗದೆ ದುರ್ಬಲ ವರ್ಗಗಳಿಗೆ ಸೇರಿದವರು ಹೆಚ್ಚಿನ ಕಷ್ಟ ಅನುಭವಿಸಬೇಕಾಗುತ್ತದೆ. ಹುಡುಗಿಯ ಕುಟುಂಬದವರು ಕೆಲವು ಸಂದರ್ಭಗಳಲ್ಲಿ ಇಡೀ ಪ್ರಕರಣವನ್ನು ಮರ್ಯಾದೆಯ ಪ್ರಶ್ನೆಯನ್ನಾಗಿ ಪರಿಗಣಿಸಿ, ಹಗೆ ತೀರಿಸಿಕೊಳ್ಳಲು ಮುಂದಾಗುತ್ತಾರೆ. ಹುಡುಗನ ಮೇಲೆ ಅತ್ಯಾಚಾರದ ಆರೋಪ ಹೊರಿಸುತ್ತಾರೆ. ಅತ್ಯಾಚಾರಕ್ಕೆ ನೇರವಾಗಿ ಸಂಬಂಧವೇ ಇಲ್ಲದ ಕೆಲವು ಸಂಗತಿಗಳು, ಅಂದರೆ ಜಮೀನು ವ್ಯಾಜ್ಯಗಳು ಅಥವಾ ಕುಟುಂಬಗಳ ನಡುವಿನ ಕಲಹಗಳು ಕೂಡ ಪೋಕ್ಸೊ ಅಡಿಯಲ್ಲಿ ಸುಳ್ಳು ಪ್ರಕರಣ ದಾಖಲಿಸಲು ಕಾರಣವಾಗಿವೆ. ಈ ಎಲ್ಲಾ ಕಾರಣಗಳಿಂದಾಗಿ, ಪೋಕ್ಸೊ ಕಾಯ್ದೆಯ ದುರ್ಬಳಕೆಯನ್ನು ತಡೆಯಲು ಕಾಯ್ದೆಯ ಅಂಶಗಳನ್ನು ಪುನರ್ ಪರಿಶೀಲನೆಗೆ ಒಳಪಡಿಸುವ ಅಗತ್ಯ ಇದೆ. ಸಹಮತ ನೀಡಲು 16 ವರ್ಷ ವಯಸ್ಸಾಗಿದ್ದರೆ ಸಾಕು ಎಂಬ ಬದಲಾವಣೆಯನ್ನು ಕಾಯ್ದೆಯಲ್ಲಿ ತರಬೇಕು ಎಂಬ ಸಲಹೆಯೊಂದು ಇದೆ. ಆದರೆ, ಸಹಮತದ ವಯಸ್ಸನ್ನು ಕಡಿಮೆ ಮಾಡಲು ಕೇಂದ್ರ ಸರ್ಕಾರ ಒಪ್ಪಿಲ್ಲ. ಮಕ್ಕಳನ್ನು ಲೈಂಗಿಕ ದೌರ್ಜನ್ಯಗಳಿಂದ ರಕ್ಷಿಸಲು ಇರುವ ಪ್ರಬಲ ಅಸ್ತ್ರವಾಗಿ ಪೋಕ್ಸೊ ಕಾಯ್ದೆ ಉಳಿದುಕೊಳ್ಳಬೇಕು. ಆದರೆ, ಕೋರ್ಟ್ ಹೇಳಿರುವಂತೆ ಅದರ ದುರ್ಬಳಕೆಯನ್ನು ತಡೆಯಲು ಮಾರ್ಗೋಪಾಯ ಹುಡುಕಬೇಕು.

# ಮುಖದ ಕಾಂತಿ ಹೆಚ್ಚಿಸಲು ಮನೆಯಲ್ಲೇ ತಯಾರಿಸಿ ನೆಲ್ಲಿಕಾಯಿ ಫೇಸ್‌ಪ್ಯಾಕ್



ನೆಲ್ಲಿಕಾಯಿ ಫೇಸ್‌ಪ್ಯಾಕ್‌ನ್ನು ತಯಾರಿಸಿ ಮುಖಕ್ಕೆ ಹಚ್ಚೋದ್ರಿಂದ ಮುಖದ ಕಾಂತಿ ಹೆಚ್ಚುತ್ತದೆ. ಈ ಫೇಸ್‌ಪ್ಯಾಕ್ ತಯಾರಿಸೋದು ಹೇಗೆ ಎನ್ನುವುದನ್ನು ತಿಳಿಯೋಣ. ನೆಲ್ಲಿಕಾಯಿ ಸೇವನೆಯಿಂದ ಆರೋಗ್ಯಕ್ಕೆ ನಾನಾ ರೀತಿಯಲ್ಲಿ ಪ್ರಯೋಜನಗಳಿವೆ ಎನ್ನುವುದನ್ನು ನೀವು ಕೇಳಿರುವಿರಿ. ಇದು ಕೂದಲಿನ ಬೆಳವಣಿಗೆಗೂ ಸಹಕಾರಿಯಾಗಿದೆ. ಆದರೆ ಇದು ನಿಮ್ಮ ಚರ್ಮಕ್ಕೂ ಉಪಕಾರಿ ಎನ್ನುವುದು ನಿಮಗೆ ಗೊತ್ತಾ? ನೆಲ್ಲಿಕಾಯಿಯಲ್ಲಿ ವಿಟಮಿನ್ ಸಿ, ಆಂಟಿಆಕ್ಸಿಡೆಂಟ್‌ಗಳು ಮತ್ತು ಉರಿಯೂತ ನಿವಾರಕ ಗುಣಗಳು ಸಮೃದ್ಧವಾಗಿದ್ದು, ಸತ್ತ ಚರ್ಮ, ಸುಕ್ಕುಗಳು ಮತ್ತು ಕಲೆಗಳನ್ನು ತೆಗೆದುಹಾಕಲು ಸಹಾಯ ಮಾಡುತ್ತದೆ.



**ತ್ವಚೆಗೆ ಹೇಗೆ ಸಹಕಾರಿ?:** ನೀವು ಸ್ವಚ್ಛ, ಕಾಂತಿಯುತ ಮತ್ತು ಹೊಳೆಯುವ ಚರ್ಮವನ್ನು ಬಯಸಿದರೆ, ನೀವು ಮನೆಯಲ್ಲಿ ತಯಾರಿಸಿದ ನೆಲ್ಲಿಕಾಯಿ ಫೇಸ್ ಪ್ಯಾಕ್‌ಗಳನ್ನು ನಿಮ್ಮ ಸೌಂದರ್ಯ ದಿನಚರಿಯಲ್ಲಿ ಸೇರಿಸಿಕೊಳ್ಳಬಹುದು. ಮನೆಯಲ್ಲಿ ತಯಾರಿಸಿದ ನೆಲ್ಲಿಕಾಯಿ ಫೇಸ್ ಪ್ಯಾಕ್‌ಗಳನ್ನು ಹೇಗೆ ತಯಾರಿಸಬೇಕೆಂದು ಕಲಿಯೋಣ.

**ತಾಜಾ ನೆಲ್ಲಿಕಾಯಿ ಫೇಸ್ ಪ್ಯಾಕ್ ತಯಾರಿಸೋದು ಹೇಗೆ?:** ಮನೆಯಲ್ಲಿ ನೆಲ್ಲಿಕಾಯಿ ಪೌಡರ್ ಮಾಡಲು, ನೆಲ್ಲಿಕಾಯಿಯನ್ನು ಚೆನ್ನಾಗಿ ತೊಳೆಯಿರಿ, ಸಣ್ಣ ತುಂಡುಗಳಾಗಿ ಕತ್ತರಿಸಿ, ಮೈಕ್ರೋವೇವ್ ಅಥವಾ ಬಿಸಿಲಿನಲ್ಲಿ ಒಣಗಿಸಿ, ಒಣಗಿದ ನೆಲ್ಲಿಕಾಯಿಯನ್ನು ಪುಡಿಮಾಡಿ, ಮತ್ತು ಈ ಪುಡಿಯನ್ನು ಗಾಳಿಯಾಡದ ಜಾರ್‌ನಲ್ಲಿ ದೀರ್ಘಕಾಲ ತಾಜಾವಾಗಿಡಲು ಸಂಗ್ರಹಿಸಿ.

ನೆಲ್ಲಿಕಾಯಿ ಫೇಸ್ ಪ್ಯಾಕ್ ಮಾಡಲು, ಒಂದು ಬಟ್ಟಲಿನಲ್ಲಿ 2 ರಿಂದ 3 ಟೀ ಚಮಚ ನೆಲ್ಲಿಕಾಯಿ ಪೌಡರ್ ತೆಗೆದುಕೊಳ್ಳಿ. ಅದಕ್ಕೆ 1 ರಿಂದ 2 ಟೀ ಚಮಚ ಗುಲಾಬಿ ನೀರನ್ನು ಸೇರಿಸಿ. ಒಂದು ಚಿಟಿಕೆ ಅರಿಶಿನ ಪುಡಿಯನ್ನು ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ ಪೇಸ್ಟ್ ಮಾಡಿ. ನಿಮ್ಮ ಮನೆಯಲ್ಲಿ ತಯಾರಿಸಿದ ಆಮ್ಲಾ ಫೇಸ್ ಪ್ಯಾಕ್ ಸಿದ್ಧವಾಗಿದೆ.

**ನೆಲ್ಲಿಕಾಯಿ ಫೇಸ್ ಪ್ಯಾಕ್ ಅನ್ನು ಹೇಗೆ ಹಚ್ಚಬೇಕು?:** ಮೊದಲು, ನಿಮ್ಮ ಮುಖವನ್ನು ಸೌಮ್ಯವಾದ ಸೋಪ್ ಮತ್ತು ನೀರಿನಿಂದ ಸ್ವಚ್ಛಗೊಳಿಸಿ. ನೆಲ್ಲಿಕಾಯಿ ಫೇಸ್ ಪ್ಯಾಕ್ ಅನ್ನು ಸ್ವಲ್ಪ ಒದ್ದೆಯಾದ ಮುಖಕ್ಕೆ ಹಚ್ಚಿ. 15 ರಿಂದ 20 ನಿಮಿಷಗಳ ಕಾಲ ಹಾಗೆಯೇ ಬಿಡಿ, ನಂತರ ತಂಪಾದ ನೀರಿನಿಂದ ತೊಳೆಯಿರಿ ಮತ್ತು ಒಣಗಿಸಿ.

ನೆಲ್ಲಿಕಾಯಿ ಫೇಸ್ ಪ್ಯಾಕ್‌ಗಳು ಚರ್ಮವನ್ನು ಆಳವಾಗಿ ಪೋಷಿಸುತ್ತವೆ. ಸತ್ತ ಚರ್ಮದ ಕೋಶಗಳನ್ನು ಹೊರಹಾಕುತ್ತವೆ ಮತ್ತು ಮೈಬಣ್ಣವನ್ನು ಹೊಳಪುಗೊಳಿಸುತ್ತವೆ. ಅವು ಸುಕ್ಕುಗಳು, ಕಲೆಗಳು ಮತ್ತು ಕಪ್ಪು ಕಲೆಗಳನ್ನು ಕಡಿಮೆ ಮಾಡಲು, ಟ್ಯಾನಿಂಗ್ ಮತ್ತು ಮಂದತೆಯನ್ನು ನಿವಾರಿಸಲು ಮತ್ತು ನೈಸರ್ಗಿಕ ಹೊಳಪು ಮತ್ತು ಸ್ಪಷ್ಟ ಚರ್ಮವನ್ನು ಉತ್ತೇಜಿಸಲು ಸಹಾಯ ಮಾಡುತ್ತದೆ. ನೆಲ್ಲಿಕಾಯಿ ಫೇಸ್ ಪ್ಯಾಕ್‌ಗಳನ್ನು ವಾರಕ್ಕೆ ಎರಡು ಬಾರಿಯಾದರೂ ಹಚ್ಚಿ.

### ಫೇಸ್ ಪ್ಯಾಕ್ ತಯಾರಿಸಲು ಬೇಕಾಗುವ ಸಾಮಾಗ್ರಿಗಳು

- ನೆಲ್ಲಿಕಾಯಿ ಪೌಡರ್
- ರೋಸ್ ವಾಟರ್
- ಅರಿಶಿನ ಪುಡಿ



ನಿಯಮಿತ ಬಳಕೆಯು ಮುಖವನ್ನು ಆಳವಾಗಿ ಸ್ವಚ್ಛಗೊಳಿಸಲು ವರ್ಣದ್ರವ್ಯವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

# ಮಹಾಪುರುಷರನ್ನು ಜಾತಿಗೆ ಸೀಮಿತಗೊಳಿಸಬೇಡಿ: ಶಿವರಾಜ ತಂಗಡಗಿ

• ಉದಯವಾಹಿನಿ, ಬೆಂಗಳೂರು



ಸಮಾಜಕ್ಕೆ ಮಹತ್ವದ ಕೊಡುಗೆಗಳನ್ನು ನೀಡಿದ ಮಹಾಪುರುಷರನ್ನು ಒಂದೊಂದು ಜಾತಿಗೆ ಸೀಮಿತಗೊಳಿಸಬಾರದು ಎಂದು ಕನ್ನಡ, ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ಹೇಳಿದರು.

ಕನ್ನಡ ಮತ್ತು ಸಂಸ್ಕತಿ ಇಲಾಖೆ ನಗರದಲ್ಲಿ ಹಮ್ಮಿಕೊಂಡಿದ್ದ ವೀರವನಿತೆ ಒನಕೆ ಓಬವ್ವ ಜಯಂತಿ ಸಮಾರಂಭದಲ್ಲಿ ಓಬವ್ವ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ಮಾತನಾಡಿದರು. ಕನಕದಾಸರನ್ನು ಕುರುಬ ಸಮುದಾಯಕ್ಕೆ, ವಾಲ್ಮೀಕಿಯವರನ್ನು ನಾಯಕ ಸಮುದಾಯಕ್ಕೆ. ಅಂಬೇಡ್ಕರ್ ಅವರನ್ನು ದಲಿತ ಸಮುದಾಯಕ್ಕೆ ಸೀಮಿತಗೊಳಿಸಲಾಗುತ್ತಿದೆ. ಸಂವಿಧಾನ ಶಿಲ್ಪಿ ಅಂಬೇಡ್ಕರ್ ಅವರು ಎಲ್ಲರಿಗೂ ಸೇರಿದವರಾಗಿದ್ದಾರೆ. ಯಾವುದೇ ಮಹಾಪುರುಷರನ್ನು ಒಂದು ಜಾತಿಗೆ ಸೀಮಿತಗೊಳಿಸಬಾರದು' ಎಂದು ಅಭಿಪ್ರಾಯಪಟ್ಟರು.


ಒನಕೆ ಓಬವ್ವ ಅವರು ತೋರಿದ ಶೌರ್ಯ, ಸಾಹಸ ಮತ್ತು ಸಮಯ ಪ್ರಜ್ಞೆಯನ್ನು ಎಲ್ಲಾ ಮಹಿಳೆಯರು ಅಳವಡಿಸಿಕೊಳ್ಳುವ ಅಗತ್ಯ ಇದೆ. ಅವರು ಮಡಿದ ದಿನವನ್ನು ಮಹಿಳಾ ಯೋಧರ ದಿನಾಚರಣೆಯಾಗಿ ಆಚರಿಸುವ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜತೆಗೆ ಚರ್ಚಿಸಿ, ಕ್ರಮಕೈಗೊಳ್ಳಲಾಗುವುದು' ಎಂದು ಭರವಸೆ ನೀಡಿದರು. ಒನಕೆ ಓಬವ್ವ ಅವರ ಬಗ್ಗೆ ಉಪನ್ಯಾಸ ನೀಡಿದ ಲೇಖಕಿ ಸಾವಿತ್ರಿ ಮುಜುಂದಾರ, 'ಓಬವ್ವ ಅವರು ಕುಟುಂಬ ಮತ್ತು ರಾಜ್ಯವನ್ನು ಸಮರ್ಥವಾಗಿ ನಿಭಾಯಿಸಿದ್ದರು. ದುಡಿಯುವ ಮಹಿಳೆಯ ಪ್ರತಿನಿಧಿಯಾಗಿ ಅವರು ಕಾಣುತ್ತಾರೆ.

ಪುಟ್ಟಣ್ಣ ಕಣಗಾಲ್ ಅವರು ನಿರ್ದೇಶಿಸಿರುವ ನಾಗರಹಾವು ಚಿತ್ರದ ಕನ್ನಡ ನಾಡಿನ ವೀರರಮಣಿಯ. ಹಾಡಿನ ಕೊನೆಯಲ್ಲಿ ಓಬವ್ವ ಸಾಯುವುದನ್ನು ತೋರಿಸಿದ್ದಾರೆ. ಅಧ್ಯಯನಗಳ ಪ್ರಕಾರ ಅವರು ಆ ದಾಳಿಯ ನಂತರವೂ ಮೂರು ವರ್ಷ ಬದುಕಿದ್ದರು. ಅವರ ಪಾರ್ಥಿವ ಶರೀರವನ್ನು ರಾಜ್ಯದ ತುಂಬೆಲ್ಲ ಮೆರವಣಿಗೆ ಮಾಡಿದ್ದರು. ಸಿನಿಮಾದಲ್ಲಿ ತಪ್ಪಾಗಿ ತೋರಿಸಲಾಗಿದೆ. ಅವರ ಬಗ್ಗೆ ಸಂಶೋಧನೆ ನಡೆಯಬೇಕು ಎಂದರು.

# 6 ಸಾವಿರ ಕೆಪಿಎಸ್ ಶಾಲೆ ತೆರೆಯಲು ಚಿಂತನೆ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಆರು ಸಾವಿರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ತಲಾ ಒಂದರಂತೆ 6 ಸಾವಿರ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು (ಕೆಪಿಎಸ್) ತೆರೆಯುವ ಚಿಂತನೆ ಇದೆ' ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಹೇಳಿದರು. ಡಾ. ಅಬುಲ್ ಕಲಾಂ ಅಜಾದ್ ಅವರ ಜನ್ಮ ದಿನದ ಅಂಗವಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಆಯೋಜಿಸಿದ್ದ 'ರಾಷ್ಟ್ರೀಯ ಶಿಕ್ಷಣ ದಿನದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ರಾಜ್ಯದಲ್ಲಿ ಪ್ರಸ್ತುತ 308 ಕೆಪಿಎಸ್ ಶಾಲೆಗಳಿವೆ. ಬಜೆಟ್‌ನಲ್ಲಿ ಘೋಷಿಸಿದ 500 ಶಾಲೆಗಳು, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ನೆರವಿನಲ್ಲಿ 200 ಶಾಲೆ ಹಾಗೂ ಗಣಿಭಾದಿತ 10 ತಾಲ್ಲೂಕುಗಳಿಗೆ ತಲಾ 10ರಂತೆ 100 ಶಾಲೆಗಳನ್ನು ತೆರೆಯಲಾಗುತ್ತಿದೆ.



ಅಲ್ಪಸಂಖ್ಯಾತ ಇಲಾಖೆಯಿಂದ 100 ಶಾಲೆ. ಹೀಗೆ, ಒಂದೇ ವರ್ಷದಲ್ಲಿ ಒಟ್ಟು 900 ಹೊಸ ಶಾಲೆಗಳನ್ನು ಆರಂಭಿಸಲಾಗುತ್ತದೆ. ಈ ಶಾಲೆಗಳಲ್ಲಿ ಒಂದನೇ ತರಗತಿಯಲ್ಲಿ ಕಂಪ್ಯೂಟರ್ ಶಿಕ್ಷಣ ಹಾಗೂ ಆರನೇ ತರಗತಿಯಲ್ಲಿ ಕೌಶಲ ಅಭಿವೃದ್ಧಿ ತರಬೇತಿ ನೀಡಲಾಗುತ್ತದೆ' ಎಂದು ಮಾಹಿತಿ ನೀಡಿದರು. ಕೆಪಿಎಸ್ ಶಾಲೆಯಲ್ಲಿ ಎಲ್‌ಕೆಜಿಯಿಂದ ಪಿಯುಸಿವರೆಗೂ ವಿದ್ಯಾಭ್ಯಾಸ ಮಾಡಬಹುದು. ಖಾಸಗಿ ಶಾಲೆಗಳಿಗೆ ಪೈಪೋಟಿ ನೀಡಲು ದ್ವಿಭಾಷಾ ಮಾಧ್ಯಮದ ಕಲಿಕೆಗೆ ಅವಕಾಶ ನೀಡಲಾಗಿದೆ. ಆರನೇ ತರಗತಿಯಿಂದ ವಿದ್ಯಾರ್ಥಿಗಳು ಕನ್ನಡ, ಇಂಗ್ಲಿಷ್ ಭಾಷಾ ಮಾಧ್ಯಮ ಆಯ್ಕೆ ಮಾಡಿಕೊಳ್ಳಬಹುದು' ಎಂದರು.

# ಊಟದ ರುಚಿ ದುಪ್ಪಟ್ಟಾಗಿಸುವ ಬದನೆಕಾಯಿ ತವಾ ಫ್ರೈ

### ಬದನೆಕಾಯಿ ತವಾ ಫ್ರೈ ಮಾಡಲು ಬೇಕಾಗುವ ವಸ್ತುಗಳು

- ಬದನೆಕಾಯಿ
- ಖಾರದ ಪುಡಿ
- ಧನಿಯಾ ಪುಡಿ
- ಅರಶಿಣ
- ಗರಂ ಮಸಾಲೆ
- ಉಪ್ಪು
- ಎಣ್ಣೆ
- ಶುಂಠಿ ಬೆಳ್ಳುಳ್ಳಿ ಪೇಸ್ಟ್
- ಕರಿಬೇವು
- ಕೊತ್ತಂಬರಿ ಸೊಪ್ಪು
- ನಿಂಬೆ ರಸ

**ಈ ರುಚಿ ರೋಸ್ಟ್ ಮಾಡಿ ನೋಡಿ!**

ಮಧ್ಯಾಹ್ನದ ಊಟ ಹಾಗೆ ರಾತ್ರಿ ಊಟದಲ್ಲಿ ಅನ್ನದೊಂದಿಗೆ ಸವಿಯಲು ಯಾವುದಾದರು ಪಲ್ಯ, ಚಟ್ನಿ, ಸ್ನ್ಯಾಕ್ಸ್ ಮಾಡಿಟ್ಟುಕೊಳ್ಳುವುದು ಸಾಮಾನ್ಯ. ಅದ್ರಲ್ಲೂ ಪಲ್ಯ ಅಂದ್ರೆ ಎಲ್ಲರಿಗೂ ಇಷ್ಟವಾಗುತ್ತೆ. ಹಾಗೆ ಊಟದ ರುಚಿ ಹೆಚ್ಚಾಗಬೇಕು ಅಂದ್ರೆ ಅಲ್ಲಿ ಪಲ್ಯ, ಚಟ್ನಿ ಹೀಗೆ ಏನಾದರೊಂದು ಇರಲೇಬೇಕು. ಆದ್ರೆ ನಾವಿಂದು ವಿಶೇಷವಾಗಿ ರೋಸ್ಟೆಡ್ ಖಾದ್ಯಗಳ ಸವಿಯೋದು ನೋಡಬಹುದು. ಹೀಗಾಗಿ ಊಟದೊಂದಿಗೆ ಸವಿಯಲು ನಾವಿಂದು ಬದನೆಕಾಯಿ ತವಾ ಫ್ರೈ ಮಾಡುವ ಕುರಿತಾಗಿ ತಿಳಿದುಕೊಳ್ಳೋಣ. ನೀವು ಈ ಬದನೆಕಾಯಿ ತವಾ ಫ್ರೈ ಮಾಡಿ ಸವಿದಿರಬಹುದು. ಅಥವಾ ಊಟದೊಂದಿಗೆ ಇದನ್ನು ಸವಿಯಲು ಬಹಳ ರುಚಿ ನೀಡಲಿದೆ. ಕೆಲವೇ ನಿಮಿಷದಲ್ಲಿ ಇದನ್ನು ಮಾಡಿ ಮುಗಿಸಬಹುದು.


ಬದನೆಕಾಯಿಯಿಂದ ಮಾಡುವ ಹಲವು ಖಾದ್ಯಗಳ ಪೈಕಿ ಈ ಬದನೆಕಾಯಿ ರೋಸ್ಟೆಡ್ ತವಾ ಫ್ರೈ ಬಹಳ ರುಚಿ ನೀಡಲಿದೆ. ಮಕ್ಕಳಿಂದ ಹಿಡಿದು ಹಿರಿಯರವರೆಗೂ ಈ ತವಾ ಫ್ರೈ ಬಹಳ ರುಚಿ ನೀಡಲಿದೆ. ಹಾಗಾದ್ರೆ ನಾವಿಂದು ಈ ಬದನೆಕಾಯಿ ತವಾ ಫ್ರೈ ಮಾಡಲು ಯಾವೆಲ್ಲಾ ವಸ್ತುಗಳು ಬೇಕು? ಮಾಡುವ ವಿಧಾನವೇನು? ಎಷ್ಟು ಸಮಯ ಹಿಡಿಯಲಿದೆ ಎಂಬ ಕುರಿತ ಸಂಪೂರ್ಣ ಮಾಹಿತಿ ಇಲ್ಲಿದೆ.

**ಬದನೆಕಾಯಿ ತವಾ ಫ್ರೈ ಮಾಡುವ ವಿಧಾನವೇನು:** ಒಂದು ಬೌಲ್ ತೆಗೆದುಕೊಂಡು ಅದಕ್ಕೆ ಖಾರದ ಪುಡಿ, ಗರಂ ಮಸಾಲ, ಧನಿಯಾ ಪುಡಿ, ಅರಶಿಣ, ಕತ್ತರಿಸಿದ ಕರಿಬೇವು, ಸ್ವಲ್ಪ ಕೊತ್ತಂಬರಿ ಸೊಪ್ಪು, ಪುಡಿ ಉಪ್ಪು, ನಿಂಬೆ ರಸ 1 ಸ್ಪೂನ್, ಶುಂಠಿ ಬೆಳ್ಳುಳ್ಳಿ ಪೇಸ್ಟ್, 2 ಸ್ಪೂನ್ ಎಣ್ಣೆ ಹಾಕಿ ಮಿಕ್ಸ್ ಮಾಡಿಕೊಳ್ಳಿ. ಇದು ಮಸಾಲೆಯಾಗಿ ಪರಿವರ್ತನೆಯಾಗಬೇಕು. ಈಗ ಬದನೆಕಾಯಿಯನ್ನು ತೊಳೆದು ತೆಳುವಾಗಿ ಕತ್ತರಿಸಿಕೊಳ್ಳಿ. ವೃತ್ತಾಕಾರವಾಗಿ ಒಂದು ಬೆರಳಿನ ದಪ್ಪಕ್ಕೆ ಕತ್ತರಿಸಿ ಇಟ್ಟುಕೊಳ್ಳಿ. ಈಗ ರೆಡಿ ಮಾಡಿರುವ ಮಸಾಲೆಯನ್ನು ಈ ಬದನೆಕಾಯಿಯ ಮೇಲೆ ಚೆನ್ನಾಗಿ ಹಚ್ಚಿಕೊಳ್ಳಬೇಕು. ಬದನೆಕಾಯಿಯ ಎಲ್ಲಾ ಭಾಗಕ್ಕೂ ಈ ಮಸಾಲೆ ಹಿಡಿಯಬೇಕು. ಹೀಗೆ ಎಲ್ಲಾ ಬದನೆಕಾಯಿಯನ್ನು ಸಹ ಇದೇ ರೀತಿ ಮಾಡಿಟ್ಟುಕೊಳ್ಳಿ. ಹಾಗೆ 10 ನಿಮಿಷ ಬಿಡಬೇಕು. ಈಗ ಒಲೆ ಮೇಲೆ ತವಾ ಇಟ್ಟು ಅದಕ್ಕೆ ಎಣ್ಣೆ ಹಾಕಿಕೊಂಡು ಬಿಸಿಯಾಗಲು ಬಿಡಿ. ಬಿಸಿಯಾದ ಬಳಿಕ ಎರಡರಿಂದ ಮೂರು ಬದನೆಕಾಯಿ ಸ್ಲೈಸ್‌ಗಳನ್ನು ತವಾದಲ್ಲಿ ಇಟ್ಟು ಕರಿದುಕೊಳ್ಳಬೇಕು. ಎರಡೂ ಭಾಗವನ್ನು ಸಹ ಚೆನ್ನಾಗಿ ಹುರಿದುಕೊಳ್ಳಬೇಕು. ಇಷ್ಟಾದರೆ ಊಟದೊಂದಿಗೆ ಸವಿಯಲು ರುಚಿ ರುಚಿಯ ಬದನೆಕಾಯಿ ತವಾ ಫ್ರೈ ಸಿದ್ಧವಾಗುತ್ತೆ. ನೀವು ಕೂಡ ಮನೆಯಲ್ಲಿ ಊಟದ ಸಮಯಕ್ಕೆ ಇದನ್ನು ಮಾಡಿ ಸವಿದು ನೋಡಿ. ಹಾಗೆ ಸ್ನ್ಯಾಕ್ಸ್ ಆಗಿಯೂ ಕೂಡ ಇದನ್ನ ಸವಿಯಬಹುದು. ಖಾರ ಖಾರವಾಗಿ ಸವಿಯಲು ಇದ್ದರೆ ಯಾವುದೇ ಚಟ್ನಿ, ಪಲ್ಯ ಯಾವುದೂ ಬೇಡ.



# ರಾಮಾಯಣ

## ಜಟಾಯು ಮರಣ



• ಹಿಂದಿನ ಸಂಚಿಕೆಯಿಂದ 120 ನೆಯ ಅಧ್ಯಾಯ

ಮರವನ್ನು ಸುತ್ತಿಕೊಂಡಿರುವ ಬಳ್ಳಿಯಂತೆ ಜಟಾಯುವನ್ನು ತಬ್ಬಿಕೊಂಡು 'ರಾಮಾ ರಾಮಾ' ಎಂದು ಕೂಗಿ ಮೊರೆಯಿಡುತ್ತಿದ್ದ ಆ ದೇವಿಯನ್ನು ರಾವಣನು ಬಲಾತ್ಕಾರದಿಂದ ಮುಂದಲೆ ಹಿಡಿದೆಳೆದು ಆಕಾಶಮಾರ್ಗವಾಗಿ ಹೊರಟನು. ಸಮಯದಲ್ಲಿ ಜಗತ್ತೆಲ್ಲವೂ ಆಕಾಲಪ್ರಳಯವಾದಂತೆ ಅತಿಭಯಂಕರವಾಯಿತು. ಕತ್ತಲೆಯು ಕವಿದು ಸೂರ್ಯಕಾಂತಿಗುಂದಿತು. ವಾಯುಸಂಚಾರ ನಿಂತಿತು. ಬ್ರಹ್ಮದೇವನು ಜ್ಞಾನದೃಷ್ಟಿಯಿಂದ ನಡೆದ ವೃತ್ತಾಂತವನ್ನು ತಿಳಿದು ಭಲಾ ! ಇನ್ನು ದೇವತೆಗಳ ಕಾರ್ಯವು ನೆರವೇರಿತು ಎಂದು ಉದ್ಗಾರಮಾಡಿದನು. ದಂಡಕಾರಣ್ಯದಲ್ಲಿದ್ದ ಋಷಿಗಳು ರಾವಣನು ಸೀತಾದೇವಿಯನ್ನು ಬಲಾತ್ಕಾರದಿಂದ ಹಿಡಿದುಕೊಂಡು ಹೋದದ್ದನ್ನು ನೋಡಿದ ದುಃಖದಿಂದಲೂ ಮುಂದೆ ಸ್ತ್ರೀವೈರದಿಂದ ಶ್ರೀರಾಮನು ಅವಶ್ಯವಾಗಿ ರಾವಣನನ್ನು ಕೊಲ್ಲುವನೆಂಬ ಸಂತೋಷದಿಂದಲೂ ಸಮಾಧಾನವುಳ್ಳವರಾದರು.

ಇತ್ತ ರಾಮಲಕ್ಷ್ಮಣರನ್ನು ಸ್ಮರಿಸಿ ಹಂಬಲಿಸುತ್ತ ರಾವಣನಿಂದ ಅಂತರಿಕ್ಷಮಾರ್ಗದಲ್ಲಿ ಒಯ್ಯಲ್ಪಡುತ್ತಿದ್ದ ಸೀತಾದೇವಿಯು ಮೇಘಮಂಡಲದಲ್ಲಿ ಹೊಳೆಯುತ್ತಿರುವ ಮಿಂಚಿನಂತೆ ಒಪ್ಪುತ್ತಿದ್ದಳು. ರಾವಣನು ಗಾಳಿಗೆ ಚಲಿಸುತ್ತಿದ್ದ ಸೀತಾದೇವಿಯ ಪೀತಾಂಬರದಿಂದ, ಕಾಡುಗಿಚ್ಚಿನಿಂದ ಬೆಳಗಿಸಲ್ಪಟ್ಟ ಪರ್ವತದಂತೆ ಒಪ್ಪುತ್ತಿದ್ದನು. ಸೀತಾದೇವಿಯು ಮುಡಿದಿದ್ದ ಕೆಂದಾವರೆಯ ಎಸಳುಗಳು ರಾವಣನ ಮೇಲೆ ಬೀಳುತ್ತಿದ್ದವು.

ಅಂತರಿಕ್ಷಮಾರ್ಗದಲ್ಲಿ ಹೋಗುತ್ತಿದ್ದ ಸೀತಾದೇವಿಯ ಸುವರ್ಣಪ್ರಭೆಯುಳ್ಳ ಪೀತಾಂಬರವು ಆಕಾಶದಲ್ಲಿ ಗಾಳಿಯಿಂದ ಚಲಿಸುತ್ತಾ ಬಿಸಿಲಲ್ಲಿ ಸೂರ್ಯಕಾಂತಿಯಿಂದ ಕೂಡಿದ ಕೆಂಪು ಮೋಡದಂತೆ ತೋರುತ್ತಿತ್ತು. ಸೀತೆಯ ಮುಖವು ರಾಮನಿಂದ ವಿರಹಿತವಾಗಿ ನಾಳವಿಲ್ಲದ ಕಮಲದಂತೆ ಒಪ್ಪುತ್ತಿತ್ತು. ಅಂದವಾದ ಹಣೆಯಿಂದಲೂ ಮೃದುವಾದ ಕೂದಲಿನಿಂದಲೂ ಫಳಫಳನೆ ಹೊಳೆಯುವ ಬಿಳಿ ಹಲ್ಲುಗಳಿಂದಲೂ ಕೂಡಿ ಪದ್ಮಗರ್ಭದಂತೆ ಪ್ರಕಾಶಿಸುವ ಕೊಂಚವೂ ಕುಂದಿಲ್ಲದೆ ಕೆದರಿದ ಕೂದಲುಳ್ಳ ಆಕೆಯ ಮುಖವು ನೀಲಮೇಘವನ್ನು ಭೇದಿಸಿಕೊಂಡು ಹೊರಬಂದ ಚಂದ್ರನಂತೆ ಕಾಣುತ್ತಿತ್ತು. ಸುಂದರವಾದ ಮೂಗಿನಿಂದಲೂ ತುಟಿಗಳಿಂದಲೂ ಸುವರ್ಣಕಾಂತಿಯಿಂದಲೂ ಮೆರೆಯುತ್ತಿದ್ದ ಸುರಿಯುವ ಕಣ್ಣೀರುಳ್ಳ ಸೀತೆಯ ಮುಖವು ಹಗಲಿನಲ್ಲಿ ಉದಯವಾದ ಚಂದ್ರಮಂಡಲದಂತೆ ಕಾಂತಿಹೀನವಾಗಿ ತೋರುತ್ತಿತ್ತು. ಕಮಲಕರ್ಣಿಕೆಯಂತೆ ತನುಕಾಂತಿಯುಳ್ಳ ಸುವರ್ಣಾಭರಣ ಭೂಷಿತೆಯಾದ ಸೀತಾದೇವಿಯು ರಾವಣನ ಸಮೀಪದಲ್ಲಿ ಮೇಘಮಂಡಲದಲ್ಲಿ ಹೊಳೆಯುವ ಮಿಂಚಿನಂತೆ ಪ್ರಕಾಶಿಸುತ್ತಿದ್ದಳು. ರಾವಣನು ಆ ದೇವಿಯ ಭೂಷಣಗಳ ಝಣಝಣತ್ಕಾರಗಳಿಂದ ಗುಡುಗುಗಳಿಂದಲೂ ಮಿಂಚುಗಳಿಂದಲೂ ಕೂಡಿದ ಮೇಘದಂತೆ ಒಪ್ಪುತ್ತಿದ್ದನು. ಅಂತರಿಕ್ಷ

ಮುಂದುವರಿಯುವುದು...

# ನಿಮ್ಮ ರಕ್ತದಲ್ಲಿನ ಕೊಳಕನ್ನೆಲ್ಲಾ ಹೊರಹಾಕಲು ಸಹಾಯ ಮಾಡುತ್ತೆ ಈ ಆಹಾರಗಳು

ನಮ್ಮ ದೇಹವನ್ನು ನಿರ್ವಿಷಗೊಳಿಸಿ ಮತ್ತು ರಕ್ತವನ್ನು ಶುದ್ಧಗೊಳಿಸಲು ಸಹಕಾರಿಯಾಗಬಲ್ಲ ಕೆಲವೊಂದು ಆಹಾರಗಳನ್ನು ಇಲ್ಲಿ ನೀಡಲಾಗಿದೆ. ಇವುಗಳನ್ನು ನಿಮ್ಮ ದಿನನಿತ್ಯದ ಡಯೆಟ್‌ನಲ್ಲಿ ಸೇರಿಸಿಕೊಳ್ಳೋದು ಉತ್ತಮ. ದೇಹದಿಂದ ವಿಷವನ್ನು ತೆಗೆದುಹಾಕಲು ರಕ್ತ ಶುದ್ಧೀಕರಣವು ಅತ್ಯಂತ ನೈಸರ್ಗಿಕ ಮತ್ತು ಪರಿಣಾಮಕಾರಿ ಮಾರ್ಗವಾಗಿದೆ. ಶುದ್ಧ ರಕ್ತವು ದೇಹವನ್ನು ಆರೋಗ್ಯಕರವಾಗಿಡುವುದಲ್ಲದೆ ರೋಗಗಳನ್ನು ದೂರವಿಡುತ್ತದೆ. ರಕ್ತವು ದೇಹದ ಪ್ರತಿಯೊಂದು ಜೀವಕೋಶಕ್ಕೂ ಆಮ್ಲಜನಕ ಮತ್ತು ಪೋಷಕಾಂಶಗಳನ್ನು ತಲುಪಿಸುತ್ತದೆ ಮತ್ತು ದೇಹದಿಂದ ಹಾನಿಕಾರಕ ವಸ್ತುಗಳನ್ನು ತೆಗೆದುಹಾಕುತ್ತದೆ. ಆದ್ದರಿಂದ, ಆರೋಗ್ಯಕರ ದೇಹವನ್ನು ಕಾಪಾಡಿಕೊಳ್ಳಲು ರಕ್ತ ಶುದ್ಧೀಕರಣವು ಅತ್ಯಗತ್ಯ. ನಿಮ್ಮ ಆಹಾರದಲ್ಲಿ ಯಾವ ಆಹಾರಗಳು ನಿಮ್ಮ ರಕ್ತವನ್ನು ಶುದ್ಧವಾಗಿಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದು ನಾವು ನಿಮಗೆ ಹೇಳೋಣ.

**ನಿಂಬೆ:** ಖಾಲಿ ಹೊಟ್ಟೆಯಲ್ಲಿ ನಿಂಬೆ ನೀರನ್ನು ಕುಡಿಯುವುದು ರಕ್ತವನ್ನು ಶುದ್ಧೀಕರಿಸಲು ಮತ್ತು ಯಕೃತ್ತನ್ನು ನಿರ್ವಿಷಗೊಳಿಸಲು ಉತ್ತಮ ಮಾರ್ಗವಾಗಿದೆ. ತಜ್ಞರು ಹೇಳುವಂತೆ ನಿಂಬೆಹಣ್ಣುಯ ಕೃತ್ತಿನಲ್ಲಿ ಕಿಣ್ವಗಳನ್ನು ಉತ್ಪಾದಿಸುತ್ತದೆ, ಇದು ಇತರ ಯಾವುದೇ ಆಹಾರಕ್ಕಿಂತ ಹೆಚ್ಚು ಪರಿಣಾಮಕಾರಿಯಾಗಿ ಕೆಲಸ ಮಾಡುತ್ತದೆ. ನಿಂಬೆಯಲ್ಲಿರುವ ವಿಟಮಿನ್ ಸಿ ದೇಹದಲ್ಲಿ ಗ್ಲುಟಾಥಿಯೋನ್ ಎಂಬ ಪ್ರೋಟೀನ್ ಉತ್ಪಾದನೆಯನ್ನು ಹೆಚ್ಚಿಸುತ್ತದೆ, ಇದು ಯಕೃತ್ತನ್ನು ಶುದ್ಧೀಕರಿಸಲು ಸಹಾಯ ಮಾಡುತ್ತದೆ.



**ನೀರು: ನೀರು ಜೀವನದಲ್ಲಿ ಅತ್ಯಂತ ಪ್ರಮುಖ ಅಂಶವಾಗಿದೆ. ದೇಹವನ್ನು ವಿಷದಿಂದ ಮುಕ್ತವಾಗಿ ಡಲು ಸಾಕಷ್ಟು ಪ್ರಮಾಣದಲ್ಲಿ ನೀರು ಕುಡಿಯುವುದು ಅತ್ಯಗತ್ಯ. ನೀರು ರಕ್ತದ pH ಅನ್ನು ಸಮತೋಲನಗೊಳಿಸುತ್ತದೆ, ಅದರ ಸ್ನಿಗ್ಧತೆಯನ್ನು ಕಾಪಾಡಿಕೊಳ್ಳುತ್ತದೆ ಮತ್ತು ಮೂತ್ರಪಿಂಡಗಳು ತ್ಯಾಜ್ಯವನ್ನು ಶೋಧಿಸಲು ಸಹಾಯ ಮಾಡುತ್ತದೆ. ದಿನಕ್ಕೆ ಕನಿಷ್ಠ 8 ರಿಂದ 10 ಗ್ಲಾಸ್ ನೀರು ಕುಡಿಯಿರಿ, ಇದರಿಂದ ಎಲ್ಲಾ ವಿಷಕಾರಿ ಅಂಶಗಳನ್ನು ದೇಹದಿಂದ ಸುಲಭವಾಗಿ ತೆಗೆದುಹಾಕಬಹುದು.**

**ಬೆಳ್ಳುಳ್ಳಿ:** ಹಸಿ ಬೆಳ್ಳುಳ್ಳಿ ರಕ್ತವನ್ನು ಶುದ್ಧೀಕರಿಸಲು ಸುಲಭ ಮತ್ತು ಪರಿಣಾಮಕಾರಿ ಮಾರ್ಗವಾಗಿದೆ. ಬೆಳ್ಳುಳ್ಳಿಯಲ್ಲಿ ಕಂಡುಬರುವ ಸಲ್ಫರ್ ಹೊಂದಿರುವ ಸಂಯುಕ್ತವಾದ ಆಲಿಸಿನ್ ಯಕೃತ್ತನ್ನು ವಿಷದಿಂದ ರಕ್ಷಿಸುತ್ತದೆ ಮತ್ತು ರಕ್ತವನ್ನು ಶುದ್ಧೀಕರಿಸಲು ಸಹಾಯ ಮಾಡುತ್ತದೆ.

ಬೆಳ್ಳುಳ್ಳಿ ಬ್ಯಾಕ್ಟೀರಿಯಾ, ಪರಾವಲಂಬಿಗಳು ಮತ್ತು ವೈರಸ್‌ಗಳಿಂದ ಮುಕ್ತವಾಗಿರುವ ಆಂಟಿಮೈಕ್ರೊಬಿಯಲ್ ಗುಣಗಳನ್ನು ಹೊಂದಿದೆ. ಇದು ಕರುಳನ್ನು ಬ್ಯಾಕ್ಟೀರಿಯಾ, ಪರಾವಲಂಬಿಗಳು ವೈರಸ್‌ಗಳಿಂದ ಮುಕ್ತವಾಗಿರಿಸುತ್ತದೆ. ನಿಮ್ಮ ದೈನಂದಿನ ಆಹಾರದಲ್ಲಿ ಬೆಳ್ಳುಳ್ಳಿಯನ್ನು ಸೇರಿಸಿಸೋದನ್ನು ಮರೆಯದಿರಿ.

**ಅರಿಶಿನ:** ಗೋಲ್ಡನ್ ಸ್ಪೈಸ್ ಎಂದು ಕರೆಯಲ್ಪಡುವ ಅರಿಶಿನವು ಕರ್ಕ್ಯುಮಿನ್ ಎಂಬ ಸಂಯುಕ್ತವನ್ನು ಹೊಂದಿರುತ್ತದೆ. ಇದು ದೇಹದಿಂದ ವಿಷವನ್ನು ತೆಗೆದುಹಾಕುವಲ್ಲಿ ಹೆಚ್ಚು ಪರಿಣಾಮಕಾರಿಯಾಗಿದೆ. ಇದು ರಕ್ತ ಶುದ್ಧೀಕರಣ ಕಿಣ್ವಗಳನ್ನು ಸಕ್ರಿಯಗೊಳಿಸುತ್ತದೆ. ಪ್ರತಿದಿನ ಅರಿಶಿನ ಹಾಲು ಅಥವಾ ಅರಿಶಿನ ಚಹಾವನ್ನು ಕುಡಿಯುವುದು ಅತ್ಯಂತ ಪ್ರಯೋಜನಕಾರಿ. ಚಹಾ ತಯಾರಿಸುತ್ತಿದ್ದರೆ ಅದಕ್ಕೆ ಸ್ವಲ್ಪ ಕರಿಮೆಣಸು ಸೇರಿಸಿ. ಇದು ಅರಿಶಿನದ ಪ್ರಯೋಜನಗಳನ್ನು ಹೆಚ್ಚಿಸುತ್ತದೆ.

**ಬೀಟ್‌ರೂಟ್:** ಬೀಟ್‌ರೂಟ್‌ನಲ್ಲಿರುವ ನೈಸರ್ಗಿಕ ಸಂಯುಕ್ತಗಳು ಯಕೃತ್ತಿನ ಆರೋಗ್ಯವನ್ನು ಉತ್ತೇಜಿಸುತ್ತದೆ ಮತ್ತು ರಕ್ತವನ್ನು ಶುದ್ಧೀಕರಿಸುತ್ತದೆ. ಜರ್ನಲ್ ಆಫ್ ನ್ಯೂಟ್ರಿಷನ್ ಪ್ರಕಾರ ಬೀಟ್‌ರೂಟ್ ಯಕೃತ್ತನ್ನು ಹಾನಿಯಿಂದ ರಕ್ಷಿಸುತ್ತದೆ ಮತ್ತು ನಿರ್ವಿಶೀಕರಣ ಪ್ರಕ್ರಿಯೆಯನ್ನು ವೇಗಗೊಳಿಸುತ್ತದೆ. ಇದನ್ನು ಸಲಾಡ್‌ಗಳು, ಜ್ಯೂಸ್‌ಗಳು ಅಥವಾ ಸ್ಮೂಥಿಗಳಲ್ಲಿ ಸೇರಿಸಿ ಸೇವಿಸಬಹುದು.

### ಕೊತ್ತಂಬರಿ ಸೊಪ್ಪು

**ಕಲುಷಿತ ಗಾಳಿ ಅಥವಾ ಆಹಾರದ ಮೂಲಕ ರಕ್ತಪ್ರವಾಹಕ್ಕೆ ಪ್ರವೇಶಿಸುವ ಪಾದರಸ ಮತ್ತು ಇತರ ಭಾರ ಲೋಹಗಳನ್ನು ದೇಹದಿಂದ ತೆಗೆದುಹಾಕಲು ಕೊತ್ತಂಬರಿ ಸೊಪ್ಪು ಸಹಾಯ ಮಾಡುತ್ತದೆ. ಹಸಿರು ಎಲೆಗಳ ತರಕಾರಿಗಳಲ್ಲಿನ ಕ್ಲೋರೊಫಿಲ್ ರಕ್ತವನ್ನು ಶುದ್ಧೀಕರಿಸಲು ಸಹಾಯ ಮಾಡುತ್ತದೆ. ಬ್ರೊಕೊಲಿ ಮತ್ತು ಎಲೆಕೋಸು ಮುಂತಾದ ಕ್ರೂಸಿಫೆರಸ್ ತರಕಾರಿಗಳಲ್ಲಿನ ಸಲ್ಫರ್ ಸಂಯುಕ್ತಗಳು ರಕ್ತವನ್ನು ನಿರ್ವಿಷಗೊಳಿಸುತ್ತದೆ ಮತ್ತು ಉರಿಯೂತವನ್ನು ಕಡಿಮೆ ಮಾಡುತ್ತದೆ ಎಂದು ಹಲವು ಸಂಶೋಧನೆಗಳು ತೋರಿಸುತ್ತದೆ.**



2 ನೇ ಬೆಳೆಗೆ ನೀರು ಬಿಡಲೇಬೇಕು ! ಇಲ್ಲವಾದರೆ, ರೈತರಿಂದ ಅಹೋರಾತ್ರಿ, ಅನಿರ್ಧಿಷ್ಟಾವಧಿ ಧರಣಿ : ಶರಣಪ್ಪ ಕೊತ್ವಾಲ್ ರೈತ ಮುಖಂಡ

# ಡ್ಯಾಮ್‌ಗೆ ಏನು ಆದರೂ ನಾವೇ ಜವಾಬ್ದಾರರಂತ ರೈತರೆಲ್ಲಾ ಬರೆದು ಕೊಡಿ: ಸಚಿವ

• **ಉದಯವಾಹಿನಿ ಕಾರಟಗಿ**

ನಿಮಗೆ ನೀರು ಬೇಕಾ ? ಡ್ಯಾಮ್ ಬೇಕಾ ? ನೀರು ಬೇಕು ಅಂದ್ರೆ ಡ್ಯಾಮ್‌ಗೆ ಏನು ಆದರೂ ನಾವೇ ಜವಾಬ್ದಾರರಂತ ರೈತರೆಲ್ಲಾ ಬರೆದು ಕೊಡಿ ಹಾಗಾದರೆ ನಾವು ನೀರು ಬಿಡುತ್ತೇವೆ ಎಂದು ಬೆಳೆಗೆ ನೀರು ಕೇಳಲು ಹೋದ ರೈತರನ್ನು ಗದರಿಸಿದ ಸಚಿವ ಶಿವರಾಜ್ ತಂಗಡಗಿ ಅವರಿಗೆ ಉತ್ತರ ನೀಡಲು ವೇದಿಕೆ ಸಿದ್ಧವಾಗಿದೆ ಎನ್ನುವಂತೆ ಕಾಣುತ್ತಿದೆ . ಹೌದು ರೈತರ ಬೇಸಿಗೆ ಬೆಳೆಗೆ ನೀರು ಇಲ್ಲ ತುಂಗಭದ್ರಾ ಜಲಾಶಯದ ಗೇಟ್‌ಗಳ ರಿಪೇರಿ ಮಾಡಬೇಕಾಗಿದೆ ಎಂದು ಸಚಿವರಾದ ಶಿವರಾಜ್ ಎಸ್ ತಂಗಡಗಿ ಅವರು ಏಕ ಪಕ್ಷಿಯ ನಿರ್ಧಾರ ಇದೀಗ ತುಂಗಭದ್ರ ಎಡದಂಡೆ ಭಾಗದ ರೈತರಲ್ಲಿ ತೀವ್ರತರವಾದ ಆಕ್ರೋಶವನ್ನು ಉಂಟುಮಾಡಿದೆ.



ಬೇಸಿಗೆ ಬೆಳೆಗೆ ಬೇಕಾಗುವ ಸುಮಾರು 50 ಟಿಎಂಸಿ ನೀರು ಈಗಾಗಲೇ ಜಲಾಶಯದಲ್ಲಿ ಸಂಗ್ರಹವಿದೆ ಅಲ್ಲದೆ ಇನ್ನು ಒಳ ಅರಿವು ಕೂಡ ಬರ್ತಾ ಇದೆ ಮತ್ತು ಹವಾಮಾನ ಮೂಲಗಳ ಪ್ರಕಾರ ಮಳೆ ಆಗುವ ಸೂಚನೆಯೂ ಕೂಡ ಇದೆ. ಇಷ್ಟೆಲ್ಲಾ ಅವಕಾಶಗಳು ಇದ್ರೂ ಸಹ ರೈತರ ಎರಡನೆಯ ಬೆಳೆಗೆ ನೀರು ಇಲ್ಲಾ ಎನ್ನುವುದು ಯಾವ ನ್ಯಾಯ ಇದು ರಾಜಕಾರಣಿಗಳ ಸರ್ವಾಧಿಕಾರಿ ಧೋರಣೆ ಅಲ್ಲದೆ ಮತ್ತೇನು? ಎಂದು ರೈತರು ಪ್ರಶ್ನಿಸುತ್ತಿದ್ದಾರೆ. ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ್ ಎಸ್ ತಂಗಡಗಿ ಅವರು ಜಲಾಶಯದ ಗೇಟ್‌ಗಳ ರಿಪೇರಿ ಮಾಡುವ ನೆಪದಲ್ಲಿ ರೈತರ ಬದುಕಿಗೆ ಬರೆ ಎಳೆಯಲು ಸಿದ್ಧವಾಗಿದ್ದಾರೆ ಎನ್ನುವ ಆರೋಪ ಎದುರಿಸುವಂತಾಗಿದೆ. ಎರಡನೇ ಬೆಳೆಗೆ ನೀರು ಬಿಡುವಂತೆ ಸಭೆಯಲ್ಲಿ ಸರ್ಕಾರಕ್ಕೆ ಒತ್ತಾಯಿಸಿದರು. ಹಾಗೂ ರೈತರ ಬಗ್ಗೆ ನಿರ್ಲಕ್ಷ್ಯ ಧೋರಣೆ ತೋರುತ್ತಿರುವ ಸಚಿವ ಶಿವರಾಜ್ ಎಸ್ ತಂಗಡಗಿ ಅವರ ನಡೆಯನ್ನು ಖಂಡಿಸಲಾಯಿತು. ಈ ಸಂದರ್ಭದಲ್ಲಿ ಮಾಜಿ ಶಾಸಕ ಬಸವರಾಜ ದಡೇಸೂಗುರ್ ಮಾತನಾಡಿ ಗೇಟ್‌ಗಳ ರಿಪೇರಿ ಮುಂದೂಡಿ ಮಾರ್ಚ್ 25ರವರೆಗೆ ನೀರುಬಿಡಬೇಕು. ನ. 14ರಂದು ಬೆಂಗಳೂರಿನಲ್ಲಿ ಆಯೋಜಿಸಿದ ನೀರಾವರಿ ಸಲಹಾ ಸಮಿತಿಯನ್ನು ರದ್ದು ಮಾಡಿ ಮುನಿರಾಬಾದ್‌ನಲ್ಲಿ ಸಭೆಯನ್ನು ನಡೆಸಬೇಕು. ಈ ಎಲ್ಲಾ ಬೇಡಿಕೆಗಳು ಈಡೇರುವವರೆಗೂ ನವಂಬರ್ 12ರಂದು ಕಾರಟಗಿ ಕನಕದಾಸ ವೃತ್ತದಲ್ಲಿ ಅಹೋರಾತ್ರಿ ಅನಿರ್ಧಿಷ್ಟಾವಧಿ ಹೋರಾಟ ನಡೆಸಲಾಗುತ್ತದೆ ಎರಡನೇ ಬೆಳೆಗೆ ನೀರು ಬಿಡಲೇಬೇಕು ಇಲ್ಲವಾದರೆ ಪರಿಣಾಮ ನೆಟ್ಟಗಿರುವುದಿಲ್ಲ ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ಅಖಿಲ ಕರ್ನಾಟಕ ರಾಜ್ಯ ಅನ್ನದಾತ ರೈತ ಸಂಘದ ರಾಜ್ಯಾಧ್ಯಕ್ಷ ಶರಣೇಗೌಡ ಕೇಸರಹಟ್ಟಿ ರಾಜ್ಯ ಉಪಾಧ್ಯಕ್ಷರಾದ ಶರಣಪ್ಪ ಕೊತ್ವಾಲ್, ರೈತ ಮುಖಂಡರಾದ ಹನುಮಂತಪ್ಪ ಉಳೇನೂರು, ಮರಿಯಪ್ಪ ಸಾಲೋಣಿ ಸೇರಿದಂತೆ ನೂರಾರು ರೈತ ಮುಖಂಡರುಗಳು ಸಭೆಯಲ್ಲಿ ಭಾಗವಹಿಸಿದ್ದರು.

ಉದಯವಾಹಿನಿ ಚಿತ್ರ





ಕ್ರಸ್ಟ್ ಗೇಟ್‌ಗಳ ರಿಪೇರಿ ಮಾಡಲು ಈಗಾಗಲೇ ಕೇಂದ್ರ ಜಲ ನಿಗಮ ಮಂಡಳಿ ಅನುಮತಿಯೂ ನೀಡಿದ್ದು, ಜಲಾಶಯದ ಗೇಟ್‌ಗಳ ರಿಪೇರಿ ಕಾರ್ಯ ನಡೆಯಬೇಕಾದರೆ ಈಗಾಗಲೇ ಜಲಾಶಯದಲ್ಲಿ ಸಂಗ್ರಹವಿರುವ 80 ಟಿಎಂಸಿ ನೀರಿನಲ್ಲಿ 40 ಟಿಎಂಸಿ ನೀರು ಹೊರ ಹರಿಸಬೇಕಿದೆ, ಒಂದು ಬೆಳೆ ತ್ಯಾಗ ಮಾಡಿದರೆ ರೈತರು ಮುಂದಿನ ನೂರು ವರ್ಷಗಳ ಕಾಲ ನಿರಾತಂಕವಾಗಿ ರೈತರು ಬೆಳೆಗೆ ನೀರುಣಿಸಬಹುದು ಇದು ರೈತರ ಬಗ್ಗೆ ನನ್ನ ಕಾಳಜಿ. – **ಶಿವರಾಜ್ ಎಸ್ ತಂಗಡಗಿ**, ಸಚಿವ


**ಬೆಳೆಗೆ ನೀರು ಇಲ್ಲಾ ಎನ್ನುವುದು ಯಾವ ನ್ಯಾಯ**

## ನೀರಿಗಾಗಿ ಹೋರಾಟ ಪೂರ್ವಭಾವಿ ಸಭೆ

ಎಡದಂಡೆ ಭಾಗದ ತ್ರಿವಳಿ ಜಿಲ್ಲೆಗಳ ರೈತರು ನಿರಂತರ ಸಾಲದ ಸುಳಿಯಲ್ಲಿ ಸಿಲುಕಿ ಮತ್ತು ಅಕಾಲಿಕ ಮಳೆಯಿಂದಾಗಿ ಬೆಳೆ ನಷ್ಟದಿಂದಲೂ ರೈತರು ಸಂಕಷ್ಟದಲ್ಲಿದ್ದಾರೆ. ಇದೀಗ ಒಂದೇ ಬೆಳೆಯಾದರೆ ರೈತರ ಗತಿ ಏನು? ಎಂಬುದು ರೈತರ ಪ್ರಶ್ನೆ. ನಾಲ್ಕು ತಿಂಗಳು ಬೇಸಿಗೆ ಬೆಳೆಗೆ ನೀರು ಬಿಟ್ಟು ನಂತರ ಗೇಟ್ ಗಳ ರಿಪೇರಿ ಮಾಡಲಿ ಎಂದು ರೈತರ ಒತ್ತಾಯ. ಆ ಕಾರಣಕ್ಕಾಗಿ ಕನಕಗಿರಿಯ ಮಾಜಿ ಶಾಸಕ ಬಸವರಾಜ ದಡೇಸುಗೂರ್ ನೇತೃತ್ವದಲ್ಲಿ ಕಾರಟಗಿ ಪಟ್ಟಣದ ಸಿದ್ದೇಶ್ವರ ಬಯಲು ರಂಗ ಮಂದಿರದಲ್ಲಿ ನವೆಂಬರ್ 09 ರಂದು ರೈತ ಸಂಘಟನೆಗಳ, ರೈತರ ಜೊತೆ ನೀರಿಗಾಗಿ ಹೋರಾಟ ಪೂರ್ವಭಾವಿ ಸಭೆ ಜರುಗಿತು.

# ಜಿಲ್ಲಾಡಳಿತ-ಕಬ್ಬು ಬೆಳೆಗಾರರ ಸಭೆ ವಿಫಲ

ಉದಯವಾಹಿನಿ ಚಿತ್ರ



• **ಉದಯವಾಹಿನಿ, ಬೀದರ್**

ಕಬ್ಬಿಗೆ ಬೆಲೆ ನಿಗದಿಪಡಿಸುವ ಸಂಬಂಧ ಜಿಲ್ಲಾಡಳಿತವು ನಗರದಲ್ಲಿ ಮಂಗಳವಾರ ಕಬ್ಬು ಬೆಳೆಗಾರರೊಂದಿಗೆ ನಡೆಸಿದ ಸಭೆ ಯಾವುದೇ ನಿರ್ಧಾರಕ್ಕೆ ಬರದೇ ವಿಫಲಗೊಂಡಿತು. ಜಿಲ್ಲಾಡಳಿತ ತನ್ನ ನಿಲುವಿಗೆ ಅಂಟಿಕೊಂಡರೆ, ಕಬ್ಬು ಬೆಳೆಗಾರರು ತಮ್ಮ ಬೇಡಿಕೆ ಈಡೇರಿಸಬೇಕೆಂದು ಸಭೆಯಲ್ಲಿ ಪಟ್ಟು ಹಿಡಿದರು. ಇದರ ಪರಿಣಾಮ ಸಭೆ ಯಾವುದೇ ತೀರ್ಮಾನಕ್ಕೆ ಬರಲು ಸಾಧ್ಯವಾಗಲಿಲ್ಲ. ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅಧ್ಯಕ್ಷತೆಯಲ್ಲಿ ಸಭೆ ಜರುಗಿತು. ಪ್ರತಿ ಟನ್ ಕಬ್ಬಿಗೆ 2,750 ರೂ. ನೀಡಲಾಗುವುದು. ಇದರೊಂದಿಗೆ ಈಗಾಗಲೇ ಸಿಎಂ ಅವರು ಘೋಷಿಸಿದ 50 ರೂ. ಹೆಚ್ಚುವರಿಯೊಂದಿಗೆ ಜಿಲ್ಲೆಯ ಸಕ್ಕರೆ ಕಾರ್ಖಾನೆಗಳಿಂದ 50 ರೂ. ಹೆಚ್ಚುವರಿ ಕೊಡಿಸಲಾಗುವುದು ಎಂದು ಶಿಲ್ಪಾ ಶರ್ಮಾ ಹೇಳಿದರು. ಆದರೆ, ಕಬ್ಬು ಬೆಳೆಗಾರರು ಇದನ್ನು ಒಪ್ಪಲಿಲ್ಲ. ಹೀಗಾಗಿ ಸಭೆ ಯಾವುದೇ ತೀರ್ಮಾನಕ್ಕೆ ಬರಲಿಲ್ಲ ಎಂದು ಮೂಲಗಳು ತಿಳಿಸಿವೆ.

**ನ. 12ರಂದು ಹೆದ್ದಾರಿ ತಡೆ ಚಳವಳಿ:** ಪ್ರತಿ ಟನ್ ಕಬ್ಬಿಗೆ 2,850 ಕೊಡಲಾಗುವುದು ಎಂದು ಜಿಲ್ಲಾಡಳಿತ ತಿಳಿಸಿದೆ. ನಮ್ಮ ಬೇಡಿಕೆ ಕನಿಷ್ಠ 3,000 ರೂ. ಕೊಡಬೇಕೆನ್ನುವುದು ಇದೆ. ಆದರೆ, ಜಿಲ್ಲಾಡಳಿತ ನಮ್ಮ ಬೇಡಿಕೆ ಒಪ್ಪಿಕೊಂಡಿಲ್ಲ. ಬೇರೆ ಕಡೆಗಳಲ್ಲಿ ಕಬ್ಬಿನ ರಿಕವರಿ ಪ್ರಮಾಣ ಹೆಚ್ಚಿರುವುದರಿಂದ ಅಲ್ಲಿ ಹೆಚ್ಚು ದರ ನಿಗದಿಪಡಿಸಿದ್ದಾರೆ.

# ಕೊಂದವರು ಯಾರು ಆಂದೋಲನದ ಮುಖಂಡರಿಂದ ಸೌಜನ್ಯಾ ತಾಯಿಯ ಭೇಟಿ

• **ಉದಯವಾಹಿನಿ, ಮಂಗಳೂರು**



ಉದಯವಾಹಿನಿ ಚಿತ್ರ

ಧರ್ಮಸ್ಥಳ ಗ್ರಾಮದಲ್ಲಿ ಈ ಹಿಂದೆ ನಡೆದಿವೆ ಎನ್ನಲಾದ ಕೊಲೆಗಳ ಹಾಗೂ ಅಸಹಜ ಸಾವು ಪ್ರಕರಣಗಳ ಸಮಗ್ರ ತನಿಖೆಗೆ ಒತ್ತಾಯಿಸಿ, 'ಕೊಂದವರು ಯಾರು' ಎಂಬ ಪ್ರಶ್ನೆ ಮುಂದಿಟ್ಟುಕೊಂಡು ಆಂದೋಲನ ನಡೆಸುತ್ತಿರುವ ಮಹಿಳಾ ಮುಖಂಡರು ಪಾಂಗಳದಲ್ಲಿ ದಿ.ಸೌಜನ್ಯಾ ತಾಯಿ ಕುಸುಮಾವತಿ ಅವರನ್ನು ಮಂಗಳವಾರ ಭೇಟಿ ಮಾಡಿದರು.

ಸುದ್ದಿಗಾರರ ಜೊತೆ ಮಾತನಾಡಿದ ಈ ಆಂದೋಲನದ ಮುಖಂಡರಾದ ಚಂಪಾ, ನೊಂದ ಮಹಿಳೆಯರಿಗೆ ನ್ಯಾಯ ಸಿಗಬೇಕು ಎಂಬುದು ನಮ್ಮ ಆಂದೋಲನದ ಉದ್ದೇಶ. ಧರ್ಮ, ಜಾತಿಗಳನ್ನು ಮೀರಿ ಹೆಣ್ಣು ಮಕ್ಕಳಿಗೆ ನ್ಯಾಯ ಕೊಡಿಸಲು ಹೋರಾಡುತ್ತಿದ್ದೇವೆ. ನಮಗೆ ಬೇರಾವುದೇ ರಾಜಕೀಯ ಕಾರ್ಯಸೂಚಿಗಳಿಲ್ಲ. ದೇಶದಾದ್ಯಂತ ನಡೆಯುವ ಕೊಲೆ, ಅತ್ಯಾಚಾರ, ಮಹಿಳೆಯರ ಮೇಲಿನ ಹಿಂಸಾಚಾರವನ್ನು ಪ್ರಶ್ನೆ ಮಾಡುತ್ತಿದ್ದೇವೆ. ಧರ್ಮಸ್ಥಳ ಪ್ರಕರಣದಲ್ಲೂ ಯಾರು ಹೆಣವಾಗಿ, ಹೂತು ಹೋಗಿದ್ದಾರೋ ಅಂತಹವರ ಬದುಕಿಗೆ ನ್ಯಾಯ ಸಿಗಬೇಕು. ನೊಂದ ಕುಟುಂಬಗಳಿಗೆ ರಕ್ಷಣೆ ಸಿಗಬೇಕು ಎಂದು ಒತ್ತಾಯಿಸುತ್ತಿದ್ದೇವೆ. ನಮ್ಮ ದಾರಿ ನೇರ' ಎಂದರು. 'ಹಾಸನದ ಪ್ರಜ್ವಲ್ ರೇವಣ್ಣ ಪ್ರಕರಣದಲ್ಲಿ ವಿಶೇಷ ತನಿಖಾ ತಂಡ ಸಂತ್ರಸ್ತ ಮಹಿಳೆಯರಲ್ಲಿ ಭರವಸೆ ತುಂಬಿತ್ತು. ಅದೇ ರೀತಿ ಧರ್ಮಸ್ಥಳ ಪ್ರಕರಣದಲ್ಲೂ ನೊಂದ ಕುಟುಂಬಗಳಿಗೆ ಎಸ್‌ಐಟಿ ಭರವಸೆ ತುಂಬಬೇಕು. ಎಸ್‌ಐಟಿಯವರು ಕೆಲ ದೂರುಗಳನ್ನು ಸ್ವೀಕರಿಸಿಲ್ಲ ಎಂಬ ಆರೋಪ ಇದೆ. ಇದಕ್ಕೆ ಅವಕಾಶ ಕಲ್ಪಿಸಬಾರದು' ಎಂದರು.

ಜ್ಯೋತಿ ಅನಂತ ಸುಬ್ಬರಾವ್, ಶಶಿಕಲಾ ಶೆಟ್ಟಿ, ಗೀತಾ ಸುರತ್ಕಲ್, ಮಮತಾ, ಸುರೇಖಾ, ಶೈಲಜಾ, ಮಲ್ಲಿಗೆ ಮತ್ತಿತರರು ತಂಡದಲ್ಲಿದ್ದರು.

**ಎಸ್‌ಐಟಿಯನ್ನು ಮುಂದುವರಿಸಬೇಕು. ಈ ಬಗ್ಗೆ ಮುಖ್ಯಮಂತ್ರಿ ಅವರನ್ನು, ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರನ್ನು ಭೇಟಿಯಾಗಿ ಮನವಿ ಸಲ್ಲಿಸಿದ್ದೇವೆ. ಎಸ್ ಐಟಿಯು ಸಾಕ್ಷಿ ದೂರುದಾರ ನೀಡಿದ್ದ ದೂರಿನ ಬಗ್ಗೆ ಮಾತ್ರ ತನಿಖೆ ನಡೆಸಿದರೆ ಸಾಲದು. ಧರ್ಮಸ್ಥಳ ಗ್ರಾಮದಲ್ಲಿ ನಡೆದ ಅಸಹಜ ಸಾವು, ನಾಪತ್ತೆ ಪ್ರಕರಣಗಳ ಸಮಗ್ರವಾದ ತನಿಖೆ ನಡೆಸಬೇಕು. ಎಸ್‌ಐಟಿ ತನಿಖೆ ದಾರಿ ತಪ್ಪಿದರೆ ನೊಂದವರಿಗೆ ನ್ಯಾಯ ಸಿಗದು ಎಂದರು.**

# ಹೆಸರು ಕಾಳು ಖರೀದಿ ಷರತ್ತು ಸಡಿಲಿಕೆಗೆ ಆಗ್ರಹಿಸಿ ರೈತರಿಂದ ಟ್ರ್ಯಾಕ್ಟರ್ ರ‍್ಯಾಲಿ

• **ಉದಯವಾಹಿನಿ, ಬೈಲಹೊಂಗಲ**

ಉದಯವಾಹಿನಿ ಚಿತ್ರ



ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಬೆಂಬಲ ಬೆಲೆ ಯೋಜನೆಯಡಿ ರೈತರು ಬೆಳೆದ ಹೆಸರು, ಉದ್ದು ಖರೀದಿಗೆ ಸರ್ಕಾರ ಹಾಗೂ ನೆಫೆಡ್ ಸಂಸ್ಥೆಯವರು ವಿಧಿಸಿರುವ ತೇವಾಂಶ ಮತ್ತು ಕಾಳಿನ ಗುಣಮಟ್ಟ ಮಾನದಂಡ ಸಡಿಲಿಕೆಗೆ ಆಗ್ರಹಿಸಿ ತಾಲ್ಲೂಕಿನ ವಿವಿಧ ಗ್ರಾಮಗಳ ಸಹಸ್ರಾರು ರೈತರು ಬೃಹತ್ ಟ್ರ್ಯಾಕ್ಟರ್ ರ‍್ಯಾಲಿ ನಡೆಸಿ ಉಪವಿಭಾಗಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಬೆಳಿಗ್ಗೆ ದೊಡವಾಡ ಗ್ರಾಮದಿಂದ ದೊಡವಾಡ, ನನಗುಂಡಿಕೊಪ್ಪ, ಗುಡಿಕಟ್ಟಿ, ಬುಡರಕಟ್ಟಿ, ಕರೀಕಟ್ಟಿ, ಸಂಗ್ರೇಶಕೊಪ್ಪ, ಯಡಳ್ಳಿ, ಗೋವನಕೊಪ್ಪ ಸೇರಿದಂತೆ ವಿವಿಧ ಗ್ರಾಮಗಳ ರೈತರು ಶ್ರೀ ವೀರಭದ್ರೇಶ್ವರ ಕಲ್ಯಾಣ ಮಂಟಪಕ್ಕೆ ಬಂದಿಳಿದರು. ವೀರರಾಣಿ ಕಿತ್ತೂರು ಚನ್ನಮ್ಮನ ಅಶ್ವಾರೂಢ ಮೂರ್ತಿಗೆ ಹೂವು ಮಾಲೆ ಅರ್ಪಿಸಿ ಗೌರವ ಸಲ್ಲಿಸಿದರು. ಬಳಿಕ ರಸ್ತೆ ಮಧ್ಯ ಕುಳಿತು ಡೊಳ್ಳು, ಹಲಗೆ ಬಾರಿಸಿ ಹಸಿರು ಟವೆಲ್ ಕೈಯಲ್ಲಿ ಎತ್ತಿ ಹಿಡಿದು, ಬಾಯಿ ಬಡಿದುಕೊಂಡು ರಾಜ್ಯ ಸರ್ಕಾರ ವಿರುದ್ಧ ಘೋಷಣೆ ಕೂಗಿ ಆಕ್ರೋಶ ಹೊರ ಹಾಕಿದರು. ರೈತರು ರಸ್ತೆ ಬಂದ್ ಮಾಡಿದ್ದರಿಂದ ಸರದಿ ಸಾಲಿನಲ್ಲಿ ಸಾಕಷ್ಟು ವಾಹನಗಳು ನಿಂತಿದ್ದವು. ಎಪಿಎಂಸಿ ಗಣೇಶ ದೇವಸ್ಥಾನ, ಇಂಚಲ ಕ್ರಾಸ್, ಬಸ್ ನಿಲ್ದಾಣ, ಸಂಗೊಳ್ಳಿ ರಾಯಣ್ಣ ವೃತ್ತ, ಮುರಗೋಡ ರಸ್ತೆ ಮಾರ್ಗವಾಗಿ ಉಪವಿಭಾಗಾಧಿಕಾರಿ ಕಚೇರಿಗೆ ತೆರಳಿದರು. ಪ್ರತಿಭಟನಾ ಮೆರವಣಿಗೆಯುದ್ದಕ್ಕೂ ಡೊಳ್ಳು, ಭಜನೆ, ಹಲಗೆ ವಾದ್ಯಮೇಳದೊಂದಿಗೆ ಸರ್ಕಾರದ ವಿರುದ್ಧ ದಿಕ್ಕಾರ ಕೂಗಿದರು.

ರೈತ ಮುಖಂಡರಾದ ನಿಂಗಪ್ಪ ಚೌಡನ್ನವರ ಮಾತನಾಡಿ, 'ದೊಡವಾಡ ಗ್ರಾಮದಲ್ಲಿನ ಖರೀದಿ ಕೇಂದ್ರಕ್ಕೆ ನೇಮಿಸಿರುವ ಅಧಿಕಾರಿಗಳು ಕಳಪೆ ಗುಣಮಟ್ಟದ ನೆಪವೊಡ್ಡಿ ಹೆಸರು ಹಾಗೂ ಉದ್ದು ಖರೀದಿಗೆ ಹಿಂದೇಟು ಹಾಕುತ್ತಿದ್ದಾರೆ. ಮೊದಲೇ ಸಂಕಷ್ಟದಲ್ಲಿರುವ ರೈತರಿಗೆ ಇದು ಗಾಯದ ಮೇಲೆ ಬರೆ ಎಳೆದಂತಾಗಿದೆ.

ದೊಡವಾಡ ಹಾಗೂ ಸುತ್ತಲಿನ ಗ್ರಾಮಗಳ ಪಕ್ಕದಲ್ಲಿರುವ ಧಾರವಾಡ ಜಿಲ್ಲಾ ವ್ಯಾಪ್ತಿಯ ರೈತರಿಗೆ ಪ್ರತಿ ವರ್ಷ ಬೆಳೆಹಾನಿ ಪರಿಹಾರ, ಬೆಳೆ ವಿಮೆ ಮತ್ತು ಸರ್ಕಾರದ ಸೌಲಭ್ಯಗಳು ದೊರೆಯುತ್ತವೆ. ಆದರೆ ಬೆಳಗಾವಿ ಜಿಲ್ಲೆಯಲ್ಲಿರುವ ನಮಗೆ ಯಾವುದೇ ಸೌಲಭ್ಯಗಳ ನೆರವಿಲ್ಲ. ನಮ್ಮ ಗ್ರಾಮಗಳನ್ನು ಕೂಡಲೇ ಧಾರವಾಡ ಜಿಲ್ಲೆಗೆ ಸೇರಿಸಿಬೇಕು ಎಂದು ಆಗ್ರಹಿಸಿದರು.

**ಜಿಲ್ಲಾಧಿಕಾರಿಗಳು ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ ಸೂಕ್ತ ಪರಿಹಾರ ಘೋಷಿಸುವವರೆಗೂ ಪ್ರತಿಭಟನಾ ಸ್ಥಳ ಬಿಟ್ಟು ಕದಲುವುದಿಲ್ಲ. ಎ.ಸಿ ಕಚೇರಿಗೆ ಬೀಗ ಜಡಿದು ಅಹೋರಾತ್ರಿ ಹೋರಾಟ ಮಾಡಲಾಗವುದು.**
**– ನಿಂಗಪ್ಪ ಚೌಡನ್ನವರ ರೈತ ಮುಖಂಡ**

# ತಾಂತ್ರಿಕತೆ ಅಳವಡಿಕೆ, ರೈತರಿಗೆ ಕೃಷಿಯಲ್ಲಿ ಭವಿಷ್ಯ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಶಿವಮೊಗ್ಗ**

ಕೃಷಿಯಲ್ಲಿ ಅಧುನಿಕ ತಂತ್ರಜ್ಞಾನ ಅಳವಡಿಕೆಯಲ್ಲಿ, ಕೃಷಿ ಸಂಬಂಧಿತ ಇಲಾಖೆ, ಸಂಸ್ಥೆಗಳ ಸಂಶೋಧಕರ ಮಾರ್ಗದರ್ಶನ ಪಡೆಯುವಲ್ಲಿ ರೈತರು ಹಿಂದುಳಿಯುತ್ತಿದ್ದಾರೆ. ಅದು ಬದಲಾಗಬೇಕು. ಕೃಷಿಯಲ್ಲಿ ತಂತ್ರಜ್ಞಾನ ಅಳವಡಿಸಿಕೊಂಡರೆ ರೈತರು ಹಿಂದುಳಿಯಲು ಸಾಧ್ಯವೇ ಇಲ್ಲ ಎಂದು ಆದಿಚುಂಚನಗಿರಿ ಶಾಖಾ ಮಠದ ನಾದಮಯಾನಂದನಾಥ ಸ್ವಾಮೀಜಿ ಅಭಿಪ್ರಾಯಪಟ್ಟರು.

ಕೆಳದಿ ಶಿವಪ್ಪ ನಾಯಕ ಕೃಷಿ, ತೋಟಗಾರಿಕೆ ವಿಶ್ವವಿದ್ಯಾಲಯದ ಆವರಣದಲ್ಲಿ ಕೃಷಿ, ತೋಟಗಾರಿಕೆ ಮೇಳದ ಸಮಾರೋಪದಲ್ಲಿ ಅವರು ಮಾತನಾಡಿದರು. ದೇಶದ ಬೆಳವಣಿಗೆಯಲ್ಲಿ ರೈತರು ಮತ್ತು ಸೈನಿಕರದ್ದು ಪಾತ್ರ ದೊಡ್ಡದು. ಕೃಷಿಯಲ್ಲಿ ರೈತರು ಹಳೆಯ ಪದ್ಧತಿಯನ್ನೇ ಮುಂದುವರಿಸುವ ಬದಲು ವಿಜ್ಞಾನಿಗಳ ಸಂಶೋಧನೆಯ ಸಲಹೆಯನ್ನು ಅಳವಡಿಸಿಕೊಂಡರೆ ಯಶಸ್ಸು ಕಾಣಲು ಸಾಧ್ಯ ಎಂದರು. ತಾಯಿಯಂತಹ ಭೂಮಿ ಎಂದಿಗೂ ಅನ್ನದಾತರಿಗೆ ದ್ರೋಹ ಬಗೆಯುವುದಿಲ್ಲ. ಆದರೆ, ಅನ್ನ ನೀಡುವ ಭೂಮಿಯನ್ನೇ ಅತಿಯಾಸೆಯಿಂದ ಮಲಿನ ಮಾಡುತ್ತಿದ್ದೇವೆ. ಅಭಿವೃದ್ಧಿ ಹೆಸರಲ್ಲಿ ರಸಗೊಬ್ಬರ ಬಳಕೆ ಹೆಚ್ಚಳವಾಗುತ್ತಿದೆ. ಇದರಿಂದ ಭೂಮಿ ತನ್ನ ಸತ್ವ ಕಳೆದುಕೊಳ್ಳುವ ಜೊತೆಗೆ ಬೆಳೆಗಳ ಇಳುವರಿಯೂ ಕುಂಠಿತಗೊಳ್ಳುತ್ತಿದೆ. ಇದನ್ನು ರೈತರು ಮನಗಾಣಬೇಕಿದೆ ಎಂದು ಸಲಹೆ ನೀಡಿದರು.

ಸಂಶೋಧನಾ ವಿದ್ಯಾರ್ಥಿಗಳು ಕೃಷಿಯನ್ನು ಉಳಿಸುವ ಕೆಲಸ ಮಾಡಬೇಕಿದೆ. ಹವಾಮಾನ ವೈಪರೀತ್ಯ, ಅತಿವೃಷ್ಟಿ, ಅನಾವೃಷ್ಟಿ ಸೇರಿ ಬೆಳೆಗಳ ಹಾನಿಯಿಂದ ರೈತರು ಎದುರಿಸುತ್ತಿರುವ ಸಂಕಷ್ಟಗಳನ್ನು ದೂರ ಮಾಡಲು ಕೃಷಿ ಇಲಾಖೆ, ಕೃಷಿ ವಿಶ್ವವಿದ್ಯಾಲಯಗಳು ಕೈಜೋಡಿಸಬೇಕು ಎಂದು ಮನವಿ ಮಾಡಿದರು.

# ಮತಗಳವು ಆರಂಭಿಸಿದ್ದೇ ಕಾಂಗ್ರೆಸ್: ರೇಣುಕಾಚಾರ್ಯ

• **ಉದಯವಾಹಿನಿ, ದಾವಣಗೆರೆ**

ಮತಗಳ್ಳತನ ಮಾಡಿದ ಪರಿಣಾಮವಾಗಿ ಹಲವು ವರ್ಷ ದೇಶದಲ್ಲಿ ಆಡಳಿತ ನಡೆಸಲು ಕಾಂಗ್ರೆಸ್‌ಗೆ ಸಾಧ್ಯವಾಗಿದೆ. ಮತಗಳ್ಳತನ ಆರಂಭಿಸಿದ ಕಾಂಗ್ರೆಸ್, ಈ ಕುರಿತು ಮಾತನಾಡುವ ನೈತಿಕತೆಯನ್ನು ಕಳೆದುಕೊಂಡಿದೆ ಎಂದು ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಆರೋಪಿಸಿದರು. ಚುನಾವಣಾ ಅಕ್ರಮದಲ್ಲಿ ಭಾಗಿಯಾದ ಆರೋಪದಿಂದ ತಪ್ಪಿಸಿಕೊಳ್ಳಲು ಮಾಜಿ ಪ್ರಧಾನಿ ಇಂದಿರಾ ಗಾಂಧಿ ದೇಶದ ಮೇಲೆ ತುರ್ತು ಪರಿಸ್ಥಿತಿ ಹೇರಿದರು.



ಇಂದಿರಾ ಗಾಂಧಿ ಮೊಮ್ಮಗ ರಾಹುಲ್ ಗಾಂಧಿ ಚುನಾವಣಾ ಆಯೋಗದ ವಿರುದ್ಧ ಮಾಡುತ್ತಿರುವ ಆರೋಪಗಳು ಭೂತದ ಬಾಯಲ್ಲಿ ಭಗವದ್ಗೀತೆ ಕೇಳಿದಂತೆ ಇವೆ ಎಂದು ಪತ್ರಿಕಾಗೋಷ್ಠಿಯಲ್ಲಿ ದೂರಿದರು. ಮತಗಳ್ಳತನದ ಆರೋಪ ಮಾಡಿದ ಕಾಂಗ್ರೆಸ್ ಸಹಿ ಸಂಗ್ರಹ ಅಭಿಯಾನ ನಡೆಸುತ್ತಿದೆ. ಕಾಂಗ್ರೆಸ್‌ಗಿಂತ ಹೆಚ್ಚು ಸಹಿ ಸಂಗ್ರಹಿಸುವ ಸಾಮರ್ಥ್ಯ ಬಿಜೆಪಿಗೆ ಇದೆ. ಆಧಾರರಹಿತ ಆರೋಪ ಮಾಡುವುದನ್ನು ಬಿಟ್ಟು ಸರಿಯಾದ ದಾಖಲೆಗಳನ್ನು ಕೊಡಿ' ಎಂದು ಸವಾಲು ಹಾಕಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡುವಿನ ಅಸಮಾಧಾನ ಸ್ಫೋಟ ಆಗುವ ಹಂತ ತಲುಪಿದೆ.

ಬಿಹಾರ ಚುನಾವಣೆಯ ಫಲಿತಾಂಶ ಹೊರಬಿದ್ದ ಬಳಿಕ ಕರ್ನಾಟಕದ ರಾಜಕೀಯ ಚಿತ್ರಣ ಬದಲಾಗಲಿದೆ. ರಾಜ್ಯ ಸರ್ಕಾರ ಪತನವಾಗಲಿದೆ' ಎಂದು ಆರೋಪಿಸಿದರು.

# ಮೂಲಸೌಕರ್ಯಕ್ಕಾಗಿ ಅಹೋರಾತ್ರಿ ಧರಣಿ

• **ಉದಯವಾಹಿನಿ, ಜೊಯಿಡಾ**

ಉದಯವಾಹಿನಿ ಚಿತ್ರ



ತಾಲ್ಲೂಕಿಗೆ ಮೂಲಸೌಕರ್ಯಗಳನ್ನು ಒದಗಿಸುವುವಂತೆ ಆಗ್ರಹಿಸಿ ಕರ್ನಾಟಕ ರೈತ ಪ್ರಾಂತ ಸಂಘದ ಜೊಯಿಡಾ ಘಟಕದ ವತಿಯಿಂದ ಕಿರವತ್ತಿಯಿಂದ ಜೊಯಿಡಾ ತಹಶೀಲ್ದಾರ್ ಕಚೇರಿವರೆಗೆ ಪಾದಯಾತ್ರೆ ನಡೆಸಿ, ಮನವಿ ನೀಡಲಾಯಿತು.

ಘಟಕದ ಅಧ್ಯಕ್ಷ ಪ್ರೇಮಾನಂದ ವೇಳಿಪ, ಮೂಲಸೌಕರ್ಯಕ್ಕೆ ಹೋರಾಟ ಮಾಡುವ ದಿನಗಳು ಬಂದಿದ್ದು ದುಃಖಕರ. ಸರ್ಕಾರಕ್ಕೆ ನಾಚಿಕೆ ಆಗಬೇಕು. ಅನೇಕ ಬಾರಿ ಮನವಿ ನೀಡಿದರು ಪ್ರಯೋಜನ ವಾಗಿಲ್ಲ' ಎಂದು ಆರೋಪಿಸಿದರು. ಕೆಲವು ಗ್ರಾಮಗಳಿಗೆ ಸರಿಯಾದ ಬಸ್ ಸೌಕರ್ಯ, ಬಿಎಸ್‌ಎನ್‌ಎಲ್ ಟವರ್ ಇಲ್ಲ. ನ್ಯಾಯ ಬೆಲೆ ಅಂಗಡಿ ನೀಡಬೇಕು. ಅರಣ್ಯ ಪ್ಯಾಕೇಜ್ ಅಮಿಷ ಬಂದ್ ಮಾಡಬೇಕು. ಕುಣಬಿಗಳನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಬೇಕು' ಎಂದು ಆಗ್ರಹಿಸಿದರು. ಜಿಲ್ಲಾ ಅಧ್ಯಕ್ಷ ತಿಲಕ್ ಗೌಡ ಮಾತನಾಡಿ,' ಜೊಯಿಡಾ ಪ್ರದೇಶವನ್ನು ಸರ್ಕಾರ ಸಂಪೂರ್ಣ ಕಡೆಗಣಿಸಿದೆ ಸ್ವಾತಂತ್ರ್ಯ ನಂತರವೂ ಮೂಲಸೌಕರ್ಯಕ್ಕಾಗಿ ಹೋರಾಟ ಅನಿವಾರ್ಯ ಆಗಿದೆ. ಮುಂದೆ ಸ್ವಾತಂತ್ರ್ಯ ಹೋರಾಟ ಮಾದರಿಯಲ್ಲಿ ಹೋರಾಟ ಆಗಬೇಕು. ಭೂಮಿ ಹಕ್ಕು ಸಿಗಬೇಕು ಎಂದರು. ಜಿಲ್ಲಾ ಕಾರ್ಯದರ್ಶಿಗಳಾದ ಶ್ಯಾಮನಾಥ ನಾಯ್ಕ, ಸ್ಯಾಮಸನ್ ಮಾತನಾಡಿದರು.

ನಾಗೊಡಾ ಗ್ರಾಮ ಪಂಚಾಯಿತಿ ಅಧ್ಯಕ್ಷೆ ದಿವ್ಯಾ ನಾಯ್ಕ, ಸದಸ್ಯ ದಿಗಂಬರ ದೇಸಾಯಿ, ಪ್ರಮುಖರಾದ ವಿಕಾಸ ವೇಳಿಪ, ಸಂತೋಷ ವೇಳಿಪ, ಜಯಂತ ವೇಳಿಪ, ಮಾಬಳು ಕುಂಡಲಕರ, ಕೃಷ್ಣಾ ಮಿರಾಶಿ, ದಯಾನಂದ ಕುಮಗಾಳಕರ, ಪ್ರಧಾನ ಕಾರ್ಯದರ್ಶಿ ರಾಜೇಶ ಗಾವಡಾ ಭಾಗವಹಿಸಿದ್ದರು. ಇದಕ್ಕೂ ಮುನ್ನ ಕಿರವತ್ತಿಯಿಂದ 11 ಕಿ.ಮೀ. ಪಾದಯಾತ್ರೆಯಲ್ಲಿ ಬಂದ ಪ್ರತಿಭಟನಕಾರರು ತಹಶೀಲ್ದಾರ್ ಕಚೇರಿ ಮುಂಭಾಗದ ಖಾಲಿ ಇರುವ ಪ್ರದೇಶಗಳಲ್ಲಿ ಅಹೋರಾತ್ರಿ ಧರಣಿ ನಡೆಸಿದರು.

## ಮಿನಿ ನ್ಯೂಸ್

### ವೀರವನೀತೆ ವನಕೆ ಓಬವ್ವ ಜಯಂತಿ

ಉದಯವಾಹಿನಿ ಚಿತ್ರ



• **ಉದಯವಾಹಿನಿ, ಚಿಂಚೋಳಿ**

ಪಟ್ಟಣದ ಚಂದಾಪೂರದ ಕೃಷಿ ರೈತ ಸಂಪರ್ಕ ಕೇಂದ್ರದ ಎದುರು ಇರುವ ಒನಕೆ ಓಬವ್ವ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾಲಾರ್ಪಣೆ ಮಾಡಿ ವೀರವನೀತೆ ವನಕೆ ಓಬವ್ವ ಜಯಂತಿ ಆಚರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಸಮಾಜದ ಹಿರಿಯ ಮುಖಂಡ ರಮೇಶ ಯಾಕಾಪೂರ, ಗೌತಮ್ ಬೋಮ್ಮನಳ್ಳಿ, ಮಾರುತಿ ಗಂಜಿಗೇರಿ, ಶ್ರೀಮಂತ ಬಿ.ಕಟ್ಟೀಮನಿ, ಪಾಂಡುರಂಗ ಲೊಡನೊರ, ಅಮರ್ ಲೊಡನೂರ, ಕಾಶಿರಾಮ ತಳವಾರ, ಪ್ರಕಾಶ ಭಕ್ತಂಪಳ್ಳಿ, ಚೇತನ್ ನೀರಾಳಕರ, ಉಪನ್ಯಾಸಕಿ ಕವಿತಾ ಕೈಲಾಸ ಜ್ಯೋತಿ, ವೈಜನಾಥ ಮಿತ್ರೋ, ವಿಠ್ಠಲ ಕುಸಾಳೆ, ಸಿದ್ದು ರಂಗನೂರ, ಅನೇಕರಿದ್ದರು.

### ಬೆಳಗಾವಿಯಲ್ಲಿ ಐಟಿ-ಬಿಟಿ ಕಂಪನಿ ಸ್ಥಾಪಿಸದಿದ್ದರೆ ಹೋರಾಟ

• **ಉದಯವಾಹಿನಿ, ಬೆಳಗಾವಿ**

ಕಿತ್ತೂರು ಕರ್ನಾಟಕದಲ್ಲಿ ಪ್ರತ್ಯೇಕ ಸಚಿವಾಲಯ ಸ್ಥಾಪಿಸಬೇಕು. ಅಲ್ಲದೆ, ಈ ಭಾಗದಲ್ಲಿ ಐಟಿ-ಬಿಟಿ ಕಂಪನಿಗಳನ್ನು ಆರಂಭಿಸಬೇಕು. ಇಲ್ಲದಿದ್ದರೆ ಸುವರ್ಣ ವಿಧಾನಸೌಧದ ಮೇಲೆ ಕಿತ್ತೂರು ಕರ್ನಾಟಕ ಧ್ವಜ ಹಾರಿಸಬೇಕಾಗುತ್ತದೆ' ಎಂದು ಉತ್ತರ ಕರ್ನಾಟಕ ವಿಕಾಸ ವೇದಿಕೆ ಮತ್ತು ಉತ್ತರ ಕರ್ನಾಟಕ ಹೋರಾಟ ಸಮಿತಿ ಕಾರ್ಯಕರ್ತರು ಎಚ್ಚರಿಕೆ ಕೊಟ್ಟರು. ಬೆಳಗಾವಿಯನ್ನು ರಾಜ್ಯದ ಎರಡನೇ ರಾಜಧಾನಿಯಾಗಿ ಘೋಷಿಸಬೇಕು ಎಂಬುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಸುವರ್ಣ ವಿಧಾನಸೌಧದ ಎದುರು ಮಂಗಳವಾರ ಪ್ರತಿಭಟನೆ ನಡೆಸಿದ ಹೋರಾಟಗಾರರು, ರಾಜ್ಯ ಸರ್ಕಾರ ಉತ್ತರ ಕರ್ನಾಟಕ ಕಡೆಗಣಿಸುತ್ತಿದೆ ಎಂದು ಆಪಾದಿಸಿ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರಕ್ಕೆ ಈ ಭಾಗದ ಬಗ್ಗೆ ಕಾಳಜಿ ಇಲ್ಲ. ಒಂದುವೇಳೆ ಕಾಳಜಿ ಇದ್ದರೆ, ಕಾರ್ಯದರ್ಶಿಮಟ್ಟದ ಕಚೇರಿಗಳನ್ನು ಸ್ಥಳಾಂತರಿಸಿ ಸುವರ್ಣ ವಿಧಾನಸೌಧವನ್ನು ಆಡಳಿತ ಶಕ್ತಿಕೇಂದ್ರವಾಗಿಸಬೇಕು' ಎಂದು ಒತ್ತಾಯಿಸಿದರು. ಹೋರಾಟಗಾರ ಬಿ.ಡಿ.ಹಿರೇಮಠ, ಉದ್ಯೋಗ ಅರಸಿ ಈ ಭಾಗದ ಯುವಕರು ಬೆಂಗಳೂರು, ಮುಂಬೈ, ಪುಣೆಗೆ ಹೋಗುತ್ತಾರೆ. ಇದನ್ನು ತಪ್ಪಿಸಿ ಸ್ಥಳೀಯವಾಗಿಯೇ ಉದ್ಯೋಗವಕಾಶ ಕಲ್ಪಿಸುವ ದೃಷ್ಟಿಯಿಂದ ಉತ್ತರ ಕರ್ನಾಟಕದಲ್ಲಿ ಐಟಿ-ಬಿಟಿ ಕಂಪನಿಗಳನ್ನು ಸ್ಥಾಪಿಸಬೇಕು. ವಿಧಾನಮಂಡಲ ಚಳಿಗಾಲದ ಅಧಿವೇಶನಕ್ಕೂ ಮುನ್ನವೇ, ಸರ್ಕಾರ ಈ ವಿಚಾರವಾಗಿ ನಿರ್ಧಾರ ತಳೆಯಬೇಕು. ಇಲ್ಲದಿದ್ದರೆ ಸುವರ್ಣ ವಿಧಾನಸೌಧದ ಮೇಲೆ ಕಿತ್ತೂರು ಕರ್ನಾಟಕ ಧ್ವಜ ಹಾರಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

### ಸಾಲಕ್ಕಾಗಿ ಅಲೆದಾಡಿಸಬೇಡಿ: ಪಿ.ಸಿ. ಗದ್ದಿಗೌಡರ ಸೂಚನೆ

• **ಉದಯವಾಹಿನಿ, ಬಾಗಲಕೋಟೆ**

ಸರ್ಕಾರಿ ಇಲಾಖೆಗಳೊಂದಿಗೆ ಬ್ಯಾಂಕ್‌ಗಳು ಸಮನ್ವಯ, ಸಹಕಾರ ನೀಡಿದಾಗ ಮಾತ್ರ ಆರ್ಥಿಕ ಮತ್ತು ಭೌತಿಕ ಪ್ರಗತಿ ಸಾಧಿಸಲು ಸಾಧ್ಯವಾಗುತ್ತದೆ' ಎಂದು ಸಂಸದ ಪಿ.ಸಿ. ಗದ್ದಿಗೌಡರ ಹೇಳಿದರು. ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜರುಗಿದ ಲೀಡ್ ಬ್ಯಾಂಕ್ ಜಿಲ್ಲಾಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, 'ಸರ್ಕಾರದ ಯೋಜನೆಗಳನ್ನು ಘೋಷಿಸುವುದಷ್ಟೇ ಅಲ್ಲ, ಅವುಗಳನ್ನು ಅನುಷ್ಠಾನಗೊಳಿಸುವುದು ಕೂಡ ಮುಖ್ಯವಾಗಿರುತ್ತದೆ' ಎಂದರು. 'ಫಲಾನುಭವಿಗಳನ್ನು ಅನಗತ್ಯವಾಗಿ ಅಲೆದಾಡಿಸುವುದನ್ನು ಬಿಟ್ಟು, ಪ್ರಾಥಮಿಕ ಹಂತದಲ್ಲೇ ದಾಖಲೆಗಳನ್ನು ಪರಿಶೀಲಿಸುವ ಮೂಲಕ ಬ್ಯಾಂಕ್ ಅಧಿಕಾರಿಗಳು ಸಾಲ ಸೌಲಭ್ಯ ಕಲ್ಪಿಸಲು ಮುಂದಾಗಬೇಕು ಎಂದು ಸೂಚಿಸಿದರು. 'ಸರ್ಕಾರದ ವಿವಿಧ ಯೋಜನೆಯಡಿ ನೀಡಲಾಗುವ ಸಾಲ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಿದ ಫಲಾನುಭವಿಗಳಿಗೆ ಇಲಾಖೆಯ ಅಧಿಕಾರಿಗಳು ಮತ್ತು ಬ್ಯಾಂಕ್ ಅಧಿಕಾರಿ ಹಾಗೂ ಸಿಬ್ಬಂದಿ ಸೂಕ್ತ ಮಾರ್ಗದರ್ಶನ ನೀಡಬೇಕು. ಯೋಜನೆಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸಬೇಕು' ಎಂದು ಹೇಳಿದರು. ಜನರಿಗೆ ತೊಂದರೆ ಕೊಡದೆ, ಅರ್ಜಿಗಳನ್ನು ಸ್ವೀಕರಿಸಿ, ಪರಿಶೀಲಿಸಬೇಕು. ಯಾವ, ಯಾವ ದಾಖಲೆಗಳನ್ನು ಸಲ್ಲಿಸಬೇಕು ಎಂಬುದನ್ನು ಫಲಕಗಳಲ್ಲಿ ಪ್ರದರ್ಶಿಸಿ, ತಾಂತ್ರಿಕ ತೊಂದರೆಗಳಿದ್ದಲ್ಲಿ ತಿಳಿಸಿ, ಅವಶ್ಯಕತೆ ಇರುವವರಿಗೆ ಆದ್ಯತೆ ಮೇರೆಗೆ ಸಾಲ ಸೌಲಭ್ಯ ನೀಡಬೇಕು. ಸಾರ್ವಜನಿಕರಿಗೆ ತೊಂದರೆ ಆಗದಂತೆ ಕಾರ್ಯ ನಿರ್ವಹಿಸಬೇಕು ಎಂದು ಸೂಚಿಸಿದರು. ಇಲಾಖೆಯ ಅಧಿಕಾರಿಗಳು ಬ್ಯಾಂಕ್‌ಗಳಿಗೆ ತೆರಳಿ ಆಸಕ್ತಿ ವಹಿಸಿ ವಿವಿಧ ಯೋಜನೆಯಡಿ ಸಿಗುವ ಸಾಲ ಸೌಲಭ್ಯ ದೊರಕಿಸಿಕೊಡಿ, ಸಣ್ಣಪುಟ್ಟ ಕಾರಣಕ್ಕೆ ತಡೆ ಹಿಡಿಸುವ ಕೆಲಸ ಮಾಡಬೇಡಿ ಎಂದು ಅಂಬೇಡ್ಕರ್ ನಿಗಮ ಸೇರಿ ವಿವಿಧ ನಿಗಮಗಳ ಅಧಿಕಾರಿಗಳಿಗೆ ಅವರು ಎಚ್ಚರಿಸಿದರು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ, ಬಾಕಿ ಉಳಿದಿರುವ ಸಾಲದ ಅರ್ಜಿಗಳನ್ನು ಹದಿನೈದು ದಿನದೊಳಗಾಗಿ ವಿಲೇವಾರಿ ಮಾಡಬೇಕು ಎಂದು ಸೂಚಿಸಿದರು.

# 75 ವರ್ಷ ಮೇಲ್ಪಟ್ಟವರಿಗೆ ಮನೆಬಾಗಿಲಿಗೆ ಪಡಿತರ

## • ಇದೇ ತಿಂಗಳಿಂದ ಜಾರಿ • ಜಿಲ್ಲೆಯಲ್ಲಿದ್ದಾರೆ 1200ಕ್ಕೂ ಅರ್ಹ ಹಿರಿಯರು

• **ಉದಯವಾಹಿನಿ, ಕೊಪ್ಪಳ:**

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಅನ್ನಭಾಗ್ಯದ ಅಡಿ ಪ್ರತಿತಿಂಗಳು ಪಡಿತರ ನೀಡಲಾಗುತ್ತಿದ್ದು, ನವೆಂಬರ್‌ನಿಂದ 75 ವರ್ಷ ಮೇಲಿನ ಹಿರಿಯ ನಾಗರಿಕರಿಗೆ ಮನೆ ಬಾಗಿಲಿಗೆ ಪಡಿತರ ತಲುಪಿಸಲು ಸರ್ಕಾರ ಅನ್ನ ಸುವಿಧಾ ಯೋಜನೆ ಜಾರಿಗೆ ತಂದಿದೆ. ರಾಜ್ಯ ಸರ್ಕಾರದ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯು ಹಿರಿಯ ನಾಗರಿಕರ ಕಲ್ಯಾಣಕ್ಕಾಗಿ ಯೋಜನೆ ಆರಂಭಿಸಿದ್ದು, 75 ವರ್ಷ ಮೇಲ್ಪಟ್ಟವರು ಹಾಗೂ ಮನೆಯಲ್ಲಿ ಕೇವಲ ಒಬ್ಬ ಅಥವಾ ಇಬ್ಬರು ಹಿರಿಯರಷ್ಟೇ ಇರುವ ಕುಟುಂಬಕ್ಕೆ ಮನೆ ಬಾಗಿಲಿಗೆ ಸಮೀಪದ ನ್ಯಾಯಬೆಲೆ ಅಂಗಡಿಯವರೇ ಪಡಿತರ ತಲುಪಿಸುತ್ತಾರೆ. ಜಿಲ್ಲೆಯ ಆಯಾ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ವಾಸವಾಗಿರುವ 75ಕ್ಕಿಂತಲೂ ಹೆಚ್ಚು ವಯಸ್ಸಾದ ಹಿರಿಯ ನಾಗರಿಕರ ಪಟ್ಟಿಯನ್ನು ಜಿಲ್ಲಾಡಳಿತ ಸಿದ್ಧಪಡಿಸಿದ್ದು ಪ್ರಸ್ತುತ ಮಾಹಿತಿ ಪ್ರಕಾರ 1200ಕ್ಕಿಂತಲೂ ಹೆಚ್ಚು ಹಿರಿಯರು ಇದರ ಫಲಾನುಭವಿಗಳಾಗಿದ್ದಾರೆ.

ಈ ಯೋಜನೆಯಿಂದಾಗಿ ಹಿರಿಯರು ನ್ಯಾಯಬೆಲೆ ಅಂಗಡಿಗಳಿಗೆ ಓಡಾಡದೆ ಮನೆಯಲ್ಲೇ ಕುಳಿತು ಪಡಿತರ ಪಡೆಯಲು ಸಾಧ್ಯವಾಗುತ್ತದೆ. ಮನೆ ಬಾಗಿಲಿಗೆ ಪಡಿತರ ನೀಡುವ ನ್ಯಾಯಬೆಲೆ ಅಂಗಡಿಯ ಮಾಲೀಕರಿಗೆ ಪ್ರತಿ ಕುಟುಂಬಕ್ಕೆ ರಾಜ್ಯ ಸರ್ಕಾರ 50 ಪಾವತಿ ಮಾಡುತ್ತದೆ. ಈ ಕುರಿತು ಇದೇ ವರ್ಷ ಮೇನಲ್ಲಿ ಸರ್ಕಾರದಿಂದ ಆದೇಶವಾಗಿದ್ದು ಇದೇ ತಿಂಗಳಿಂದ ಅನುಷ್ಠಾನಕ್ಕೆ ಬಂದಿದೆ. ಯೋಜನೆಯ ಅನುಕೂಲ ಪಡೆದುಕೊಳ್ಳಲು ಅರ್ಹ ಹಿರಿಯ ನಾಗರಿಕರ ಮನೆಯಲ್ಲಿ ಯುವ ಸದಸ್ಯರು ವಾಸವಿರಬಾರದು. ಆಧಾರ್ ಕಾರ್ಡ್ ಮತ್ತು ಮೊಬೈಲ್ ಸಂಖ್ಯೆ ಪಡಿತರ ಕಾರ್ಡ್‌ಗೆ ಲಿಂಕ್ ಆಗಿರಬೇಕು ಎನ್ನುವ ನಿಯಮವಿದೆ.

**ಹಿರಿಯರಿಗೆ ಅನುಕೂಲ ಕಲ್ಪಿಸಲು ಈ ಯೋಜನೆ**

ಉದಯವಾಹಿನಿ ಚಿತ್ರ



**ನೋಂದಣಿ ಹೇಗೆ:** ಪ್ರತಿ ತಿಂಗಳ ಅಂತ್ಯದಲ್ಲಿ ಅರ್ಹ ಫಲಾನುಭವಿಗಳ ಪಡಿತರ ಕಾರ್ಡ್‌ಗೆ ಲಿಂಕ್ ಮಾಡಿಕೊಂಡ ಮೊಬೈಲ್ ಸಂಖ್ಯೆಗೆ ಎಸ್‌ಎಂಎಸ್ ಮೂಲಕ ಮಾಹಿತಿ ಕಳುಹಿಸಲಾಗುತ್ತದೆ. ನೋಂದಣಿ ಮಾಡಿಕೊಳ್ಳಲು ಮೊಬೈಲ್‌ನಲ್ಲಿಯೇ ಅವಕಾಶ ಇರಲಿದೆ. ಅಥವಾ ತಮ್ಮ ಸ್ಥಳೀಯ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿಯೂ ನೋಂದಾಯಿಸಿಕೊಳ್ಳಬಹುದು. ಅರ್ಹರಿಗೆ ಆಯಾ ತಿಂಗಳ 1ನೇ ತಾರೀಖಿನಿಂದ 5ರ ಒಳಗೆ ಸಮೀಪದ ನ್ಯಾಯಬೆಲೆ ಅಂಗಡಿಯಿಂದ ಪಡಿತರ ಪೂರೈಕೆಯಾಗುತ್ತದೆ ಎನ್ನುತ್ತಾರೆ ಅಧಿಕಾರಿಗಳು.

**ಎಪಿಎಲ್ ಆದ 4600 ಬಿಪಿಎಲ್ ಕಾರ್ಡ್‌ಗಳು:** ರಾಜ್ಯ ಸರ್ಕಾರ ಇತ್ತೀಚೆಗೆ ಬಿಪಿಎಲ್ ಪಡಿತರ ಕಾರ್ಡ್‌ಗಳನ್ನು ಪರಿಷ್ಕರಣೆ ಮಾಡಿದ್ದು ಜಿಲ್ಲೆಯಲ್ಲಿ ಅರ್ಹವಲ್ಲದ 4600 ಕಾರ್ಡ್‌ಗಳನ್ನು ಎಪಿಎಲ್ ಆಗಿ ಪರಿವರ್ತಿಸಿದೆ. ಅರ್ಹರಿದ್ದವರೂ ಬಿಪಿಎಲ್‌ನಿಂದ ಹೊರಗುಳಿದರೆ ದಾಖಲೆಗಳನ್ನು ಕೊಟ್ಟು ಮರಳಿ ಬಿಪಿಎಲ್ ಕಾರ್ಡ್ ಪಡೆದುಕೊಳ್ಳಲು ಅವಕಾಶವಿದೆ. ಈಗಾಗಲೇ ಎಲ್ಲಾ ಕಡೆಯಂತೆ ಜಿಲ್ಲೆಯಲ್ಲಿಯೂ ಬಿಪಿಎಲ್ ಕಾರ್ಡ್‌ಗಳ ಪರಿಷ್ಕರಣೆ ಮಾಡಲಾಗಿದೆ. ಅರ್ಹರ ಬಿಪಿಎಲ್ ಕಾರ್ಡ್ ರದ್ದಾಗಿದ್ದರೆ ದಾಖಲೆಗಳೊಂದಿಗೆ 45 ದಿನಗಳ ಒಳಗೆ ಪುನರ್ ಪಡೆದುಕೊಳ್ಳಬಹುದು ಎಂದು ಆಹಾರ ಮತ್ತು ನಾಗರಿಕ ಸರಬರಾಜ ಇಲಾಖೆಯ ಹೆಚ್ಚುವರಿ ಉಪನಿರ್ದೇಶಕರೂ ಆದ ಹೆಚ್ಚುವರಿ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ತಿಳಿಸಿದರು.

**ಹಿರಿಯರಿಗೆ ತಲುಪದ ಸೌಲಭ್ಯ:** ಹಿರಿಯರಿಗೆ ಅನುಕೂಲ ಕಲ್ಪಿಸಲು ಈ ಯೋಜನೆ ಜಾರಿಗೆ ತಂದಿದ್ದರೂ ಜಿಲ್ಲೆಯಲ್ಲಿ ಕೆಲವು ಪಡಿತರದಾರರು ಅರ್ಹ ಫಲಾನುಭವಿಗಳಿಗೆ ಮನೆ ಬಾಗಿಲಿಗೆ ಪಡಿತರ ತಲುಪಿಸದ ಮಾಹಿತಿ ಬಹಿರಂಗವಾಗಿದೆ.

ಗ್ಯಾರಂಟಿ ಅನುಷ್ಠಾನದ ಸದಸ್ಯರು ಜಿಲ್ಲೆಯ ವಿವಿಧೆಡೆ ಭೇಟಿ ನೀಡಿದಾಗ ಈ ವಿಷಯ ಗೊತ್ತಾಗಿದ್ದು ಕೆಲ ಪಡಿತರ ಅಂಗಡಿಯವರು ಮಾತ್ರ ನೀಡುತ್ತಿದ್ದು ಇನ್ನೂ ಕೆಲವರು ಕೊಡುತ್ತಿಲ್ಲ ಎನ್ನುವ ಅಂಶ ತಿಳಿದುಬಂದಿದೆ. ಈ ಕುರಿತು ಪ್ರತಿಕ್ರಿಯಿಸಿದ ರೆಡ್ಡಿ ಶ್ರೀನಿವಾಸ 'ಸರ್ಕಾರ ಆಶಯದಂತೆ ಎಲ್ಲರಿಗೂ ಮನೆಬಾಗಿಲಿಗೆ ಸೌಲಭ್ಯ ಕಲ್ಪಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗುವುದು. ಅವರೊಂದಿಗೆ ಶೀಘ್ರದಲ್ಲಿಯೇ ಸಭೆ ನಡೆಸುವೆ' ಎಂದು ತಿಳಿಸಿದರು.

**ಜಿಲ್ಲೆಯಲ್ಲಿ ಇದೇ ನವೆಂಬರ್‌ನಿಂದ 'ಅನ್ನ ಸುವಿಧಾ ಯೋಜನೆ' ಆರಂಭಿಸಲಾಗಿದೆ. ಅರ್ಹ ಫಲಾನುಭವಿಗಳ ಮನೆಗೆ ಪಡಿತರ ತಲುಪಿಸುವ ಬಗ್ಗೆ ಕಣ್ಣಾವಲು ವಹಿಸಲಾಗಿದೆ.**
**–ಸಿದ್ರಾಮೇಶ್ವರ, ಹೆಚ್ಚುವರಿ ಜಿಲ್ಲಾಧಿಕಾರಿ**

**ಹಿರಿಯರ ಅನುಕೂಲಕ್ಕಾಗಿ ರಾಜ್ಯ ಸರ್ಕಾರ ಆರಂಭಿಸಿರುವ ಯೋಜನೆ ಪೂರ್ಣ ಪ್ರಮಾಣದಲ್ಲಿ ಅರ್ಹರಿಗೆ ತಲುಪಬೇಕು. ಇದರ ಬಗ್ಗೆ ನಿರಂತರವಾಗಿ ಪರಿಶೀಲಿಸಲು ಗ್ಯಾರಂಟಿ ಯೋಜನೆ ಅನುಷ್ಠಾನದ ಜಿಲ್ಲೆಯ ಎಲ್ಲರಿಗೂ ಸೂಚಿಸಿದ್ದೇನೆ.**
**–ರೆಡ್ಡಿ ಶ್ರೀನಿವಾಸ, ಅಧ್ಯಕ್ಷ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರ**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ದ್ವೇಷ ಪ್ರೀತಿಗಿಂತ ಹೆಚ್ಚು ಶಕ್ತಿಶಾಲಿಯಾಗಿದ್ದು ದೇಹದ ಮೇಲೆ ಪ್ರಾಣಾಂತಿಕ ಪರಿಣಾಮ ಬೀರುವದರಿಂದ ನಿಮ್ಮ ದ್ವೇಷವನ್ನು ಸಾಯಿಸಲು ಒಂದು ಸಮರಸದ ಸ್ವಭಾವವನ್ನು ರೂಪಿಸಿಕೊಳ್ಳಿ. ದುಷ್ಟತೆಯು ಒಳಿತಿಗಿಂತ ಬೇಗ ವಿಜಯ ಸಾಧಿಸುತ್ತದೆಂದು ನೆನಪಿಡಿ. ತಾಯಿಯ ದುಂದುಗಾರಿಕೆಯನ್ನು ನೋಡಿ ಚಿಂತಿತರಾಗಬಹುದು.

**ವೃಷಭ** ಅನಾವಶ್ಯಕವಾಗಿ ವಾದ ಮಾಡಿ ನಿಮ್ಮ ಶಕ್ತಿಯನ್ನು ವ್ಯರ್ಥ ಮಾಡಬೇಡಿ. ಒಂದು ವಾದದಿಂದ ಏನನ್ನೂ ಪಡೆಯದಿದ್ದರೂ ಏನಾದರೂ ಕಳೆದುಕೊಳ್ಳುತ್ತೀರೆಂದು ನೆನಪಿಟ್ಟುಕೊಳ್ಳಿ. ಇಂದು ಹಣದ ನಷ್ಟವು ಸಂಭವಿಸಬಹುದು. ವಹಿವಾಟುಗಳಿಗೆ ಸಂಬಂಧಿಸಿದ ವಿಷಯಗಳಲ್ಲಿ ಎಷ್ಟು ಜಾಗರೂಕರಾಗಿರುತ್ತೀರೋ ಅಷ್ಟೇ ಉತ್ತಮ.

**ಮಿಥುನ** ಹೊರಾಂಗಣ ಚಟುವಟಿಕೆಗಳು ದಣವು ಮತ್ತು ಒತ್ತಡ ತರುತ್ತವೆ. ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ. ಯಾರಾದರೂ ನಿಮಗೆ ಹಾನಿ ಮಾಡಲು ಪ್ರಯತ್ನಿಸಬಹುದು ಬಲವಾದ ಶಕ್ತಿಗಳು ನಿಮ್ಮ ವಿರುದ್ಧ ಕೆಲಸ ಮಾಡುತ್ತಿರುತ್ತವೆ.

**ಕರ್ಕಾಟಕ** ಹೊರಾಂಗಣ ಕ್ರೀಡೆ ನಿಮ್ಮನ್ನು ಸೆಳೆಯುತ್ತದೆ–ಧ್ಯಾನ ಮತ್ತು ಯೋಗ ಲಾಭ ತರುತ್ತವೆ. ಇಂದು ಹಣಕಾಸಿನ ಭಾಗವು ಉತ್ತಮವಾಗಿರುತ್ತದೆ ಆದರೆ ಇದರೊಂದಿಗೆ ನೀವು ನಿಮ್ಮ ಹಣವನ್ನು ವ್ಯರ್ಥವಾಗಿ ಖರ್ಚು ಮಾಡದಂತೆ ನೋಡಿಕೊಳ್ಳಬೇಕು. ಇಂದು ನೀವು ಸೀಮಿತ ತಾಳ್ಮೆ ಹೊಂದಿರುತ್ತೀರಿ.

**ಸಿಂಹ** ನಿಮ್ಮ ದೈಹಿಕ ಬಲವನ್ನು ನಿರ್ವಹಿಸಲು ನೀವು ಕ್ರೀಡೆಯಲ್ಲಿ ಸಮಯ ಕಳೆಯುವ ಸಾಧ್ಯತೆಗಳಿವೆ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಪರಿಹರಿಸಬಹುದು ನೀವು ಹಣದಿಂದ ಲಾಭ ಪಡೆಯಬಹುದು. ಕುಟುಂಬ, ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ವೈಯಕ್ತಿಕ ವ್ಯವಹಾರಗಳು ನಿಯಂತ್ರಣದಲ್ಲಿರುತ್ತವೆ.

**ಕನ್ಯಾ** ಸಂತಸದ ಪ್ರಯಾಣ, ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ಇಂದಿನ ದಿನ ಯಾರಿಗೂ ಸಾಲ ನೀಡಬೇಡಿ ಮತ್ತು ಕೊಡುವುದು ಅಗತ್ಯವಾಗಿದ್ದರೆ ಕೊಡುವವರಿಂದ ಅವರು ಯಾವಾಗ ಹಣವನ್ನು ಮರುಪಾವತಿ ಮಾಡುತ್ತಾರೆಂದು ಬರವಣಿಗೆಯಲ್ಲಿ ತೆಗೆದುಕೊಳ್ಳಿ.

**ತುಲಾ** ಆರಾಮವಾಗಿರುವ ಭಾವನೆ ಹೊಂದಿರುತ್ತೀರಿ, ಆನಂದಿಸಲು ಮನೋಭಾವದಲ್ಲಿರುತ್ತೀರಿ. ಅನಿರೀಕ್ಷಿತ ಬಿಲ್‌ಗಳು ಹಣಕಾಸಿನ ಹೊರೆಯನ್ನು ಹೆಚ್ಚಿಸುತ್ತದೆ. ಮನೆಯ ಸದಸ್ಯರೊಬ್ಬರ ವರ್ತನೆಯಿಂದ ನೀವು ತೊಂದರೆಗೊಳಗಾಗಬಹುದು. ನೀವು ಅವರೊಂದಿಗೆ ಮಾತನಾಡುವ ಅಗತ್ಯವಿದೆ.

**ವೃಶ್ಚಿಕ** ಮನರಂಜನೆ ಕ್ರೀಡಾ ಚಟುವಟಿಕೆಗಳು, ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ಹಣವನ್ನು ಉಳಿಸುವ ಬಯಕೆ ಪೂರ್ಣಗೊಳ್ಳಬಹುದು. ಇಂದು ನೀವು ಸೂಕ್ತವಾಗಿ ಉಳಿಸಲು ಸಾಧ್ಯವಾಗುತ್ತದೆ. ಸಮುದ್ರದಾಚೆಯ ಸಂಬಂಧಿಯಿಂದ ಒಂದು ಉಡುಗೊರೆ ನಿಮ್ಮನ್ನು ಸಂತೋಷಪಡಿಸುತ್ತದೆ.

**ಧನಸ್ಸು** ಸಾಧ್ಯವಾದರೆ ದೀರ್ಘ ಪ್ರಯಾಣವನ್ನು ತಪ್ಪಿಸಿ. ಏಕೆಂದರೆ ನೀವು ಪ್ರಯಾಣಿಸು ತುಂಬಾ ದುರ್ಬಲರಾಗಿದ್ದೀರಿ, ಇದು ಮತ್ತಷ್ಟು ನಿಮ್ಮನ್ನು ದುರ್ಬಲಗೊಳಿಸುತ್ತದೆ. ಹಣವನ್ನು ಯೋಚಿಸದೆ, ಪರಿಗಣಿಸದೆ ಖರ್ಚುಮಾಡುವುದು, ನಿಮಗೆ ಎಷ್ಟು ನಷ್ಟ ಮಾಡಬಹುದು ಎಂಬುದು ಇಂದು ನಿಮಗೆ ಅರ್ಥವಾಗಬಹುದು.

**ಮಕರ** ರಕ್ತದೊತ್ತಡವಿರುವ ರೋಗಿಗಳು ತಮ್ಮ ರಕ್ತದೊತ್ತಡ ಕಡಿಮೆ ಮಾಡಲು ಮತ್ತು ಕೊಲೆಸ್ಟರಾಲ್ ನಿಯಂತ್ರಣದಲ್ಲಿರಿಸಲು ಕೆಂಪು ವೈನ್ ತೆಗೆದುಕೊಳ್ಳಬಹುದು. ಇದು ಅವರಿಗೆ ಮತ್ತಷ್ಟು ವಿಶ್ರಾಂತಿ ತರುತ್ತದೆ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು.

**ಕುಂಭ** ಆಹಾರದ ಸ್ವಾದ ಉಪ್ಪಿನಿಂದ ಬರುವಂತೆ ಅತೃಪ್ತಿಯಿದ್ದಾಗಲೇ ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು. ಇಂದು ನೀವು ಸೂಕ್ತವಾಗಿ ಉಳಿಸಲು ಸಾಧ್ಯವಾಗುತ್ತದೆ. ಹೊಸ ಸಂಬಂಧಗಳು ದೀರ್ಘಾವಧಿಯದ್ದಾಗಿರುತ್ತವೆ.

**ಮೀನ** ತುಂಬಾ ಪ್ರಯಾಣ ನಿಮಗೆ ದಣಿವಾಗಿಸುತ್ತದೆ ನೀವು ಜನರು ನಿಮ್ಮಿಂದ ಏನು ಬಯಸುತ್ತಾರೆಂದು ನಿಖರವಾಗಿ ತಿಳಿದಿರುವಂತೆ ತೋರುತ್ತದೆ –ಆದರೆ ಇಂದು ನಿಮ್ಮ ಖರ್ಚುಗಳಲ್ಲಿ ತುಂಬಾ ಉದಾರಿಯಾಗದಿರಲು ಪ್ರಯತ್ನಿಸಿ. ನಿಮ್ಮ ನೆರವು ಅಗತ್ಯವಿರುವ ಒಬ್ಬ ಸ್ನೇಹಿತರನ್ನು ಭೇಟಿ ಮಾಡಿ.

# “ಓಬವ್ವ” ಆದರ್ಶಪ್ರಾಯ ವೀರವನಿತೆ: ಅಪರ ಜಿಲ್ಲಾಧಿಕಾರಿ

## ಓಬವ್ವನವರ ಸ್ವಾಮಿನಿಷ್ಠೆ, ತ್ಯಾಗ, ಸಾಹಸ ಹಾಗೂ ಧೈರ್ಯ ಇಂದಿನ ಮಹಿಳೆಯರಿಗೆ ಸ್ಫೂರ್ತಿದಾಯಕವಾಗಬೇಕು

• **ಉದಯವಾಹಿನಿ, ಚಿತ್ರದುರ್ಗ**

**ಒನಕೆ ಓಬವ್ವ ಜಯಂತಿ**

ದೇಶ, ನಾಡು ಕಂಡ ವೀರ ಮಹಿಳೆ ಒನಕೆ ಓಬವ್ವ ಆದರ್ಶಪ್ರಾಯ ವೀರವನಿತೆ. ಓಬವ್ವನವರ ಸ್ವಾಮಿನಿಷ್ಠೆ, ತ್ಯಾಗ, ಸಾಹಸ, ಧೈರ್ಯ ಇಂದಿನ ಮಹಿಳೆಯರಿಗೆ ಸ್ಫೂರ್ತಿದಾಯಕವಾಗಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ವಾಲ್ಮೀಕಿ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ, ಸಂಸ್ಕೃತಿ ಇಲಾಖೆ, ನಗರಸಭೆ ವತಿಯಿಂದ ಮಂಗಳವಾರ ಆಯೋಜಿಸಲಾದ ಒನಕೆ ಓಬವ್ವ ಜಯಂತಿ ಆಚರಣೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಛಲವಾದಿ ಮಹಾಸಂಸ್ಥಾನ ಗುರುಪೀಠ ಟ್ರಸ್ಟ್‌ನ ಬಸವ ನಾಗಿದೇವ ಸ್ವಾಮಿಜಿಯವರು ದಿವ್ಯಸಾನಿಧ್ಯವಹಿಸಿದ್ದರು. ಪ್ರೊ.ಡಿ.ಎಚ್.ನಟರಾಜ್ ಅವರು ಒನಕೆ ಓಬವ್ವಳ ಕುರಿತು ಉಪನ್ಯಾಸ ನೀಡಿದರು.

**ಜಾನಪದ ಕಲಾತಂಡಗಳೊಂದಿಗೆ ಮೆರವಣಿಗೆ:** ಒನಕೆ ಓಬವ್ವ ಜಯಂತಿ ಅಂಗವಾಗಿ ನಗರದ ಐತಿಹಾಸಿಕ ಕೋಟೆ ಮುಂಭಾಗದಿಂದ ಒನಕೆ ಓಬವ್ವ ಭಾವಚಿತ್ರ ಮೆರವಣಿಗೆಗೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಚಾಲನೆ ನೀಡಿದರು. ನಗರದ ಕೋಟೆ ಮುಂಭಾಗದಿಂದ ಆರಂಭವಾದ ಮೆರವಣಿಗೆಯು ವಿವಿಧ ಜಾನಪದ ಕಲಾತಂಡಗಳೊಂದಿಗೆ ಆನೆಬಾಗಿಲು, ಗಾಂಧಿವೃತ್ತ, ಅಂಬೇಡ್ಕರ್ ವೃತ್ತ, ಒನಕೆ ಓಬವ್ವ ವೃತ್ತ, ಮದಕರಿ ವೃತ್ತದ ಮುಂಭಾಗದಿಂದ ವಾಲ್ಮೀಕಿ ಭವನದವರೆಗೆ ಭವ್ಯ ಮೆರವಣಿಗೆ ನಡೆಯಿತು. ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಮಹೆಬೂಬ್ ಜಿಲಾನಿ ಖುರೇಷಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಡಾ.ಶಿವಕುಮಾರ್, ತಹಶೀಲ್ದಾರ್ ಗೋವಿಂದರಾಜು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ್, ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಎಂ.ಕಾಳೇಸಿಂಗೆ, ನಗರಸಭೆ ಪೌರಾಯುಕ್ತೆ ಲಕ್ಷ್ಮೀ, ನಗರಸಭೆ ಮಾಜಿ ಅಧ್ಯಕ್ಷ ನಿರಂಜನ್ ಮೂರ್ತಿ, ಛಲವಾದಿ ಸಮುದಾಯದ ಮುಖಂಡರಾದ ಭಾರ್ಗವಿ ದ್ರಾವಿಡ್, ಶೇಷಪ್ಪ, ದಯಾನಂದ್, ಅಣ್ಣಪ್ಪಸ್ವಾಮಿ, ರವಿಕುಮಾರ್, ಸೋಮಶೇಖರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಇದ್ದರು.



ಉದಯವಾಹಿನಿ ಚಿತ್ರ

> ಚಿತ್ರದುರ್ಗದ ಕಲ್ಲಿನಕೋಟೆಯ ಇತಿಹಾಸವನ್ನು ರಾಮಚಾರಿ, ನಾಗರಹಾವು ಕನ್ನಡ ಚಲನಚಿತ್ರಗಳ ಮೂಲಕ ಎಲ್ಲರ ಗಮನ ಸೆಳೆದು, ಏಳು ಸುತ್ತಿನ ಕೋಟೆಯ ಒನಕೆ ಓಬವ್ವಳ ಇತಿಹಾಸವನ್ನು ಜಗದಗಲಕ್ಕೂ ಸಾರಿದೆ. ಒನಕೆ ಓಬವ್ವ ಎಲ್ಲರಿಗೂ ಎಂದೆಂದಿಗೂ ಮಾದರಿಯಾಗಿದ್ದಾರೆ. ಅವಳ ಧೈರ್ಯ, ಸಾಹಸಗಳನ್ನು ಎಲ್ಲಾ ಹೆಣ್ಣುಮಕ್ಕಳು ಅಳವಡಿಸಿಕೊಳ್ಳಬೇಕು. ಅದೇ ರೀತಿ ಯುವ ಜನತೆ ಸಮಾಜದ ಅಂಕು-ಡೊಂಕುಗಳನ್ನು ಸರಿಪಡಿಸಿ ಸಮಾಜ ಸುಧಾರಣೆಯೆಡೆಗೆ ಶ್ರಮಿಸಬೇಕು.
>
> – ಆರ್. ಶಿವಣ್ಣ ಗಂಜಿಗಟ್ಟೆ ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರ ಅಧ್ಯಕ್ಷ

> ಚಲನಚಿತ್ರ ನಟಿಯರಾದ ದಿವಂಗತ ಜಯಂತಿ ಅವರು ನಾಗರಹಾವು ಚಲನಚಿತ್ರದಲ್ಲಿ ಒನಕೆ ಓಬವ್ವ ಪಾತ್ರದಲ್ಲಿ ಬಹಳ ಪರಿಣಾಮಕಾರಿಯಾಗಿ ಓಬವ್ವರ ಧೈರ್ಯ, ಶಕ್ತಿ, ಸಾಹಸವನ್ನು ರಾಜ್ಯ ಹಾಗೂ ದೇಶಕ್ಕೆ ಚೆನ್ನಾಗಿ ಪರಿಚಯ ಮಾಡಿಕೊಟ್ಟಿರುವುದನ್ನು ಈ ಸಂದರ್ಭದಲ್ಲಿ ಸ್ಮರಿಸಿಕೊಳ್ಳಬೇಕಿದೆ.
>
> – ಪಿ. ರಘು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷ

# ಉಳ್ಳವರಿಗೆ ಉಚಿತವಾದ ಕಾನೂನು ನೆರವು: ರಂಗಸ್ವಾಮಿ ಜೆ

• **ಉದಯವಾಹಿನಿ, ಯಲಬುರ್ಗಾ**

ಕಾನೂನು ಬಗ್ಗೆ ತಿಳುವಳಿಕೆ ಇಲ್ಲದ ಜನರಿಗೆ ಕಾನೂನು ತಿಳುವಳಿಕೆ ಮತ್ತು ನೆರವನ್ನು ನೀಡುವದು ಕಾನೂನು ಸೇವಾ ಸಮಿತಿಯ ಮುಖ್ಯ ಉದ್ದೇಶ 1987ರಲ್ಲಿ ಕಾನೂನು ಸೇವಾ ಪ್ರಾಧಿಕಾರ ರಚನೆ ಮಾಡಿ 1995ರಲ್ಲಿ ಅಂಗೀಕರಿಸಲಾಯಿತು ಲೋಕ ಅದಾಲತ್ತುಗಳ ಮುಖಾಂತರ ರಾಜಿ ಸಂಧಾನವನ್ನು ಮಾಡುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರಾದ ರಂಗಸ್ವಾಮಿ ಜೆ ಹೇಳಿದರು.

ಪಟ್ಟಣದ ತಾಲ್ಲೂಕು ಕಾನೂನು ಸೇವಾ ಸಮಿತಿ ಯಲಬುರ್ಗಾ ವಕೀಲರ ಸಂಘ ಯಲಬುರ್ಗಾ ಅಭಿ ಯೋಜನೆ ಇಲಾಖೆ ಯಲಬುರ್ಗಾ ಇವರ ಸಂಯುಕ್ತ ಆಶ್ರಯದಲ್ಲಿ ರಾಷ್ಟ್ರೀಯ ಕಾನೂನು ಸೇವಾ ದಿನಾಚರಣೆ ಕಾರ್ಯಕ್ರಮದ ಉದ್ಘಾಟನೆಯನ್ನು ಹಿರಿಯ ಸಿವಿಲ್ ನ್ಯಾಯಾಧೀಶರಾದ ರಂಗಸ್ವಾಮಿ ಜೆ ಉದ್ಘಾಟಿಸಿದರು. ಇದರ ಕಾರ್ಯಕ್ರಮವನ್ನು ಯಲಬುರ್ಗಾದ ತಾಲ್ಲೂಕ ವಕೀಲರ ಸಂಘದ ಆವರಣದಲ್ಲಿ ಆಚರಿಸಲಾಯಿತು.



ಉದಯವಾಹಿನಿ ಚಿತ್ರ

ನ್ಯಾಯವನ್ನು ತ್ವರಿತವಾಗಿ ಒದಗಿಸುವದು ಸಮಾಜದಲ್ಲಿ ರಾಜಿ ಮುಖಾಂತರ ಶಾಂತಿಯನ್ನು ಕಾಪಾಡುವುದು ಮಹಿಳೆಯರಿಗೆ, 3 ಲಕ್ಷ ಒಳಗಿನ ಆದಾಯ ಉಳ್ಳವರಿಗೆ ಉಚಿತವಾದ ಕಾನೂನು ನೆರವು ಕೂಡ ನೀಡಲಾಗುತ್ತದೆ ಎಲ್ಲರೂ ಇದರ ಸದುಪಯೋಗ ಪಡಿಸಿಕೊಳ್ಳಬೇಕೆಂದು ಕರೆ ನೀಡಿದರು. ಕಾರ್ಯಕ್ರಮ ಉದ್ದೇಶಿಸಿ ಮಲ್ಲನಗೌಡ ಎಸ್ ಪಾಟೀಲ್ ಅವರು ಮಾತನಾಡಿ ಕಾನೂನು ಸೇವಾ ಸಮಿತಿ ಮುಖಾಂತರ ನ್ಯಾಯಾಲಯ ನಿಮ್ಮ ಮನೆ ಬಾಗಿಲಿಗೆ ಬಂದು ಕಾನೂನು ಬಗ್ಗೆ ತಿಳುವಳಿಕೆ ನೀಡುವುದು ಇದರ ಮುಖ್ಯ ಉದ್ದೇಶ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಕೀಲರ ಸಂಘದ ಅಧ್ಯಕ್ಷರಾದ ಎಸ್ ಎಸ್ ಹೊಂಬಳ್ ಮುಖ್ಯ ಅತಿಥಿಗಳಾಗಿ ಅಪಾರ ಸರಕಾರಿ ವಕೀಲರಾದ ಮಲ್ಲನಗೌಡ ಎಸ್ ಪಾಟೀಲ್ ಎಪಿಪಿ ರವಿ ಹುಣಸಿಮರದ ಹಿರಿಯ ವಕೀಲರಾದ ಬಿ ಎಂ ಶಿರೂರು ಎಸ್ಎನ್ ಶಾಗೋಟಿ ಕಾರ್ಯದರ್ಶಿಯಾದ ಮಾಂತೇಶ್ ಈಟಿ ಹಸನ್ ಸಾಬ್ ನದಾಫ್, ಬಸವರಾಜ್ ತುರಕಾಣಿ, ಶ್ರೀಮತಿ ಸಾವಿತ್ರಿ ಗೊಲ್ಲಾರ್ ಸಂಗಮೇಶ್ ವಾದಿ ಎಸ್ ಎಸ್ ಇಂಗಳದಾಳ ಹೆಚ್ ಹೆಚ್ ಹಿರೇಮನಿ ಕಾರ್ಯಕ್ರಮವನ್ನು ಎಎಂ ಪಾಟೀಲ್ ವಕೀಲರು ನಿರ್ವಹಿಸಿದರು.

# ದೆಹಲಿ ಬ್ಲಾಸ್ಟ್ ಬೆನ್ನಲ್ಲೇ ತಪಾಸಣೆ ವೇಳೆ ಜಾರ್ಖಂಡ್ ಮೂಲದ ಕಾರ್ಮಿಕರ ಬಳಿ ಗಾಂಜಾ ಪತ್ತೆ

• **ಉದಯವಾಹಿನಿ, ಕೊಪ್ಪಳ**

ದೆಹಲಿಯ ಕೆಂಪುಕೋಟೆಯ ಬಳಿ ಕಾರು ಬ್ಲಾಸ್ಟ್ ಬೆನ್ನಲ್ಲೇ ರಾಜ್ಯದೆಲ್ಲೆಡೆ ಹೈ ಅಲರ್ಟ್ ಘೋಷಿಸಲಾಗಿದೆ. ಈ ಹಿನ್ನೆಲೆ ಕೊಪ್ಪಳದಲ್ಲಿ ತಪಾಸಣೆ ಮಾಡುವಾಗ ಜಾರ್ಖಂಡ್ ಮೂಲದ ಎಂಟು ಕಾರ್ಮಿಕರ ಗುಂಪಿನಲ್ಲಿ ಗಾಂಜಾ ಪತ್ತೆಯಾಗಿದೆ. ಕೊಪ್ಪಳ ಬಸ್ ನಿಲ್ದಾಣದಲ್ಲಿ ಪೊಲೀಸ್ ಶ್ವಾನ, ಬಾಂಬ್ ನಿಷ್ಕ್ರಿಯ ದಳದ ಸಿಬ್ಬಂದಿ ತಪಾಸಣೆ ನಡೆಸಿದ್ದರು.

ಈ ವೇಳೆ ಯಲಬುರ್ಗಾದಲ್ಲಿ ಕಟ್ಟಡವೊಂದರ ಕೆಲಸಕ್ಕೆ ಬಂದಿದ್ದ ಜಾರ್ಖಂಡ್ ಮೂಲದ ಕಾರ್ಮಿಕರ ಬಳಿ ಗಾಂಜಾ ಪತ್ತೆಯಾಗಿದೆ. ಶ್ವಾನ ಬಿಂದು ತಪಾಸಣೆ ವೇಳೆ ಈ ಬ್ಯಾಗ್ ಬಳಿ ನಿಂತುಬಿಟ್ಟಿತ್ತು.

ಆಗ ತಪಾಸಣೆ ಮಾಡಿದಾಗ ಬ್ಯಾಗ್‌ನಲ್ಲಿ ಎರಡು ಪ್ಯಾಕೆಟ್ ಗಾಂಜಾ ಪತ್ತೆಯಾಗಿದೆ. ಎಂಟು ಕಾರ್ಮಿಕರ ಪೈಕಿ 6 ಜನರ ಬ್ಯಾಗ್‌ನಲ್ಲಿ ಗಾಂಜಾ ಸಿಕ್ಕಿದ್ದು, ಇನ್ನಿಬ್ಬರು ನಾಪತ್ತೆಯಾಗಿದ್ದಾರೆ. ಸದ್ಯ ಇಬ್ಬರಿಗಾಗಿ ಪೊಲೀಸರು ಹುಡುಕಾಟ ನಡೆಸಿದ್ದಾರೆ. ಕಾರ್ಮಿಕರು ಅದು ಗಾಂಜಾ ಅಲ್ಲ, ತಂಬಾಕು ಎಂದು ತಿಳಿಸಿದ್ದಾರೆ.

ಗಾಂಜಾ ಮಾದರಿಯ ತಂಬಾಕು ಎನ್ನಲಾಗುತ್ತಿದೆ. ಸದ್ಯ ಪೊಲೀಸರು ಮಾದಕ ವಸ್ತುಗಳನ್ನು ಜಪ್ತಿ ಮಾಡಿ, ಕಾರ್ಮಿಕರನ್ನು ವಶಕ್ಕೆ ಪಡೆದಿದ್ದಾರೆ ಇನ್ನೂ ಯಾದಗಿರಿಯಲ್ಲಿಯೂ ಪೊಲೀಸರ ಹೈ ಅಲರ್ಟ್ ಘೋಷಿಸಿದ್ದು, ನಾರಾಯಣಪುರ ಡ್ಯಾಂನಲ್ಲಿ ಖಾಕಿ ಕಟ್ಟೆಚ್ಚರ ವಹಿಸಿದೆ.

ಈ ಕುರಿತು ಯಾದಗಿರಿ ಎಸ್ಪಿ ಪೃಥ್ವಿಕ್ ಶಂಕರ್ ಮಾಹಿತಿ ನೀಡಿದ್ದು, ದೆಹಲಿಯಲ್ಲಿ ದುರ್ಘಟನೆ ಆಗಿದೆ, ನಮ್ಮ ಕಚೇರಿಯಿಂದ ಅಲರ್ಟ್ ಆಗಿರಲು ಸೂಚಿಸಿದ್ದಾರೆ. ರೈಲ್ವೆ ನಿಲ್ದಾಣ, ಬಸ್ ನಿಲ್ದಾಣ ಸೇರಿದಂತೆ ವಿವಿಧೆಡೆ ಅಲರ್ಟ್ ಆಗಿ ಇರಲು ಕ್ರಮವಹಿಸಿದ್ದೇವೆ. ಸೂಕ್ಷ್ಮ ಸ್ಥಳವಾದ ನಾರಾಯಣಪುರ ಡ್ಯಾಂಗೆ ಹೆಚ್ಚಿನ ಭದ್ರತೆ ವಹಿಸಿದ್ದೇವೆ ಎಂದು ತಿಳಿಸಿದ್ದಾರೆ

# ಸೋಯಾ, ಉದ್ದು, ಹೆಸರು, ಖರೀದಿ ಕೇಂದ್ರ ಸರ್ಕಾರದಿಂದ ಪ್ರಾರಂಭ


• **ಉದಯವಾಹಿನಿ, ಚಿಂಚೋಳಿ**

**ರೈತರ ಖಾತೆಗೆ ಹಣ ಜಮಾ**

ರೈತರ ಜಮೀನಿನ ಪಣಿಯಲ್ಲಿ ಸೋಯಾ,ಹೆಸರು,ಉದ್ದು ಬೆಳೆಗಳು ನೊಂದಣಿ ಮಾಡಿದ ರೈತರು ಆಯಾ ವ್ಯಾಪ್ತಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನಫಾರ್ಡ್ ಯೋಜನೆಯಲ್ಲಿ ಎಂಎಸ್‌ಪಿ ಪ್ರಕಾರ ಖರೀದಿ ಕೇಂದ್ರದಲ್ಲಿ ಮಾರಾಟ ಮಾಡಿದರೆ ಮಾರ್ಕೆಟ್ ದರಕ್ಕಿಂತ ಹೆಚ್ಚಿನ ಸರ್ಕಾರ ನಿಗಧಿಪಡಿಸದ ಬೆಂಬಲ ಬೆಲೆ ನೀಡಲಾಗುವುದು ರೈತರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಡಿಸಿಸಿ ಬ್ಯಾಂಕ್ ನಿರ್ದೇಶಕ ಗೌತಮ್ ವೈಜನಾಥ ಪಾಟೀಲ ಹೇಳಿದರು.

ತಾಲ್ಲೂಕಿನ ಹಸರಗುಂಡಗಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಖರೀದಿ ಕೇಂದ್ರವನ್ನು ಚಾಲನೆ ನೀಡಿ ಮಾತನಾಡಿದ ಅವರು,ರೈತರು ಬೆಳೆದ ಸೋಯಾ ಕ್ವಿಂಟಲ್‌ಗೆ 5350ರೂ, ಉದ್ದು 7850ರೂ, ಹೆಸರು 8750ರೂ.ಗೆ ಬೆಂಬಲ ಬೆಲೆಗೆ ಖರೀದಿಸಲಾಗುವುದು, ರೈತರು ಸದುಪಯೋಗ ಪಡೆದುಕೊಂಡು ಆರ್ಥಿಕವಾಗಿ ಸಬಲರಾಗಬೇಕು. ಜಿಲ್ಲೆಯಲ್ಲಿಯೇ ಸಹಕಾರ ಇಲಾಖೆ ಅತ್ಯಂತ ಹಿಂದುಳಿದಿದೆ ಅದಕ್ಕೆ ಆರ್ಥಿಕವಾಗಿ ಬಲ ನೀಡಲು ರೈತರು ಸಹಕರಿಸಬೇಕು, ಹಸರಗುಂಡಗಿ, ಚಿಮ್ಮಾನಚೋಡ್ ಪಿಕೆಪಿಎಸ್‌ಗೆ ಖರೀದಿ ಕೇಂದ್ರ ನೀಡಲು ಮೇಲಾಧಿಕಾರಿಗಳು ಹಿಂದೆಟ್ಟು ಹಾಕುತ್ತಿದ್ದರು ನಾನು ಮೇಲಾಧಿಕಾರಿಗಳಿಗೆ ಒತ್ತಡ ಹೇರಿ ಕ್ಷೇತ್ರದಲ್ಲಿ ಉದ್ದು ಹೆಸರು ಸೋಯಾ ರೈತರು ಹೆಚ್ಚು ಬೆಳೆದ ಕಾರಣ ಎರಡು ಪಿಕೆಪಿಎಸ್‌ಎಸ್‌ಗೆ ಖರೀದಿ ಕೇಂದ್ರ ನೀಡುವಂತೆ ಒತ್ತಡ ಹಾಕಿದಾಗ ಪರವಾನಿಗೆ ನೀಡಿದ್ದಾರೆ ಎಂದರು.

ಈಗಾಗಲೇ ಹಸರಗುಂಡಗಿ ಗ್ರಾಮದ ಪಿಕೆಪಿಎಸ್‌ಎಸ್ ನಲ್ಲಿ ಉದ್ದು ಬೆಳೆದ 150 ರೈತರು,182ರೈತರು ಹೆಸರು,ಸೋಯಾಬಿನ್ 153ರೈತರು ಒಟ್ಟಾರೆ 485ರೈತರು ಈಗಾಗಲೇ ನೊಂದಣಿ ಮಾಡಿದ್ದಾರೆ, ಡಿಬಿಟಿ ಮೂಲಕ ರೈತರ ಖಾತೆಗೆ 15ದಿನದಲ್ಲಿ ಜಮಾ ಆಗಲಿದೆ ಎಂದು ಹಸರಗುಂಡಗಿ ಪಿಕೆಪಿಎಸ್‌ಎಸ್ ಸಿಇಓ ಶ್ರೀಕಾಂತ ಮರಪಳ್ಳಿ ತಿಳಿಸಿದ್ದಾರೆ. ಹಸರಗುಂಡಗಿ ಪಿಕೆಪಿಎಸ್‌ಎಸ್ ಅಧ್ಯಕ್ಷ ಶ್ರೀಮಂತ ಬಕ್ಕಪ್ಪ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಗೋಪಾಲರಾವ ಕಟ್ಟಿಮನಿ, ಚಿತ್ರಶೇಖರ ಪಾಟೀಲ, ಭೀಮಶೆಟ್ಟಿ ಮುರುಡಾ, ಪಿತ್ತಾಂಬರ್ ಘಂಟಿ, ಪರ್ವತಕುಮಾರ ದೇಸಾಯಿ, ಶಿವಶರಣಪ್ಪ, ಆನಂದಕುಮಾರ, ತಿಪ್ಪಣ್ಣ, ಮಾಪಣ್ಣ, ಕಲ್ಲಪ್ಪ, ವೀರೇಶ, ಶಿವರಾಜಕುಮಾರ, ಸತೀಶ ಇಟಗಿ, ಅನೇಕರಿದ್ದರು.



ಉದಯವಾಹಿನಿ ಚಿತ್ರ

# ಒಂದೂವರೆ ಎಕರೆ ಜಮೀನು, ಮನೆಗಾಗಿ ತಾಯಿಯನ್ನೇ ಕೊಂದ ಮಗಳು

• **ಉದಯವಾಹಿನಿ, ಚಿಕ್ಕಮಗಳೂರು**

ಆಸ್ತಿಗಾಗಿ ಮಗಳೇ ಸಾಕು ತಾಯಿಯನ್ನು ಉಸಿರುಗಟ್ಟಿಸಿ ಕೊಲೆ ಮಾಡಿರುವ ಘಟನೆ ಚಿಕ್ಕಮಗಳೂರು ಜಿಲ್ಲೆ ಎನ್‌ಆರ್. ಪುರ ತಾಲ್ಲೂಕಿನ ಬಾಳೆಹೊನ್ನೂರು ಸಮೀಪದ ಬಂಡಿಮಠ ಗ್ರಾಮದಲ್ಲಿ ನಡೆದಿದೆ. ಮೃತ ತಾಯಿಯನ್ನು 62 ವರ್ಷದ ಕುಸುಮ ಎಂದು ಗುರುತಿಸಲಾಗಿದೆ. 35 ವರ್ಷದ ಸುಧಾ ತನ್ನ ಸಾಕು ತಾಯಿಯನ್ನ ಉಸಿರುಗಟ್ಟಿಸಿ ಕೊಲೆಗೈದ ಪಾಪಿ ಮಗಳು. ತಾಯಿಯನ್ನ ಕೊಲೆಗೈದಿದ್ದ ಮಗಳು ಆರಂಭದಲ್ಲಿ, ರಾತ್ರಿ ಮಲಗಿದ್ದವರು ಸಾವನ್ನಪ್ಪಿದ್ದಾರೆ ಎಂದು ಪೊಲೀಸರಿಗೆ ಕಥೆ ಕಟ್ಟಿದ್ದಳು. ಆದರೆ, ಪೊಲೀಸರ ತನಿಖೆಯ ಬಳಿಕ ತಾನೇ ಕೊಲೆ ಮಾಡಿರುವುದಾಗಿ ಒಪ್ಪಿಕೊಂಡಿದ್ದಾಳೆ.

ಮೂಲತಃ ಹಾವೇರಿ ಜಿಲ್ಲೆಯವರಾದ ಕುಸುಮ ಬಹಳ ವರ್ಷಗಳ ಹಿಂದೆಯೇ ಬಾಳೆಹೊನ್ನೂರಿನ ಕಾಫಿ ತೋಟದಲ್ಲಿ ಕೆಲಸ ಮಾಡಿಕೊಂಡು ಇಲ್ಲೇ ವಾಸವಿದ್ದರು. ಮೃತ ಕುಸುಮಾಗೆ ಮಕ್ಕಳಿಲ್ಲದ ಕಾರಣ ತಂಗಿಯ ಮಗುವನ್ನು ತಾನೇ ಸಾಕುತ್ತಿದ್ದಳು. ಹಾವೇರಿಯಲ್ಲಿರುವ ಒಂದೂವರೆ ಎಕರೆ ಜಮೀನು ಹಾಗೂ ಒಂದು ಮನೆ ನನ್ನ ಕೈತಪ್ಪುತ್ತೆ ಎಂದು ಸುಧಾ, ರಾತ್ರಿ ಮಲಗಿದ್ದ ತಾಯಿಗೆ ತಲೆ ದಿಂಬಿನಿಂದ ಮುಖಕ್ಕೆ ಒತ್ತಿ ಉಸಿರುಗಟ್ಟಿಸಿ ಕೊಲೆ ಮಾಡಿದ್ದಾಳೆ. ಆರೋಪಿಯನ್ನು ಬಂಧಿಸಿರುವ ಬಾಳೆಹೊನ್ನೂರು ಪೊಲೀಸರು ಆಕೆಯನ್ನ ಜೈಲಗಟ್ಟಿದ್ದಾರೆ. ಬಾಳೆಹೊನ್ನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕಾರವಾರದಲ್ಲಿ ಹೈ ಅಲರ್ಟ್

• **ಉದಯವಾಹಿನಿ, ಕಾರವಾರ**

ದೆಹಲಿಯಲ್ಲಿ ಸ್ಫೋಟ ಸಂಭವಿಸಿದ ಬೆನ್ನಲ್ಲೇ ಉತ್ತರಕನ್ನಡ ಜಿಲ್ಲೆಯಲ್ಲಿ ಹೈ ಅಲರ್ಟ್ ಘೋಷಣೆ ಮಾಡಲಾಗಿದೆ. ಸೂಕ್ಷ್ಮ ಪ್ರದೇಶಗಳಲ್ಲಿ ಪ್ಯಾಟ್ರೊಲಿಂಗ್‌ಗೆ ಎಸ್‌ಪಿ ದೀಪನ್ ಸೂಚನೆ ನೀಡಿದ್ದಾರೆ. ಕಾರವಾರ ಬಂದರು ಸೇರಿದಂತೆ ಜಿಲ್ಲೆಯ ವಿವಿಧ ಬಂದರು, ರೈಲ್ವೇ ಸ್ಟೇಷನ್, ಬಸ್ ಸ್ಟ್ಯಾಂಡ್ ಮುಂತಾದ ಸೂಕ್ಷ್ಮ ಪ್ರದೇಶಗಳಿಗೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಕಾರವಾರದ ಕ್ರಿಮ್ಸ್ ಆಸ್ಪತ್ರೆ ಆವರಣ, ಬಂದರು ಪ್ರದೇಶಗಳಲ್ಲಿ ಎಸ್‌ಪಿಯವರು ಖುದ್ದು ಪರಿಶೀಲನೆ ನಡೆಸಿದ್ದಾರೆ. ರೈಲ್ವೇ ನಿಲ್ದಾಣ, ಬಂದರು, ಬಸ್‌ಸ್ಟ್ಯಾಂಡ್ ಹಾಗೂ ಇತರ ಸೂಕ್ಷ್ಮ ಪ್ರದೇಶಗಳಲ್ಲಿ ಪರಿಶೀಲನೆಗೆ ಬಾಂಬ್ ಹಾಗೂ ಡಾಗ್ ಸ್ಕ್ವಾಡ್ ತಂಡಕ್ಕೆ ಸೂಚನೆ ನೀಡಲಾಗಿದೆ. ಕರ್ನಾಟಕ ಗಡಿ ಭಾಗದ ಗೋವಾ ಭಾಗದ ಮಾಜಾಳಿ, ರಾಮನಗರ ತಾಲ್ಲೂಕಿನ ಅನಮೋಡ್ ಭಾಗದಲ್ಲಿ ಜಿಲ್ಲೆಗೆ ಬರುವ ವಾಹನಗಳ ಪರಿಶೀಲನೆ ಸೂಚನೆ ನೀಡಲಾಗಿದೆ.



ಉದಯವಾಹಿನಿ ಚಿತ್ರ

ಕದಂಬ ನೌಕಾನೆಲೆ ಪ್ರದೇಶ ಹಾಗೂ ಕೈಗಾ ಅಣು ವಿದ್ಯುತ್ ಸ್ಥಾವರ ಪ್ರದೇಶದಲ್ಲೂ ಹೈ ಅಲರ್ಟ್ ಘೋಷಣೆ ಮಾಡಲಾಗಿದೆ. ಗೋವಾ, ಭಟ್ಕಳ, ರಾಮನಗರ ಗಡಿಯಿಂದ ಜಿಲ್ಲೆಗೆ ಬರುವ ಪ್ರತಿ ವಾಹನಗಳನ್ನೂ ಪರಿಶೀಲನೆ ನಡೆಸಲಾಗುತ್ತಿದೆ.

# ಹೋರಾಟ ಗೆದ್ದ ರೈತರಿಗೆ ಇಳುವರಿ ಬರೆ: ಕಾರ್ಖಾನೆಗಳಿಂದ ವಂಚನೆ

• **ಉದಯವಾಹಿನಿ, ಕಲಬುರಗಿ**

ಕಬ್ಬಿನ ಬೆಲೆ ನಿಗದಿಗೆ ಮೂಲವಾದ ಸಕ್ಕರೆ ಇಳುವರಿಯನ್ನು ಪ್ರತಿ ಕಾರ್ಖಾನೆಗಳು ಪ್ರತ್ಯೇಕವಾಗಿ ತೋರಿಸುವ ಮೂಲಕ ಸದ್ದಿಲ್ಲದೆ ರೈತರನ್ನು ವಂಚಿಸುವ ಕೆಲಸ ರಾಜ್ಯಾದ್ಯಂತ ಹಲವು ವರ್ಷಗಳಿಂದ ನಡೆಯುತ್ತಿರುವುದು ಅನ್ನದಾತರ ಆಕ್ರೋಶಕ್ಕೆ ಕಾರಣವಾಗಿದೆ. ಕಬ್ಬಿನ ಸಕ್ಕರೆ ಇಳುವರಿ ಘೋಷಿಸಬೇಕಾದರೆ ಆಹಾರ ಇಲಾಖೆಯ ಉಪನಿರ್ದೇಶಕರು, ಕೃಷಿ ಇಲಾಖೆ ಜಂಟಿ ನಿರ್ದೇಶಕರು, ರೈತರು ಹಾಗೂ ತಹಶೀಲ್ದಾರ್ ಸಮ್ಮುಖದಲ್ಲಿ ಕಾರ್ಖಾನೆಗಳು ಪರೀಕ್ಷೆ ನಡೆಸಬೇಕಾಗುತ್ತದೆ. ಆದರೆ, ಬಹುತೇಕ ಈ ಅಧಿಕಾರಿಗಳು ಹಾಗೂ ರೈತರನ್ನು ಹೊರಗಿಟ್ಟು ಕಾರ್ಖಾನೆಗಳು ತಮ್ಮ ಮೂಗಿನ ನೇರಕ್ಕೆ ಇಳುವರಿ ಘೋಷಿಸಿ ಅನ್ನದಾತರಿಗೆ ಅನ್ಯಾಯ ಮಾಡುತ್ತವೆ. ಜತೆಗೆ ಪ್ರತಿವರ್ಷ ಇಳುವರಿ ಪರೀಕ್ಷೆ ಮಾಡುತ್ತಿಲ್ಲ. ಒಂದು ಬಾರಿ ಘೋಷಿಸಿದ ಇಳುವರಿಯನ್ನೇ ಮೂರರಿಂದ ನಾಲ್ಕು ವರ್ಷ ಪರಿಗಣಿಸುತ್ತವೆ.



ಉದಯವಾಹಿನಿ ಚಿತ್ರ

ಪ್ರತಿ 15 ದಿನಕ್ಕೊಮ್ಮೆ ಇಳುವರಿ ಪರಿಶೀಲಿಸಬೇಕು ಎಂಬ ನಿಯಮ ಉಲ್ಲಂಘಿಸಲಾಗುತ್ತಿದೆ, ಎಂದು ರೈತರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸರಕಾರವು ಶೇ. 11.25 ಇಳುವರಿಯ ಟನ್ ಕಬ್ಬಿಗೆ 3,300 ರೂ. ದರ ನಿಗದಿಪಡಿಸಿದೆ. ಆದರೆ, ಸಕ್ಕರೆ ಕಾರ್ಖಾನೆಗಳು ಇಳುವರಿ ಸರಿಯಾಗಿ ತೋರಿಸದೇ ಇದ್ದರಿಂದ ಹಲವು ಜಿಲ್ಲೆಗಳ ರೈತರಿಗೆ ಸರಕಾರ ಘೋಷಿಸಿರುವ ದರ ಸಿಗದೆ ವಂಚನೆಗೆ ಒಳಗಾಗುತ್ತಿದ್ದಾರೆ.

ಹೀಗಾಗಿ ಬಾಗಲಕೋಟೆ ಜಿಲ್ಲೆಯ ಮುಧೋಳದಲ್ಲಿ ರೈತರು ಪ್ರತಿ ಟನ್‌ಗೆ 3,500 ರೂ. ದರ ನಿಗದಿ ಮಾಡಬೇಕು, ಸಕ್ಕರೆ ರಿಕವರಿಯನ್ನು ಪರಿಗಣಿಸಿದರೆ ರೈತರಿಗೆ ಅನ್ಯಾಯವಾಗುತ್ತದೆ ಎಂದು ಪ್ರತಿಭಟನೆ ಮುಂದುವರಿಸಿದ್ದಾರೆ.

ರಾಜ್ಯದಲ್ಲಿ 81 ಸಕ್ಕರೆ ಕಾರ್ಖಾನೆಗಳಿವೆ. ಇಳುವರಿ ಮಾಪನದಲ್ಲಿ ಬಹುಪಾಲು ಕಾರ್ಖಾನೆಗಳು ವಂಚನೆ ಎಸಗುತ್ತವೆ, ಎಂದು ರೈತರು ಆರೋಪಿಸಿದ್ದಾರೆ. ಶೇ. 11.25 ಇಳುವರಿಗೆ 3,300 ರೂ ಮತ್ತು ಶೇ. 10.25ಕ್ಕೆ 3,100 ರೂ. ದರವನ್ನು ಸರಕಾರ ನಿಗದಿ ಮಾಡಿದೆ. ರಾಜ್ಯದ ಬಹುತೇಕ ಕಾರ್ಖಾನೆಗಳ ವ್ಯಾಪ್ತಿಯಲ್ಲಿ ಉತ್ತಮ ಗುಣಮಟ್ಟದ ಕಬ್ಬು ಬೆಳೆಯುತ್ತಿದ್ದರೂ ಶೇ. 9ರಷ್ಟು ಇಳುವರಿ ಮಿತಿ ದಾಟುವುದಿಲ್ಲ. ಇದು ಕಾರ್ಖಾನೆಗಳು ವ್ಯವಸ್ಥಿತವಾಗಿ ಮಾಡುವ ಮೋಸ, ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಮದ್ಯ ಮಾರಾಟಕ್ಕೆ ಬ್ರೇಕ್ ಹಾಕುವಂತೆ ಹಳೇಕಲ್ಲಳ್ಳಿ ಗ್ರಾಮಸ್ಥರಿಂದ ಹೋರಾಟ

• **ಉದಯವಾಹಿನಿ, ಚಿತ್ರದುರ್ಗ**

ಐತಿಹಾಸಿಕ ಪ್ರವಾಸಿತಾಣ ಎನಿಸಿರುವ ಚಿತ್ರದುರ್ಗದ ಹಳ್ಳಿಹಳ್ಳಿಗಳಲ್ಲೂ ಅಕ್ರಮ ಮದ್ಯ ತಾಂಡವವಾಡುತ್ತಿದೆ ಎಂಬ ಆರೋಪ ಕೇಳಿಬಂದಿದೆ. ಹೀಗಾಗಿ ಅಕ್ರಮ ಮದ್ಯ ಸೇವಿಸಿ ಜೀವಕಳೆದುಕೊಳ್ಳುತ್ತಿರುವವರ ಸಂಖ್ಯೆ ಹೆಚ್ಚಾದ ಪರಿಣಾಮ ರೊಚ್ಚಿಗೆದ್ದ ಜನರು, ಅಕ್ರಮ ಮದ್ಯ ಮಾರಾಟ ಮಾಡುತ್ತಿದ್ದ ಡಾಬಾಗೆ ಮುತ್ತಿಗೆ ಹಾಕಿ ಮದ್ಯವನ್ನೆಲ್ಲಾ ಬೀದಿಗೆಸೆದು ಆಕ್ರೋಶ ಹೊರಹಾಕಿರುವ ಪ್ರಕರಣ ಚಿತ್ರದುರ್ಗ ತಾಲ್ಲೂಕಿನ ಹಲೇಕಲ್ಲಳ್ಳಿ ಬಳಿ ಬೆಳಕಿಗೆ ಬಂದಿದೆ. ಈ ಗ್ರಾಮದ ಸುತ್ತಮುತ್ತಲ ಗ್ರಾಮಗಳಾದ ಕೆಳಗಳಟ್ಟಿ, ಹೊಸಕಲ್ಲಳ್ಳಿ ಮತ್ತು ಜೋಡಿಚಿಕ್ಕೇನಳ್ಳಿ ಸೇರಿದಂತೆ ಎಲ್ಲಾ ಗ್ರಾಮಗಳಲ್ಲೂ ಈ ಹಿಂದೆ, ಅಕ್ರಮ ಮದ್ಯ ಮಾರಾಟ ಎಗ್ಗಿಲ್ಲದೇ ನಡೆಯುತ್ತಿತ್ತು. ರಸ್ತೆಬದಿಯ ಗೂಡಂಗಡಿ ಹಾಗೂ ಕೆಲ ವಾಸದ ಮನೆಗಳಲ್ಲೂ ಎಣ್ಣೆ ವ್ಯಾಪಾರ ನಿರ್ಭಯವಾಗಿ ನಡೆಯುತ್ತಿತ್ತು. ಹೀಗಾಗಿ ಶಾಲಾ, ಕಾಲೇಜು ವಿದ್ಯಾರ್ಥಿಗಳಿಂದ ಹಿಡಿದು ವಯೋವೃದ್ಧರವರೆಗೆ ಎಣ್ಣೆಯ ದಾಸರಾದ ಪರಿಣಾಮ, ಕಳೆದ ಮೂರು ತಿಂಗಳಿಂದ ಈವರೆಗೆ ಹಲವು ಸಾವುನೋವುಗಳಾಗಿವೆ. ಇದರಿಂದಾಗಿ ಎಲ್ಲಾ ಗ್ರಾಮಗಳಲ್ಲೂ ಮದ್ಯ ಮಾರಾಟ ಮಾಡದಂತೆ ಗ್ರಾಮಸ್ಥರು ಖಡಕ್ ವಾರ್ನಿಂಗ್ ನೀಡಿದ್ದು, ಮದ್ಯ ಮಾರಾಟವನ್ನು ಈ ಗ್ರಾಮಗಳಲ್ಲಿ ಸಂಪೂರ್ಣ ನಿಷೇಧಿಲಾಗಿದೆ. ಆದರೆ ಚಿತ್ರದುರ್ಗ ಹಾಗೂ ಚಳ್ಳಕೆರೆ ಮಾರ್ಗದ ಮಧ್ಯೆ ಇರುವ ಖಾಸಗಿ ಡಾಬಾವೊಂದರಲ್ಲಿ ಎಣ್ಣೆ ಮಾರಾಟ ಮಿತಿಮೀರಿದ್ದು, ಅಲ್ಲಿಗೆ ತೆರಳಿ ಇಲ್ಲಿನ ಗ್ರಾಮಸ್ಥರು ಮದ್ಯ ಸೇವಿಸುತ್ತಿದ್ದ ಪರಿಣಾಮ, ಇಂದು ಯುವಕರು ಹಾಗೂ ಮಹಿಳೆಯರ ನೇತೃತ್ವದಲ್ಲಿ ಡಾಬಾಗೆ ಮುತ್ತಿಗೆ ಹಾಕಿ, ಡಾಬಾದಲ್ಲಿ ಮಾರಲು ತಂದಿದ್ದ ಮದ್ಯವನ್ನು ಬೀದಿಗೆಸೆದು ಆಕ್ರೋಶ ಹೊರಹಾಕಿದರು. ಬಳಿಕ ಆ ಮದ್ಯವನ್ನು ಚಿತ್ರದುರ್ಗ ಪೊಲೀಸರಿಗೆ ಒಪ್ಪಿಸಿ, ಮತ್ತೆ ಈ ಡಾಬಾದಲ್ಲಿ ಮದ್ಯ ಮಾರಾಟ ಮಾಡದಂತೆ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ. ಇನ್ನು ಈ ಬಗ್ಗೆ ಹಲವು ಬಾರಿ ಪೊಲೀಸ್ ಹಾಗೂ ಅಬಕಾರಿ ಇಲಾಖೆಗೆ ದೂರು ನೀಡಿದರೂ ಯಾವುದೇ ಪ್ರಯೋಜನ ಆಗಿಲ್ಲ ಎಂದು ಸ್ಥಳೀಯರು ಕಿಡಿಕಾರಿದರು. ಈ ವೇಳೆ ಸ್ಥಳಕ್ಕೆ ದೌಡಾಯಿಸಿದ್ದ ಚಿತ್ರದುರ್ಗ ಗ್ರಾಮಾಂತರ ಠಾಣೆ ಪೊಲೀಸರು, ಈ ಡಾಬಾದಲ್ಲಿ ಮಾರಾಟ ಮಾಡಲು ಅಕ್ರಮವಾಗಿ ಸಂಗ್ರಹಿಸಿದ್ದ ಅಂದಾಜು 10 ಸಾವಿರ ರೂ. ಮೌಲ್ಯದ ಎಣ್ಣೆಯನ್ನು ವಶಪಡಿಸಿಕೊಂಡು, ಕಾನೂನು ಕ್ರಮ ಕೈಗೊಳ್ಳುವ ಭರವಸೆ ನೀಡಿದರು.



ಡಾಬಾಗೆ ಮುತ್ತಿಗೆ ಹಾಕಿ ಆಕ್ರೋಶ

ಉದಯವಾಹಿನಿ ಚಿತ್ರ

# ಕರ್ನಾಟಕ ಕರಾವಳಿಯಲ್ಲಿ 3 ಬೋಟ್‌ಗಳ ಮೂಲಕ ಕಣ್ಗಾವಲು



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಉಡುಪಿ**

ದೆಹಲಿಯಲ್ಲಿ ಸ್ಫೋಟ ಸಂಭವಿಸಿದ ಹಿನ್ನೆಲೆಯಲ್ಲಿ ದೇಶಾದ್ಯಂತ ಕಟ್ಟೆಚ್ಚರ ವಹಿಸಲಾಗಿದೆ. ದೇಶದ ಗಡಿ ಕರಾವಳಿ ತೀರದಲ್ಲಿ ಕಾವಲು ಪಡೆಯ ಪೊಲೀಸರು ಕಣ್ಗಾವಲು ಇರಿಸಿದ್ದಾರೆ. 9 ಬೋಟುಗಳಲ್ಲಿ ನಿರಂತರ ಪೆಟ್ರೋಲಿಂಗ್ ಮಾಡಲಾಗುತ್ತದೆ. ಮೀನುಗಾರರಿಗೂ ಪ್ರತಿಯೊಂದು ಚಲನವಲದ ಮೇಲೆ ಗಮನ ಇರಿಸುವಂತೆ ಸೂಚಿಸಲಾಗಿದೆ. ಕರಾವಳಿ ಕಾವಲು ಪಡೆಯ 9 ಬೋಟ್‌ಗಳು 300 ಕಿ.ಮೀ ಆಸುಪಾಸಿನಲ್ಲಿ ಗಸ್ತು ತಿರುಗುತ್ತಿವೆ. ಸಮುದ್ರ ತೀರದಲ್ಲಿ ಪೆಟ್ರೋಲಿಂಗ್ ನಡೆಯುತ್ತಿದೆ. ಮೂರು ಹಂತಗಳಲ್ಲಿ ಸೆಕ್ಯೂರಿಟಿ ಕೊಡಲಾಗಿದೆ. ಮೀನುಗಾರರಿಗೆ ವೈಯರ್‌ಲೆಸ್ ಮೂಲಕ ಸಂದೇಶ ರವಾನೆ ಮಾಡಲಾಗಿದೆ. ಗುಜರಾತ್, ಮುಂಬೈ, ಮಹಾರಾಷ್ಟ್ರ ಗಡಿ ಭಾಗಕ್ಕೆ ಡೀಪ್ ಫಿಶಿಂಗ್ ಮಾಡುತ್ತಿರುವ ಮೀನುಗಾರರಿಗೆ ಸಿಎಸ್‌ಪಿ ಪೊಲೀಸರು ಸಂದೇಶ ರವಾನಿಸಿದ್ದಾರೆ. ಯಾವುದಾದರೂ ಅನುಮಾನಾಸ್ಪದ ಬೋಟ್ ಕಂಡುಬಂದರೆ, ತಕ್ಷಣ ಮಾಹಿತಿ ಕೊಡಬೇಕು. ದಾಖಲೆ ರವಾನಿಸಬೇಕು ಎಂದು ಸೂಚನೆ ಕೊಡಲಾಗಿದೆ. ಕಾಪು ಮತ್ತು ಮಲ್ಪೆ ಬೀಚ್‌ನಲ್ಲಿ ಸಾವಿರಾರು ಪ್ರವಾಸಿಗರು ಬರುತ್ತಾರೆ. ಹೀಗಾಗಿ, ಅಲ್ಲಿಯೂ ಹೈಅಲರ್ಟ್ ಘೋಷಿಸಲಾಗಿದೆ. ಕೋಸ್ಟ್ ಗಾರ್ಡ್ ಪೊಲೀಸರು ಶಸ್ತ್ರಸಜ್ಜಿತವಾಗಿ ಸಮುದ್ರದಲ್ಲಿ ಗುಸ್ತು ತಿರುಗುತ್ತಿದ್ದಾರೆ.

## ಲಿಂಗಾಯತ ಜಾತಿ ದಾಳ ಬೀಸಿದ ಜಾರಕಿಹೊಳಿ ಸಹೋದರರು, ಪ್ರಾಥಮಿಕ ಸದಸ್ಯತ್ವ ಇಲ್ಲದಿದ್ದರೂ ಬ್ಯಾಂಕ್ ಮೇಲೆ ಹಿಡಿತ

# ಬಿಡಿಸಿಸಿ: ಹಿಡಿತ ಸಾಧಿಸಿದ “ಜೆ” ಕಂಪನಿ

• **ಉದಯವಾಹಿನಿ, ಬೆಳಗಾವಿ:**

ಜಿಲ್ಲೆಯ ರಾಜಕಾರಣದ ಮೇಲೆ ನೇರ ಪ್ರಭಾವ ಬೀರುವ ಬೆಳಗಾವಿ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಮೇಲೆ ಹಿಡಿತ ಸಾಧಿಸುವಲ್ಲಿ ಜಾರಕಿಹೊಳಿ ಸಹೋದರರು ಸಫಲವಾದರು. ಕುಟುಂಬದ 30 ವರ್ಷಗಳ ರಾಜಕೀಯ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಸಹಕಾರ ಕ್ಷೇತ್ರಕ್ಕೆ ನುಗ್ಗಿದರು. ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ, ಶಾಸಕರಾದ ಬಾಲಚಂದ್ರ ಜಾರಕಿಹೊಳಿ, ರಮೇಶ ಜಾರಕಿಹೊಳಿ, ವಿಧಾನ ಪರಿಷತ್ ಸದಸ್ಯ ಲಖನ್ ಜಾರಕಿಹೊಳಿ ಮತ್ತು ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಇವರಲ್ಲಿ ಯಾರೊಬ್ಬರೂ ಡಿಸಿಸಿ ಬ್ಯಾಂಕ್‌ನ ಪ್ರಾಥಮಿಕ ಸದಸ್ಯರೂ ಆಗಿಲ್ಲ. ಆದರೆ, ಇಡೀ ಬ್ಯಾಂಕಿನ ಚಟುವಟಿಕೆಗಳನ್ನು 'ನಿಯಂತ್ರಿಸಿದರು'. ಕುಟುಂಬದ ಹೊಸ ತಲೆಮಾರು, ರಮೇಶ ಅವರ ಪುತ್ರ ಅಮರನಾಥ ಮತ್ತು ಸತೀಶ ಪುತ್ರ ರಾಹುಲ್ ಅವರನ್ನು ನಿರ್ದೇಶಕ ಸ್ಥಾನಕ್ಕೆ ಅವಿರೋಧವಾಗಿ ಆಯ್ಕೆ ಮಾಡಿಸಿದರು. ಈ ಚುನಾವಣೆ 'ಜೆ' ಕಂಪನಿ ಹಾಗೂ 'ಕೆ' ಕಂಪನಿ (ಕತ್ತಿ) ಮಧ್ಯೆ ನೇರ ಪೈಪೋಟಿಗೆ ಸಾಕ್ಷಿಯಾಯಿತು. 16 ನಿರ್ದೇಶಕ ಸ್ಥಾನಗಳ ಪೈಕಿ 11 ಸ್ಥಾನಗಳನ್ನು ಈ ಬಣ ಗೆದ್ದಿತು. ಕತ್ತಿ ಬಣದಲ್ಲಿ ರಮೇಶ ಕತ್ತಿ, ಮಲ್ಲಣ್ಣ ಯಾದವಾಡ, ಶಾಸಕರಾದ ಲಕ್ಷ್ಮಣ ಸವದಿ, ಭರಮಗೌಡ ಕಾಗೆ, ಗಣೇಶ ಹುಕ್ಕೇರಿ ಗೆದ್ದರು. ನಡೆದ ಚುನಾವಣೆ ಕಾಲಕ್ಕೆ ಭರಮಗೌಡ ಹಾಗೂ ಗಣೇಶ ಕೂಡ 'ಜೆ' ಕಂಪನಿ ಸೇರುವ ಮೂಲಕ ಕತ್ತಿ ಬಣವನ್ನು ಮತ್ತಷ್ಟು ಬಡ ಮಾಡಿದರು.

**ಜಾತಿ ದಾಳ:** ಚುನಾವಣೆ ಘೋಷಣೆಗೂ ಮೊದಲೇ 'ಲಿಂಗಾಯತರನ್ನೇ ಅಧ್ಯಕ್ಷ, ಉಪಾಧ್ಯಕ್ಷ ಮಾಡುತ್ತೇವೆ' ಎಂದು ಜಾರಕಿಹೊಳಿ ಸಹೋದರರು ಪ್ರಚಾರ ಮಾಡಿದರು. ಈ ಜಾತಿ ದಾಳ ಎಸೆದು, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳನ್ನು ತೆಕ್ಕೆಗೆ ತೆಗೆದುಕೊಂಡರು.16 ಸ್ಥಾನಗಳ ಪೈಕಿ 9 ಸ್ಥಾನಗಳಿಗೆ ಅವಿರೋಧ ಆಯ್ಕೆ ಮಾಡುವುದಕ್ಕೂ ಜಾತಿ ಪ್ರಭಾವ ಬೀರಿತು. ಖುದ್ದು ಸತೀಶ ಜಾರಕಿಹೊಳಿ ಎರಡು ತಿಂಗಳಿಂದ ಜಿಲ್ಲೆಯಲ್ಲೇ ಬೀಡು ಬಿಟ್ಟಿದ್ದರು. ಹಳ್ಳಿ ಹಳ್ಳಿಗಳನ್ನು ಸುತ್ತಿ ಮತಬಲ ಹೆಚ್ಚಿಸಿಕೊಂಡರು. ಇದು ಗೆಲುವಿನ ದಡ ಸೇರಿಸಿತು.

**ಆಗ ದುಷ್ಮನ್– ಈಗ ದೋಸ್ತಿ:** 2024ರ ಲೋಕಸಭೆ ಚುನಾವಣೆಯಲ್ಲಿ ಚಿಕ್ಕೋಡಿ ಕ್ಷೇತ್ರದಲ್ಲಿ ಅಣ್ಣಾಸಾಹೇಬ ಜೊಲ್ಲೆ ಅವರು ಪ್ರಿಯಾಂಕಾ ಜಾರಕಿಹೊಳಿ ಎದುರು ಸೋತರು. ಆಗ ರಮೇಶ ಕತ್ತಿ ಜೊತೆ ದೋಸ್ತಿ ಮಾಡಿ ಅಣ್ಣಾಸಾಹೇಬ ಅವರನ್ನು ಸೋಲಿಸಿದರು. ಈಗ ಬ್ಯಾಂಕ್ ಚುನಾವಣೆಯಲ್ಲಿ ಜೊಲ್ಲೆ ಅವರೊಂದಿಗೆ ಸ್ನೇಹ ಮಾಡಿ ಕತ್ತಿ ಅವರ ಹಿಡಿತದಿಂದ ಬ್ಯಾಂಕ್ ಕಿತ್ತುಕೊಂಡರು. ಲೋಕಸಭೆ ಚುನಾವಣೆಯಲ್ಲಿ ರಮೇಶ ಕತ್ತಿಯೇ ತಮ್ಮ ಸೋಲಿಗೆ ಕಾರಣವಾದರು ಎಂಬ ಸೇಡಿನಿಂದ ಅಣ್ಣಾಸಾಹೇಬ ಕೂಡ ವೈರಿ ಪಡೆ (ಜಾರಕಿಹೊಳಿ) ಸೇರಿಕೊಂಡರು. ಅವರ ನೆರವಿನೊಂದಿಗೆ ಕತ್ತಿ ಅವರನ್ನು ಬ್ಯಾಂಕಿನ ಅಧ್ಯಕ್ಷ ಸ್ಥಾನದಿಂದ ಪದಚ್ಯುತಿಗೊಳಿಸಿದರು. ಚುನಾವಣೆ ಪೂರ್ವ ಮಾತಿನಂತೆ ಜೊಲ್ಲೆ ಅವರನ್ನೇ ಅಧ್ಯಕ್ಷ ಸ್ಥಾನದಲ್ಲಿ ಕೂರಿಸಿದರು. 20 ವರ್ಷ ಅಧ್ಯಕ್ಷರಾಗಿದ್ದ ರಮೇಶ ಕತ್ತಿ ಈಗ ನಿರ್ದೇಶಕರಾಗಿ ಮಾತ್ರ ಮುಂದುವರಿದಿದ್ದಾರೆ.



ಉದಯವಾಹಿನಿ ಚಿತ್ರ

> **ಮತಗಳ ಬೇರು** ಸುಮಾರು 8,500 ಕೋಟಿ ದುಡಿಯುವ ಬಂಡವಾಳ ಹೊಂದಿದ ಈ ಬ್ಯಾಂಕ್, 5,200 ಕೋಟಿಗೂ ಅಧಿಕ ಸಾಲ ನೀಡಿದೆ. 5 ಲಕ್ಷಕ್ಕೂ ಹೆಚ್ಚು ಕೃಷಿ ಕುಟುಂಬಗಳು ಪ್ರತ್ಯಕ್ಷ-ಪರೋಕ್ಷವಾಗಿ ಇದರ ನೆರವು ಪಡೆದಿವೆ. ಹೀಗಾಗಿ, ಗ್ರಾಮ ಪಂಚಾಯಿತಿಯಿಂದ ಜಿಲ್ಲಾ ಪಂಚಾಯಿತಿ ಚುನಾವಣೆಯವರೆಗೆ ಎಲ್ಲದರ ಮೇಲೂ ಬ್ಯಾಂಕ್ ಪರಿಣಾಮ ಬೀರುತ್ತದೆ. ಬೇರು ಮಟ್ಟದಲ್ಲೇ ಮತಗಳನ್ನು ಗಟ್ಟಿಗೊಳಿಸಬೇಕು ಎಂಬ ಉಪಾಯದಿಂದ ಜಾರಕಿಹೊಳಿ ಸಹೋದರರು ಸಹಕಾರ ಕ್ಷೇತ್ರಕ್ಕೂ ಕಾಲಿಟ್ಟಿದ್ದಾರೆ ಎಂದು ಹಿರಿಯ ಸಹಕಾರಿಗಳು ವಿಶ್ಲೇಷಣೆ ಮಾಡುತ್ತಾರೆ.

# ಭೀಕರ ಕಾರ್ ಬಾಂಬ್ ಸ್ಫೋಟ 12 ಮಂದಿ ಸಾವು 20 ಜನರಿಗೆ ಗಾಯ

**ಇಸ್ಲಾಮಾಬಾದ್:** ಭಾರತದ ರಾಜಧಾನಿ ಹೊಸದಿಲ್ಲಿಯಲ್ಲಿ ಕಾರ್ ಬಾಂಬ್ ಸ್ಫೋಟ ಸಂಭವಿಸಿದ ಬೆನ್ನಲ್ಲೇ, ಪಾಕಿಸ್ತಾನದ ರಾಜಧಾನಿ ಇಸ್ಲಾಮಾಬಾದ್‌ನಲ್ಲಿಯೂ ಕಾರ್ ಬಾಂಬ್ ಸ್ಫೋಟಿಸಿದೆ. ಜಿಲ್ಲಾ ನ್ಯಾಯಾಲಯದ ಹೊರಭಾಗದಲ್ಲಿ ಮಂಗಳವಾರ ಮಧ್ಯಾಹ್ನ ನಡೆದ ಭಾರೀ ತೀವ್ರತೆಯ ಕಾರ್ ಬಾಂಬ್ ಸ್ಫೋಟದಲ್ಲಿ ಕನಿಷ್ಠ 12 ಮಂದಿ ಮೃತಪಟ್ಟಿದ್ದಾರೆ ಹಾಗೂ 20 ಮಂದಿ ಗಾಯಗೊಂಡಿದ್ದಾರೆ ಎಂದು ಸರ್ಕಾರಿ ಮಾಧ್ಯಮ ಸಂಸ್ಥೆ ಪಾಕಿಸ್ತಾನ್ ಟಿವಿ ವರದಿ ಮಾಡಿದೆ. ಪೊಲೀಸರು ಮತ್ತು ಆಂಬುಲೆನ್ಸ್ ಸಿಬ್ಬಂದಿ ತಕ್ಷಣ ಸ್ಥಳಕ್ಕೆ ಧಾವಿಸಿ ಪ್ರದೇಶವನ್ನು ಸುತ್ತುವರಿಸಿದ್ದಾರೆ.

ಸ್ಫೋಟ ಶಬ್ದವು ನಗರದಿಂದ ಮೈಲಿಗಳಷ್ಟು ದೂರದವರೆಗೆ ಕೇಳಿಬಂದಿದೆ ಎಂದು ಜನರು ತಿಳಿಸಿದ್ದಾರೆ. ನ್ಯಾಯಾಲಯದ ಹೊರಗೆ ನಿಲ್ಲಿಸಿದ್ದ ಹಲವಾರು ವಾಹನಗಳು ಸಹ ಹಾನಿಗೊಳಗಾಗಿವೆ. ನ್ಯಾಯಾಲಯಕ್ಕೆ ಹಾಜರಾಗಿದ್ದವರು ಹಾಗೂ ಪಾದಚಾರಿಗಳು ಮೃತರು ಮತ್ತು ಗಾಯಾಳುಗಳಲ್ಲಿ ಸೇರಿದ್ದಾರೆ ಎಂದು ಮಾಧ್ಯಮಗಳು ವರದಿ ಮಾಡಿದ್ದಾರೆ. ನಾನು ಕಾರನ್ನು ಪಾರ್ಕ್ ಮಾಡಿ ಒಳಗೆ ಹೋಗುತ್ತಿದ್ದಾಗ ಗೇಟ್ ಬಳಿ ಭಾರೀ ಸದ್ದು ಕೇಳಿಸಿತು, ಎಂದು ವಕೀಲ ರುಸ್ತಮ್ ಮಲಿಕ್ ಮಾಧ್ಯಮಗಳಿಗೆ ತಿಳಿಸಿದ್ದಾರೆ. ಈ ಸ್ಫೋಟದಿಂದ ಜನರು ಹೆದರಿಕೆಗೊಂಡು ಓಡಿಹೋದರೆ, ಹಲವು ವಾಹನಗಳಿಗೆ ಹಾನಿಯಾಗಿದೆ. ಸಂಪೂರ್ಣ ಗೊಂದಲದ ವಾತಾವರಣ ನಿರ್ಮಾಣವಾಯಿತು. ವಕೀಲರು, ಸಾರ್ವಜನಿಕರು ಎಲ್ಲರೂ ಓಡಾಡುತ್ತಿದ್ದರು. ಗೇಟ್ ಬಳಿ ಎರಡು ಮೃತದೇಹಗಳು ಬಿದ್ದಿರುವುದನ್ನು ಕಂಡೆ ಮತ್ತು ಹಲವು ಕಾರುಗಳಿಗೆ ಬೆಂಕಿ ಹತ್ತಿಕೊಂಡಿತು, ಎಂದು ರುಸ್ತುಮ್ ಮಲಿಕ್ ಎಎಫ್‌ಪಿ ಸುದ್ದಿ ಸಂಸ್ಥೆಗೆ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಹರಿದ ವಿಡಿಯೋಗಳಲ್ಲಿ ಭದ್ರತಾ ತಪಾಸಣಾ ತಡೆಗೋಡೆ ಹಿಂಭಾಗದಲ್ಲಿರುವ ಸುಟ್ಟ ವಾಹನದಿಂದ ಎದ್ದುಕೊಂಡ ಬೆಂಕಿ ಹಾಗೂ ಕಪ್ಪು ಹೊಗೆಯುಂಡೆಗಳು ಸ್ಪಷ್ಟವಾಗಿ ಕಾಣಿಸಿವೆ ಎಂದು ಡಾನ್ ಪತ್ರಿಕೆ ವರದಿ ಮಾಡಿದೆ. ಘಟನೆಯ ಬಗ್ಗೆ ಇಸ್ಲಾಮಾಬಾದ್ ಪೊಲೀಸರು ತನಿಖೆ ಆರಂಭಿಸಿದ್ದು, ಈ ಘಟನೆಯನ್ನು ಕುರಿತು ಇನ್ನೂ ಅಧಿಕೃತ ಪ್ರತಿಕ್ರಿಯೆ ನೀಡಿಲ್ಲ. ಸ್ಫೋಟದ ಹೊಣೆ ಹೊತ್ತಿರುವ ಯಾವುದೇ ಉಗ್ರ ಸಂಘಟನೆ ಕುರಿತು ಮಾಹಿತಿ ಲಭ್ಯವಾಗಿಲ್ಲ. ಪಾಕಿಸ್ತಾನ ಇತ್ತೀಚಿನ ವರ್ಷಗಳಲ್ಲಿ ಬಂಡುಕೋರ ಸಂಘಟನೆಗಳು ಹಾಗೂ ಪಾಕಿಸ್ತಾನಿ ತಾಲಿಬಾನ್ ಸಂಘಟನೆಗಳಿಂದ ದಾಳಿಗಳನ್ನು ಎದುರಿಸುತ್ತಿದೆ.

ಮಂಗಳವಾರ ಮುಂಜಾನೆ, ಪಾಕಿಸ್ತಾನದ ಭದ್ರತಾ ಪಡೆಗಳು ಖೈಬರ್ ಪಖ್ತುಂಖ್ವಾ ಪ್ರಾಂತ್ಯದ ವಾನಾ ಪಟ್ಟಣದಲ್ಲಿ ಇರುವ ಸೇನಾ ಕಾಲೇಜಿನಲ್ಲಿ ಉಗ್ರರು ನಡೆಸಲು ಯತ್ನಿಸಿದ ಅಪಹರಣದ ಪ್ರಯತ್ನವನ್ನೂ ವಿಫಲಗೊಳಿಸಿದ್ದರು. ಆತ್ಮಹತ್ಯಾ ಬಾಂಬರ್ ಸೇರಿದಂತೆ ಆರು ಮಂದಿ ಉಗ್ರರು ಕಾಲೇಜಿನತ್ತ ದಾಳಿ ಮಾಡಲು ಪ್ರಯತ್ನಿಸಿದ್ದರು.



**ಹೊಣೆ ಹೊತ್ತಿಲ್ಲ**

**ಇಸ್ಲಾಮಾಬಾದ್‌ನ ಜಿಲ್ಲಾ ನ್ಯಾಯಾಲಯದ ಹೊರಗೆ ನಡೆದ ಕಾರು ಸ್ಫೋಟದಲ್ಲಿ 12 ಮಂದಿ ಮೃತಪಟ್ಟಿದ್ದು, 20 ಮಂದಿ ಗಾಯಗೊಂಡಿದ್ದಾರೆ. ಸಾವಿಗೀಡಾದವರಲ್ಲಿ ಹೆಚ್ಚಿನವರು ನ್ಯಾಯಾಲಯಕ್ಕೆ ಆಗಮಿಸಿದ್ದವರು ಅಥವಾ ಪಾದಚಾರಿಗಳು. ಸ್ಫೋಟದಿಂದ ಹಲವಾರು ವಾಹನಗಳಿಗೆ ಹಾನಿಯಾಗಿದ್ದು, ಯಾವುದೇ ಸಂಘಟನೆ ಈ ಘಟನೆಯ ಹೊಣೆ ಹೊತ್ತಿಲ್ಲ.**

- **ಇಸ್ಲಾಮಾಬಾದ್ ಜಿಲ್ಲೆಯ ನ್ಯಾಯಾಲಯದ ಹೊರಗೆ ಕಾರು ಬಾಂಬ್ ಸ್ಫೋಟ**
- **ಸ್ಫೋಟದಲ್ಲಿ ಹಲವು ವಾಹನಗಳಿಗೆ ಹಾನಿ, ಸ್ಫೋಟದ ಹೊಣೆ ಹೊರದ ಸಂಘಟನೆಗಳು**

# ಗಡಿಯಾಚೆಗಿನ ಭಯೋತ್ಪಾದನೆಯಿಂದ ಭಾರತ ಬಳಲುತ್ತಿದೆ; ವಿಶ್ವಸಂಸ್ಥೆ ರಾಯಭಾರಿ

**ವಿಶ್ವಸಂಸ್ಥೆ:** ಭಾರತವು ತನ್ನ ಗಡಿಗಳಲ್ಲಿ ಅಕ್ರಮ ಶಸ್ತ್ರಾಸ್ತ್ರಗಳನ್ನು ಬಳಸಿ ನಡೆಸಲಾಗುವ ಗಡಿಯಾಚೆಗಿನ ಭಯೋತ್ಪಾದನೆಯಿಂದ ಬಳಲುತ್ತಿದೆ ಎಂದು ವಿಶ್ವಸಂಸ್ಥೆಯಲ್ಲಿನ ನವದೆಹಲಿಯ ರಾಯಭಾರಿ ಪಾಕಿಸ್ತಾನವನ್ನು ಸೂಕ್ಷ್ಮವಾಗಿ ಉಲ್ಲೇಖಿಸುತ್ತಾ ಹೇಳಿದ್ದಾರೆ. ವಿಶ್ವಸಂಸ್ಥೆಯಲ್ಲಿ ಭಾರತದ ಖಾಯಂ ಪ್ರತಿನಿಧಿ ರಾಯಭಾರಿ ಪರ್ವತನೇನಿ ಹರೀಶ್ ಅವರು, ವಿಶ್ವಸಂಸ್ಥೆಯ ಭದ್ರತಾ ಮಂಡಳಿಯು ಅಂತಹ ಶಸ್ತ್ರಾಸ್ತ್ರಗಳ ಬಳಕೆ ಮತ್ತು ಚಲನೆಯನ್ನು ಸುಗಮಗೊಳಿಸುವ, ಪ್ರಾಯೋಜಿಸುವವರ



ಬಗ್ಗೆ ಶೂನ್ಯ ಸಹಿಷ್ಣುತೆಯ ವಿಧಾನವನ್ನು ಹೊಂದಿರಬೇಕು ಎಂದು ಒತ್ತಿ ಹೇಳಿದರು. ಭಾರತವು ಹಲವಾರು ದಶಕಗಳಿಂದ ಭಯೋತ್ಪಾದನೆಯ ಪಿಡುಗಿನ ವಿರುದ್ಧ ಹೋರಾಡುತ್ತಿದೆ, ಆದ್ದರಿಂದ ಸಶಸ್ತ್ರ ರಾಷ್ಟ್ರೇತರ ನಟರು ಮತ್ತು ಭಯೋತ್ಪಾದಕ ಗುಂಪುಗಳಿಗೆ ಸಣ್ಣ ಶಸ್ತ್ರಾಸ್ತ್ರಗಳು ಮತ್ತು ಮದ್ದುಗುಂಡುಗಳನ್ನು ತಿರುಗಿಸುವುದು ಮತ್ತು ಅಕ್ರಮವಾಗಿ ವರ್ಗಾಯಿಸುವುದರಿಂದ ಉಂಟಾಗುವ ಅಪಾಯಗಳ ಬಗ್ಗೆ ತಿಳಿದಿದೆ ಎಂದು ಹರೀಶ್ ಯುಎನ್ ಭದ್ರತಾ ಮಂಡಳಿಯ ಸಣ್ಣ ಶಸ್ತ್ರಾಸ್ತ್ರಗಳ ಮುಕ್ತ ಚರ್ಚೆಯಲ್ಲಿ ಹೇಳಿದರು. ನವದೆಹಲಿಯ ಕೆಂಪು ಕೋಟೆ ಪ್ರದೇಶದಲ್ಲಿ ಮಾರಕ, ಹೆಚ್ಚಿನ ತೀವ್ರತೆಯ ಸ್ಫೋಟ ಸಂಭವಿಸಿ ಕನಿಷ್ಠ ಒಂಬತ್ತು ಜನರು ಸಾವನ್ನಪ್ಪಿದರು, ಇನ್ನೂ ಅನೇಕರು ಗಾಯಗೊಂಡ ಕೆಲವೇ ಗಂಟೆಗಳ ನಂತರ ಯುಎನ್ ಪ್ರಧಾನ ಕಚೇರಿಯಲ್ಲಿ ಹರೀಶ್ ಅವರ ಈ ಹೇಳಿಕೆಗಳು ಬಂದವು.

ಸೋಮವಾರ ಸಂಜೆ ಕೆಂಪು ಕೋಟೆ ಮೆಟ್ರೋ ನಿಲ್ದಾಣದ ಬಳಿಯ ಟ್ರಾಫಿಕ್ ಸಿಗ್ನಲ್‌ನಲ್ಲಿ ನಿಧಾನವಾಗಿ ಚಲಿಸುತ್ತಿದ್ದ ಕಾರೊಂದನ್ನು ಸ್ಫೋಟಗೊಂಡಿತು. ನಮ್ಮ ಗಡಿಗಳಲ್ಲಿ ಅಕ್ರಮ ಶಸ್ತ್ರಾಸ್ತ್ರಗಳನ್ನು ಬಳಸಿ ನಡೆಸಲಾಗುತ್ತಿರುವ ಗಡಿಯಾಚೆಗಿನ ಭಯೋತ್ಪಾದನೆಯಿಂದಾಗಿ ಭಾರತವು ನಷ್ಟ ಅನುಭವಿಸಿದೆ, ಅದರಲ್ಲಿ ಡ್ರೋನ್‌ಗಳ ಬಳಕೆಯೂ ಸೇರಿದೆ ಎಂದು ಹರೀಶ್ ಪಾಕಿಸ್ತಾನವನ್ನು ಉಲ್ಲೇಖಿಸುತ್ತಾ ಹೇಳಿದರು. ಅಂತಹ ಶಸ್ತ್ರಾಗಾರಗಳ ಪ್ರಮಾಣ, ಅತ್ಯಾಧುನಿಕತೆಯ ಹೆಚ್ಚಳವು ಈ ಗುಂಪುಗಳು ಸಕ್ರಿಯಗೊಳಿಸದೆ, ಹಣಕಾಸು ಒದಗಿಸದೆ ಅಥವಾ ಬೆಂಬಲಿಸದೆ ತಮ್ಮನ್ನು ತಾವು ಉಳಿಸಿಕೊಳ್ಳಲು ಸಾಧ್ಯವಿಲ್ಲ ಎಂಬುದನ್ನು ನಮಗೆ ನೆನಪಿಸುತ್ತದೆ ಎಂದು ಅವರು ಹೇಳಿದರು. ಸಣ್ಣ ಶಸ್ತ್ರಾಸ್ತ್ರಗಳು ಮತ್ತು ಸಂಬಂಧಿತ ಮದ್ದುಗುಂಡುಗಳ ಅಕ್ರಮ ಸಾಗಣೆಯು ಸಶಸ್ತ್ರ ಗುಂಪುಗಳು, ಭಯೋತ್ಪಾದಕ ಸಂಘಟನೆಗಳನ್ನು ಬೆಂಬಲಿಸುವಲ್ಲಿ ಪ್ರಮುಖ ಅಂಶವಾಗಿ ಮುಂದುವರೆದಿದೆ ಎಂದು ಭಾರತ ಪ್ರಬಲ ವಿಶ್ವಸಂಸ್ಥೆಯ ಭದ್ರತಾ ಮಂಡಳಿಗೆ ತಿಳಿಸಿದೆ. ಅಂತಹ ಘಟಕಗಳ ಶಸ್ತ್ರಾಸ್ತ್ರಗಳ ನಿರಂತರ ಪ್ರವೇಶವು ಅವುಗಳ ಸ್ವಾಧೀನವನ್ನು ತಡೆಗಟ್ಟಲು ಸಂಘಟಿತ ಕ್ರಮದ ಅಗತ್ಯವನ್ನು ಎತ್ತಿ ತೋರಿಸುತ್ತದೆ.

## ಪ್ರಧಾನಿ ಮೋದಿ ಭೂತಾನ್ ಭೇಟಿ: ಜಲವಿದ್ಯುತ್ ಯೋಜನೆ ಉದ್ಘಾಟನೆ

# ಮೋದಿ ಅವರು ಎರಡು ದಿನ ಭೂತಾನ್ ಪ್ರವಾಸ

**ಹೊಸದಿಲ್ಲಿ:** ಪ್ರಧಾನಿ ನರೇಂದ್ರ ಮೋದಿ ಅವರು ಭೂತಾನ್‌ನ ನಾಲ್ಕನೇ ರಾಜ, ಜಿಗ್ಮೆ ಸಿಂಘೆ ವಾಂಗ್‌ಚುಕ್ ಅವರ 70 ನೇ ಜನ್ಮದಿನದ ಸಂಭ್ರಮಾಚರಣೆಯಲ್ಲಿ ಭಾಗವಹಿಸಲು ಮಂಗಳವಾರ ಎರಡು ದಿನಗಳ ಭೇಟಿಗಾಗಿ ಭೂತಾನ್‌ಗೆ ತೆರಳಲಿದ್ದಾರೆ. ಈ ಭೇಟಿಯ ಸಂದರ್ಭದಲ್ಲಿ, ಪ್ರಧಾನಿ ಮೋದಿ ಅವರು ಪ್ರಸ್ತುತ ರಾಜ ಜಿಗ್ಮೆ ಖೇಸರ್ ನಾಮ್‌ಗ್ಯೆಲ್ ವಾಂಗ್ ಚುಕ್ ಅವರನ್ನು ಭೇಟಿಯಾಗಿ, ಭಾರತ ಮತ್ತು ಭೂತಾನ್ ಜಂಟಿಯಾಗಿ ಅಭಿವೃದ್ಧಿಪಡಿಸಿದ 1020-MW ಪುನತ್ಸಂಗ್ ಚು-II ಜಲವಿದ್ಯುತ್ ಯೋಜನೆಯನ್ನು ಉದ್ಘಾಟಿಸಲಿದ್ದಾರೆ. ಅಲ್ಲದೆ, ಭೂತಾನ್ ಪ್ರಧಾನಿ ತ್ಶೆರಿಂಗ್ ಟೋಬ್‌ಗೇ ಅವರನ್ನೂ ಭೇಟಿ ಮಾಡಲಿದ್ದಾರೆ.

**ಭಾರತ - ಭೂತಾನ್ ಸಂಬಂಧ:** ಈ ವಿಶೇಷ ಭೇಟಿಯು ಭೂತಾನ್‌ನೊಂದಿಗೆ ಭಾರತದ ಸಂಬಂಧವನ್ನು ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸಿದ ನಾಲ್ಕನೇ ರಾಜರಿಗೆ ಗೌರವ ಸಲ್ಲಿಸುವ ಉದ್ದೇಶ ಹೊಂದಿದೆ. 1974 ರಿಂದ 2016 ರವರೆಗೆ, ಅವರು ಭಾರತದ ನಾಯಕರೊಂದಿಗೆ ಶಕ್ತಿ, ಭದ್ರತೆ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಸಂಬಂಧಗಳನ್ನು ಬೆಳೆಸುವಲ್ಲಿ ಕೆಲಸ ಮಾಡಿದ್ದರು. ಪ್ರಧಾನಿ ಮೋದಿ ಅವರು ಥಿಂಪುವಿನಲ್ಲಿರುವ ತಶಿಚೋಡ್‌ಜಾಂಗ್‌ನಲ್ಲಿ ಈ ಪವಿತ್ರ ಅವಶೇಷಗಳಿಗೆ ಪ್ರಾರ್ಥನೆ ಸಲ್ಲಿಸಲಿದ್ದಾರೆ. ಅಲ್ಲದೆ, ಭೂತಾನ್‌ನ ರಾಜ ಸರ್ಕಾರ ಆಯೋಜಿಸಿರುವ ಜಾಗತಿಕ ಶಾಂತಿ ಪ್ರಾರ್ಥನಾ ಉತ್ಸವದಲ್ಲಿಯೂ ಪಾಲ್ಗೊಳ್ಳಲಿದ್ದಾರೆ. ಪುನತ್ಸಂಗ್ ಚು-II ಜಲವಿದ್ಯುತ್ ಯೋಜನೆಯ ಉದ್ಘಾಟನೆಯು ಉಭಯ ದೇಶಗಳ ಇಂಧನ ಸಹಭಾಗಿತ್ವದಲ್ಲಿ ಒಂದು ಮಹತ್ವದ ಮೈಲಿಗಲ್ಲಾಗಿದೆ.



**ಸಂಬಂಧವನ್ನು ಬಲಪಡಿಸುವ ಗುರಿ**

**ವಿದೇಶಾಂಗ ಸಚಿವಾಲಯದ ಪ್ರಕಾರ, ಈ ಭೇಟಿಯು ಉಭಯ ದೇಶಗಳ ನಡುವಿನ ಸ್ನೇಹ ಮತ್ತು ಸಹಕಾರದ ವಿಶೇಷ ಸಂಬಂಧವನ್ನು ಬಲಪಡಿಸುವ ಗುರಿಯನ್ನು ಹೊಂದಿದೆ. ಭಾರತ, ಭೂತಾನ್ ಆಳವಾದ ಪರಸ್ಪರ ವಿಶ್ವಾಸ, ಸೌಹಾರ್ದತೆ, ಗೌರವದಿಂದ ಗುರುತಿಸಲ್ಪಟ್ಟ ಒಂದು ಅನನ್ಯ, ಆದರ್ಶಪ್ರಾಯ ಪಾಲುದಾರಿಕೆಯನ್ನು ಹಂಚಿಕೊಳ್ಳುತ್ತವೆ. ಹಂಚಿಕೆಯ ಆಧ್ಯಾತ್ಮಿಕ ಪರಂಪರೆ ಮತ್ತು ಬೆಚ್ಚಗಿನ ಜನರಿಂದ ಜನರಿಗೆ ಇರುವ ಸಂಬಂಧಗಳು ಈ ವಿಶೇಷ ಪಾಲುದಾರಿಕೆಯ ಲಕ್ಷಣಗಳಾಗಿವೆ. ಪ್ರಧಾನಿಯವರ ಭೇಟಿಯು ನಮ್ಮ ದ್ವಿಪಕ್ಷೀಯ ಪಾಲುದಾರಿಕೆಯನ್ನು ಮತ್ತಷ್ಟು ಹೆಚ್ಚಿಸಲು ಮತ್ತು ಬಲಪಡಿಸಲು ಮಾರ್ಗಗಳನ್ನು ಚರ್ಚಿಸಲು ಎರಡೂ ಕಡೆಯವರಿಗೆ ಅವಕಾಶವನ್ನು ನೀಡುತ್ತದೆ, ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.**

ಇದಲ್ಲದೆ, ಉಭಯ ದೇಶಗಳು ರೈಲು ಸಂಪರ್ಕ ಮತ್ತು ಒಳನಾಡಿನ ಜಲಮಾರ್ಗಗಳ ಮೂಲಕ ಸಂಪರ್ಕವನ್ನು ಹೆಚ್ಚಿಸುವ ಮೂಲಕ ಸಂಬಂಧಗಳನ್ನು ಬಲಪಡಿಸಲು ಚಿಂತನೆ ನಡೆಸುತ್ತಿವೆ. ಫಿನ್-ಟೆಕ್, ನಾವೀನ್ಯತೆ ಮತ್ತು ಉದ್ಯಮಶೀಲತೆ ಹಾಗೂ ಸ್ಪೇಸ್ ಟೆಕ್ ನಂತಹ ಹೊಸ ಸಹಕಾರ ಕ್ಷೇತ್ರಗಳ ಬಗ್ಗೆಯೂ ಚರ್ಚೆ ನಡೆಯಲಿದೆ.

ಈ ಭೇಟಿಯು ಕೇವಲ ರಾಜಕೀಯ ಮತ್ತು ಆರ್ಥಿಕ ಸಹಕಾರಕ್ಕೆ ಮಾತ್ರ ಸೀಮಿತವಾಗಿಲ್ಲ. ಇದು ಸಾಂಸ್ಕೃತಿಕ, ಆಧ್ಯಾತ್ಮಿಕ ಬಂಧಗಳನ್ನು ಬಲಪಡಿಸುವ ಒಂದು ಅವಕಾಶವಾಗಿದೆ. ಪಿಪ್ರಹ್ವಾ ಅವಶೇಷಗಳ ಪ್ರದರ್ಶನವು ಭಾರತ ಭೂತಾನ್ ನಡುವಿನ ಪ್ರಾಚೀನ ಆಧ್ಯಾತ್ಮಿಕ ಸಂಪರ್ಕವನ್ನು ನೆನಪಿಸುತ್ತದೆ. ಜಾಗತಿಕ ಶಾಂತಿ ಪ್ರಾರ್ಥನಾ ಉತ್ಸವದಲ್ಲಿ ಭಾಗವಹಿಸುವ ಮೂಲಕ, ಪ್ರಧಾನಿ ಮೋದಿ ಅವರು ವಿಶ್ವ ಶಾಂತಿಗೆ ಭಾರತದ ಬದ್ಧತೆಯನ್ನು ಪುನರುಚ್ಚರಿಸಲಿದ್ದಾರೆ. ಭವಿಷ್ಯದಲ್ಲಿ, ರೈಲು ಸಂಪರ್ಕ, ಒಳನಾಡಿನ ಜಲಮಾರ್ಗಗಳ ಅಭಿವೃದ್ಧಿಯು ವ್ಯಾಪಾರ, ಪ್ರವಾಸೋದ್ಯಮವನ್ನು ಉತ್ತೇಜಿಸುತ್ತದೆ ಇದು ಎರಡೂ ದೇಶಗಳ ಆರ್ಥಿಕ ಬೆಳವಣಿಗೆಗೆ ಮತ್ತಷ್ಟು ಉತ್ತೇಜನ ನೀಡುತ್ತದೆ.

ಫಿನ್-ಟೆಕ್, ನಾವೀನ್ಯತೆ, ಉದ್ಯಮಶೀಲತೆ, ಸ್ಪೇಸ್ ಟೆಕ್ ನಂತಹ ಆಧುನಿಕ ಕ್ಷೇತ್ರಗಳಲ್ಲಿ ಸಹಕಾರವು ಭವಿಷ್ಯದ ತಂತ್ರಜ್ಞಾನದಲ್ಲಿ ಉಭಯ ದೇಶಗಳ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ. ಈ ಎಲ್ಲಾ ಅಂಶಗಳು ಭಾರತ, ಭೂತಾನ್ ನಡುವಿನ ವಿಶಿಷ್ಟ, ಆದರ್ಶಪ್ರಾಯ ಪಾಲುದಾರಿಕೆಯನ್ನು ಮತ್ತಷ್ಟು ಗಟ್ಟಿಗೊಳಿಸುತ್ತವೆ

**ಪುನತ್ಸಂಗ್‌ಚು-II ಜಲವಿದ್ಯುತ್ ಯೋಜನೆ**

**ಪುನತ್ಸಂಗ್‌ಚು-II ಜಲವಿದ್ಯುತ್ ಯೋಜನೆಯು ಕೇವಲ ಒಂದು ಮೂಲಸೌಕರ್ಯ ಯೋಜನೆಯಲ್ಲ. ಇದು ಪರಿಸರ ಸ್ನೇಹಿ ಇಂಧನ ಉತ್ಪಾದನೆಯಲ್ಲಿ ಉಭಯ ದೇಶಗಳ ಸಹಭಾಗಿತ್ವದ ಸಂಕೇತವಾಗಿದೆ. ಈ ಯೋಜನೆಯು ಭೂತಾನ್‌ನ ಇಂಧನ ಸ್ವಾವಲಂಬನೆಗೆ ಸಹಾಯ ಮಾಡುವುದಲ್ಲದೆ, ಭಾರತಕ್ಕೂ ವಿದ್ಯುತ್ ಪೂರೈಸುವ ಸಾಮರ್ಥ್ಯ ಹೊಂದಿದೆ.**

## ಮಿನಿ ನ್ಯೂಸ್

### ಬ್ರಿಟಿಷ್ ಲೇಖಕ ಡೇವಿಡ್ ಸಲೊವಿಯವರ ಫ್ಲೆಶ್ ಕೃತಿಗೆ ಪ್ರಶಸ್ತಿ

**ಲಂಡನ್:** ಹಂಗೇರಿ ಮೂಲದ ಬ್ರಿಟಿಷ್ ಲೇಖಕ ಡೇವಿಡ್ ಸಲೊವಿ ಅವರು 2025ರ ಬೂಕರ್ ಪ್ರಶಸ್ತಿ ಗೆದ್ದಿದ್ದಾರೆ. ಅವರ 'ಫ್ಲೆಶ್' ಕೃತಿಗೆ ಈ ಪ್ರಶಸ್ತಿ ಲಭಿಸಿದೆ. ಭಾರತ ಮೂಲದ ಕಿರಣ್ ದೇಸಾಯಿಯವರ



'ದಿ ಲೋನ್ಲಿನೆಸ್ ಆಫ್ ಸೋನಿಯಾ ಆ್ಯಂಡ್ ಸನ್ನಿ' ಕೃತಿಯೂ ಬೂಕರ್ ಪ್ರಶಸ್ತಿ ಸ್ಪರ್ಧೆಯಲ್ಲಿತ್ತು. ಅವರಿಗೆ ಸ್ವಲ್ಪದರಲ್ಲೇ ಪ್ರಶಸ್ತಿ ತಪ್ಪಿದೆ. 51 ವರ್ಷದ ಸಲೊವಿ ಅವರಿಗೆ ಕಳೆದ ವರ್ಷದ ಬೂಕರ್ ಪ್ರಶಸ್ತಿ ವಿಜೇತೆ ಸಮಂತಾ ಹಾರ್ವಿಯವರು ಟ್ರೋಫಿ ನೀಡಿದರು. ಈ ಪ್ರಶಸ್ತಿ 50 ಸಾವಿರ ಪೌಂಡ್ ಹಣ ಒಳಗೊಂಡಿದೆ.

ಲಂಡನ್‌ನ ಬಿಲ್ಲಿಂಗ್‌ಗೇಟ್‌ನಲ್ಲಿ ನಡೆದ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ನಡೆಯಿತು. ಒಂದು ವೇಳೆ ದೇಸಾಯಿಯವರಿಗೆ ಪ್ರಶಸ್ತಿ ದೊರಕಿದ್ದರೆ, 56 ವರ್ಷ ಬೂಕರ್ ಇತಿಹಾಸದಲ್ಲಿ ಎರಡೆರಡು ಬಾರಿ ಪ್ರಶಸ್ತಿ ಗೆದ್ದ ಐದನೇ ವ್ಯಕ್ತಿ ಎನ್ನುವ ಗೌರವಕ್ಕೆ ಪಾತ್ರರಾಗುತ್ತಿದ್ದರು. 2006ರಲ್ಲಿ ಅವರ 'ದಿ ಇನ್‌ಹೆರಿಟೆನ್ಸ್ ಆಫ್ ಲಾಸ್' ಕೃತಿಗೆ ಬೂಕರ್ ಪ್ರಶಸ್ತಿ ಲಭಿಸಿತ್ತು.

### ಕೊಚ್ಚಿಯಲ್ಲಿ ಫೀಡರ್ ಟ್ಯಾಂಕ್ ಕುಸಿದು, ಮನೆಗಳಿಗೆ ನುಗ್ಗಿದ ನೀರು

**ಕೊಚ್ಚಿ:** ನಗರದ ತಮ್ಮನಂ ಪ್ರದೇಶದಲ್ಲಿರುವ ಕೇರಳ ಜಲ ಪ್ರಾಧಿಕಾರದ ಫೀಡರ್ ಟ್ಯಾಂಕ್‌ನ ಒಂದು ಭಾಗ ಮುಂಜಾನೆ ಕುಸಿದಿದ್ದು, ಹಲವಾರು ಮನೆಗಳಿಗೆ ನೀರು ನುಗ್ಗಿ ವಾಹನಗಳು ಕೊಚ್ಚಿ ಹೋದ ಘಟನೆ ನಡೆದಿದೆ. ಕೆಡಬ್ಲ್ಯುಎ ಫೀಡರ್ ಪಂಪ್ ಹೌಸ್‌ನಲ್ಲಿರುವ ಬೃಹತ್ ಟ್ಯಾಂಕ್‌ನ ಒಂದು ಬದಿ ಕುಸಿದು ಬಿದ್ದಿದೆ. ಬೆಳಗಿನ ಜಾವ 2 ರಿಂದ 2.30ರ ನಡುವೆ ಈ ಘಟನೆ ಸಂಭವಿಸಿದೆ. ಇದು ಸುಮಾರು 1.38 ಕೋಟಿ ಲೀಟರ್‌ಗಳ ಒಟ್ಟು ಸಾಮರ್ಥ್ಯದ ಎರಡು ಕೋಣೆಗಳನ್ನು ಒಳಗೊಂಡಿದೆ. ಒಂದು ಕೋಣೆಯ ಗೋಡೆ ಒಡೆದಾಗ, ಬಿಡುಗಡೆಯಾದ ನೀರು ಕಾಂಪೌಂಡ್ ಗೋಡೆಯ ಮೂಲಕ ಹರಿದು ಹತ್ತಿರದ ಸುಮಾರು 10 ಮನೆಗಳಿಗೆ ನುಗ್ಗಿದೆ.

ಸುದ್ದಿ ತಿಳಿದ ಕೂಡಲೇ ಧಾವಿಸಿದ ಎರ್ನಾಕುಲಂ ಶಾಸಕ ಟಿಜೆ ವಿನೋದ್, ಸ್ಥಳವನ್ನು ಪರಿಶೀಲಿಸಿದರು. ರಸ್ತೆಯ ಉದ್ದಕ್ಕೂ ನಿಲ್ಲಿಸಿದ್ದ ಹಲವಾರು ವಾಹನಗಳು ಹಠಾತ್ ಪ್ರವಾಹದಿಂದ ಕೊಚ್ಚಿಹೋಗಿವೆ ಎಂದು ಹೇಳಿದರು. ಮನೆಗಳ ನೆಲ ಮಹಡಿಯಲ್ಲಿದ್ದ ಎಲೆಕ್ಟ್ರಾನಿಕ್ ಗ್ಯಾಜೆಟ್‌ಗಳು ಮತ್ತು ಪೀಠೋಪಕರಣಗಳು ಹಾನಿಗೊಳಗಾಗಿವೆ. ನೀರು ಹತ್ತಿರದ ಆರೋಗ್ಯ ಕೇಂದ್ರಕ್ಕೂ ನುಗ್ಗಿದ್ದು, ಔಷಧಗಳು ಮತ್ತು ಉಪಕರಣಗಳು ಹಾನಿಗೊಳಗಾಗಿವೆ ಎಂದು ಅವರು ಹೇಳಿದರು. ಐದು ದಶಕಗಳಿಗಿಂತಲೂ ಹಳೆಯದಾದ ಈ ಫೀಡರ್ ಟ್ಯಾಂಕ್ ಕೊಚ್ಚಿ ನಗರ ಮತ್ತು ತ್ರಿಪುನಿತುರಕ್ಕೆ ನೀರು ಪೂರೈಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ವಿನೋದ್ ಹೇಳಿದರು. ಹಾನಿಗೊಳಗಾದ ಕೋಣೆಯು ಕೊಚ್ಚಿ ನಗರಕ್ಕೆ ನೀರನ್ನು ಸಂಗ್ರಹಿಸಿದೆ ಎಂದು ಅವರು ಹೇಳಿದರು.

ಯಾವುದೇ ಮುನ್ಸೂಚನೆಯಿಲ್ಲದೆ ಮಲಗಿದ್ದ ನಿವಾಸಿಗಳು ತಮ್ಮ ಮನೆಗಳಿಗೆ ನೀರು ನುಗ್ಗಿದಾಗ ಆಘಾತದಿಂದ ಎಚ್ಚರಗೊಂಡರು ಎಂದು ವಿವರಿಸಿದರು. ಪ್ರವಾಹದಲ್ಲಿ ಕನಿಷ್ಠ ಮೂರು ಮನೆಗಳ ಕಾಂಪೌಂಡ್ ಗೋಡೆಗಳು ನಾಶವಾಗಿವೆ ಎಂದು ಸ್ಥಳೀಯ ನಿವಾಸಿಯೊಬ್ಬರು ಹೇಳಿದರು.

### ಭಾರತಕ್ಕೆ ಬೆದರಿಕೆ ಹಾಕಿದ ಮಸೂದ್ ಸಹೋದರ

**ನವದೆಹಲಿ:** ದೆಹಲಿಯಲ್ಲಿ ನಡೆದ ಸ್ಫೋಟದ ಬಳಿಕ ತನಿಖಾ ಸಂಸ್ಥೆಗಳು ಭಾರತದಾದ್ಯಂತ ಹೈ ಅಲರ್ಟ್ ಘೋಷಿಸಿವೆ. ಮಹತ್ವದ ಮಾಹಿತಿಯೊಂದರ ಪ್ರಕಾರ ಜೈಶ್ ಉಗ್ರ ಸಂಘಟನೆ ಭಾರತದಲ್ಲಿ ಭಯೋತ್ಪಾದಕತೆಯನ್ನು ಹೆಚ್ಚಿಸಲು ಪ್ರಯತ್ನಿಸುತ್ತಿದೆ ಎಂದು ತಿಳಿದು ಬಂದಿದೆ. ಪಾಕಿಸ್ತಾನದ ಜೈಶ್-ಎ-ಮೊಹಮ್ಮದ್ ಉಪ ಮುಖ್ಯಸ್ಥ ಅಬ್ದುಲ್ ರೌಫ್ ಅಜರ್ ಭಾರತಕ್ಕೆ ಬೆದರಿಕೆ ಹಾಕಿದ್ದು, ರಕ್ಷಣಾ ವೆಚ್ಚವು ಸಹಾಯ ಮಾಡುವುದಿಲ್ಲ ಎಂದು ಹೇಳಿದ ಆಡಿಯೋ ಒಂದು ಇದೀಗ ವೈರಲ್ ಆಗಿದೆ. ಆದಾಗ್ಯೂ, ಭಾರತೀಯ ಗುಪ್ತಚರ ಮೂಲಗಳು ಇದನ್ನು ಕೇವಲ ಬೆದರಿಸುವ ತಂತ್ರ ಎಂದು ಕರೆದಿವೆ. ಇತ್ತೀಚಿನದು ಎಂದು ಹೇಳಲಾಗುವ ಆಡಿಯೋದಲ್ಲಿ, ರೌಫ್ ಅಸ್ಗರ್, ಅಬ್ದುಲ್ ರೌಫ್ ಅಸ್ಗರ್ ಎಂದೂ ಕರೆಯಲ್ಪಡುವ ಅಜರ್ ಭಾರತ ಸರ್ಕಾರದ ವಿರುದ್ಧ ಮಾತನಾಡುತ್ತಿರುವುದು ಕೇಳಿಬರುತ್ತಿದೆ. ನಾವು ಈಗಾಗಲೇ ಶಸ್ತ್ರಾಸ್ತ್ರಗಳನ್ನು ಖರೀದಿಸಿದ್ದೇವೆ, ಅವು ದೆಹಲಿಯ ಕಡೆಗೆ ನಿರ್ದೇಶಿಸಲ್ಪಟ್ಟಿವೆ. ನಿಮ್ಮ ರಕ್ಷಣಾ ವೆಚ್ಚವು ಸಹಾಯ ಮಾಡುವುದಿಲ್ಲ ಎಂದು ಜೆಇಎಂ ಮುಖ್ಯಸ್ಥ ಮಸೂದ್ ಅಜರ್ ಹೇಳಿದ್ದಾನೆ. ಸೋಮವಾರ ಸಂಜೆ ದೆಹಲಿಯ ಕೆಂಪು ಕೋಟೆ ಬಳಿ ಸಂಭವಿಸಿದ ಸ್ಫೋಟದ ಬಳಿಕ ಈ ಆಡಿಯೋ ವೈರಲ್ ಆಗಿದೆ.


**ಪ್ರಧಾನಿಯಿಂದ ಎಚ್ಚರಿಕೆ:** ಭೂತಾನ್‌ಗೆ ಭೇಟಿ ನೀಡಿರುವ ಪ್ರಧಾನಿ ನರೇಂದ್ರ ಮೋದಿ , ದೆಹಲಿಯಲ್ಲಿ ಒಂದು ದುರಂತ ಘಟನೆ ನಡೆದಿದೆ. ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬಗಳ ನೋವನ್ನು ನಾನು ಅರ್ಥಮಾಡಿಕೊಳ್ಳಬಲ್ಲೆ. ನಿನ್ನೆ ರಾತ್ರಿ, ನಾನು ಸಂಬಂಧಪಟ್ಟ ಎಲ್ಲಾ ಸಂಸ್ಥೆಗಳೊಂದಿಗೆ ಸಂಪರ್ಕದಲ್ಲಿದ್ದೆ. ನಮ್ಮ ಸಂಸ್ಥೆಗಳು ವಿವಾದದ ಆಳಕ್ಕೆ ಹೋಗುತ್ತವೆ. ಎಲ್ಲಾ ಜವಾಬ್ದಾರಿಯುತರನ್ನು ನ್ಯಾಯದ ಕಟಕಟೆಗೆ ತರಲಾಗುವುದು ಎಂದು ಹೇಳಿದರು.

# ಭಾರತದ ಮೇಲೆ ಸುಂಕ ಕಡಿಮೆ ಮಾಡುತ್ತೇನೆ: ಟ್ರಂಪ್

**ವಾಷಿಂಗ್ಟನ್:** ಭಾರತ ರಷ್ಯಾದ ಕಚ್ಚಾತೈಲವನ್ನು ಖರೀದಿಸುತ್ತಿದೆ ಎಂದು ಆರೋಪಿಸಿದ್ದ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾರತದಿಂದ ಅಮೆರಿಕಗೆ ರಫ್ತಾಗುವ ವಸ್ತುಗಳ ಮೇಲೆ ಶೇ.50% ಸುಂಕ ವಿಧಿಸಿದ್ದರು. ಈಗ ಆ ಸುಂಕಗಳಿಗೆ ಮುಕ್ತಿ ಸಿಗುವ ಕಾಲ ಸನ್ನಿಹಿತವಾದಂತಿದೆ. ಈ ಕುರಿತು ಸ್ವತಃ ಟ್ರಂಪ್ ಹೇಳಿಕೆ ನೀಡಿ ಭಾರತದ ಮೇಲಿನ ಸುಂಕವನ್ನು ಕಡಿಮೆ ಮಾಡುವುದಾಗಿ ಹೇಳಿದ್ದಾರೆ. ಇದರ ಜೊತೆಗೆ ಮತ್ತೆ ಭಾರತ ರಷ್ಯಾದಿಂದ ತೈಲ ಖರೀದಿಯನ್ನು ನಿಲ್ಲಿಸಿದೆ ಎಂದೂ ಅವರು ಪುನರುಚ್ಚರಿಸಿದ್ದಾರೆ.

**ಭಾರತದ ಮೇಲೆ ವಿಧಿಸಿದ್ದ ಸುಂಕ ಕಡಿಮೆ ಮಾಡಲು ಸಜ್ಜಾದ ಟ್ರಂಪ್:** ಓವಲ್ ಕಚೇರಿಯಲ್ಲಿ ಮಾಧ್ಯಮದವರೊಂದಿಗೆ ಭಾರತದೊಂದಿಗಿನ ವ್ಯಾಪಾರ ಮಾತುಕತೆಗಳ ಕುರಿತು ಟ್ರಂಪ್ ಮಾತನಾಡಿ ಭಾರತದ ಮೇಲಿನ ಸುಂಕಗಳು ರಷ್ಯಾದ ತೈಲ ವ್ಯಾಪಾರದ ಕಾರಣದಿಂದಾಗಿ ತುಂಬಾ ಹೆಚ್ಚಿಸಿದ್ದೆವು, ಆದರೆ ಭಾರತ ರಷ್ಯಾದ ತೈಲ ಖರೀದಿಯನ್ನು ಗಣನೀಯವಾಗಿ ನಿಲ್ಲಿಸಿದ್ದಾರೆ ಹಾಗಾಗಿ ನಾವು ಸುಂಕವನ್ನು ಕಡಿಮೆ ಮಾಡಲಿದ್ದೇವೆ... ಒಂದು ಹಂತದಲ್ಲಿ, ನಾವು ಅದನ್ನು ಕಡಿಮೆ ಮಾಡುತ್ತೇವೆ ಎಂದು ತಿಳಿಸಿದ್ದಾರೆ.

ಟ್ರಂಪ್ ಅಧಿಕಾರಕ್ಕೆ ಬಂದಾಗಿನಿಂದಲೂ ಹಲವು ದೇಶಗಳ ಮೇಲೆ ಆಕ್ರಮಣಕಾರಿ ಸುಂಕ ನೀತಿಯನ್ನು ಅಸ್ತ್ರವಾಗಿ ಬಳಸುತ್ತಿದ್ದು, ಅದರಲ್ಲೂ ಪ್ರಮುಖವಾಗಿ ಅಮೆರಿಕ ಮಿತ್ರರಾಷ್ಟ್ರವೆಂದು ಭಾವಿಸುತ್ತಿದ್ದ ಭಾರತದ ಮೇಲೆ ಆಗಸ್ಟ್ ತಿಂಗಳಿನಲ್ಲಿ ರಷ್ಯಾದಿಂದ ತೈಲ ಖರೀದಿ ಮಾಡುತ್ತಿದೆ ಎಂದು ನೆಪ ಹೇಳಿ ಭಾರತದ ವಸ್ತುಗಳ ಮೇಲೆ ಶೇ.50% ಭಾರಿ ಪ್ರಮಾಣದ ಸುಂಕಗಳನ್ನು ವಿಧಿಸುವುದರ ಮೂಲಕ ಅಚ್ಚರಿಯಾಗುವಂತೆ ಮಾಡಿತ್ತು. ಇದಾದ ಮೇಲೆ ಉಭಯ ದೇಶಗಳ ನಡುವೆ ಹಲವು ಹಂತಗಳಲ್ಲಿ ಮಾತುಕತೆ ನಡೆದಿವೆ. ಇನ್ನು ಈ ನಡುವೆ ಹಲವು ಬಾರಿ ಟ್ರಂಪ್ ಭಾರತ ಈಗಾಗಲೇ ರಷ್ಯಾದಿಂದ ತೈಲ ಖರೀದಿ ನಿಲ್ಲಿಸಲಿದೆ ಎಂದು ನನಗೆ ಭರವಸೆ ನೀಡಿದೆ ಎಂದು ಹೇಳಿಕೊಂಡಿದ್ದಾರೆ. ಆದರೆ ಭಾರತ ಮಾತ್ರ ತೈಲ ಖರೀದಿಯಲ್ಲಿ ತನ್ನ ನಿಲುವನ್ನು ಸ್ಪಷ್ಟಪಡಿಸುತ್ತಲೇ ಬಂದಿದೆ. ಈ ಮಧ್ಯೆ ಟ್ರಂಪ್ ಖುದ್ದಾಗಿ ಸುಂಕ ಕಡಿಮೆ ಮಾಡುವುದರ ಜೊತೆಗೆ ಭಾರತದೊಂದಿಗೆ ಹೊಸ ಒಪ್ಪಂದವನ್ನು ಮಾಡಿಕೊಳ್ಳಲು ಸಿದ್ದರಾಗಿದ್ದೇವೆ ಎಂದು ಹೇಳಿರುವುದು ಸುಂಕದಿಂದ ಹಳಸಿದ್ದ ದ್ವಿಪಕ್ಷೀಯ ಸಂಬಂಧ ಸುಂಕದಿಂದಲೇ ಸುಧಾರಿಸಲಿದೆಯೇ ಎಂದು ನೋಡಬೇಕಿದೆ.



**ನಾವು ಭಾರತದೊಂದಿಗೆ ಒಂದು ಒಪ್ಪಂದ ಮಾಡಿಕೊಳ್ಳುತ್ತಿದ್ದೇವೆ. ಇದು ಹಿಂದಿನ ಒಪ್ಪಂದಗಳಿಗಿಂತ ಭಿನ್ನವಾಗಿರಲಿದೆ. ಈಗ ಅವರು ನನ್ನನ್ನು ಇಷ್ಟಪಡದೇ ಇರಬಹುದು, ಆದರೆ ಮುಂದೆ ಇಷ್ಟ ಪಡುತ್ತಾರೆ ಎಂದಿರುವ ಟ್ರಂಪ್ ನಮ್ಮ ಹಿಂದಿನ ಒಪ್ಪಂದಗಳು ನ್ಯಾಯಯುತವಾಗಿರಲಿಲ್ಲ.ಆದರೆ ಈಗ ನಾವು ನ್ಯಾಯಯುತವಾದ ಒಪ್ಪಂದಗಳನ್ನು ಮಾಡಿಕೊಳ್ಳಲಿದ್ದೇವೆ ಅದು ಬಹಳ ಶೀಘ್ರವೇ ಆಗಲಿದೆ.**

**-ಡೊನಾಲ್ಡ್ ಟ್ರಂಪ್, ಅಮೆರಿಕದ ಅಧ್ಯಕ್ಷ**

# ಸಣ್ಣ ವಿಮಾನ ಪತನ, ಇಬ್ಬರ ಸಾವು

**ಫ್ಲೋರಿಡಾ:** ಜಮೈಕಾದ ಚಂಡಮಾರುತ ಪರಿಹಾರ ಕಾರ್ಯಾಚರಣೆಯಲ್ಲಿದ್ದ ಸಣ್ಣ ಟರ್ಬೊಪ್ರೊಪ್ ವಿಮಾನವು ಫೋರ್ಟ್ ಲಾಡರ್‌ಡೇಲ್ ಉಪನಗರ ಕೋರಲ್ ಸ್ಪ್ರಿಂಗ್ಸ್‌ನ ಗೇಟೆಡ್‌ವಸತಿ ನೆರೆಹೊರೆಯಲ್ಲಿರುವ ಕೊಳಕ್ಕೆ ಅಪ್ಪಳಿಸಿತು ಇಬ್ಬರು ಸಾವನ್ನಪ್ಪಿದ್ದಾರೆ. ಟೇಕ್ ಆಫ್ ಆದ ಸ್ವಲ್ಪ ಸಮಯದ ನಂತರ ಕಾಣೆಯಾಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕೋರಲ್ ಸ್ಪ್ರಿಂಗ್ಸ್ ಪೊಲೀಸ್ ಇಲಾಖೆ ತನ್ನ ಹೇಳಿಕೆಯಲ್ಲಿ ಸಾವುಗಳನ್ನು ದೃಢಪಡಿಸಿದೆ. ಆದರೆ ಪೊಲೀಸರು ವಿಮಾನದಲ್ಲಿದ್ದವರ ಬಗ್ಗೆ ಹೆಚ್ಚಿನ ವಿವರಗಳನ್ನು ನೀಡಲಿಲ್ಲ. ಅಗ್ನಿಶಾಮಕ ಇಲಾಖೆಯ ಉಪ ಮುಖ್ಯಸ್ಥ ಮೈಕ್ ಮೋಸರ್ ಅವರು ಅಪಘಾತದ ಬಗ್ಗೆ ವರದಿ ಮಾಡಿದ ಕರೆ ಬಂದ ಕೆಲವೇ ನಿಮಿಷಗಳಲ್ಲಿ ತುರ್ತು ಸಿಬ್ಬಂದಿ ಪ್ರತಿಕ್ರಿಯಿಸಿದರು ಎಂದು ಹೇಳಿದರು. ಆರಂಭದಲ್ಲಿ, ರಕ್ಷಣಾ ಪ್ರಯತ್ನಗಳ ಸಮಯದಲ್ಲಿ ಯಾವುದೇ ಶವ ಪತ್ತೆಯಾಗಿಲ್ಲ ನೆಲದಲ್ಲಿನ ಯಾವುದೇ ಮನೆಗಳು ಹಾನಿಗೊಳಗಾಗಿಲ್ಲ ಎಂದು ಮೋಸರ್ ಹೇಳಿದರು, ಆದರೆ ಸಿಬ್ಬಂದಿ ಧಾರಣ ಕೊಳದ ಬಳಿ ಕೆಲವು ಅವಶೇಷಗಳನ್ನು ಗುರುತಿಸಿದರು. ವಿಮಾನವು ನೀರಿಗೆ ಅಪ್ಪಳಿಸುವ ಮೊದಲು ಮನೆಯೊಂದರ ಬೇಲಿ ನಾಶವಾಯಿತು, ತಾಳೆ ಮರಗಳು ಮುರಿದು ಬಿದ್ದವು ಎಂದು ಕೆನ್ನೆತ್ ಡೆಟ್ರೋಲಿಯೊ ಸೌತ್ ಫ್ಲೋರಿಡಾ ಸನ್ ಸೆಂಟಿನೆಲ್‌ಗೆ ತಿಳಿಸಿದರು.



ಫೋರ್ಟ್ ಲಾಡರ್‌ಡೇಲ್ ಕಾರ್ಯನಿರ್ವಾಹಕ ವಿಮಾನ ನಿಲ್ದಾಣದಿಂದ ಸುಮಾರು ಬೆಳಿಗ್ಗೆ 10:14 ಕ್ಕೆ ಸಣ್ಣ ಬೀಚ್‌ಕ್ರಾಫ್ಟ್ ಕಿಂಗ್ ಏರ್ ವಿಮಾನವು ಹಾರಿತು ಎಂದು ಫೋರ್ಟ್ ಲಾಡರ್‌ಡೇಲ್ ನಗರದ ವಕ್ತಾರರು ತಿಳಿಸಿದ್ದಾರೆ. ಫೆಡರಲ್ ಏವಿಯೇಷನ್ ಅಡ್ಮಿನಿಸ್ಟ್ರೇಷನ್ ದಾಖಲೆಗಳ ಪ್ರಕಾರ, ವಿಮಾನವನ್ನು 1976 ರಲ್ಲಿ ತಯಾರಿಸಲಾಯಿತು. ವಿಮಾನ ಮಾಲೀಕರು ಮತ್ತು ಪೈಲಟ್‌ಗಳ ಸಂಘದ ಪ್ರಕಾರ, ಕಿಂಗ್ ಏರ್ ಮಾದರಿಗಳು ಏಳು ರಿಂದ 12 ಜನರು ಕುಳಿತುಕೊಳ್ಳಬಹುದು.

# ಎಸ್‌ಐಆರ್ ಸಾಂವಿಧಾನಿಕ ಸಿಂಧುತ್ವ ಪ್ರಶ್ನಿಸಿ ಅರ್ಜಿ

**ನವದೆಹಲಿ:** ತಮಿಳುನಾಡು, ಪಶ್ಚಿಮ ಬಂಗಾಳದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ ಸಾಂವಿಧಾನಿಕ ಸಿಂಧುತ್ವ ಪ್ರಶ್ನಿಸಿ ಸಲ್ಲಿಸಲಾಗಿರುವ ಅರ್ಜಿಗಳನ್ನು ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್, ಈ ಬಗ್ಗೆ ವಿವರಣೆ ನೀಡುವಂತೆ ಚುನಾವಣಾ ಆಯೋಗಕ್ಕೆ ಮಂಗಳವಾರ ನೋಟಿಸ್ ಜಾರಿಗೊಳಿಸಿದೆ.

ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಹಾಗೂ ಜಾಯ್‌ಮಾಲ್ಯ ಬಾಗ್ಚಿ ಅವರಿದ್ದ ಪೀಠವು ಆಯೋಗಕ್ಕೆ ನೋಟಿಸ್ ನೀಡಿದ್ದು, ಈ ಬಗ್ಗೆ ವಿವರವಾದ ಪ್ರತಿಕ್ರಿಯೆ ನೀಡುವಂತೆ ಸೂಚಿಸಿದೆ ಮುಂದಿನ ವಿಚಾರಣೆ ನವೆಂಬರ್ 26ಕ್ಕೆ ನಡೆಯಲಿದೆ. ಈ ವಿಚಾರಣೆ ಪೂರ್ಣಗೊಳ್ಳುವವರೆಗೆ ತಮಿಳುನಾಡು, ಪಶ್ಚಿಮ ಬಂಗಾಳ ಸೇರಿ ಬೇರೆ ರಾಜ್ಯಗಳಲ್ಲಿ ಎಸ್‌ಐಆರ್ ಪ್ರಶ್ನಿಸಿ ಸಲ್ಲಿಸಲಾಗುವ ಅರ್ಜಿಗಳ ವಿಚಾರಣೆ ತಡೆಹಿಡಿಯುವಂತೆ ಅಥವಾ ಮುಂದೂಡುವಂತೆಯೂ ಹೈಕೋರ್ಟ್‌ಗಳಿಗೆ ಸುಪ್ರೀಂ ಕೋರ್ಟ್ ಆದೇಶಿಸಿದೆ. ಡಿಎಂಕೆ ಪಕ್ಷದ ಪರವಾಗಿ ಹಾಜರಾದ ವಕೀಲ ಕಪಿಲ್ ಸಿಬಲ್ ಅವರು, ಮತದಾರರ ಪಟ್ಟಿ ಪರಿಷ್ಕರಣೆಗೆ ಸಾಮಾನ್ಯವಾಗಿ ಮೂರು ವರ್ಷಗಳು ಬೇಕಾಗುತ್ತವೆ. ಆದರೆ, ಈಗ, ತರಾತುರಿಯಲ್ಲಿ ಎಸ್‌ಐಆರ್ ಜಾರಿಗೊಳಿಸಲಾಗಿದೆ. ಪರಿಷ್ಕರಣೆ ವೇಳೆ ಮತದಾರರ ವಿವರಗಳನ್ನು ಒಳಗೊಂಡ ಅರ್ಜಿಗಳನ್ನು ಅಪ್‌ಲೋಡ್ ಮಾಡಲು 5ಜಿ ನೆಟ್ ವರ್ಕ್ ಬೇಕಾಗುತ್ತದೆ.



ಆದರೆ, ಹಲವೆಡೆ ನೆಟ್‌ವರ್ಕ್ ಸಮಸ್ಯೆ ದೊಡ್ಡ ಮಟ್ಟದಲ್ಲಿದೆ ಎಂದು ಪೀಠದ ಗಮನಕ್ಕೆ ತಂದರು. ಆಯೋಗದ ಪರವಾಗಿ ಹಾಜರಾದ ವಕೀಲ ರಾಕೇಶ್ ದ್ವಿವೇದಿ ಅವರು, ರಾಜ್ಯಗಳು ಅಭಿವೃದ್ಧಿ ಹೊಂದಿವೆ ಎಂದು ಹೇಳಿಕೊಳ್ಳುವ ಬದಲು, ಎಷ್ಟು ಹಿಂದುಳಿದಿವೆ ಎನ್ನುವುದನ್ನು ತೋರಿಸಿಕೊಳ್ಳಲು ಪೈಪೋಟಿ ನಡೆಸುತ್ತಿವೆ ಎಂದರು.

ವಾದ ಆಲಿಸಿದ ಪೀಠವು, ಎಸ್‌ಐಆರ್ ಬಗ್ಗೆ ಇಷ್ಟೊಂದು ಭಯವೇಕೆ ಎಂದು ಅರ್ಜಿದಾರರನ್ನು ಪ್ರಶ್ನಿಸಿತು. ಈ ಬಗ್ಗೆ ವಿವರಣೆ ನೀಡಿದ ಕಪಿಲ್ ಸಿಬಲ್, 'ಎಸ್‌ಐಆರ್ ವಿರೋಧಿಸಲು ರಾಜ್ಯಗಳಿಗೆ ವಿಭಿನ್ನ ಕಾರಣಗಳಿವೆ. ತಮಿಳುನಾಡಿನಲ್ಲಿ ಎಸ್‌ಐಆರ್ ನಡೆಯುವ ಸಮಯದಲ್ಲಿ ಮಳೆಗಾಲ ಇರುತ್ತದೆ. ಬೂತ್ ಮಟ್ಟದ ಅಧಿಕಾರಿಗಳು ಅತಿವೃಷ್ಟಿ ಪರಿಹಾರ ಕಾರ್ಯಕ್ಕೆ ನೇಮಕಗೊಂಡಿರುತ್ತಾರೆ. ಡಿಸೆಂಬರ್-ಜನವರಿಯಲ್ಲಿ ಕಟಾವಿನ ಸಮಯವಾಗಿದ್ದು, ಆಗಲೂ ಸೂಕ್ತ ಸಮಯವಲ್ಲ ಎಂದರು.

ನಿಮ್ಮ ವಾದ ನೋಡಿದರೆ, ನಮ್ಮ ದೇಶದಲ್ಲಿ ಇದೇ ಮೊದಲ ಬಾರಿಗೆ ಎಸ್‌ಐಆರ್ ನಡೆಯುತ್ತಿದೆ ಎನ್ನುವ ರೀತಿಯಲ್ಲಿದೆ. ನಮಗೂ ವಾಸ್ತವಾಂಶದ ಅರಿವು ಇದೆ' ಎಂದು ಪೀಠವು ಅರ್ಜಿದಾರರಿಗೆ ಎಚ್ಚರಿಕೆ ನೀಡಿತು.

# ರಾಜ್ಯದ ಅಧಿಕಾರವನ್ನು ಯಾರು ಹಿಡಿಯುತ್ತಾರೆ ಎಂಬ ಕುತೂಹಲ

## ಮತದಾನೋತ್ತರ ಸಮೀಕ್ಷೆ ಏನು ಹೇಳುತ್ತೆ? ಯಾವ ಪಕ್ಷಕ್ಕೆ ಎಷ್ಟು ಸ್ಥಾನ?, ವಿ. ಚುನಾವಣೆಯ ಮತದಾನ ಪ್ರಕ್ರಿಯೆ 2 ಹಂತಗಳಲ್ಲಿ ಪೂರ್ಣ

**ಹೊಸದಿಲ್ಲಿ:** ದೇಶದ ಗಮನ ಸೆಳೆದ ಬಿಹಾರ ವಿಧಾನಸಭಾ ಚುನಾವಣೆಯ ಮತದಾನ ಪ್ರಕ್ರಿಯೆ 2 ಹಂತಗಳಲ್ಲಿ ಪೂರ್ಣಗೊಂಡಿದೆ. ಮೊದಲ ಹಂತದಲ್ಲಿ ದಾಖಲೆಯ ಮತದಾನವಾಗಿದ್ದು, 2 ನೇ ಹಂತದ ಮತದಾನವು ಮಂಗಳವಾರ ಸಂಜೆ ಮುಕ್ತಾಯವಾಗಿದೆ. ಈ ಬೆನ್ನಲ್ಲೆ ಚುನಾವಣೋತ್ತರ ಸಮೀಕ್ಷೆ ಹೊರ ಬಿದ್ದಿದೆ. ಈ ಬಾರಿ ರಾಜ್ಯದ ಅಧಿಕಾರವನ್ನು ಯಾರು ಹಿಡಿಯುತ್ತಾರೆ ಎಂಬ ಕುತೂಹಲ ಎಲ್ಲೆಡೆ ಮನೆ ಮಾಡಿದೆ. ಪ್ರಮುಖ ಸಮೀಕ್ಷಾ ಸಂಸ್ಥೆಗಳಾದ ಎಬಿಪಿ ಸಿ ವೋಟರ್, ಟುಡೇಸ್ ಚಾಣಕ್ಯ, ರಿಪಬ್ಲಿಕ್ ಪಿ ಮಾರ್ಕ್, ಇಂಡಿಯಾ ಟುಡೇ ಆಕ್ಸಿಸ್ ಮೈ ಇಂಡಿಯಾ ಸೇರಿದಂತೆ 10 ಕ್ಕೂ ಅಧಿಕ ಸಂಸ್ಥೆಗಳು ತಮ್ಮ ಸಮೀಕ್ಷೆಯನ್ನು ನೀಡುತ್ತಿವೆ. ಯಾವ ಸಂಸ್ಥೆಯ ಸಮೀಕ್ಷೆ ಏನಿದೆ 243 ವಿಧಾನಸಭಾ ಸ್ಥಾನಗಳ ಪೈಕಿ ಯಾವ ಪಕ್ಷಕ್ಕೆ ಎಷ್ಟು ಸ್ಥಾನ ಆಡಳಿತಾರೂಢ ಎನ್‌ಡಿಎಗೆ ವರದಾನವಾಗಲಿದೆಯೇ ಅಥವಾ ಯುವ ನಾಯಕ ತೇಜಸ್ವಿ ಯಾದವ್ ನೇತೃತ್ವದ ಮಹಾಘಟಬಂಧನ್‌ಗೆ ಅಧಿಕಾರದ ಬಾಗಿಲು ತೆರೆಯಲಿದೆಯೇ ವಿವರ ಇಲ್ಲಿದೆ.

**2 ಹಂತದಲ್ಲಿ ನಡೆದ ಮತದಾನ:** ಬಿಹಾರ ವಿಧಾನಸಭೆಯ 122 ಕ್ಷೇತ್ರಗಳಿಗೆ ಮಂಗಳವಾರ 2ನೇ ಮತ್ತು ಅಂತಿಮ ಹಂತದ ಚುನಾವಣೆ ನಡೆಯಿತು. 122 ವಿಧಾನಸಭಾ ಕ್ಷೇತ್ರಗಳಲ್ಲಿ ಒಟ್ಟು 45,399 ಮತಗಟ್ಟೆಗಳಲ್ಲಿ ಮತದಾನವಾಗಿದೆ. ನವೆಂಬರ್ 6 ರಂದು ಮೊದಲ ಹಂತದ ಚುನಾವಣೆ ಮುಕ್ತಾಯಗೊಂಡಿದ್ದು, ಶೇ. 65.08ರಷ್ಟು ಮತದಾನವಾಗಿತ್ತು. ಇದು ರಾಜ್ಯದ ಇತಿಹಾಸದಲ್ಲಿಯೇ ಅತ್ಯಧಿಕವಾಗಿದೆ ಎಂದು ಕೇಂದ್ರ ಚುನಾವಣಾ ಆಯೋಗ ತಿಳಿಸಿತ್ತು.

**ಎನ್‌ಡಿಎ ಮೈತ್ರಿಕೂಟವು ಅಧಿಕಾರ ಉಳಿಸಿಕೊಳ್ಳಲು ಪ್ರಯತ್ನ:** ರಾಜ್ಯದಲ್ಲಿ ನಡೆಯುತ್ತಿರುವ ವಿಧಾನಸಭಾ ಚುನಾವಣೆಯಲ್ಲಿ, ಆಡಳಿತಾರೂಢ ಎನ್‌ಡಿಎ ಮೈತ್ರಿಕೂಟವು ಅಧಿಕಾರ ಉಳಿಸಿಕೊಳ್ಳಲು ಪ್ರಯತ್ನಿಸುತ್ತಿದೆ. ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ಜೆಡಿಯು, ಬಿಜೆಪಿ ಮತ್ತು ಇತರ ಮಿತ್ರಪಕ್ಷಗಳು ಈ ಮೈತ್ರಿಕೂಟದಲ್ಲಿವೆ. ಒಂಬತ್ತು ಬಾರಿ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿರುವ ನಿತೀಶ್ ಕುಮಾರ್ ಅವರೇ ಈ ಮೈತ್ರಿಕೂಟದ ಮುಖ. ಆದರೆ, 74 ವರ್ಷದ ಅವರು ಆಡಳಿತ ವಿರೋಧಿ ಅಲೆಯನ್ನೂ ಎದುರಿಸುತ್ತಿದ್ದಾರೆ. ಇತ್ತ, ವಿರೋಧ ಪಕ್ಷಗಳ ಐಎನ್‌ಡಿಐಎ ಬಣವನ್ನು ರಾಷ್ಟ್ರೀಯ ಜನತಾ ದಳದ (ಆರ್‌ಜೆಡಿ) ತೇಜಸ್ವಿ ಯಾದವ್ ಮುನ್ನಡೆಸುತ್ತಿದ್ದಾರೆ. ಇದರಲ್ಲಿ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್, ಎಡಪಕ್ಷಗಳು ಸೇರಿವೆ. ಯಾದವ್ ಅವರು ಸಾಮಾಜಿಕ ನ್ಯಾಯದ ವಿಷಯಗಳ ಮೇಲೆ ಗಮನ ಕೇಂದ್ರೀಕರಿಸಿ, ಪ್ರಬಲ ಸ್ಪರ್ಧಿಯಾಗಿ ಹೊರಹೊಮ್ಮುತ್ತಿದ್ದಾರೆ. ಈ ಚುನಾವಣೆಯಲ್ಲಿ ರಾಜಕೀಯ ತಂತ್ರಗಾರಿಕೆಗೆ ಹೆಸರಾಗಿರುವ ಪ್ರಶಾಂತ್ ಕಿಶೋರ್ ಅವರ ಹೊಸ ಪಕ್ಷ 'ಜನ್ ಸುರಾಜ್' ಕೂಡ ಕಣದಲ್ಲಿದ್ದು, ಭಾರೀ ಕುತೂಹಲ ಕೆರಳಿಸಿದೆ. ಈ ಹೊಸ ಪಕ್ಷ ಅನಿರೀಕ್ಷಿತ ಫಲಿತಾಂಶಗಳಿಗೆ ಕಾರಣವಾಗಲೂಬಹುದು.

ಈ ಬಾರಿಯ ಚುನಾವಣಾ ಪ್ರಚಾರವು ಅಭಿವೃದ್ಧಿ, ನಿರುದ್ಯೋಗ, ಕಾನೂನು ಮತ್ತು ಸುವ್ಯವಸ್ಥೆ, ಹಾಗೂ ಸಾಂಪ್ರದಾಯಿಕ ಜಾತಿ ಆಧಾರಿತ ರಾಜಕೀಯದಂತಹ ವಿಷಯಗಳ ಸುತ್ತ ಕೇಂದ್ರೀಕೃತವಾಗಿತ್ತು. ನಿತೀಶ್ ಕುಮಾರ್ ಅವರ 'ವಿಕಾಸ ಪುರುಷ' ಇಮೇಜ್ ಅನ್ನು ಮುಂದಿಟ್ಟುಕೊಂಡು ಎನ್‌ಡಿಎ ಪ್ರಚಾರ ನಡೆಸಿತ್ತು. ಅವರು ತಮ್ಮ 'ಸಂಕಲ್ಪ ಪತ್ರ'ವನ್ನು ಬಿಡುಗಡೆ ಮಾಡಿದ್ದಾರೆ. ಇದರಲ್ಲಿ ಭಾರೀ ಸಂಖ್ಯೆಯ ಸರ್ಕಾರಿ ಉದ್ಯೋಗಗಳ ಸೃಷ್ಟಿ, ಏಳು ಹೊಸ ಎಕ್ಸ್‌ಪ್ರೆಸ್ ವೇಗಳ ನಿರ್ಮಾಣ, ಮತ್ತು ಆರ್ಥಿಕವಾಗಿ ಹಿಂದುಳಿದ ವರ್ಗಗಳಿಗೆ (ಇಬಿಸಿ) ಆರ್ಥಿಕ ನೆರವಿನಂತಹ ಪ್ರಮುಖ ಭರವಸೆಗಳಿವೆ.




**ಆಡಳಿತ ವಿರೋಧಿ ಅಲೆ**

**ಎನ್‌ಡಿಎ ಮೈತ್ರಿಕೂಟಕ ಎಷ್ಟು ಸ್ಥಾನಗಳಲ್ಲಿ ಸ್ಪರ್ಧೆ?**

| | |
|---|---|
| ಜೆಡಿಯು | 101 |
| ಬಿಜೆಪಿ | 101 |
| ಎಲ್‌ಜೆಪಿ (ರಾಮ್ ವಿಲಾಸ್) | 29 |
| ರಾಷ್ಟ್ರೀಯ ಲೋಕ ಮೋರ್ಚಾ | 6 |
| ಹಿಂದೂಸ್ತಾನ ಆವಾಮ್ ಮೋರ್ಚಾ | 6 |

**ಮಹಾಘಟಬಂಧನ್ ಮೈತ್ರಿಕೂಟ ಎಷ್ಟು ಸ್ಥಾನಗಳಲ್ಲಿ ಸ್ಪರ್ಧೆ?**

| | |
|---|---|
| ಆರ್‌ಜೆಡಿ | 143 |
| ಕಾಂಗ್ರೆಸ್ | 61 |
| ಸಿಪಿಐ (ಎಂ-ಎಲ್) | 20 |
| ವಿಕಾಸಶೀಲ್ ಇನ್ಸಾನ್ ಪಾರ್ಟಿ | 12 |
| ಸಿಪಿಐ | 9 |
| ಸಿಪಿಐ(ಎಂ) | 4 |



## ಹೊಸ ಲುಕ್‌ನಲ್ಲಿ ಪ್ರಿಯಾಂಕಾ ಉಪೇಂದ್ರ

ವಿಭಿನ್ನ ವಿಧ್ಯಮಯ ಪಾತ್ರಗಳಲ್ಲಿ ಅಭಿನಯಿಸಿ ಸೈ ಎನಿಸಿಕೊಂಡಿರುವ ನಟಿ ಪ್ರಿಯಾಂಕಾ ಉಪೇಂದ್ರ, ನಟಿಸಿರುವ ಹೊಸ ಚಿತ್ರ 'ಸಪ್ಟೆಂಬರ್ 21' ಚಿತ್ರ ತಂಡ ಈಗಾಗಲೇ ಪೋಸ್ಟ್ ಪ್ರೊಡಕ್ಷನ್ ಕೆಲಸ ಮುಗಿಸಿ ಬಿಡುಗಡೆಗೆ ಸಿದ್ದವಾಗಿದೆ. ಈ ಸಿನಿಮಾ ಹಿಂದಿ ಮತ್ತು ಕನ್ನಡ ಭಾಷೆಯಲ್ಲಿ ಚಿತ್ರೀಕರಣಗೊಂಡಿದ್ದು, 2026ರಲ್ಲಿ ಬಿಡುಗಡೆ ಮಾಡಲು ಚಿತ್ರತಂಡ ನಿರ್ಧರಿಸಿದೆ. ಚಿತ್ರದ ನಿರ್ದೇಶನವನ್ನು 21 ವರ್ಷದ ಕರೆನ್ ಕ್ಷಿತಿ ಸುವರ್ಣ ಮಾಡಿದ್ದಾರೆ. ಇದು ಅವರ ನಿರ್ದೇಶನದ ಮೊದಲ ಚಿತ್ರ. ಹಾಗೆ ಇದೇ ನವಂಬರ್ 20 ರಿಂದ ನವಂಬರ್ 24ರ ವರೆಗೆ ನಡೆಯುವ 56ನೇ ಗೋವಾ ಅಂತರಾಷ್ಟ್ರೀಯ ಚಿತ್ರೋತ್ಸವದಲ್ಲಿ ಈ ಚಿತ್ರ ಪ್ರದರ್ಶನಗೊಳ್ಳಲಿದೆ.

ಪ್ರಿಯಾಂಕಾ ಅವರ ಹುಟ್ಟು ಹಬ್ಬದ ಪ್ರಯುಕ್ತ ಚಿತ್ರತಂಡ ಚಿತ್ರದ ಮೊದಲ ಪೋಸ್ಟರ್ ಬಿಡುಗಡೆ ಮಾಡಲು ತೀರ್ಮಾನಿಸಿದೆ. ಈ ಚಿತ್ರದಲ್ಲಿ ಅವರು ಮೊದಲ ಬಾರಿಗೆ ಮಧ್ಯಮ ವರ್ಗದ ಮಹಿಳೆಯ ಪಾತ್ರ ಮಾಡಿದ್ದಾರೆ. 'ಇದು ನನ್ನ ವೃತ್ತಿ ಜೀವನದ ಅತ್ಯಂತ ಸವಾಲಿನ ಪಾತ್ರ ಇದಾಗಿದ್ದು, ಅದನ್ನ ಅಷ್ಟೇ ಸೊಗಸಾಗಿ ಯುವ ನಿರ್ದೇಶಕಿ ಚಿತ್ರೀಕರಿಸಿದ್ದಾರೆ' ಎಂದು ಅವರು ಹೇಳಿದ್ದಾರೆ.

ಅನೇಕ ಬಾಲಿವುಡ್ ನಟ ನಟಿಯರ ದಂಡೇ ಈ ಚಿತ್ರದಲ್ಲಿ ಇದೆ. ಮುಖ್ಯ ಪಾತ್ರದಲ್ಲಿ ಪ್ರವೀಣ್ ಸಿಂಗ್ ಸಿಸೋಡಿಯ, ಝರಿನ ವಾಹಬ್, ಅಮಿತ್ ಬೇಲ್, ಅಜಿತ್ ಶಿದಾಯೆ, ಸಚಿನ್ ಪಾಟೇಕರ್ ನಟಿಸಿದ್ದಾರೆ. ಅಲ್ಜೈಮರ್ ಕಾಯಿಲೆ ಸುತ್ತ ನಡೆಯುವ ಕಥೆ ಇದಾಗಿದ್ದು, ರೋಗಿಗಿಂತ ಅವನ ಪಾಲನೆ ಮಾಡುವವರು ತೆಗೆದುಕೊಳ್ಳುವ ನಿರ್ಧಾರ ತುಂಬಾ ಮುಖ್ಯ ಎಂಬುದು ಚಿತ್ರದ ಅಡಿಬರಹವಾಗಿದೆ. ರಾಜಶೇಖರ್ ಕಥೆಗೆ, ವಿನಯ್ ಚಂದ್ರ ಸಂಗೀತವಿದ್ದು, ಅನಿಲ್ ಕುಮಾರ್ ಛಾಯಾಗ್ರಹಣ ಮಾಡಿದ್ದಾರೆ. ಈ ಚಿತ್ರವನ್ನು ಬಾಲಿವುಡ್ ನಿರ್ದೇಶಕ ಇಮ್ತಿಯಜ್ ಆಲಿ ಪತ್ನಿ ಪ್ರೀತಿ ಆಲಿ ತಮ್ಮ ಹಮಾರಾ ಮೂವಿ ಸಹಭಾಗಿತ್ವದಲ್ಲಿ ಎಫ್‌ಎಂಡಿ ವಿಸಿಕ ಫಿಲಂಸ್ ಮತ್ತು ಫಿಲಂ ಮ್ಯಾಕ್ಸ್ ಪ್ರೊಡಕ್ಷನ್ ಜಂಟಿಯಾಗಿ ನಿರ್ಮಿಸುತ್ತಿದೆ.

## ಸಲ್ಮಾನ್ ಖಾನ್ ಸಖತ್ ದೇಸಿ. ಒಬ್ಬ ರೈತ



ನಟಿ ಶೆಹನಾಜ್ ಗಿಲ್ ಅವರು ಸಲ್ಮಾನ್ ಖಾನ್ ಅವರ ಆಪ್ತ ಬಳಗದಲ್ಲಿ ಗುರುತಿಸಿಕೊಂಡಿದ್ದಾರೆ. 'ಹಿಂದಿ ಬಿಗ್ ಬಾಸ್ 13' ರಿಯಾಲಿಟಿ ಶೋನಲ್ಲಿ ಅವರು ಸ್ಪರ್ಧಿಸಿದ್ದರು. ಆ ಸೀಸನ್‌ನಲ್ಲಿ ಅವರು ಬಹಳ ಸೆನ್ಸೇಷನ್ ಸೃಷ್ಟಿ ಮಾಡಿದ್ದರು. 2ನೇ ರನ್ನರ್ ಅಪ್ ಸ್ಥಾನ ಅವರಿಗೆ ಸಿಕ್ಕಿತು. ಬಳಿಕ 'ಕಿಸಿ ಕಾ ಭಾಯ್ ಕಿಸಿ ಕಿ ಜಾನ್' ಸಿನಿಮಾದಲ್ಲಿ ಸಲ್ಮಾನ್ ಖಾನ್ ಜೊತೆ ನಟಿಸುವ ಅವಕಾಶ ಕೂಡ ಅವರಿಗೆ ಸಿಕ್ಕಿತು. ಅಲ್ಲದೇ, ಸಲ್ಮಾನ್ ಖಾನ್ ಫಾರ್ಮ್ ಹೌಸ್‌ನಲ್ಲಿ ನಡೆಯುವ ಪಾರ್ಟಿಯಲ್ಲಿಯೂ ಶೆಹನಾಜ್ ಗಿಲ್ ಅವರು ಭಾಗಿ ಆಗಿದ್ದರು. ಅಲ್ಲಿ ಏನೆಲ್ಲ ನಡೆಯುತ್ತದೆ ಎಂಬುದನ್ನು ಅವರು ಈಗ ಹೇಳಿದ್ದಾರೆ.

ಯೂಟ್ಯೂಬರ್ ರಣ್ವೀರ್ ಅಲಹಾಬಾದಿಯಾ ಅವರು ನಡೆಸಿದ ಸಂದರ್ಶನದಲ್ಲಿ ಶೆಹನಾಜ್ ಗಿಲ್ ಅವರು ಮಾತನಾಡಿದ್ದಾರೆ. 'ಕಿಸಿ ಕಾ ಭಾಯ್ ಕಿಸಿ ಕಿ ಜಾನ್ ಸಿನಿಮಾ ಸಮಯದಲ್ಲಿ ನಾವೆಲ್ಲರೂ ಅವರ ಫಾರ್ಮ್ ಹೌಸ್‌ಗೆ ಹೋಗುತ್ತಿದ್ದೆವು. ಒಂದೆರಡು ದಿನ ನಾವು ಅಲ್ಲಿಯೇ ಉಳಿದುಕೊಂಡಿದ್ದೆವು. ಅಲ್ಲಿ ಸಲ್ಮಾನ್ ಖಾನ್ ಅವರ ಬೈಕ್ ಇದೆ. ಅದರಲ್ಲಿ ನಾವೆಲ್ಲ ಸುತ್ತಾಡಿದೆವು. ನಮಗೆಲ್ಲ ಸಲ್ಮಾನ್ ಖಾನ್ ಅವರು ಮರದಿಂದ ಹಣ್ಣುಗಳನ್ನು ಕಿತ್ತು ಕೊಡುತ್ತಿದ್ದರು' ಎಂದು ಶೆಹನಾಜ್ ಗಿಲ್ ಹೇಳಿದ್ದಾರೆ.

'ಸಲ್ಮಾನ್ ಖಾನ್ ಅವರು ಸಖತ್ ದೇಸಿ. ಒಬ್ಬ ರೈತನ ರೀತಿ ಅವರು ಫಾರ್ಮ್ ಹೌಸ್‌ನಲ್ಲಿ ಕೆಲಸ ಮಾಡುತ್ತಾರೆ. ಅದಕ್ಕೆ ಅವರು ಪೂರ್ತಿ ವ್ಯವಸ್ಥೆ ಮಾಡಿಕೊಂಡಿದ್ದಾರೆ. ಅವರೊಳಗೆ ದೇಸಿ ಗುಣ ಬಹಳ ಇದೆ. ಯಾವಾಗಲೂ ಅವರು ಕೆಲಸದ ಬಗ್ಗೆ ಮಾತನಾಡುತ್ತಾರೆ. ಸಿನಿಮಾಗಳಲ್ಲಿನ ಸಾಹಸ ದೃಶ್ಯಗಳ ಕುರಿತು ಮಾತನಾಡುತ್ತಾರೆ. ಅದರ ಬಗ್ಗೆ ಅವರಿಗೆ ತುಂಬಾ ಜ್ಞಾನ ಇದೆ' ಎಂದಿದ್ದಾರೆ ಶೆಹನಾಜ್ ಗಿಲ್. 2019ರಲ್ಲಿ 'ಬಿಗ್ ಬಾಸ್ 13' ಪ್ರಸಾರ ಆಗಿತ್ತು. ಅದರಲ್ಲಿ ಸ್ಪರ್ಧಿಸಿದ್ದ ಶೆಹನಾಜ್ ಗಿಲ್ ಬಗ್ಗೆ ಸಲ್ಮಾನ್ ಖಾನ್ ಅವರು ಬಹಳ ಕಾಳಜಿ ವಹಿಸುತ್ತಿದ್ದರು.

## ಬಿಗ್‌ಬಾಸ್ ಗೆದ್ದ ಟಿವಿ ನಟಿ ಅನುಮೋಲ್



ಬಿಗ್‌ಬಾಸ್ ಕನ್ನಡ ಸೀಸನ್ 12 ಇನ್ನೂ ಚಾಲ್ತಿಯಲ್ಲಿದೆ. ಶೋ ಶುರುವಾಗಿ ಕೆಲವೇ ವಾರಗಳಷ್ಟೆ ಆಗಿದೆ. ಆದರೆ ನೆರೆಯ ಮಲಯಾಳಂನಲ್ಲಿ ಬಿಗ್‌ಬಾಸ್ ಶೋ ನಿನ್ನೆಯಷ್ಟೆ ಮುಕ್ತಾಯವಾಗಿದೆ. ಬಿಗ್‌ಬಾಸ್ ಶೋನಲ್ಲಿ ಮಲಯಾಳಂ ಟಿವಿ ನಟಿ ಅನುಮೋಲ್ ಅವರು ವಿಜೇತರಾಗಿದ್ದಾರೆ. ಸಾಮಾನ್ಯರಾಗಿ ಬಿಗ್ ಬಾಸ್ ಮನೆಗೆ ಎಂಟ್ರಿ ನೀಡಿದ್ದ ಅನೀಶ್ ತಾರಾಯಿಲ್ ಅವರು ರನ್ನರ್ ಅಪ್ ಎನಿಸಿಕೊಂಡಿದ್ದಾರೆ. ಬಿಗ್ ಬಾಸ್ ಶೋ ಗೆದ್ದ ಅನುಮೋಲ್‌ಗೆ ಭರ್ಜರಿ ನಗದು ಬಹುಮಾನ ಹಾಗೂ ದುಬಾರಿ ಉಡುಗೊರೆಗಳು ದೊರೆತಿವೆ.

ಬಿಗ್‌ಬಾಸ್ ಮಲಯಾಳಂ ವಿಜೇತರಾದ ಅನುಮೋಲ್ ಅವರಿಗೆ 42.55 ಲಕ್ಷ ರೂಪಾಯಿ ನಗದನ್ನು ಬಹುಮಾನವಾಗಿ ನೀಡಲಾಯ್ತು. ಅಸಲಿಗೆ ಶೋನ ಒಟ್ಟು ಬಹುಮಾನದ ಮೊತ್ತ 50 ಲಕ್ಷ ರೂಪಾಯಿಗಳಾಗಿತ್ತು, ಆದರೆ ಬಿಗ್ ಬ್ಯಾಂಕ್ ಟಾಸ್ಕ್‌ನ ವೇಳೆ 7.50 ಲಕ್ಷ ಮೊತ್ತವನ್ನು ಇತರೆ ಸ್ಪರ್ಧಿಗಳಿಗೆ ಹಂಚಲಾಯ್ತು. ಹಾಗಾಗಿ ವಿಜೇತರಿಗೆ 42.55 ಲಕ್ಷ ರೂಪಾಯಿಗಳು ಮಾತ್ರವೇ ದೊರಕಿದವು. ನಗದು ಬಹುಮಾನ ಮಾತ್ರವೇ ಅಲ್ಲದೆ ಹೊಚ್ಚ ಹೊಸ ಎಸ್‌ಯುವಿ ಕಾರೊಂದನ್ನು ಸಹ ಬಹುಮಾನವಾಗಿ ನಟಿ ಅನುಮೋಲ್ ಅವರಿಗೆ ನೀಡಲಾಯ್ತು. ಇಡೀ ಸೀಸನ್‌ನಲ್ಲಿ ಅದ್ಭುತವಾಗಿ ಆಡಿದ್ದ, ಪ್ರೇಕ್ಷಕರ ಮೆಚ್ಚುಗೆ ಗಳಿಸಿದ್ದ ಸ್ಪರ್ಧಿ ಅನೀಶ್ ರನ್ನರ್ ಅಪ್ ಆದರು. ಅನೀಶ್, ಸಾಮಾನ್ಯರಾಗಿ ಬಿಗ್‌ಬಾಸ್ ಮನೆ ಪ್ರವೇಶಿಸಿದ್ದರು. ಆದರೆ ಬಿಗ್‌ಬಾಸ್ ಮನೆಯಲ್ಲಿ ಅದ್ಭುತವಾಗಿ ಅವರು ಆಟವಾಡಿದರು. ಅವರ ಹಾಗೂ ಅನುಮೋಲ್ ನಡುವೆ ಮೊದಲ ಸ್ಥಾನಕ್ಕೆ ಪೈಪೋಟಿ ಶುರುವಾಗಿತ್ತು. ಅಂತಿಮವಾಗಿ ನಟಿ ಅನುಮೋಲ್ ವಿಜೇತರಾದರು. ಅನುಮೋಲ್, ಮಲಯಾಳಂ ಜನಪ್ರಿಯ ಟಿವಿ ತಾರೆಯರಲ್ಲಿ ಒಬ್ಬರಾಗಿದ್ದಾರೆ. ಕೆಲವಾರು ಸಿನಿಮಾಗಳಲ್ಲಿಯೂ ಅನುಮೋಲ್ ನಟಿಸಿದ್ದಾರೆ. 29 ವರ್ಷ ವಯಸ್ಸಿನ ಅನುಮೋಲ್ ಅವರು ಸೋಷಿಯಲ್ ಮೀಡಿಯಾ ಇನ್‌ಫ್ಲುಯೆನ್ಸರ್ ಸಹ ಆಗಿದ್ದು, ಅಲ್ಲಿಯೂ ಸಹ ಅವರಿಗೆ ದೊಡ್ಡ ಸಂಖ್ಯೆಯ ಫಾಲೋವರ್‌ಗಳು ಇದ್ದಾರೆ.

## ನಿಶ್ಚಿತಾರ್ಥ ಗುಟ್ಟಾಗಿ ನಡೆದಿದೆ

## ಮದುವೆ ಬಗ್ಗೆ ಸುದ್ದಿಗೋಷ್ಠಿ ನಡೆಸಲಿರುವ ರಶ್ಮಿಕಾ, ವಿಜಯ್ ದೇವರಕೊಂಡ





ನಟಿ ರಶ್ಮಿಕಾ ಮಂದಣ್ಣ ಮತ್ತು ನಟ ವಿಜಯ್ ದೇವರಕೊಂಡ ನಡುವಿನ ಪ್ರೇಮ್ ಕಹಾನಿ ಗುಟ್ಟಾಗಿ ಉಳಿದಿಲ್ಲ. ತಮ್ಮ ರಿಲೇಷನ್‌ಶಿಪ್ ಬಗ್ಗೆ ಈ ಜೋಡಿ ನೇರವಾಗಿ ಏನನ್ನೂ ಹೇಳಿಲ್ಲ. ಆದರೆ ತಿರಸ್ಕರಿಸಿಯೂ ಇಲ್ಲ. ಇತ್ತೀಚೆಗೆ ವಿಜಯ್ ದೇವರಕೊಂಡ ಮನೆಯಲ್ಲಿ ಎಂಗೇಜ್‌ಮೆಂಟ್ ನಡೆದಿದೆ ಎಂಬ ಸುದ್ದಿ ಹಬ್ಬಿದೆ. ಆ ಬಗ್ಗೆ ಮಾಹಿತಿ ನೀಡಲು ರಶ್ಮಿಕಾ ಮಂದಣ್ಣ ಮತ್ತು ವಿಜಯ್ ದೇವರಕೊಂಡ ಅವರು ಒಟ್ಟಿಗೆ ಸುದ್ದಿಗೋಷ್ಠಿ ನಡೆಸುವ ಸಾಧ್ಯತೆ ಇದೆ. ಬುಧವಾರ ಹೈದರಾಬಾದ್‌ನಲ್ಲಿ ಸುದ್ದಿಗೋಷ್ಠಿ ನಡೆಯಲಿದೆ. 'ದಿ ಗರ್ಲ್‌ಫ್ರೆಂಡ್' ಸಿನಿಮಾಗೆ ಪಾಸಿಟಿವ್ ವಿಮರ್ಶೆ ಸಿಕ್ಕಿರುವ ಹಿನ್ನೆಲೆಯಲ್ಲಿ ಸುದ್ದಿಗೋಷ್ಠಿ ನಡೆಸಲು ಪ್ಲ್ಯಾನ್ ಮಾಡಲಾಗಿದೆ. ರಶ್ಮಿಕಾ ಮಂದಣ್ಣ, ದೀಕ್ಷಿತ್ ಶೆಟ್ಟಿ ಮುಖ್ಯ ಭೂಮಿಕೆ ನಿಭಾಯಿಸಿರುವ 'ದಿ ಗರ್ಲ್‌ಫ್ರೆಂಡ್' ಸಿನಿಮಾ ನವೆಂಬರ್ 7ರಂದು ಬಿಡುಗಡೆ ಆಯಿತು. ಈ ಸಿನಿಮಾಗೆ ಇನ್ನಷ್ಟು ಪ್ರಚಾರ ನೀಡಲು ಚಿತ್ರತಂಡ ಮುಂದಾಗಿದೆ. ಹಾಗಾಗಿ ಹೈದರಾಬಾದ್‌ನಲ್ಲಿ ಸುದ್ದಿಗೋಷ್ಠಿ ನಡೆಸಲು ತೀರ್ಮಾನಿಸಲಾಗಿದೆ. ಈ ಸುದ್ದಿಗೋಷ್ಠಿಗೆ ವಿಜಯ್ ದೇವರಕೊಂಡ ಅವರು ಮುಖ್ಯ ಅತಿಥಿಯಾಗಿ ಆಗಮಿಸಲಿದ್ದಾರೆ ಎನ್ನಲಾಗಿದೆ. ವಿಜಯ್ ದೇವರಕೊಂಡ ಮತ್ತು ರಶ್ಮಿಕಾ ಮಂದಣ್ಣ ಅವರ ನಿಶ್ಚಿತಾರ್ಥ ಗುಟ್ಟಾಗಿ ನಡೆದಿದೆ. ಆ ಬಳಿಕ ಅವರು ಇದೇ ಮೊದಲ ಬಾರಿಗೆ ಸಾರ್ವಜನಿಕವಾಗಿ ಕಾಣಿಸಿಕೊಳ್ಳಲಿದ್ದಾರೆ. ಅವರಿಬ್ಬರು ಒಟ್ಟಿಗೆ ಮಾಧ್ಯಮದ ಎದುರು ಬಂದರೆ ಖಂಡಿತವಾಗಿಯೂ ಎಂಗೇಜ್‌ಮೆಂಟ್ ಬಗ್ಗೆ ಪ್ರಶ್ನೆ ಎದುರಾಗಲಿದೆ. ಮಾಧ್ಯಮದವರ ಪ್ರಶ್ನೆಗೆ ಉತ್ತರ ನೀಡಲು ಅವರಿಬ್ಬರು ಸಜ್ಜಾಗಿದ್ದಾರೆ ಎಂಬ ಮಾಹಿತಿ ಇದೆ.

ಮೂಲಗಳ ಪ್ರಕಾರ, ಅಕ್ಟೋಬರ್ 3ರಂದು ವಿಜಯ್ ದೇವರಕೊಂಡ ಮತ್ತು ರಶ್ಮಿಕಾ ಮಂದಣ್ಣ ಅವರು ಎಂಗೇಜ್ ಮೆಂಟ್ ಮಾಡಿಕೊಂಡರು. ಆಪ್ತರು ಮತ್ತು ಕುಟುಂಬದವರು ಮಾತ್ರ ಹಾಜರಿ ಹಾಕಿದ್ದರು. ಈವರೆಗೂ ನಿಶ್ಚಿತಾರ್ಥದ ಫೋಟೋ ಹೊರಬಂದಿಲ್ಲ. 2026ರ ಫೆಬ್ರವರಿ 26ರಂದು ರಾಜಸ್ಥಾನದ ಉದಯಪುರದಲ್ಲಿ ರಶ್ಮಿಕಾ ಮಂದಣ್ಣ-ವಿಜಯ್ ದೇವರಕೊಂಡ ಹಸೆಮಣೆ ಏರಲಿದ್ದಾರೆ. ಈ ಮೊದಲು ರಶ್ಮಿಕಾ ಮಂದಣ್ಣ ಅವರಿಗೆ ರಕ್ಷಿತ್ ಶೆಟ್ಟಿ ಜೊತೆ ನಿಶ್ಚಿತಾರ್ಥ ಆಗಿತ್ತು. ಆದರೆ ವೈಮನಸ್ಸು ಉಂಟಾಗಿದ್ದರಿಂದ ಆ ಸಂಬಂಧ ಮುರಿದುಬಿತ್ತು. ಬಳಿಕ ರಶ್ಮಿಕಾ ಅವರು ವಿಜಯ್ ದೇವರಕೊಂಡ ಜೊತೆ ಆಪ್ತತೆ ಬೆಳೆಸಿಕೊಂಡರು. 'ಗೀತಾ ಗೋವಿಂದಂ' ಸಿನಿಮಾದಲ್ಲಿ ಮೊದಲ ಬಾರಿಗೆ ಒಟ್ಟಿಗೆ ನಟಿಸಿದ ಅವರು ಸಿಕ್ಕಾಪಟ್ಟೆ ಕ್ಲೋಸ್ ಆದರು.

## ಹೊಸ ಕ್ರಿಕೆಟ್ ಕ್ರೀಡಾಂಗಣಕ್ಕೆ ರಿಚಾ ಘೋಷ್ ಹೆಸರು ಘೋಷಣೆ




ಭಾರತೀಯ ಮಹಿಳಾ ತಂಡ ಇತ್ತೀಚೆಗೆ ನಡೆದಿದ್ದ 2025 ರ ಮಹಿಳಾ ವಿಶ್ವಕಪ್ ಫೈನಲ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡವನ್ನು 52 ರನ್‌ಗಳಿಂದ ಮಣಿಸಿ ಐತಿಹಾಸಿಕ ಗೆಲುವು ದಾಖಲಿಸಿತ್ತು. ಭಾರತ ಮಹಿಳಾ ತಂಡದ ಈ ಸಾಧನೆಗೆ ಎಲ್ಲೆಡೆ ಮೆಚ್ಚುಗೆ ವ್ಯಕ್ತವಾಗುತ್ತಿದೆ. ಜೊತೆಗೆ ಆಟಗಾರ್ತಿಯರ ಮೇಲೆ ಪ್ರಶಸ್ತಿಗಳ ಸುರಿಮಳೆಯೇ ಹರಿದು ಬರುತ್ತಿದೆ. ಏತನ್ಮಧ್ಯೆ, ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಐತಿಹಾಸಿಕ ನಿರ್ಧಾರವನ್ನು ತೆಗೆದುಕೊಂಡಿದ್ದು, ಡಾರ್ಜಿಲಿಂಗ್‌ನಲ್ಲಿ ನಿರ್ಮಿಸಲಾಗುತ್ತಿರುವ ಹೊಸ ಕ್ರಿಕೆಟ್ ಕ್ರೀಡಾಂಗಣಕ್ಕೆ 2025 ರ ಮಹಿಳಾ ವಿಶ್ವಕಪ್ ವಿಜೇತ ತಂಡದ ಭಾಗವಾಗಿದ್ದ ವಿಕೆಟ್ ಕೀಪರ್ ಬ್ಯಾಟರ್ ರಿಚಾ ಘೋಷ್ ಅವರ ಹೆಸರಿಡಲು ನಿರ್ಧರಿಸಿದ್ದಾರೆ.

**ಹೊಸ ಕ್ರೀಡಾಂಗಣಕ್ಕೆ ರಿಚಾ ಘೋಷ್ ಹೆಸರು:** ಡಾರ್ಜಿಲಿಂಗ್‌ನಲ್ಲಿ ನಿರ್ಮಿಸಲಾಗುತ್ತಿರುವ ಹೊಸ ಕ್ರಿಕೆಟ್ ಕ್ರೀಡಾಂಗಣಕ್ಕೆ 2025 ರ ಮಹಿಳಾ ವಿಶ್ವಕಪ್ ವಿಜೇತೆ ರಿಚಾ ಘೋಷ್ ಅವರ ಹೆಸರನ್ನು ಇಡಲಾಗುವುದು ಎಂದು ಮಮತಾ ಬ್ಯಾನರ್ಜಿ ಘೋಷಿಸಿದ್ದಾರೆ. ಈ ಕ್ರಮವು ರಿಚಾ ಅವರನ್ನು ಗೌರವಿಸುವುದಲ್ಲದೆ, ಯುವ ಆಟಗಾರರಿಗೂ ಸ್ಫೂರ್ತಿ ನೀಡುತ್ತದೆ. ರಿಚಾ ಘೋಷ್ ಸಿಲಿಗುರಿಯವರಾಗಿದ್ದು, ಡಾರ್ಜಿಲಿಂಗ್‌ನೊಂದಿಗೆ ಅವಿನಾಭಾವ ಸಂಬಂಧ ಹೊಂದಿದ್ದಾರೆ. ಕೇವಲ 22 ವರ್ಷ ವಯಸ್ಸಿನಲ್ಲಿ, ಅವರು ಭಾರತೀಯ ಮಹಿಳಾ ಕ್ರಿಕೆಟ್ ತಂಡದ ಪ್ರಮುಖ ಸದಸ್ಯರಾಗಿದ್ದು, ಈ ವಿಶ್ವಕಪ್‌ನಲ್ಲಿ ಉತ್ತಮ ಪ್ರದರ್ಶನವನ್ನು ನೀಡಿದ್ದರು.

ಈ ಬಗ್ಗೆ ಹೇಳಿಕೆ ಬಿಡುಗಡೆ ಮಾಡಿರುವ ಮಮತಾ ಬ್ಯಾನರ್ಜಿ, 'ರಿಚಾ ಕೇವಲ 22 ವರ್ಷ ವಯಸ್ಸಿನಲ್ಲಿ ವಿಶ್ವ ಚಾಂಪಿಯನ್ ಆಗುವ ಮೂಲಕ ಇತಿಹಾಸ ನಿರ್ಮಿಸಿದರು. ಪಶ್ಚಿಮ ಬಂಗಾಳದ ಪರವಾಗಿ ನಾವು ಅವರನ್ನು ಗೌರವಿಸಿದ್ದೇವೆ. ಆದರೀಗ ನಾನು ಅದಕ್ಕಿಂತ ಹೆಚ್ಚಿನದನ್ನು ಮಾಡಲು ಬಯಸುತ್ತೇನೆ. ಡಾರ್ಜಿಲಿಂಗ್‌ನಲ್ಲಿ 27 ಎಕರೆ ಭೂಮಿ ಇದ್ದು, ಅಲ್ಲಿ ಕ್ರಿಕೆಟ್ ಕ್ರೀಡಾಂಗಣವನ್ನು ನಿರ್ಮಿಸಲು ಯೋಜನೆಯನ್ನು ಅಭಿವೃದ್ಧಿಪಡಿಸಲು ನಾನು ಮೇಯರ್ ಅವರನ್ನು ಕೇಳಿದ್ದೇನೆ. ಅಲ್ಲದೆ ಜನರು ರಿಚಾ ಅವರ ಹೆಸರನ್ನು ನೆನಪಿಸಿಕೊಳ್ಳುವಂತೆ ಮತ್ತು ಭವಿಷ್ಯದ ಪೀಳಿಗೆಗಳು ಅದರಿಂದ ಸ್ಫೂರ್ತಿ ಪಡೆಯುವಂತೆ ಮಾಡಲು ನೂತನ ಕ್ರೀಡಾಂಗಣಕ್ಕೆ ರಿಚಾ ಕ್ರಿಕೆಟ್ ಕ್ರೀಡಾಂಗಣ ಎಂದು ಹೆಸರಿಡಲು ಸೂಚಿಸಿದ್ದೇನೆ ಎಂದು ಮಮತಾ ಬ್ಯಾನರ್ಜಿ ಹೇಳಿದ್ದಾರೆ.

## ಟೀಮ್ ಇಂಡಿಯಾ ಆಟಗಾರರಿಗೆ ಗಂಭೀರ್ ಖಡಕ್ ಸೂಚನೆ



ಆಸ್ಟ್ರೇಲಿಯಾ ವಿರುದ್ಧದ ಏಕದಿನ ಸರಣಿಯನ್ನು ಸೋತಿದ್ದ ಟೀಮ್ ಇಂಡಿಯಾ ಟಿ20 ಸರಣಿಯಲ್ಲಿ ಭರ್ಜರಿ ಪ್ರದರ್ಶನ ನೀಡಿದೆ. ಈ ಪ್ರದರ್ಶನೊಂದಿಗೆ ಭಾರತ ತಂಡ ಟಿ20 ಸರಣಿಯನ್ನು 2-1 ಅಂತರದಿಂದ ಗೆದ್ದುಕೊಂಡಿದೆ. ಈ ಸರಣಿ ಗೆಲುವಿನ ಹೊರತಾಗಿಯೂ ಟೀಮ್ ಇಂಡಿಯಾ 2026ರ ಟಿ20 ವಿಶ್ವಕಪ್‌ಗೆ ಸದೃಢವಾಗಿಲ್ಲ ಎಂದು ಕೋಚ್ ಗೌತಮ್ ಗಂಭೀರ್ ಅಭಿಪ್ರಾಯಪಟ್ಟಿದ್ದಾರೆ. ಈ ಬಗ್ಗೆ ಸಂದರ್ಶನವೊಂದರಲ್ಲಿ ಮಾತನಾಡಿದ ಗೌತಮ್ ಗಂಭೀರ್, ಟಿ20 ವಿಶ್ವಕಪ್‌ಗೆ ಇನ್ನು ಕೆಲವೇ ತಿಂಗಳುಗಳು ಬಾಕಿಯಿವೆ. ಇದಾಗ್ಯೂ ನಮ್ಮ ತಂಡವು ಫಿಟ್‌ನೆಸ್ ವಿಷಯದಲ್ಲಿ ನಾವು ಬಯಸುವ ಸ್ಥಾನದಲ್ಲಿ ಇಲ್ಲ ಎಂದಿದ್ದಾರೆ. ಐಸಿಸಿಯಂತಹ ದೊಡ್ಡ ಟೂರ್ನಿಗಳನ್ನು ಆಡುವಾಗ ಹೆಚ್ಚಿನ ಒತ್ತಡವಿರುತ್ತದೆ. ಇಂತಹ ಸಂದರ್ಭಗಳಲ್ಲಿ ದೈಹಿಕ ಸದೃಢತೆ ಮುಖ್ಯ, ದೈಹಿಕ ಸದೃಢತೆಯು ಆಟಗಾರರ ಮಾನಸಿಕ ಬಲದ ಮೇಲೆ ನೇರವಾಗಿ ಹೇಗೆ ಪರಿಣಾಮ ಬೀರುತ್ತದೆ. ಈ ಬಗ್ಗೆ ನಾನು ಟೀಮ್ ಇಂಡಿಯಾ ಆಟಗಾರರೊಂದಿಗೆ ಸಹ ಚರ್ಚಿಸಿತ್ತೇನೆ. ಅಲ್ಲದೆ ದೈಹಿಕವಾಗಿ ಮತ್ತಷ್ಟು ಫಿಟ್ ಆಗಿರಬೇಕೆಂದು ಸೂಚಿಸಿರುವುದಾಗಿ ಗೌತಮ್ ಗಂಭೀರ್ ಹೇಳಿದ್ದಾರೆ. ಇದೇ ವೇಳೆ ಮುಂಬರುವ ಟೆಸ್ಟ್ ಸರಣಿ ಬಗ್ಗೆ ಕೂಡ ಮಾತನಾಡಿದ ಗಂಭೀರ್, ಸೌತ್ ಆಫ್ರಿಕಾ ವಿರುದ್ಧದ ಎರಡು ಟೆಸ್ಟ್ ಪಂದ್ಯಗಳ ಮೇಲೆ ಪ್ರಾಥಮಿಕ ಗಮನ ಹರಿಸಿದ್ದೇವೆ. ಏಕೆಂದರೆ ಈ ಪಂದ್ಯಗಳು ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಸರಣಿಯ ಭಾಗವಾಗಿದೆ. ಅದರಲ್ಲೂ ಟೆಸ್ಟ್ ಚಾಂಪಿಯನ್ ಪಟ್ಟ ಅಲಂಕರಿಸಿರುವ ಸೌತ್ ಆಫ್ರಿಕಾ ನಿಸ್ಸಂಶಯವಾಗಿ ಉತ್ತಮ ಕ್ರಿಕೆಟ್ ಆಡುತ್ತಿದ್ದಾರೆ. ಹೀಗಾಗಿ ಅವರೊಂದಿಗೆ ಗೆಲ್ಲುವುದು ಬಹಳ ಮುಖ್ಯ.

ಅದರಲ್ಲೂ ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಸರಣಿಯ ಭಾಗವಾಗಿರುವುರಿಂದ ಈ ಎರಡು ಪಂದ್ಯಗಳು ಎಷ್ಟು ಮುಖ್ಯ ಎಂದು ನಮಗೆ ತಿಳಿದಿದೆ ಎಂದು ಗಂಭೀರ್ ಹೇಳಿದ್ದಾರೆ. ಈ ಟೆಸ್ಟ್ ಸರಣಿಯ ಬಳಿಕ ನಮ್ಮ ಗಮನವು ಟಿ20 ವಿಶ್ವಕಪ್ ಆಗಿರುತ್ತದೆ. ತವರಿನಲ್ಲಿ ವಿಶ್ವಕಪ್ ನಡೆಯುತ್ತಿರುವುದರಿಂದ ಈ ಟೂರ್ನಿ ಕೂಡ ನಮಗೆ ಬಹಳ ಮುಖ್ಯ. ಪ್ರಸ್ತುತ ಸನ್ನಿವೇಶದ ಬಗ್ಗೆ ಹೇಳುವುದಾದರೆ, ಫಿಟ್ನೆಸ್ ದೃಷ್ಟಿಕೋನದಿಂದ, ನಾವು ಇನ್ನೂ ಟಿ20 ವಿಶ್ವಕಪ್‌ಗಾಗಿ ಸಂಪೂರ್ಣ ಸಿದ್ಧವಾಗಿಲ್ಲ, ನಾವು ಟೀಮ್ ಇಂಡಿಯಾ ಮತ್ತಷ್ಟು ಚುರುಕಾಗಿರಲು ಮತ್ತು ಫಿಟ್ ಆಗಿರಲು ಬಯಸುತ್ತೇವೆ.

ಫಿಟ್ ಆಗಿದ್ದಷ್ಟೂ, ಮಾನಸಿಕವಾಗಿ ಹೆಚ್ಚು ಬಲಶಾಲಿಯಾಗುತ್ತೇವೆ. ಇನ್ನುಳಿದಿರುವುದು ಕೇವಲ ಮೂರು ತಿಂಗಳುಗಳು ಮಾತ್ರ. ಅದಕ್ಕೂ ಮುನ್ನ ಎಲ್ಲರೂ ತಮ್ಮ ಫಿಟ್‌ನೆಸ್ ಕಡೆಗೆ ಹೆಚ್ಚಿನ ಗಮನ ಹರಿಸಬೇಕೆಂದು ಗೌತಮ್ ಗಂಭೀರ್ ಟೀಮ್ ಇಂಡಿಯಾ ಆಟಗಾರರಿಗೆ ಖಡಕ್ ಸೂಚನೆ ನೀಡಿದ್ದಾರೆ.

## ಹಿಟ್ ಮ್ಯಾನ್ ಡ್ಯಾನ್ಸ್ ವೈರಲ್




ಭಾರತೀಯ ಕ್ರಿಕೆಟ್ ತಂಡದ ಮಾಜಿ ನಾಯಕ ರೋಹಿತ್ ಶರ್ಮಾ ಮೈದಾನದ ಒಳಗಿರಲಿ, ಹೊರಗಿರಲಿ ಬಿಂದಾಸ್ ವ್ಯಕ್ತಿ. ಸದಾ ಖುಷಿಖುಷಿಯಾಗಿರುವ ಅವರು ತಂಡದ ಡ್ರೆಸ್ಸಿಂಗ್ ರೂಮ್‌ನಲ್ಲಿ ಸಹ ಲಘುಹಾಸ್ಯದೊಂದಿಗೆ ಉಲ್ಲಾಸಭರಿತ ವಾತಾವರಣವನ್ನು ನಿರ್ಮಿಸಿಬಿಡುತ್ತಾರೆ. ತಮ್ಮ ಮಾತು ಮತ್ತು ನಗುವಿನಿಂದ ಎಲ್ಲರನ್ನೂ ರಂಜಿಸುತ್ತಾರೆ. ಇದೀಗ ಪ್ರೀ ವೆಡ್ಡಿಂಗ್ ಶೂಟ್ ಮಾಡುತ್ತಿದ್ದ ನವಜೋಡಿಯೊಂದನ್ನು ನೋಡಿ ಲೌಡ್ ಸ್ಪೀಕರ್ ನಲ್ಲಿ ಬಾಲಿವುಡ್ ಹಾಡು ಹಾಕಿ ನೃತ್ಯ ಸಹ ಮಾಡಿರುವುದು ಅವರ ಲವಲವಿಕೆಯ ವ್ಯಕ್ತಿತ್ವಕ್ಕೆ ಸಾಕ್ಷಿ. ಇದರ ವಿಡಿಯೋ ಫುಲ್ ವೈರಲ್ ಆಗಿದೆ.

ಕ್ರಿಕೆಟ್ ಇರಲಿ, ಇಲ್ಲದಿರಲಿ ಅವರು ಫಿಟ್ನೆಸ್ ಮತ್ತು ಪ್ರ್ಯಾಕ್ಟೀಸ್ ಬಗ್ಗೆ ಯಾವತ್ತೂ ಉದಾಸೀನ ಮಾಡಿದವರಲ್ಲ. ಆಸ್ಟ್ರೇಲಿಯಾ ವಿರುದ್ಧ ಏಕದಿನ ಸರಣಿ ಮುಗಿದ ಬಳಿಕ ದಕ್ಷಿಣ ಆಫ್ರಿಕಾ ವಿರುದ್ಧದ ಮೂರು ಪಂದ್ಯಗಳ ಏಕದಿನ ಸರಣಿಗೆ ಅವರು ಸಿದ್ಧತೆ ನಡೆಸುತ್ತಿದ್ದಾರೆ. ಈ ನಿಟ್ಟಿನಲ್ಲಿ ಅವರು ಜಿಮ್‌ನಲ್ಲಿ ವ್ಯಾಯಾಮ ಮಾಡುತ್ತಿದ್ದ ವೇಳೆ ಹೊಸದಾಗಿ ನಿಶ್ಚಿತಾರ್ಥ ಮಾಡಿಕೊಂಡ ಜೋಡಿಯೊಂದು ಹೊರಗೆ ಉದ್ಯಾನವನದಲ್ಲಿ ವಿವಾಹಪೂರ್ವ ಫೋಟೋಶೂಟ್ ಮಾಡುತ್ತಿದ್ದ ಗಮನಿಸಿದರು.

**ಬಾಲಿವುಡ್ ಹಾಡಿಗೆ ನೃತ್ಯ:** ಇದನ್ನು ನೋಡಿದ ರೋಹಿತ್ ಶರ್ಮಾ ಅವರು ತಮ್ಮ ಸ್ಪೀಕರ್ ತಮ್ಮ ಎಂದಿನ ಖುಷಿಯ ಶೈಲಿಯಲ್ಲಿ, ಭಾರತದ ನಾಯಕ ತಮ್ಮ ಸ್ಪೀಕರ್‌ನಲ್ಲಿ ಕ್ಲಾಸಿಕ್ ಬಾಲಿವುಡ್ ಹಾಡು 'ಆಜ್ ಮೇರೆ ಯಾರ್ ಕಿ ಶಾದಿ ಹೈ' ಹಾಡನ್ನು ಹಾಕಿದರು ಮತ್ತು ನೃತ್ಯ ಮಾಡಲು ಪ್ರಾರಂಭಿಸಿದರು. ಒಂದು ಕ್ಷಣ ಅವರು ಡಿಜೆಯೇ ಆಗಿ ಹೋದರು. ಇದನ್ನು ನೋಡಿ ಆ ಜೋಡಿ ಆಶ್ಚರ್ಯಚಕಿತರಾದರು.

## ರಣಜಿ ಟೂರ್ನಿಯಲ್ಲಿ ಹೊಸ ಇತಿಹಾಸ ಬರೆದ ಜಮ್ಮು-ಕಾಶ್ಮೀರ



ದೆಹಲಿಯ ಅರುಣ್ ಜೇಟ್ಲಿ ಸ್ಟೇಡಿಯಂನಲ್ಲಿ ನಡೆದ ರಣಜಿ ಟ್ರೋಫಿಯ ಗ್ರೂಪ್-ಡಿ ಪಂದ್ಯದಲ್ಲಿ ದೆಹಲಿ ವಿರುದ್ಧ ಜಮ್ಮು-ಕಾಶ್ಮೀರ ತಂಡ ಭರ್ಜರಿ ಜಯ ಸಾಧಿಸಿದೆ. ಈ ಗೆಲುವಿನೊಂದಿಗೆ ಜಮ್ಮು-ಕಾಶ್ಮೀರ ಹೊಸ ಇತಿಹಾಸವನ್ನು ಸಹ ನಿರ್ಮಿಸಿದೆ. ಅಂದರೆ 65 ವರ್ಷಗಳ ರಣಜಿ ಟೂರ್ನಿಯ ಇತಿಹಾಸದಲ್ಲಿ ಜಮ್ಮು-ಕಾಶ್ಮೀರ ಒಮ್ಮೆಯೂ ದೆಹಲಿ ವಿರುದ್ಧ ಜಯ ಸಾಧಿಸಿರಲಿಲ್ಲ. ಇದೀಗ ಬಲಿಷ್ಠ ಪಡೆಗೆ ಸೋಲುಣಿಸಿ ಹೊಸ ಅಧ್ಯಾಯ ಬರೆಯುವಲ್ಲಿ ಜಮ್ಮು-ಕಾಶ್ಮೀರ ಯಶಸ್ವಿಯಾಗಿದೆ.

ಈ ಪಂದ್ಯದಲ್ಲಿ ಟಾಸ್ ಗೆದ್ದ ಜಮ್ಮು-ಕಾಶ್ಮೀರ ತಂಡದ ನಾಯಕ ಪರಾಸ್ ಡೋಗ್ರ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಮೊದಲು ಬ್ಯಾಟ್ ಮಾಡಿದ ದೆಹಲಿ ತಂಡವು ಪ್ರಥಮ ಇನಿಂಗ್ಸ್‌ನಲ್ಲಿ 211 ರನ್‌ಗಳಿಸಿ ಆಲೌಟ್ ಆಯಿತು. ಇದಕ್ಕುತ್ತರವಾಗಿ ಮೊದಲ ಇನಿಂಗ್ಸ್ ಆಡಿದ ಜಮ್ಮು-ಕಾಶ್ಮೀರ 310 ರನ್‌ಗಳಿಸಿದ್ದರು.

99 ರನ್‌ಗಳ ಹಿನ್ನಡೆಯೊಂದಿಗೆ ದ್ವಿತೀಯ ಇನಿಂಗ್ಸ್ ಆರಂಭಿಸಿದ ದೆಹಲಿ ತಂಡವು 277 ರನ್‌ಗಳಿಸುವಷ್ಟರಲ್ಲಿ ಸರ್ವಪತನ ಕಂಡಿತು. ಮೊದಲ ಇನಿಂಗ್ಸ್‌ನಲ್ಲಿ ಮುನ್ನಡೆಯೊಂದಿಗೆ ದ್ವಿತೀಯ ಇನಿಂಗ್ಸ್‌ನಲ್ಲಿ 179 ರನ್‌ಗಳ ಗುರಿ ಪಡೆದ ಜಮ್ಮು-ಕಾಶ್ಮೀರ 3 ವಿಕೆಟ್ ಕಳೆದುಕೊಂಡು ಗುರಿ ಮುಟ್ಟಿದೆ. ಈ ಮೂಲಕ 7 ವಿಕೆಟ್‌ಗಳ ಜಯ ಸಾಧಿಸಿ ದೆಹಲಿ ವಿರುದ್ಧ ಹೊಸ ಇತಿಹಾಸ ನಿರ್ಮಿಸಿದೆ.

ಇನ್ನು ಈ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಮಿಂಚಿನ ದಾಳಿ ಸಂಘಟಿಸಿ ಕೇವಲ 35 ರನ್ ಗಳಿಗೆ 5 ವಿಕೆಟ್ ಕಬಳಿಸಿದ ಆಕಿಬ್ ನಬಿ ಪಂದ್ಯ ಶ್ರೇಷ್ಠ ಪ್ರಶಸ್ತಿ ಪಡೆದಿದ್ದಾರೆ.

**ಜಮ್ಮು ಕಾಶ್ಮೀರ ಪ್ಲೇಯಿಂಗ್ 11:** ಖಮ್ರಾನ್ ಇಕ್ಬಾಲ್ , ಶುಭಂ ಖಜುರಿಯಾ , ಪರಾಸ್ ಡೋಗ್ರ (ನಾಯಕ) , ಅಬ್ದುಲ್ ಸಮದ್ , ಕನ್ಹಯ್ಯಾ ವಾಧವನ್ (ವಿಕೆಟ್ ಕೀಪರ್ ), ವಿವ್ರಾಂತ್ ಶರ್ಮಾ , ಅಬಿದ್ ಮುಷ್ತಾಕ್ , ಆಕಿಬ್ ನಬಿ, ವಂಶಜ್ ಶರ್ಮಾ , ಸಾಹಿಲ್ ಲೋತ್ರಾ , ಸುನಿಲ್ ಕುಮಾರ್. **ದೆಹಲಿ ಪ್ಲೇಯಿಂಗ್ 11:** ಅರ್ಪಿತ್ ರಾಣಾ , ಸನತ್ ಸಾಂಗ್ವಾನ್ , ಯಶ್ ಧುಲ್ , ಆಯುಷ್ ದೋಸೆಜಾ , ಸುಮಿತ್ ಮಾಥುರ್ , ಆಯುಷ್ ಬದೋನಿ (ನಾಯಕ) , ಅನೂಜ್ ರಾವತ್ (ವಿಕೆಟ್ ಕೀಪರ್) , ಮನನ್ ಭಾರದ್ವಾಜ್ , ಹೃತಿಕ್ ಶೋಕೀನ್ , ಸಿಮರ್ಜೀತ್ ಸಿಂಗ್ , ಮನಿ ಗ್ರೆವಾಲ್.

## ಸಿಎಸ್‌ಕೆ ತಂಡದಲ್ಲಿ ರವೀಂದ್ರ ಜಡೇಜಾ ಯುಗಾಂತ್ಯ



ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-19ರ ಮಿನಿ ಆಕ್ಷನ್‌ಗೂ ಮುನ್ನ ಚೆನ್ನೈ ಸೂಪರ್ ಕಿಂಗ್ಸ್ ತಂಡದ ರಾಕ್ ಸ್ಟಾರ್ ರವೀಂದ್ರ ಜಡೇಜಾ ಟ್ರೇಡ್ ಆಗುವುದು ಖಚಿತವಾಗಿದೆ. ಅದು ಸಹ ರಾಜಸ್ಥಾನ್ ರಾಯಲ್ಸ್ ತಂಡದ ನಾಯಕ ಸಂಜು ಸ್ಯಾಮ್ಸನ್‌ಗಾಗಿ ಎಂಬುದು ವಿಶೇಷ. ಚೆನ್ನೈ ಸೂಪರ್ ಕಿಂಗ್ಸ್ ಫ್ರಾಂಚೈಸಿಯು ರವೀಂದ್ರ ಜಡೇಜಾ ಹಾಗೂ ಸ್ಯಾಮ್ ಕರನ್ ಅವರನ್ನು ನೀಡಿ ಸಂಜು ಸ್ಯಾಮ್ಸನ್ ಅವರನ್ನು ತನ್ನ ತೆಕ್ಕೆಗೆ ತೆಗೆದುಕೊಳ್ಳಲು ಮುಂದಾಗಿದೆ. ಅದರ ಮೊದಲ ಹೆಜ್ಜೆಯಾಗಿ ಇದೀಗ ಸಿಎಸ್‌ಕೆ-ಆರ್‌ಆರ್ ಫ್ರಾಂಚೈಸಿಗಳು ಸ್ವಾಪ್ ಡೀಲ್ ಪ್ರಕ್ರಿಯೆಗೆ ಚಾಲನೆ ನೀಡಿದ್ದಾರೆ.

ಅಲ್ಲದೆ ಇನ್ನೆರಡು ದಿನಗಳ ಒಳಗೆ ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ರಾಜಸ್ಥಾನ್ ರಾಯಲ್ಸ್ ನಡುವಣ ಒಪ್ಪಂದ ಅಧಿಕೃತವಾಗಲಿದೆ ಎಂದು ತಿಳಿದು ಬಂದಿದೆ. ಇದರೊಂದಿಗೆ ರವೀಂದ್ರ ಜಡೇಜಾ ಅವರ ಸಿಎಸ್‌ಕೆ ಪಯಣ ಕೂಡ ಅಂತ್ಯವಾಗಲಿದೆ. ಕಳೆದ 12 ವರ್ಷಗಳಿಂದ ಚೆನ್ನೈ ಸೂಪರ್ ಕಿಂಗ್ಸ್ ತಂಡದ ಭಾಗವಾಗಿದ್ದ ರವೀಂದ್ರ ಜಡೇಜಾ ಇದೀಗ ಮತ್ತೆ ತನ್ನ ಮಾಜಿ ತಂಡಕ್ಕೆ ಮರಳುತ್ತಿದ್ದಾರೆ. ಅಂದರೆ ಜಡೇಜಾ 2008 ರಲ್ಲಿ ರಾಜಸ್ಥಾನ್ ರಾಯಲ್ಸ್ ಪರ ಕಣಕ್ಕಿಳಿಯುವ ಮೂಲಕ ಐಪಿಎಲ್ ಕೆರಿಯರ್ ಆರಂಭಿಸಿದ್ದರು. ಇದೀಗ 15 ವರ್ಷಗಳ ಬಳಿಕ ಮತ್ತೆ ರಾಜಸ್ಥಾನ್ ರಾಯಲ್ಸ್ ತಂಡಕ್ಕೆ ಸೇರ್ಪಡೆಯಾಗುತ್ತಿದ್ದಾರೆ. ಇನ್ನು 12 ವರ್ಷಗಳಲ್ಲಿ ರವೀಂದ್ರ ಜಡೇಜಾ ಚೆನ್ನೈ ಸೂಪರ್ ಕಿಂಗ್ಸ್ ಪರ 200 ಪಂದ್ಯಗಳನ್ನಾಡಿದ್ದಾರೆ. ಈ ವೇಳೆ 149 ಇನಿಂಗ್ಸ್ ಆಡಿರುವ ಅವರು 2354 ರನ್ ಕಲೆಹಾಕಿದ್ದಾರೆ. ಇದರ ನಡುವೆ 5 ಅರ್ಧಶತಕಗಳನ್ನು ಸಹ ಬಾರಿಸಿದ್ದಾರೆ. ಅಷ್ಟೇ ಅಲ್ಲದೆ 3 ಬಾರಿ ಸಿಎಸ್‌ಕೆ ತಂಡ ಚಾಂಪಿಯನ್ ಪಟ್ಟಕ್ಕೇರುವಲ್ಲಿ ಜಡೇಜಾ ಪ್ರಮುಖ ಪಾತ್ರವಹಿಸಿದ್ದರು. ಇದೀಗ 12 ವರ್ಷಗಳ ಬಳಿಕ ಚಾಂಪಿಯನ್ ಆಟಗಾರನನ್ನು ಕೈ ಬಿಡಲು ಚೆನ್ನೈ ಸೂಪರ್ ಕಿಂಗ್ಸ್ ಫ್ರಾಂಚೈಸಿ ನಿರ್ಧರಿಸಿದೆ.


Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news


ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966